

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 21 ಬುಧವಾರ 2024


ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 126 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಈ ಸಾಲಿನ ದಸರಾ ಪ್ರಕ್ರಿಯೆಗೆ ಚಾಲನೆ

ಇಂದು ಗಜ ಪಯಣ

ನಾಗರಹೊಳೆಯ ವೀರನಹೊಸಳ್ಳಿ ಬಳಿ ವರ್ಣರಂಜಿತ ಸಮಾರಂಭ ಆಯೋಜನೆ

- ಸಾಂಸ್ಕೃತಿಕ ಕಲಾತಂಡಗಳ ಮೆರಗಿನೊಂದಿಗೆ ಆನೆಗಳಿಗೆ ಪೂಜೆ
- ಅಂಬಾರಿ ಅಭಿಮನ್ಯು ಸೇರಿ ಮೊದಲ ತಂಡದಲ್ಲಿ 9 ಆನೆ ಆಗಮನ



ಮೈಸೂರು, ಆ.20(ಎಂಟಿವೈ)– ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆ ಗಜಪಡೆ ಬುಧವಾರ(ಆ.21) ಬೆಳಗ್ಗೆ 10.10ರಿಂದ 10.40ರೊಳಗೆ ಸಲ್ಲುವ ಶುಭ ತುಲಾ ಲಗ್ನದಲ್ಲಿ ಹುಣಸೂರು ತಾಲೂಕಿನ ವೀರನಹೊಸಳ್ಳಿ ಗೇಟ್ ಬಳಿ ಅಂಬಾರಿ ಆನೆ ಅಭಿಮನ್ಯು ನೇತೃತ್ವದ ಮೊದಲ ತಂಡ 9 ಆನೆಗಳಿಗೆ ಪೂಜೆ ಸಲ್ಲಿಸುವ ಮೂಲಕ ಪ್ರಸಕ್ತ ಸಾಲಿನ ದಸರಾ ಮಹೋತ್ಸವದ ಮೊದಲ ಕಾರ್ಯಕ್ರಮಕ್ಕೆ ವರ್ಣರಂಜಿತ ಚಾಲನೆ ದೊರೆಯಲಿದೆ.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ವೀರನಹೊಸಳ್ಳಿ ಗೇಟ್ ಬಳಿ ನಾಳೆ ಬೆಳಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಗಜಪಡೆಗೆ ಪೂಜೆ ಸಲ್ಲಿಸಿದರೆ, ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ಆನೆಗಳ ಕಿರುಹೊತ್ತಿಗೆ ಬಿಡುಗಡೆ ಮಾಡುವ ಮೂಲಕ ಗಜಪಯಣ–2024ಕ್ಕೆ ಚಾಲನೆ ನೀಡಲಿದ್ದಾರೆ. ಈಗಾಗಲೇ ವಿವಿಧ ಕ್ಯಾಂಪ್‌ಗಳಿಂದ ಅಭಿಮನ್ಯು ನೇತೃತ್ವದ 9 ಆನೆಗಳು ಹುಣಸೂರು ತಾಲೂಕಿನ ವೀರನಹೊಸಳ್ಳಿ ■ 2ನೇ ಪುಟಕ್ಕೆ

ಮೊದಲ ತಂಡದಲ್ಲಿ ಬರುವ ಆನೆಗಳಿವು...

ಅಂಬಾರಿ ಆನೆ ಅಭಿಮನ್ಯು, ವರಲಕ್ಷ್ಮೀ, ಧನಂಜಯ, ಗೋಪಿ, ಭೀಮ, ಲಕ್ಷ್ಮಿ, ಕಂಜನ್, ರೋಹಿತ್, ಏಕಲವ್ಯ.

ಎರಡನೇ ತಂಡದಲ್ಲಿ...

ಪ್ರಶಾಂತ, ಮಹೇಂದ್ರ, ಸುಗ್ರೀವ, ಲಕ್ಷ್ಮೀ, ಹಿರಣ್ಯ– ಸೆಪ್ಟಂಬರ್ ಮೊದಲ ವಾರ ಮೈಸೂರು ಅರಮನೆಗೆ ಆಗಮಿಸಲಿವೆ. ಹೆಚ್ಚುವರಿಯಾಗಿ ಕ್ಯಾಂಪ್‌ನಲ್ಲಿ ಹರ್ಷ, ಅಯ್ಯಪ್ಪ, ಪಾರ್ಥಸಾರಥಿ ಹಾಗೂ ಮಾಲಾದೇವಿ ಕಾಯ್ದಿರಿಸಲಾಗಿದೆ.

ಮುಡಾ ನಿವೇಶನ ಹಗರಣ: ಮುಂದುವರೆದ ಲೂಟಿ ಪುರಾಣ...!

1968ರಲ್ಲಿ ಸ್ವಾಧೀನವಾಗಿದ್ದ ಭೂಮಿಗೆ ಈಗ 80 ಕೋಟಿ ಮೌಲ್ಯದ 57 ನಿವೇಶನ ಮಂಜೂರು

- ಭೂ ಮಾಲೀಕನ ವಾರಸುದಾರನೆಂಬ ವ್ಯಕ್ತಿಗೆ ಒಂದೇ ಆದೇಶದ ಮೂಲಕ ನಿವೇಶನ ಮಂಜೂರು
- ಮಾರಗೌಡನಹಳ್ಳಿ ಸರ್ವೆ ನಂಬರ್ ಭೂಮಿಗೆ ವಿಜಯನಗರ, ದಟ್ಟಗಳ್ಳಿ ಬಡಾವಣೆಗಳಲ್ಲಿ ಅಭಿವೃದ್ಧಿಪಡಿಸಿದ ನಿವೇಶನಗಳ ತರಾತುರಿಯಲ್ಲಿ ಪರಭಾರೆ ಮಾಡಿದ ಮುಡಾ ಆಯುಕ್ತ



ಎಸ್.ಟಿ.ರವಿಕುಮಾರ್

ಮೈಸೂರು, ಆ.20– ನಿಯಮಬಾಹಿರವಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಅಧಿಕಾರಿಗಳು ಶೇ. 50:50ರ ಅನುಪಾತದಡಿ ಎಗ್ಗಿಲ್ಲದೇ ಸಾವಿರಾರು ನಿವೇಶನಗಳ ಕಂಡ ಕಂಡವರಿಗೆ ಹಂಚಿಕೆ ಮಾಡಿ, ಹಣ ಲೂಟಿ ಮಾಡಿರುವ ಭಾರಿ ಬ್ರಹ್ಮಾಂಡ ಹಗರಣ ಬಗೆದಷ್ಟೂ ಹೊಮ್ಮುತ್ತಿದೆ; ಚಿಮ್ಮುತ್ತಿದೆ.

ಇದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರಿಗೆ ಪ್ರತಿಷ್ಠಿತ ಬಡಾವಣೆಗಳಲ್ಲಿ 14 ನಿವೇಶನಗಳನ್ನು ಮಂಜೂರಾಗಿರುವ ವಿಷಯಕ್ಕಷ್ಟೇ ಸೀಮಿತವಾಗಿರದೇ ಮಧ್ಯವರ್ತಿಗಳು, ರಿಯಲ್ ಎಸ್ಟೇಟ್ ಉದ್ಯಮಿಗಳು, ಕೆಲ ರಾಜಕೀಯ ಪಕ್ಷಗಳ ಪ್ರಭಾವಿ ವ್ಯಕ್ತಿಗಳು, ಜಿಪಿಎ ಹೊಂದಿರುವವರು, ಡೆವಲಪರ್‌ಗಳಿಗೆ ಪರಿಹಾರ ರೂಪದಲ್ಲಿ ಮುಡಾ ಆಯುಕ್ತರು ಬೆಲೆ ಬಾಳುವ ನಿವೇಶನಗಳನ್ನು ಹಂಚಿಕೆ ಮಾಡುವ ಮೂಲಕ ಸಾವಿರಾರು ಕೋಟಿ ರೂ. ದುರ್ಬಳಕೆ ಮಾಡಿಕೊಂಡಿದ್ದಾರೆ.

ಕರ್ನಾಟಕವೇ ಬೆಚ್ಚಿಬೀಳುವ ಮುಡಾ ನಿವೇಶನ ಹಂಚಿಕೆ ಹಗರಣ ರಾಜ್ಯದ ಇತಿಹಾಸದಲ್ಲೇ ಅತೀ ಹೆಚ್ಚಿನ ಪ್ರಮಾಣದ್ದಾಗಿದ್ದು, ಕಳಂಕಿತ ಅಧಿಕಾರಿಗಳನ್ನು ಅಮಾನತುಪಡಿಸಿ ಅವರ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸಿ, ಭೂ ಮಾಲೀಕರಲ್ಲದವರಿಗೆ ಮಂಜೂರು ಮಾಡಿರುವ ಶೇ. 50:50ರ ಅನುಪಾತ, ಪ್ರೋತ್ಸಾಹದಾಯಕ (ಇನ್‌ಸೆಂಟೀವ್) ಮತ್ತು ಬದಲಿ (ಆಲ್ಟರ್‌ನೇಟಿವ್) ನಿವೇಶನಗಳನ್ನೆಲ್ಲಾ ರದ್ದುಪಡಿಸಿ, ಪ್ರಾಧಿಕಾರದ ವಶಕ್ಕೆ ಪಡೆದು ಸಿಬಿಐನಂತಹ ಸಂಸ್ಥೆಗೆ ತನಿಖೆ ನಡೆಸಲು ಒಪ್ಪಿಸಿದರೆ ಮಾತ್ರ ಇಡೀ ಹಗರಣದ ನಿಜ ಬಣ್ಣ ಬಯಲಾಗುತ್ತದೆ.

ಮತ್ತೊಂದು ಲೂಟಿ ಪ್ರಕರಣ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಬ್ರಹ್ಮಾಂಡ ಭ್ರಷ್ಟಾಚಾರಕ್ಕೆ ಮತ್ತೊಂದು ಸೇರ್ಪಡೆಯಾಗಿದೆ. 1968ರಲ್ಲಿ ಮೈಸೂರು ತಾಲೂಕು, ಕಸಬಾ ಹೋಬಳಿ, ಮಾರಗೌಡನಹಳ್ಳಿ ಗ್ರಾಮದ ಸ. ನಂ. 57ರಲ್ಲಿ 4.13 ಎಕರೆ ಮತ್ತು ಸ. ನಂ. 77/2ರಲ್ಲಿ 3.31 ಎಕರೆ ಸೇರಿ ಒಟ್ಟು 8.14 ಎಕರೆ ಜಮೀನನ್ನು ಅಂದಿನ ಸಿಐಟಿಬಿಯು ಗೋಕುಲಂ ಬಡಾವಣೆಗಾಗಿ ಭೂ ಸ್ವಾಧೀನಪಡಿಸಿಕೊಂಡಿತ್ತು.

ಪರಿಹಾರಕ್ಕೆ ಅರ್ಜಿ: 56 ವರ್ಷಗಳ ಹಿಂದೆ ಸ್ವಾಧೀನಪಡಿಸಿದ ಈ ಜಮೀನಿಗೆ ಮಾಲೀಕರಾಗಿದ್ದ ದೊಡ್ಡ ಉಗ್ರಿ ಅವರ ಮಗ ಉಗ್ರಯ್ಯ ಅವರಿಗೆ ಪರಿಹಾರ ನೀಡಿಲ್ಲ ಎಂದು ವಿಶೇಷ ■ 9ನೇ ಪುಟಕ್ಕೆ

ಕೆಬಿಜಿಯವರ



ಭೂಮಂತ್ರ...

ಸದ್ಯ, ಬೀಸೋ ದೊಣ್ಣೆಯಿಂದ ಪಾರಾದ ಸಿದ್ದರಾಮಯ್ಯ

■ ಪುಟ–4

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಗೂ ಸಂಕಷ್ಟ

ದೋಷಾರೋಪ ಪಟ್ಟಿ ಸಲ್ಲಿಸಲು ಅನುಮತಿ ನೀಡುವಂತೆ ರಾಜ್ಯಪಾಲರಿಗೆ ಲೋಕಾಯುಕ್ತ ಎಸ್‌ಐಟಿ ಮನವಿ



ಬೆಂಗಳೂರು, ಆ.20– ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ವಿಚಾರ ರಾಜ್ಯ ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿದೆ. ಇದರ ಬೆನ್ನಲ್ಲೇ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಗೆ ಸಂಕಷ್ಟ ಎದುರಾಗಿದೆ.

2007ರಲ್ಲಿ ಅಂದು ಮುಖ್ಯಮಂತ್ರಿಯಾಗಿದ್ದ ಎಚ್ ಡಿ ಕುಮಾರಸ್ವಾಮಿ ಅವರು ಗಣಿ ಮತ್ತು ಖನಿಜ ನಿಯಮಗಳನ್ನು ಉಲ್ಲಂಘಿಸಿ ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ಕಂಪನಿಗೆ 550 ಎಕರೆ ವಿಸ್ತೀರ್ಣದ ಗಣಿ ಗುತ್ತಿಗೆ ಮಂಜೂರು ಮಾಡಿದ್ದಾರೆ ಎಂಬ ಆರೋಪವಿದೆ. ಈ ಪ್ರಕರಣ ಸಂಬಂಧ ಕುಮಾರಸ್ವಾಮಿ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಲು ಅನುಮತಿ ನೀಡುವಂತೆ ಎಸ್‌ಐಟಿ ರಾಜ್ಯಪಾಲರಿಗೆ ಪತ್ರ ಬರೆದಿದೆ.

ಅಕ್ರಮ ಗಣಿಗಾರಿಕೆ ಕುರಿತು 2011ರಲ್ಲಿ ಲೋಕಾಯುಕ್ತರಾಗಿದ್ದ ಎನ್. ಸಂತೋಷ್ ಹೆಗ್ಡೆ ಅವರು ಸಲ್ಲಿಸಿದ್ದ ವರದಿ ಉಲ್ಲೇಖ ಆಧರಿಸಿ ■ 9ನೇ ಪುಟಕ್ಕೆ

ದಿನಗೂಲಿ ನೌಕರರ ಸೇವೆ ಕಾಯಂಗೆ 'ಹೈ' ಆದೇಶ



ಬೆಂಗಳೂರು, ಆ.20–ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯಲ್ಲಿ ಮಂಜೂರಾಗದ ಹುದ್ದೆಗಳಿಗೆ 10 ವರ್ಷಗಳಿಂದ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿದವರು ಕಾಯಂ ಸೇವೆಗೆ ಅರ್ಹರು ಎಂದು ಹೈಕೋರ್ಟ್ ಆದೇಶಿಸಿದೆ.

ಈ ಸಂಬಂಧ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಕಡಕೊಳ ಗ್ರಾಮದ ಶಾಂತಲಕ್ಷ್ಮಿ ಕೋಂ ಗುಂಡೂರಾವ್ ಸೇರಿದಂತೆ 30ಕ್ಕೂ ಹೆಚ್ಚು ನೌಕರರು ಸಲ್ಲಿಸಿದ್ದ ರಿಟ್ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ.ಶ್ಯಾಮ್‌ಪ್ರಸಾದ್ ಅವರಿದ್ದ ಏಕ ಸದಸ್ಯ ನ್ಯಾಯಪೀಠವು, ಅರ್ಜಿದಾರರನ್ನು ಮೂರು ತಿಂಗಳ ಒಳಗಾಗಿ ಸೂಕ್ತ ಹುದ್ದೆಗಳಿಗೆ ನೇಮಕ ಮಾಡಿ ಆದೇಶ ಹೊರಡಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿದೆ. ಅರ್ಜಿದಾರರು ಕಾಯಂ ಸೇವೆಗೆ ಅರ್ಹರಲ್ಲ ಎಂದು 2010ರ ಜೂನ್ 14 ಮತ್ತು 2012ರ ಜೂನ್ 15ರಂದು ನೀಡಿದ್ದ ಸಂಬಂಧಿಸಿದ ಇಲಾಖೆಗಳ ಹಿಂಬರಹಗಳನ್ನು ರದ್ದುಗೊಳಿಸಿರುವ ನ್ಯಾಯಪೀಠ, ಅರ್ಜಿದಾರರು 2002/2005ರ ನಿಯಮಗಳಂತೆ ಕಾಯಂ ಸೇವೆಗೆ ಅರ್ಹರು ಎಂದು ಘೋಷಿಸಿದೆ. ಒಂದೇ ಬಗೆಯ ಉದ್ಯೋಗ ಮಾಡುವವರನ್ನು ಭಿನ್ನ ರೀತಿಯಲ್ಲಿ ನೋಡಲಾಗದು. ಅರ್ಜಿದಾರರು 10 ವರ್ಷಗಳಿಂದ ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯಲ್ಲಿ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸಿದ್ದಾರೆ. ಅವರನ್ನು ಹಂಗಾಮಿ ನೌಕರರಾಗಿಯೇ ಮುಂದುವರಿಸಲಾಗದು. ಅವರಿಗೆ ಅರ್ಹ ವೇತನ ಮತ್ತು ಭತ್ಯೆಗಳನ್ನು ನೀಡಬೇಕಾಗುತ್ತದೆ ಎಂದು ಆದೇಶದಲ್ಲಿ ವಿವರಿಸಲಾಗಿದೆ. ಅರ್ಜಿದಾರರ ಪರ ಹಿರಿಯ ವಕೀಲ ವಿ.ಲಕ್ಷ್ಮಿನಾರಾಯಣ ವಾದ ಮಂಡಿಸಿದ್ದರು ಹಾಗೂ ಬಿ.ಎಲ್. ವಿಕ್ರಮ್ ಬಾಲಾಜಿ ವಕಾಲತ್ತು ವಹಿಸಿದ್ದರು.

ಮೈಸೂರು ಮಿತ್ರ

ಆ.24ರಿಂದ ಮೈಸೂರಲ್ಲಿ ಪ್ರಜ್ಞಾ ರಂಗೋತ್ಸವ

ಮೈಸೂರು, ಆ.20(ಜಿಎ)–ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಆ.24 ಮತ್ತು 25ರಂದು ನಗರದ ಕಲಾಮಂದಿರದಲ್ಲಿ ಪ್ರಜ್ಞಾ ರಂಗೋತ್ಸವ ಎಂಬ ವಿಶಿಷ್ಟ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಸೋಸಲೆ ಸಿದ್ದರಾಜು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಾತನಾಡಿದ ಅವರು, ಆ.24ರಂದು ಸಂಜೆ 6ಗಂಟೆಗೆ ಉದ್ಘಾಟನೆಯನ್ನು ಕೊಟಗಾನಹಳ್ಳಿ ರಾಮಯ್ಯ ನೆರವೇರಿಸಲಿದ್ದಾರೆ, ಹಿರಿಯ ರಂಗಕರ್ಮಿ ಬಸವಲಿಂಗಯ್ಯ ಅಧ್ಯಕ್ಷತೆ ವಹಿಸುವರು, ಡಾ. ಸುದರ್ಶನ್, ಟಿ.ಎಸ್.ಸುಬ್ರಹ್ಮಣ್ಯ, ಬನ್ನೂರು ರಾಜು, ಪ್ರೊ.ಸಿ.ರಾಮಸ್ವಾಮಿ ಇನ್ನಿತರರು ವೇದಿಕೆಯಲ್ಲಿರುವರು.

ಆ.25ರಂದು ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ನಟ ಚೇತನ್ ಅಹಿಂಸ ಸಮಾರೋಪ ಭಾಷಣ ಮಾಡುವರು, ಡಾ.ಪಿ.ಮಾದೇಶ್ ಅಧ್ಯಕ್ಷತೆ ವಹಿಸುವರು, ಮೈಮ್ ರಮೇಶ್, ಮಲ್ಲಿಕಾರ್ಜುನ ಸ್ವಾಮಿ, ಡಾ.ಎಸ್.ಶಿವರಾಜಪ್ಪ, ಡಾ.ಎಚ್.ಎಂ.ಕುಮಾರಸ್ವಾಮಿ ಅತಿಥಿಗಳಾಗಿರುವರು. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಗುವುದು ಎಂದರು.

ಈ ಎರಡೂ ದಿನ ಜಾನಪದ ನೃತ್ಯ, ಡೊಳ್ಳು ಕುಣಿತ, ಶರೀಫ ನಾಟಕ ಪ್ರದರ್ಶನ, ಜಾನಪದ ಸಂಗೀತ, ಮಂಟೇಸ್ವಾಮಿ ಕಥಾ ಪ್ರಸಂಗ ಮೊದಲಾದ ಕಾರ್ಯಕ್ರಮ ನಡೆಯಲಿದ್ದು, ಎಲ್ಲರಿಗೂ ಉಚಿತ ಪ್ರವೇಶವಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಕೆ.ಶಿವರಾಜು, ಕೆ.ಎಸ್.ಕುಮಾರಸ್ವಾಮಿ, ಡಾ.ಎಸ್.ಆರ್.ತಿರುಮಲೇಶ್ ಉಪಸ್ಥಿತರಿದ್ದರು.

ವಿಶ್ರಾಂತ ಉದ್ಯೋಗಿಗಳ ಸಂಘದ ಮಹಾಸಭೆ

ಮೈಸೂರು,ಆ.20(ಜಿಎ)–ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ವಿಶ್ರಾಂತ ಉದ್ಯೋಗಿಗಳ ಸಂಘದ ಸರ್ವ ಸದಸ್ಯರ ಮಹಾಸಭೆ ಆ.23ರಂದು ಬೆಳಗ್ಗೆ 10 ಗಂಟೆಗೆ ಕುವೆಂಪುನಗರದ ಚಿಕ್ಕಮ್ಮಾನಿಕೇತನ ಕಲ್ಯಾಣ ಮಂಟಪದಲ್ಲಿ ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಂಘದ ಸದಸ್ಯರು ಪಾಲ್ಗೊಳ್ಳುವಂತೆ ಅಧ್ಯಕ್ಷ ಬಿ.ಆರ್.ಉಮಾಕಾಂತ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅಧ್ಯಕ್ಷತೆ ವಹಿಸುವರು, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಜೆ.ಗೋವಿಂದರಾಜು ವಿಶೇಷ ಅತಿಥಿಗಳಾಗಿ ಭಾಗವಹಿಸುವರು ಎಂದರು.

ಸರ್ಕಾರಿ ಬಸ್‌ಗಳಲ್ಲಿ ಹಿರಿಯ ನಾಗರಿಕರು ಪ್ರಯಾಣಿಸಬೇಕಾಗಿ ಬಂದಾಗ ಹಲವರು ಸೀಟು ದೊರೆಯದೇ ನಿಂತೇ ಶ್ರಮ ಪಟ್ಟು ಪ್ರಯಾಣಿಸುತ್ತಿರುವ ಉದಾಹರಣೆ ಹೆಚ್ಚಾಗಿವೆ. ಹೀಗಾಗಿ ಸರ್ಕಾರ ಈ ಕುರಿತು ಏನಾದರೂ ಅನುಕೂಲ ಮಾಡಿಕೊಡಬೇಕು. ಜೊತೆಗೆ, ವಿದ್ಯಾರ್ಥಿಗಳು ಹಾಗೂ ಇತರರು ಸಹಾ ಇವರಿಗೆ ಸೀಟು ಬಿಟ್ಟುಕೊಡುವ ಔದಾರ್ಯ ತೋರಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಕೆ.ಎಂ.ಪುಟ್ಟು, ಮರಿಯಾದಾಸ್, ಸಿ.ಚಿಕ್ಕಲಿಂಗಸ್ವಾಮಿ, ಕೆ.ಆರ್.ಕೃಷ್ಣಶೆಟ್ಟಿ ಉಪಸ್ಥಿತರಿದ್ದರು.

ಲೀಡ್ ಗ್ರೂಪ್ ಸಮೀಕ್ಷೆಯಿಂದ ರಾಷ್ಟ್ರೀಯ ಪಠ್ಯಕ್ರಮ ಮಾರ್ಗಸೂಚಿ

ಮೈಸೂರು,ಆ.20–ಭಾರತದ ಪ್ರಮುಖ ಸ್ಕೂಲ್ ಎಜ್ಯುಟೆಕ್ ಸಂಸ್ಥೆಯಾದ ಲೀಡ್ ಗ್ರೂಪ್, ಭಾರತದಲ್ಲಿ ಪ್ರಸ್ತುತ ಶಾಲಾ ಶಿಕ್ಷಣದ ಸ್ಥಿತಿಯನ್ನು ವಿಶ್ಲೇಷಿಸುವ 'ದಿ ಪಲ್ಸ್ ಆಫ್ ಸ್ಕೂಲ್ ಲೀಡರ್ಸ್ ಸರ್ವೆ' ಎಂಬ ಹೊಸ ಅಧ್ಯಯನವನ್ನು ಬಿಡುಗಡೆ ಮಾಡಿದೆ. ಅದರ ಗಮನಾರ್ಹ ಸಂಶೋಧನೆಗಳ ಪೈಕಿ, ತಮ್ಮ ವಿದ್ಯಾರ್ಥಿಗಳಿಗೆ ಬಹು–ಮಾದರಿ ಶಿಕ್ಷಣವನ್ನು ನೀಡುವ ಶಾಲೆಗಳು ಪಠ್ಯಪುಸ್ತಕಗಳಂತಹ ಸಾಂಪ್ರದಾಯಿಕ ರೂಪಗಳನ್ನು ಮಾತ್ರ ಬಳಸುವ ಶಾಲೆಗಳಿಗಿಂತ ಹೆಚ್ಚಿನ ಸಾಧನೆಯನ್ನು ತೋರಿರುವುದು ದೃಢಪಟ್ಟಿದೆ.

ರಾಷ್ಟ್ರವ್ಯಾಪಿ ಸಮೀಕ್ಷೆಯು ಸುಮಾರು 1.7 ಲಕ್ಷ ವಿದ್ಯಾರ್ಥಿಗಳನ್ನು ಪ್ರತಿನಿಧಿಸುವ 500ಕ್ಕೂ ಅಧಿಕ ಖಾಸಗಿ ಶಾಲೆಗಳ ರೇಟಿಂಗ್‌ಗಳನ್ನು ಆಧರಿಸಿದೆ. ಪರಿಕಲ್ಪನಾ ತಿಳುವಳಿಕೆ, ಆತ್ಮವಿಶ್ವಾಸ, ಇಂಗ್ಲಿಷ್ ಮಾತನಾಡುವಿಕೆ ಮತ್ತು ಶಿಕ್ಷಣದ ಒಟ್ಟಾರೆ ಗುಣಮಟ್ಟ–ನಾಲ್ಕು ನಿರ್ಣಾಯಕ ವಿದ್ಯಾರ್ಥಿಗಳ ಕಲಿಕೆಯ ಫಲಿತಾಂಶಗಳನ್ನು ಹೊಂದಿದೆ ಎಂದು ಲೀಡ್ ಗ್ರೂಪ್ ಸಿಇಒ ಮತ್ತು ಸಹ–ಸಂಸ್ಥಾಪಕ ಸುಮೀತ್ ಮೆಹ್ತಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಇಂದು ಗಜ ಪಯಣ

ಸಮೀಪದ ನಾಗರಹೊಳೆ ಅಭಯಾರಣ್ಯದ ಗೇಟ್ ಬಳಿ ಬೀಡು ಬಿಟ್ಟಿದ್ದು, ನಾಳೆ ಬೆಳಗ್ಗೆ ನಡೆಯುವ ಗಜಪಯಣದಲ್ಲಿ ಮೈಸೂ ರಿನತ್ತ ಹೆಜ್ಜೆ ಹಾಕಲಿವೆ.


ಗಜಪೂಜೆ ಸಲ್ಲಿಸಿದ ಬಳಿಕ ವಿವಿಧ ಸಾಂಸ್ಕೃತಿಕ ಕಲಾ ತಂಡಗಳೊಂದಿಗೆ 11.20ರ ವೇಳೆಗೆ ನಾಗಾಪುರ ಹಾಡಿ ಸಮೀಪದ ಗಿರಿಜನ ವಸತಿ ಶಾಲೆ ಬಳಿ ಮೈದಾನದಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮದ ಸ್ಥಳಕ್ಕೆ ಎಲ್ಲಾ 9 ಆನೆಗಳು ಮೆರವಣಿಗೆಯಲ್ಲಿ ಕರೆತರಲು ಉದ್ದೇಶಿಸಲಾಗಿದೆ. ಅಲ್ಲದೆ ಕಾರ್ಯಕ್ರಮದ ಅಂಗವಾಗಿ ಸ್ವಾಗತ ಕಮಾನು ಅಳವಡಿಸಲಾಗಿದ್ದು, ಹಬ್ಬದ ವಾತಾವರಣ ಸೃಷ್ಟಿಸಲಾಗಿದೆ. ಶಾಸಕ ಜಿ.ಡಿ.ಹರೀಶ್ ಗೌಡ ಅಧ್ಯಕ್ಷತೆ ವಹಿಸಲಿರುವ ಕಾರ್ಯಕ್ರಮದಲ್ಲಿ ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಸಂಗಪ್ಪ ತಂಗಡಗಿ, ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಅರಣ್ಯ ವಸತಿ ಮತ್ತು ವಿಹಾರ ಧಾಮಗಳ ನಿಗಮದ ಅಧ್ಯಕ್ಷರೂ ಶಾಸಕರಾದ ಅನಿಲ್ ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ, ಶಾಸಕ ಎ.ಬಿ.ರಮೇಶ್‌ಬಾಬು ಬಂಡಿ ಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಶಾಸಕರಾದ ತನ್ವಿರ್ ಸೇಠ್, ಜಿ.ಟಿ.ದೇವೇಗೌಡ, ಡಿ.ರವಿಶಂಕರ್, ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ದರ್ಶನ್ ಧೃವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಎ.ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಡಾ.ಯತಿಂದ್ರ ಸಿದ್ದರಾಮಯ್ಯ ಮತ್ತು ವಿವೇಕಾನಂದ ಸೇರಿದಂತೆ ಇನ್ನಿತರರು ಪಾಲ್ಗೊಳ್ಳಲಿದ್ದಾರೆ. ಸಭಾ ಕಾರ್ಯಕ್ರಮದಲ್ಲಿ ಮಾವು ತರಿಗೆ ವಿಳ್ಯೆ ನೀಡಿ ಸನ್ಮಾನಿಸಿದ ಬಳಿಕ ಮಧ್ಯಾಹ್ನ 1.30ರವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ. ನಂತರ ಲಾರಿಗಳಲ್ಲಿ ಸಂಜೆ ವೇಳೆಗೆ ಮೈಸೂರಿನ ಅಶೋಕಪುರಂನಲ್ಲಿರುವ ಅರಣ್ಯ ಭವನದ ಆವರಣ ತಲುಪಲಿವೆ. ಆ.22ರಂದು ಅರಣ್ಯ ಭವನದಲ್ಲೇ ವಿಹರಿಸಲಿವೆ.

ಆ.23ಕ್ಕೆ ಅರಮನೆ ಆವರಣಕ್ಕೆ ಗಜಪಡೆ

ಮೈಸೂರು, ಆ.20(ಎಸ್‌ಬಿಡಿ)– ದಸರಾ ಗಜಪಡೆ ಆ.23ರಂದು ಅಂಬಾವಿಲಾಸ ಅರಮನೆ ಆವರಣವನ್ನು ಪ್ರವೇಶಿಸಲಿದೆ. ವೀರನಹೊಸಹಳ್ಳಿಯಿಂದ ಬುಧವಾರ ಮೈಸೂರಿನ ಅರಣ್ಯಭವನಕ್ಕೆ ಆಗಮಿಸಲಿರುವ ಗಜಪಡೆಯ ಮೊದಲ ತಂಡವನ್ನು ಮೈಸೂರು ಜಿಲ್ಲಾಡಳಿತ ಹಾಗೂ ಅರಮನೆ ಮಂಡಳಿ ವತಿಯಿಂದ ಆ.23ರಂದು ಬೆಳಗ್ಗೆ 10ರಿಂದ 10.30ರ ತುಲಾ ಲಗ್ನದಲ್ಲಿ ಜಯಮಾರ್ತಾಂಡ ದ್ವಾರದ ಮೂಲಕ ಸಾಂಪ್ರದಾಯಿಕವಾಗಿ ಅರಮನೆ ಆವರಣಕ್ಕೆ ಸ್ವಾಗತಿಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ನೇತೃತ್ವದಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಗಜಪಡೆಗೆ ಪೂಜೆ ಸಲ್ಲಿಸಿ, ಬರಮಾಡಿಕೊಳ್ಳಲಿದ್ದಾರೆ. ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಶಾಸಕರಾದ ಟಿ.ಎಸ್.ಶ್ರೀವತ್ಸ, ಜಿ.ಟಿ.ದೇದೇವೇಗೌಡ, ತನ್ವೀರ್ ಸೇಠ್, ಎ.ಹೆಚ್.ವಿಶ್ವನಾಥ್, ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಕೆ.ಹರೀಶ್ ಗೌಡ, ಮಧು ಜಿ.ಮಾದೇಗೌಡ, ಡಿ.ರವಿಶಂಕರ್, ದರ್ಶನ್ ಧ್ರುವನಾರಾಯಣ್, ಜಿ.ಡಿ.ಹರೀಶ್‌ಗೌಡ, ಡಾ.ಎಸ್.ಯತೀಂದ್ರ, ಕೆ.ವಿವೇಕಾನಂದ, ಸಿ.ಅನಿಲ್‌ಕುಮಾರ್, ಎ.ಬಿ.ರಮೇಶ್ ಬಂಡಿ ಸಿದ್ದೇಗೌಡ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಮತ್ತಿತರರ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ, ಜಿಪಂ ಸಿಇಓ ಗಾಯತ್ರಿ, ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಮಣ್ಯ ಇನ್ನಿತರ ಅಧಿಕಾರಿಗಳು ಉಪಸ್ಥಿತರಿರಲಿದ್ದಾರೆ.

ನಿಧನ

ಶ್ರೀಮತಿ ಇಂದಿರಮ್ಮ



ಮೈಸೂರು, ಆ.20– ಮೈಸೂರಿನ ಜಿಎಲ್‌ಎನ್ ಚೌಲ್ಟ್ರಿ ಮತ್ತು ಕಬ್ಬಣ್ಣ ರೆಸ್ಟೋರೆಂಟ್ ಮಾಲೀಕರಾದ ಕೆ.ಎಸ್.ದೇವಪ್ರಕಾಶ್ ಅವರ ತಾಯಿ ಶ್ರೀಮತಿ ಇಂದಿರಮ್ಮ (ದಿವಂಗತ ಕೆ.ಶ್ರೀನಿವಾಸಮೂರ್ತಿ ಕೆಂಪನಪಾಳ್ಯ ಇವರ ಧರ್ಮಪತ್ನಿ) ಇಂದು ಸಂಜೆ ನಿಧನರಾದರು. ಇವರು ಓರ್ವ ಪುತ್ರ ಹಾಗೂ ಇಬ್ಬರು ಪುತ್ರಿಯರು ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಆ.21) ಬೆಳಗ್ಗೆ 10.30ಕ್ಕೆ ಚಾಮುಂಡಿಬೆಟ್ಟದ ತಪ್ಪಲಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಇವರು ಕುವೆಂಪುನಗರ ನಿವಾಸಿ.


ಸಿದ್ದರಾಮಯ್ಯ ಹೆದರಲ್ಲ, ಹೆದರಿಕೆ ಅವರ ರಕ್ತದಲ್ಲೆ ಇಲ್ಲ

ವಿಪಕ್ಷಗಳಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿರುಗೇಟು

ಕಲ್ಬುರ್ಗಿ, ಆ.20– 40 ವರ್ಷಗಳ ಕಾಲ ರಾಜಕಾರಣ ಮಾಡಿಕೊಂಡು ಬಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇದಕ್ಕೆಲ್ಲಾ ಹೆದರುವುದಿಲ್ಲ. ಹೆದರಿಕೆ ಅವರ ರಕ್ತದಲ್ಲೆ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಮುಡಾ ಹಾಗೂ ವಾಲ್ಮೀಕಿ ಹಗರಣ ಬಯಲಾದ ದಿನದಿಂದ ಸಿದ್ದರಾಮಯ್ಯ ಬೆನ್ನೆಲುಬಾಗಿ ನಿಂತಿರುವ ಡಿ.ಕೆ.ಶಿವಕುಮಾರ್ ಈಗ ಮತ್ತೊಮ್ಮೆ ಸಿದ್ದರಾಮಯ್ಯ ಪರ ಬ್ಯಾಟ್ ಬೀಸಿದ್ದಾರೆ. ಕಲ್ಬುರ್ಗಿಯಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಸಿದ್ದರಾಮಯ್ಯ ತಪ್ಪು ಮಾಡಿಲ್ಲ, ನ್ಯಾಯ ಇರುವ ಕಡೆ ಜಯ ಸಿಗುತ್ತದೆ ಎಂದು ತಿಳಿಸಿದರು.

ಮುಡಾ ಹಗರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಹೆದರಿದ್ದಾರೆ ಎಂಬ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹೇಳಿಕೆಗೆ ಸಿಡಿಮಿಡಿಗೊಂಡ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ಹೆದರಿಲ್ಲ, ಹೆದರಿಕೆ ಅವರ ರಕ್ತದಲ್ಲೆ ಇಲ್ಲ, ಪ್ರಾಯಶಃ ಜಗದೀಶ್ ಶೆಟ್ಟರ್ ಅವರೇ ಹೆದರಿರಬೇಕು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದರು.



ಐದು ವರ್ಷಗಳ ಕಾಲ ಸಿದ್ದರಾಮಯ್ಯ ಮುಖ್ಯಮಂತ್ರಿ ಆಗಿರುತ್ತಾರೆಯೇ ಎಂಬ ಪ್ರಶ್ನೆಗೆ, ನಮ್ಮ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ 10 ವರ್ಷ ಅಧಿಕಾರದಲ್ಲಿರುತ್ತದೆ ಎಂದು ಜಾಣ್ಮೆಯ ಉತ್ತರ ನೀಡಿದರು. ರಾಜ್ಯಪಾಲರು ದಲಿತರು ಎಂಬ ಕಾರಣಕ್ಕೆ ಅವಮಾನಿಸಲಾಗುತ್ತಿದ್ದು, ಎಸ್‌ಸಿ, ಎಸ್‌ಟಿ ದೌರ್ಜನ್ಯ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕು ಎಂಬ ಬಿಜೆಪಿ ಆಗ್ರಹಕ್ಕೆ ಪ್ರತಿಕ್ರಿಯೆ ನೀಡಿದ ಡಿ.ಕೆ.ಶಿವಕುಮಾರ್, ಥಾವರ್ ಚಂದ್ ಗೆಹ್ಲೋಟ್ ಅವರನ್ನು ರಾಜ್ಯಪಾಲರ ಹುದ್ದೆಗೆ ಕೂರಿಸಿರುವುದು ಸಂವಿಧಾನವೇ ಹೊರತು ಜಾತಿಯಲ್ಲ, ಹೀಗೆ ಹೇಳುವವರನ್ನು ಕಲ್ಬುರ್ಗಿಯಲ್ಲಿ ನಿರ್ಮಾಣವಾಗಿರುವ ಹೊಸ ಆಸ್ಪತ್ರೆಗೆ ಸೇರಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಟಾಂಗ್ ನೀಡಿದರು.

ಮುಡಾ ಪ್ರಕರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆ ನಡೆದಿರುವ ಬೆಳವಣಿಗೆಗಳ ಬಗ್ಗೆ ಹೈಕಮಾಂಡ್‌ಗೆ ವಿವರಿಸಿ, ವಾಸ್ತವಾಂಶ ಮನದಟ್ಟು ಮಾಡಿಕೊಡಲು ನಾನು ಮತ್ತು ಸಿದ್ದರಾಮಯ್ಯ ದೆಹಲಿಗೆ ತೆರಳಲು ತೀರ್ಮಾನಿಸಿದ್ದೇವೆ ಎಂದು ಅವರು ಸ್ಪಷ್ಟಪಡಿಸಿದರು.


ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಸೇರಿದಂತೆ ಇಡೀ ಪಕ್ಷ ಸಿದ್ದರಾಮಯ್ಯ ಪರವಾಗಿ ನಿಂತಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

ಸುವರ್ಣ ಕರ್ನಾಟಕ: ನಾಟಕ–50 ರಾಷ್ಟ್ರೀಯ ವಿಚಾರ ಸಂಕಿರಣ

ಮೈಸೂರು,ಆ.20–ಕರ್ನಾಟಕ ನಾಟಕ ಅಕಾಡೆಮಿ, ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ (ಮೈಸೂರು) ಸಂಯುಕ್ತಾಶ್ರಯದಲ್ಲಿ ಸುವರ್ಣ ಕರ್ನಾಟಕ: ನಾಟಕ–50 ರಾಷ್ಟ್ರೀಯ ವಿಚಾರ ಸಂಕಿರಣವನ್ನು ಆ.24ರಂದು ಬೆಳಗ್ಗೆ 10 ಗಂಟೆಗೆ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಬೆಂಗಳೂರಿನ ಕರ್ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ.ನಾಗರಾಜಮೂರ್ತಿ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಿರಿಯ ನಟಿ ಹಾಗೂ ವಿಧಾನಪರಿಷತ್ ಸದಸ್ಯರಾದ ಉಮಾಶ್ರೀ ಭಾಗವಹಿಸಲಿದ್ದು, ಡಾ.ಗಂಗೂ ಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ನಾಗೇಶ್ ಬೆಟ್ಟಕೋಟೆ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ನಾಳೆ ಕೆಲವೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಆ.20– ಹೂಟಗಳ್ಳಿ ಉಪ ವಿಭಾಗ ಜಟ್ಟಿಹುಂಡಿ ವಿದ್ಯುತ್ ಮಾರ್ಗದ ತುರ್ತು ನಿರ್ವಹಣಾ ಕೆಲಸದ ನಿಮಿತ್ತ ಆ.22ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಬಸವನಪುರ, ಮಾದಗಳ್ಳಿ, ಸಾಹುಕಾರಹುಂಡಿ, ಗಾಣಗರಹುಂಡಿ, ಮರಟಿಕ್ಯಾತನಹಳ್ಳಿ, ಜಟ್ಟಿ ಹುಂಡಿ, ಗೋಹಳ್ಳಿ, ಕೆ. ಹೆಮ್ಮನಹಳ್ಳಿ ಹಾಗೂ ಸುತ್ತಮುತ್ತಲಿನ ಖಾಸಗಿ ಬಡಾವಣೆಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಇದೇ ರೀತಿ ಮಾನಸೀ ನಗರ, ಬಿ.ಎಸ್.ಎನ್.ಎಲ್ ಬಡಾವಣೆ, ಸಾತಗಳ್ಳಿ 'ಬಿ' ವಲಯ, ಕೆ.ಎಸ್.ಎಫ್.ಸಿ ಬಡಾವಣೆ, ದೇವೇಗೌಡ ವೃತ್ತ, ಪ್ಯಾರಡೈಸ್ ಬಡಾವಣೆ, ಕೆಂಪೇಗೌಡ ಬಡಾವಣೆ, ಬನ್ನೂರು ರಸ್ತೆ, ವಿದ್ಯಾ ವಿಕಾಸ ಕಾಲೇಜು ಹತ್ತಿರ, ಬೆಲವತ್ತ, ಶ್ಯಾದನಹಳ್ಳಿ, ನಾಗನಹಳ್ಳಿ, ಕಳಸ್ತವಾಡಿ, ಲಕ್ಷ್ಮೀಪುರಂ, ಕೆ.ಆರ್ ಮಿಲ್ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.



ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಕಾರ್ಯಕ್ರಮಕ್ಕೆ ಅರ್ಜಿ

ಮೈಸೂರು,ಆ.20– ಅಂಚೆ ಇಲಾಖೆ ವತಿಯಿಂದ ಶಾಲಾ ಮಕ್ಕಳಲ್ಲಿ ಅಂಚೆ ಚೀಟಿ ಸಂಗ್ರಹಣೆಯನ್ನು ಉತ್ತೇಜಿಸಲು "ದೀನ್ ದಯಾಳ್ ಸ್ಪರ್ಶ್ ಯೋಜನೆ" ಅಡಿಯಲ್ಲಿ ವಿದ್ಯಾರ್ಥಿ ವೇತನವನ್ನು ನೀಡಲು 6 ನೇ ತರಗತಿಯಿಂದ 9 ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿಯಲ್ಲಿ 2023–24 ಶೈಕ್ಷಣಿಕ ವರ್ಷದಲ್ಲಿ ಶೇ.60 ರಷ್ಟು ಅಂಕಗಳನ್ನು ಹೊಂದಿರುವ ಮತ್ತು ಅಂಚೆ ಚೀಟಿಗಳ ಸಂಗ್ರಹದ ಠೇವಣಿ ಖಾತೆ/ಫಿಲಾಟೆಲಿಕ್ ಕ್ಲಬ್ಬಿನ ಸದಸ್ಯ ಮತ್ತು ಅಂಚೆಚೀಟಿ ಸಂಗ್ರಹವನ್ನು ಹವ್ಯಾಸವಾಗಿ ಮುಂದುವರಿಸುವ 6 ರಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ರೂ.6000 ಗಳ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ. ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ, ಅಂಚೆಚೀಟಿಗಳ ಸಂಗ್ರಹದ ರಸಪ್ರಶ್ನೆಯಲ್ಲಿ ಭಾಗವಹಿಸಲು ಅರ್ಜಿಯನ್ನು ಸಲ್ಲಿಸಲು/ಪೋಸ್ಟ್ ಮಾಡಲು ಸೆ.3 ಕೊನೆಯ ದಿನಾಂಕವಾಗಿದ್ದು, ಕರ್ನಾಟಕದ ಎಲ್ಲಾ ಶಾಲೆಗಳು ತಮ್ಮ ವಿದ್ಯಾರ್ಥಿಗಳನ್ನು ವಿದ್ಯಾರ್ಥಿವೇತನ ಯೋಜನೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ www.indiapost.gov.in ಮತ್ತು www.karnatakapost.gov.in ಅನ್ನು ಸಂಪರ್ಕಿಸಬಹುದು.

ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ; 12 ಸಾವಿರ ಪ್ರಕರಣ ದಾಖಲು

ಎಡಿಜಿಪಿ ಅಲೋಕ್‌ಕುಮಾರ್ ಮಾಹಿತಿ



ಮೈಸೂರು, ಆ.20(ಬಿಎಲ್‌ಯು)– ಮೈಸೂರು ಸೇರಿದಂತೆ ರಾಜ್ಯದೆಲ್ಲೆಡೆ ವಿರುದ್ಧ ದಿಕ್ಕಿನಲ್ಲಿ (ರಾಂಗ್ ಸೈಡ್) ವಾಹನ ಚಾಲನೆ ಮಾಡುತ್ತಿದ್ದವರ ವಿರುದ್ಧ 12 ಸಾವಿರ ಪ್ರಕರಣ ದಾಖಲಿಸಿ ದಂಡ ವಸೂಲಿ ಮಾಡಲಾಗಿದೆ ಎಂದು ರಾಜ್ಯ ಸಂಚಾರ ಮತ್ತು ಸುರಕ್ಷತೆಯ ಎಡಿಜಿಪಿ ಅಲೋಕ್‌ಕುಮಾರ್ ತಿಳಿಸಿದ್ದಾರೆ.

ಈ ವಿಚಾರವನ್ನು ತಮ್ಮ ಎಕ್ಸ್ ಖಾತೆಯಲ್ಲಿ ತಿಳಿಸಿರುವ ಅವರು, ಮೈಸೂರು ಸೇರಿದಂತೆ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಪ್ರಕರಣ ದಾಖಲಿಸಲಾಗಿದೆ ಎಂದು ಅಂಕಿ ಅಂಶಗಳ ಸಹಿತ ಮಾಹಿತಿ ನೀಡಿದ್ದಾರೆ. ಮೈಸೂರು ನಗರದಲ್ಲಿ 10 ಪ್ರಕರಣ, ಮೈಸೂರು ಜಿಲ್ಲೆಯಲ್ಲಿ 47, ಮಂಡ್ಯದಲ್ಲಿ 4, ಹಾಸನದಲ್ಲಿ 97, ಚಾಮರಾಜನಗರದಲ್ಲಿ 40 ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ಆದರೆ ಕೊಡಗು ಜಿಲ್ಲೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ಚಾಲನೆ ಮಾಡಿರುವುದು ಕಂಡ ಬಂದಿಲ್ಲದ ಕಾರಣ ಒಂದೇ ಒಂದು ಪ್ರಕರಣ ದಾಖಲಿಸಿಲ್ಲ. ಬೆಂಗಳೂರಿನಲ್ಲಿ ಅತೀ ಹೆಚ್ಚು ಅಂದರೆ 9397 ಪ್ರಕರಣ ದಾಖಲಿಸಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ಎಲ್ಲೆಡೆ ಸಂಚಾರ ಮತ್ತು ಸಿವಿಲ್ ಪೊಲೀಸರು ಕಾರ್ಯಾಚರಣೆ ನಡೆಸಿದ್ದು, ಆಗಸ್ಟ್ 1 ರಿಂದ 15 ರವರೆಗೆ 12,096 ಪ್ರಕರಣ ಹಾಗೂ 51 ಎಫ್‌ಐಆರ್ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ ಮಾಡುವುದರಿಂದ ಅಪಘಾತಗಳು ಸಂಭವಿಸಲಿದ್ದು, ಜೀವಕ್ಕೆ ಅಪಾಯವಾಗಲಿದೆ ಎಂದು ಎಚ್ಚರಿಸಿದ್ದಾರೆ. ದಂಡ ವಿಧಿಸುವುದರಿಂದ ಮಾತ್ರ ಸಂಚಾರ ನಿಯಮ ಉಲ್ಲಂಘನೆ ತಡೆಯಲು ಸಾಧ್ಯವಿಲ್ಲ. ಆದರೆ ಇಂತಹ ಕಟ್ಟುನಿಟ್ಟಿನ ಕ್ರಮಗಳಿಂದ ಸಂಚಾರ ನಿಯಮ ಉಲ್ಲಂಘಟನೆ ತಡೆಯಬಹುದು ಎಂದು ಎಡಿಜಿಪಿ ಅಲೋಕ್‌ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿವಿ ಈಜು ಸ್ಪರ್ಧೆ: ಜಿಎಸ್‌ಎಗೆ 45 ಪದಕ



ಮೈಸೂರು ವಿಶ್ವವಿದ್ಯಾನಿಲಯ ಹಮ್ಮಿಕೊಂಡಿದ್ದ ಈಜು ಸ್ಪರ್ಧೆಯಲ್ಲಿ ವಿಜೇತರಾದ ಜೆ.ಪಿ.ನಗರದ ಜಿಎಸ್‌ಎ ತಂಡದ ಈಜು ಸ್ಪರ್ಧಿಗಳೊಂದಿಗೆ ತರಬೇತುದಾರರು.

ಮೈಸೂರು, ಆ.20– ರಾಜ್ಯ ಪದಕ ವಿಜೇತರಲ್ಲದ ಈಜು ಸ್ಪರ್ಧೆಯಲ್ಲಿ ಮೈಸೂರಿನ ಗ್ಲೋಬಲ್ ಸ್ಪೋರ್ಟ್ಸ್ ಅಸೋಸಿಯೇಷನ್‌ನ ಈಜುಸ್ಪರ್ಧಿಗಳು 45 ಪದಕ ಪಡೆದಿದ್ದಾರೆ. ಮೈಸೂರು ವಿಶ್ವವಿದ್ಯಾಲಯದ ಈಜುಕೊಳದ ವತಿಯಿಂದ ಭಾನುವಾರ ಸರಸ್ವತಿಪುರಂನ ಕೊಳದಲ್ಲಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. ಇದರಲ್ಲಿ ಮೈಸೂರಿನ ಜೆ.ಪಿ.ನಗರದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಈಜುಕೊಳದ ಸ್ಪೋರ್ಟ್ಸ್ ಗ್ಲೋಬಲ್ ಅಸೋಸಿಯೇಷನ್‌ನ ಈಜುಪಟುಗಳು ಚಿನ್ನ–22, ಬೆಳ್ಳಿ–15 ಹಾಗೂ ಕಂಚು–8 ಪದಕದೊಂದಿಗೆ ಒಟ್ಟು 45 ಪದಕ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಈಜು ಸ್ಪರ್ಧಿಗಳ ಈ ಸಾಧನೆಯನ್ನು ಜಿಎಸ್‌ಎ ತರಬೇತುದಾರರಾದ ಪವನ್‌ಕುಮಾರ್, ಕಿಶೋರ್ ಕುಮಾರ್ ಹಾಗೂ ಜಿಎಸ್‌ಎ ತಂಡ ಶ್ಲಾಘಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

21.08.2024 ಬುಧವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ಬಿದಿಗೆ, ನಕ್ಷತ್ರ: ಶತಭಿಷ, ರಾಹುಕಾಲ : ಮಧ್ಯಾಹ್ನ 12 ರಿಂದ 1.30ರವರೆಗೆ

■ **ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ :** ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಪ್ರಗತಿ ಲಾಜಿಸ್ಟಿಕ್ಸ್‌ನ ಕುಮಾರ್ ಮತ್ತು ಕುಟುಂಬದಿಂದ ಶ್ರೀ ರಾಘವೇಂದ್ರಸ್ವಾಮಿಗಳ ಬೃಂದಾವನಕ್ಕೆ ನೂತನ ರಜತ ಕವಚ ಸಮರ್ಪಣೆ, ಸಂಜೆ 5ಕ್ಕೆ ಕುಮಾರಿ ಎನ್.ಧನ್ಯ ಮತ್ತು ಸಂಗಡಿಗರಿಂದ ದಾಸವಾಣಿ, ರಾತ್ರಿ 8ಕ್ಕೆ ಶ್ರೀಮತಿ ದೀಪಿಕಾ ಪಾಂಡುರಂಗಿ ತಂಡದಿಂದ ದಾಸವಾಣಿ, ಸ್ಥಳ: ಮಠದ ಆವರಣ, ಸುಬ್ಬರಾಯನಕೆರೆ, ನಾರಾಯಣಶಾಸ್ತ್ರಿ ರಸ್ತೆ.

■ **ಶ್ರೀ ಗುರುರಾಘವೇಂದ್ರ ಆರಾಧನಾ ಸಮಿತಿ :** ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವ, ಬೆಳಗ್ಗೆ 6ಕ್ಕೆ ಸುಪ್ರಭಾತ, 8ಕ್ಕೆ ರಾಘವೇಂದ್ರ ಅಷ್ಟಾಕ್ಷರ ಜಪ, ಬೆಳಗ್ಗೆ 9ಕ್ಕೆ ಶ್ರೀ ಅಶ್ವತ್ಥನಾರಾಯಣ ಹೋಮ, ಬೆಳಗ್ಗೆ 11ಕ್ಕೆ ಅಷ್ಟೋತ್ತರ ಸೇವೆ, ಬೆಳಗ್ಗೆ 11.30ಕ್ಕೆ ಅಭಿಷೇಕ, ಮಹಾಪೂಜೆ, ಮಹಾಮಂಗಳಾರತಿ, ಬೆಳಗ್ಗೆ 8ಕ್ಕೆ ಸೋಮನಾಥನಗರದ ಶ್ರೀ ಸೋಮನಾಥೇಶ್ವರ ದೇವಸ್ಥಾನದಿಂದ ವಾಹನೋತ್ಸವ, ರಾತ್ರಿ 9.30ಕ್ಕೆ ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ತೊಟ್ಟಿಲು ಸೇವೆ, ಸಂಜೆ 7 ರಿಂದ ಪಂಡಿತ್ ಹರೀಶ ತಿವಾರಿ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಪಂಡಿತ್ ಸತೀಶ ಕೊಳ್ಳಿ–ಹಾರ್ಮೋನಿಯಂ, ಪಂಡಿತ್ ವಿಶ್ವನಾಥ ನಾಕೋಡ–ತಬಲಾ, ಸ್ಥಳ: ಶ್ರೀ ರಾಘವೇಂದ್ರಸ್ವಾಮಿ ಮಠ, ಸೋಮನಾಥನಗರ.

■ **ಓಡಿಪಿ, ಮೈಸೂರು :** ಅಗ್ರಿ ಕ್ಲಿನಿಕ್ ಮತ್ತು ಅಗ್ರಿ ಬಿಸಿನೆಸ್ ತರಬೇತಿ ಕಾರ್ಯಕ್ರಮ, ಅಧ್ಯಕ್ಷತೆ : ಓಡಿಪಿ ನಿರ್ದೇಶಕ ಅಲೆಕ್ಸ್ ಪ್ರಶಾಂತ್ ಸಿಕ್ವೇರಾ, ಉದ್ಘಾಟನೆ : ತೋಟಗಾರಿಕೆ ಕಾಲೇಜು ಡೀನ್ ಜನಾರ್ಧನ್, ಮುಖ್ಯ ಅತಿಥಿಗಳು : ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕರಾದ ಶ್ರೀಮತಿ ಮಮತಾ, ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕ ವಿ.ಎನ್. ನಾಗೇಶ್, ನಬಾರ್ಡ್ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ಶಾಂತವೀರ್, ಜೆಸ್ಸಿಲ್ ಮೆಕ್ಕುನಲ್, ಸ್ಥಳ: ಓಡಿಪಿ, ಮೈಸೂರು. ಬೆಳಗ್ಗೆ 10ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು :** ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಹಿರಿಯರಿಗೆ ನಮನ, ಸನ್ಮಾನಿಸುವವರು : ವಿಶ್ರಾಂತ ಪ್ರಾಧ್ಯಾಪಕ ಡಾ. ಎಸ್. ಶಿವರಾಜಪ್ಪ, ಅಧ್ಯಕ್ಷತೆ : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮುಖ್ಯ ಅತಿಥಿಗಳು : ಶ್ರೀಮತಿ ಸುಮಾ ರಾಜ್‌ಕುಮಾರ್, ಡಾ. ಪುಷ್ಪಾ ಅಯ್ಯಂಗಾರ್, ಡಾ. ಕೆ. ರಘುರಾಂ ವಾಜಪೇಯಿ, ಡಾ. ಬಿ.ಆರ್. ನಟರಾಜ ಜೋಯಿಸ್, ಸನ್ಮಾನಿತರು : ಪ್ರಸಾರಾಂಗ ನಿವೃತ್ತ ನಿರ್ದೇಶಕ ಕೆ.ಟಿ. ವೀರಪ್ಪ, ಹಿರಿಯ ರಂಗಭೂಮಿ ಕಲಾವಿದರಾದ ಶ್ರೀಮತಿ ರಾಮೇಶ್ವರಿ ವರ್ಮ, ಸಮಾಜ ಸೇವಕಿ ಶ್ರೀಮತಿ ವೈದೇಹಿ, ರಾಜಶೇಖರ ಕದಂಬ, ಸ್ಥಳ: ಪತ್ರಕರ್ತರ ಭವನ, ಅಗ್ರಹಾರ, ಮಧ್ಯಾಹ್ನ 12ಕ್ಕೆ

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಬೆಳಗ್ಗೆ 5.30ಕ್ಕೆ ಸುಪ್ರಭಾತ, 7 ರಿಂದ ಮಹಾಪಂಚಾಮೃತ ಅಭಿಷೇಕ, 8 ರಿಂದ ಕನಕಾಭಿಷೇಕ, ಸರ್ವಸೇವೆ, ಮಧ್ಯಾಹ್ನ 12ಕ್ಕೆ ಮಹಾಮಂಗಳಾರತಿ, 12.30 ರಿಂದ ಪ್ರಸಾದ ವಿನಿಯೋಗ, ಸಂಜೆ 7ಕ್ಕೆ ಸ್ವಸ್ತಿವಾಚನ, ಶ್ರೇಯಃಪ್ರಾರ್ಥನೆ, ಮಹಾಮಂಗಳಾರತಿ, ಸಂಜೆ 5 ರಿಂದ ಶ್ರೀ ಸತ್ಯಧ್ಯಾನ ಭಜನಾ ಮಂಡಳಿ ಅವರಿಂದ ಭಜನೆ, ಸಂಜೆ 6.30 ರಿಂದ ವಿದ್ವಾನ್ ಎಸ್. ಶಂಕರ್ ಅವರಿಂದ ಗಾಯನ, ವಿದುಷಿ ಪೃಥ್ವಿ ಭಾಸ್ಕರ್–ವಯೋಲಿನ್, ವಿದ್ವಾನ್ ಹೆಚ್.ಎಲ್. ಶಿವಶಂಕರಸ್ವಾಮಿ–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟಂ, ಸ್ಥಳ: ಸ್ರೀ ರಾಘವೇಂದ್ರಸ್ವಾಮಿ ಮಠ, ಜಯಲಕ್ಷ್ಮಿಪುರಂ.,

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮುಕ್ತ ಗಂಗೋತ್ರಿ :** ಶ್ರೀ ಯೋಗಿ ನಾರೇಯಣ ತಾತ್ವಿಕತೆ ಕುರಿತು ಅಂತರರಾಷ್ಟ್ರೀಯ ಸಮ್ಮೇಳನ, ಉದ್ಘಾಟನೆ: ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಉಪಸ್ಥಿತರು : ಕುಲಸಚಿವರಾದ ಪ್ರೊ.ಕೆ.ಬಿ.ಪ್ರವೀಣ, ಪ್ರೊ.ಎನ್.ಲಕ್ಷ್ಮೀ, ಪ್ರೊ.ಹೆಚ್. ವಿಶ್ವನಾಥ್, ಹಣಕಾಸು ಅಧಿಕಾರಿ ಶ್ರೀಮತಿ ಹೆಚ್.ವಿ.ಶ್ವೇತ, ಡೀನ್ ಪ್ರೊ.ಎಂ.ರಾಮನಾಥಂ ನಾಯ್ಡು, ಮುಖ್ಯ ಅತಿಥಿಗಳು : ತೆಲುಗು ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಆರ್.ರಾಜೇಶ್ವರಮ್ಮ, ನಿರ್ದೇಶಕ ವೇಮುಲ ಲೆನಿನ್ ಬಾಬು, ಸ್ಥಳ: ಬಿಓಎಂ ಸಭಾಂಗಣ, ಕರಾಮುವಿವಿ, ಬೆಳಗ್ಗೆ 10.30ಕ್ಕೆ.

■ **ಅಲ್ಜಮೀರ್ಸ್ ಅಂಡ್ ರಿಲೇಟೆಡ್ ಡಿಸಾರ್ಡರ್ಸ್ ಸೊಸೈಟಿ ಆಫ್ ಇಂಡಿಯಾ, ಮೈಸೂರು ಚಾಪ್ಟರ್ :** ಡೆಮೆನಿಷಿಯಾ ಫ್ರೆಂಡ್ಲಿ ಮೈಸೂರ್‌ಗೆ ಚಾಲನೆ, ಮುಖ್ಯ ಅತಿಥಿಗಳು: ಮೇಘಾಲಯ ಗೌರ್ನರ್ ಸಿ.ಎಚ್. ವಿಜಯಶಂಕರ್, ಗೌರವ ಅತಿಥಿಗಳು : ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಪ್ರಿನ್ಸಿಪಾಲ್ ಡಾ. ಗಜಾನನ ಹೆಗ್ಡೆ, ರೋಟರಿ ಮೈಸೂರು ಅಧ್ಯಕ್ಷ ಪ್ರವೀಣ್, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಜಂಟಿ ನಿರ್ದೇಶಕ ಡಾ. ಲಕ್ಷ್ಮಿನಾರಾಯಣ ಶೆಣೈ, ಅಧ್ಯಕ್ಷತೆ: ಆಜ್ಮೀರ್ ಸೊಸೈಟಿ ಅಧ್ಯಕ್ಷ ಡಾ.ಹನುಮಂತಚಾರ್ ಜೋಷಿ, ಸ್ಥಳ: ಪ್ರೊ.ಸಿ.ದೇವೇಗೌಡ ಹಾಲ್, ಜೆಎಲ್‌ಬಿ ರಸ್ತೆ, ಮಧ್ಯಾಹ್ನ 2.30ಕ್ಕೆ.

■ **ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಪ್ರಾದೇಶಿಕ ಜಾನಪದ ಅಧ್ಯಯನ ಮತ್ತು ಜನಪದ ಕಲಿಕಾ ಕೇಂದ್ರ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರು ರಂಗಮಂದಿರ ಆವರಣ, ಕಲಾಮಂದಿರ, ಸಂಜೆ 4 ರಿಂದ.

■ **ಕೆಎಂಪಿಕೆ ಟ್ರಸ್ಟ್ :** ವರಮಹಾಲಕ್ಷ್ಮಿ ಹಬ್ಬದ ಹಿನ್ನೆಲೆಯಲ್ಲಿ ಮಹಿಳೆಯರಿಗಾಗಿ ಆಯೋಜಿಸಿದ್ದ ವರಮಹಾಲಕ್ಷ್ಮಿ ಸೆಲ್ಫಿ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣಾ ಸಮಾರಂಭ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ಚಿದನ್ವಿ ಫೌಂಡೇಶನ್ ಅಧ್ಯಕ್ಷೆ ನಾಗಮಣಿ. ಜೆ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಡಿ ಟಿ ಪ್ರಕಾಶ್, ಹಿರಿಯ ಸಮಾಜ ಸೇವಕರಾದ ಕೆ ರಘುರಾಮ್ ವಾಜಪೇಯಿ, ಮೈಸೂರು ನಗರ ಬಿಜೆಪಿ ಉಪಾಧ್ಯಕ್ಷ ಹೇಮಾ ನಂದೀಶ್, ಕಾಂಗ್ರೆಸ್ ಮುಖಂಡರಾದ ಎನ್.ಎಂ. ನವೀನ್ ಕುಮಾರ್, ನಗರ ಪಾಲಿಕಾ ಮಾಜಿ ಸದಸ್ಯ ಬಿ.ವಿ. ಮಂಜುನಾಥ್, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸಮೃದ್ಧಿ ವಾರ್ತಾ ಪತ್ರಿಕೆಯ ಸಂಪಾದಕಿ ಸಹನಾ, ಸ್ಥಳ: ನಮೋ ಯೋಗ ಭವನ, ರಾಮಾನುಜ ರಸ್ತೆ, ಸಂಜೆ 4ಕ್ಕೆ.

■ **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವಪರ ಸಂಘಟನೆಗಳ ಸಹಭಾಗಿತ್ವ :** ಬಸವ ಧರ್ಮ ಜಾಗೃತಿ, ಅಭಿಯಾನ, ಇಷ್ಟಲಿಂಗ ಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಚೌಹಳ್ಳಿ ನಿಂಗರಾಜಣ್ಣ ಅವರಿಂದ ವಿಶ್ವಗುರು ಬಸವಣ್ಣ ವಿಶ್ವದ ಮೊದಲ ಸಂಸತ್ ಅನುಭವ ಮಂಟಪದ ಸ್ಥಾಪಕರು ಕುರಿತು ಉಪನ್ಯಾಸ, ಸ್ಥಳ: ಈಶ್ವರ ದೇವಸ್ಥಾನ ಮರಯ್ಯನಹುಂಡಿ, ಸಂಜೆ 5.30ಕ್ಕೆ

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ) ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಪ್ರಾಧ್ಯಾಪಕರಾದ ಶ್ರೀಮಜತಿ ಜೆ. ಪುಷ್ಪಲತಾ ಅವರಿಂದ ಹದನರಿದು ಹರಗುವ ಬೆದೆಯನರಿದು ಬಿತ್ತುವ–ಸೊಡ್ಡಳ ಬಾಚರಸ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ಪಾರ್ವತಿ ಶಂಕರ್ ಮತ್ತು ಸ್ನೇಹಿತರು, ಶ್ರೀರಾಂಪುರ 2ನೇ ಹಂತ, ಸಂಜೆ 5.30ಕ್ಕೆ.

■ **ಸಂಸ್ಕೃತ ಭಾರತಿ, ಮೈಸೂರು :** ಸಂಸ್ಕೃತ ಸಪ್ತಾಹದ ಅಂಗವಾಗಿ ಉಪನ್ಯಾಸ, ಡಾ. ಎಂ.ವಿ. ಮೋಹನ ಅವರಿಂದ ಭಾರತೀಯ ಗಣಿತಶಾಸ್ತ್ರಮ್ ಕುರಿತು ಉಪನ್ಯಾಸ, ಸ್ಥಳ: ಭಗಿನಿ ಸೇವಾ ಸಮಾಜ, ವಿದ್ಯೋದಯ, ಕೃಷ್ಣಮೂರ್ತಿಪುರಂ, ಸಂಜೆ 6 ರಿಂದ.

■ **ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ :** ವಿಶ್ವ ವಾಣಿಜ್ಯೋದ್ಯಮ ದಿನಾಚರಣೆ, ಭಾಷಣಕಾರರು : ಅಕ್ಷಯ ಡಿಸೈನ್ ಸೆಲ್ಯೂಷನ್ಸ್ ಸಿಇಓ ಡಾ. ಮಹೇಶ್ ರಾವ್, ಅಧ್ಯಕ್ಷತೆ : ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಸಂಜೆ 6ಕ್ಕೆ.

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಮಹಾರಾಣಿ ಕಲಾ ಕಾಲೇಜು ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್ ಅವರಿಂದ ಪ್ರವಚನ, ವಿದುಷಿ ವಸಂತ ವೆಂಕಟೇಶ್ ಅವರಿಂದ ವಾಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ವಾದ್ಯ ವೈಭವ'–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ ಸರಣಿ 'ಬಾಹ್ಯಾಕಾಶ ವಿಸ್ಮಯ', 9.05 ವೃತ್ತಿ ಮಾರ್ಗದರ್ಶನ, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಪಂಡಿತ್. ಭಜನ್ ಸಪೂರಿ–ಸಂತೂರ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ಆಯುಷವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ರಘು. ಆರ್, 12.45 ಜನಪದ ಸಂಗೀತ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ವಿಜಯ್ ಶಿವ– ಹಾಡುಗಾರಿಕೆ, 4.00 ಮಹಿಳಾರಂಗ 'ಹೀಗಿದೆ ನೋಡಿ ನಮ್ ಜೋಡಿ', ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಕಿಶೋರ್. ಎಂ.ಕಾಕಡೆ, 6.50 ಕೃಷಿರಂಗ, ಕೃಷಿ ದೀವಿಗೆ : 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ಮೇವಿನ ಬೆಳೆಗಳು ಹಾಗೂ ಉತ್ಪಾದನಾ ತಾಂತ್ರಿಕತೆಗಳು. ಈ ಕುರಿತು ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ.ಬಿ.ಜಿ. ಶೇಖರ್ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 'ಕ್ಷಿತಿಜ ಲಿಟರರಿ ಗುರು' ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಉಸ್ತಾದ್ ಅಮ್ಜದ್ ಅಲಿಖಾನ್–ಸರೋದ್, 10.00 ಜನಪದ ಸಂಗೀತ, 10.30 ಸವಿನೆನಪು

ರಾಜೀವ್‌ಗಾಂಧಿ, ದೇವರಾಜ ಅರಸು ಬದುಕು, ಕೆಲಸ ನಮಗೆ ಮಾರ್ಗದರ್ಶಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ

ಬೆಂಗಳೂರು, ಆ.20(ಕೆಎಂಶಿ)– ರಾಜೀವ್‌ಗಾಂಧಿ ಹಾಗೂ ದೇವರಾಜ ಅರಸರ ಬದುಕು ಮತ್ತು ಕೆಲಸ ನಮಗೆಲ್ಲ ಮಾರ್ಗದರ್ಶಿಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಸದ್ಭಾವನಾ ದಿನಾಚರಣೆ ಹಾಗೂ ಡಿ.ದೇವರಾಜ ಅರಸು ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜೀವ್ ಗಾಂಧಿ ಚಿಕ್ಕ ವಯಸ್ಸಿನಲ್ಲೇ ದೇಶದ ಪ್ರಧಾನಿಯಾಗಿದ್ದರು, ಆಧುನಿಕ ಭಾರತದ ಕನಸು ಕಂಡಿದ್ದರು. ಯುವಜನತೆಯ ಮೇಲೆ ಅಪಾರ ವಿಶ್ವಾಸ ಇಟ್ಟುಕೊಂಡಿದ್ದರು. ಅದಕ್ಕಾಗಿ ಮತದಾನದ ವಯಸ್ಸು 21 ರಿಂದ 18ಕ್ಕೆ ಇಳಿಸಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ಬೆಳವಣಿಗೆಗೆ ಕಾರಣಕರ್ತರಾದರು. ಸಾಮಾಜಿಕ ನ್ಯಾಯದ ಪರ ಇದ್ದರು. ದೇಶದಲ್ಲಿ ಎಲ್ಲರಿಗೂ ಸಮಾನ ಅವಕಾಶ ಸಿಗಬೇಕೆಂದು ಹಂಬಲಿಸಿದವರು. ಜಾತಿ, ಧರ್ಮ, ಭಾಷೆ, ಪ್ರಾದೇಶಿಕತೆ ಭೇದ ಮರೆತು, ಎಲ್ಲೇ ಇದ್ದರೂ ಭಾರತೀಯರು ಒಗ್ಗಟ್ಟಾಗಿರಬೇಕು ಎಂಬ ಕನಸು ಕಂಡಿದ್ದರು.

ರಾಜಕೀಯ ಕ್ಷೇತ್ರದಲ್ಲಿ ವಿಶೇಷವಾಗಿ ಮಹಿಳೆಯರಿಗೆ ಪಾಲು ಸಿಕ್ಕಾಗ ಮಾತ್ರ ಸಮಸಮಾಜ ನಿರ್ಮಾಣ ಸಾಧ್ಯ ಎಂಬ ನಂಬಿಕೆಯಲ್ಲಿ ಸಂವಿಧಾನಕ್ಕೆ 73 ಮತ್ತು 74 ನೇ ತಿದ್ದುಪಡಿ ತಂದರು.

ಭಾರತೀಯ ಜನತಾ ಪಕ್ಷ ಹಿಂದುಳಿದವರು, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರ ಪರ ಎಂಬುದಾಗಿ ಎಷ್ಟೇ ಸಮರ್ಥಿಸಿಕೊಂಡರೂ, ನಂಬಲು ಸಾಧ್ಯವೇ ಇಲ್ಲ, ಬಡವರಿಗೆ ಆರ್ಥಿಕ ಹಾಗೂ ಸಾಮಾಜಿಕ ಶಕ್ತಿ ಬರಬಾರದೆಂದು ಬಯಸುತ್ತಾರೆ.

ದೇವರಾಜ ಅರಸು ಅವರು 1972ರಿಂದ ದೀರ್ಘ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದರು, ಅವರನ್ನು ಸಾಮಾಜಿಕ ನ್ಯಾಯದ ಹರಿಕಾರ ಎಂದು ಕರೆಯುತ್ತೇವೆ, ಹಾವನೂರ ಆಯೋಗ ರಚನೆ ಮಾಡಿ ಹಿಂದುಳಿದವರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ತಂದರು. ಸಮಾಜದಲ್ಲಿ ನಿರ್ಲಕ್ಷ್ಯಕ್ಕೆ ಒಳಗಾದವರನ್ನು ರಾಜಕೀಯವಾಗಿ ಗುರುತಿಸಿ, ಚುನಾವಣೆಯಲ್ಲಿ ಗೆದ್ದು ವಿಧಾನಸೌಧದ ಮೆಟ್ಟಿಲು ಹತ್ತಲು ಅವಕಾಶ ಮಾಡಿಕೊಟ್ಟರು. ಮಲ ಹೊರುವ ಪದ್ಧತಿ, ಜೀತ ಪದ್ಧತಿ ನಿಷೇಧ, ಸಾಲ ಮನ್ನಾದಂತಹ ಅನೇಕ ಪ್ರಗತಿಪರ ಕ್ರಾಂತಿಕಾರಿ ಕಾನೂನುಗಳನ್ನು ಜಾರಿಗೆ ತಂದರು. ಅಸಮಾನತೆ ಹೋಗಲಾಡಿಸುವ ಕಾರ್ಯಕ್ರಮಗಳನ್ನು ಜಾರಿಗೆ ತರುತ್ತಿದ್ದೇನೆಂಬ ಕಾರಣಕ್ಕೆ ಬಿಜೆಪಿ ನನ್ನನ್ನು ಸಹಿಸುತ್ತಿಲ್ಲ, ಗ್ಯಾರಂಟಿಗಳ ಜಾರಿಯಿಂದ ಹೊಟ್ಟೆ ಉರಿದುಕೊಂಡು ನನ್ನ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದರು.



ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಲಾಗಿದ್ದ, ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಮಿಸಿದರು.

ಎಲೆಕ್ಟ್ರಾನಿಕ್ ಸಿಟಿ ಹೆಸರು ಬದಲಾವಣೆ: ಸಿಎಂ ಘೋಷಣೆ

ಬೆಂಗಳೂರು, ಆ.20– ರಾಮನಗರವನ್ನು ಬೆಂಗಳೂರಿನ ದಕ್ಷಿಣ ಕ್ಷೇತ್ರ ಎಂದು ಹೆಸರು ಬದಲಾವಣೆ ಮಾಡಿದ್ದ ರಾಜ್ಯ ಸರ್ಕಾರ ಇದೀಗ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಹೆಸರು ಬದಲಿಸುವುದಾಗಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಲಾಗಿದ್ದ, ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ 109ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಗೆ ದೇವರಾಜ ಅರಸು ಎಲೆಕ್ಟ್ರಾನಿಕ್ ಸಿಟಿ ಎಂದು ನಾಮಕರಣ ಮಾಡಲಾಗುವುದು ಎಂದು ಹೇಳಿದರು. ಅಲ್ಲದೆ ದೇವರಾಜ ಅರಸು ಅವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿ ನೀಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದರು.

ದೇವರಾಜ ಅರಸು ಗುಣಗಾನ ಮಾಡಿದ ಸಿಎಂ ಸಿದ್ದರಾಮಯ್ಯ ಹಿಂದುಳಿದವರನ್ನ ತುಳಿಯಲು ಈಗಲೂ ನಿರಂತರವಾಗಿ ಹುನ್ನಾರಗಳು ನಡೆಯುತ್ತಿವೆ. ನಾನು ಮುಖ್ಯಮಂತ್ರಿ ಆದ ಮೇಲೆ ಬಡವರಿಗಾಗಿ, ಮಹಿಳೆಯರಿಗಾಗಿ, ರೈತರಿಗೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದೇವೆ. ಐದು ಗ್ಯಾರಂಟಿ ಯೋಜನೆಗಳು ಬಡವರು, ಮಹಿಳೆಯರು, ರೈತರು, ಯುವಕರ ಪರವಾಗಿದೆ. ಆದರೆ ಬದಲಾವಣೆ ಬಯಸದ, ಬಡವರ ವಿರೋಧಿಗಳು ಇದನ್ನ ವಿರೋಧಿಸುತ್ತಿದ್ದಾರೆ ಎಂದು ಹೇಳಿದರು.

1956 ನವೆಂಬರ್ 1ರಂದು ಕರ್ನಾಟಕ ಏಕೀಕರಣ ಆಗಿದ್ದರೂ, ದೇವರಾಜ ಅರಸು ಅವರು 1973ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದರು. ಹೀಗಾಗಿ ನ.1ರಂದು ಕನ್ನಡ ಭುವನೇಶ್ವರಿ ಪ್ರತಿಮೆಯನ್ನು ವಿಧಾನಸೌಧ ಮುಂಭಾಗದಲ್ಲಿ ಅನಾವರಣಗೊಳಿಸಲಾಗುವುದು ಎಂದರು. ಹಿಂದುಳಿದವರನ್ನು ತುಳಿಯಲು ಪ್ರಯತ್ನಗಳು ಈಗಲೂ ನಿರಂತರವಾಗಿ ನಡೆಯುತ್ತಿವೆ. ನಾನು ಮುಖ್ಯಮಂತ್ರಿ ಆದ ಮೇಲೆ ಬಡವರಿಗಾಗಿ, ಮಹಿಳೆಯರಿಗಾಗಿ, ರೈತರಿಗೆ ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದೇವೆ. ಐದು ಗ್ಯಾರಂಟಿ ಯೋಜನೆಗಳು ಬಡವರು, ಮಹಿಳೆಯರು, ರೈತರು, ಯುವಕರ ಪರವಾಗಿದೆ. ಆದರೆ ಬದಲಾವಣೆ ಬಯಸದ, ಬಡವರ ವಿರೋಧಿಗಳು ಇದನ್ನ ವಿರೋಧಿಸುತ್ತಿದ್ದಾರೆ ಎಂದು ಹೇಳಿದರು.

ದೇವರಾಜ ಅರಸರಿಗೆ ಭಾರತ ರತ್ನಕ್ಕೆ ಶಿಫಾರಸು

ಬೆಂಗಳೂರು, ಆ.20– ಮಾಜಿ ಮುಖ್ಯಮಂತ್ರಿ ದಿವಂಗತ ದೇವರಾಜ ಅರಸ್ ಅವರಿಗೆ ಮರಣೋತ್ತರ ಭಾರತ ರತ್ನ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಅಂತ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ನಡೆದ ದೇವರಾಜ ಅರಸ್ ಜನ್ಮದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇವರಾಜ್ ಅರಸ್ ಸಾಮಾಜಿಕ ನ್ಯಾಯದ ಪರ ಇದ್ದವರು. ಬಡವರು, ದಲಿತರು, ರೈತರು, ಮಹಿಳೆಯರ ಪರ ಇದ್ದವರು. ಅವರ ಕೊಡುಗೆ ಅಪಾರವಾದದ್ದು. ಹೀಗಾಗಿ ದೇವರಾಜ ಅರಸ್ ಅವರಿಗೆ ಮರಣೋತ್ತರ ಭಾರತ ರತ್ನ ನೀಡಬೇಕು ಅಂತ ಕೇಂದ್ರಕ್ಕೆ ಶಿಫಾರಸು ಮಾಡುತ್ತೇನೆ ಎಂದಿದ್ದಾರೆ. ಇದಲ್ಲದೆ ಎಲೆಕ್ಟ್ರಾನಿಕ್ ಸಿಟಿಗೆ ದೇವರಾಜ್ ಅರಸ್ ಎಲೆಕ್ಟ್ರಾನಿಕ್ ಸಿಟಿ ಅಂತ ನಾಮಕರಣ ಮಾಡಲು ಪ್ರಕ್ರಿಯೆ ಶುರು ಮಾಡಲಾಗಿದೆ. ಆದಷ್ಟು ಬೇಗ ಎಲೆಕ್ಟ್ರಾನಿಕ್ ಸಿಟಿಗೆ ದೇವರಾಜ್ ಅರಸ್ ಹೆಸರು ಇಡುವುದಾಗಿ ತಿಳಿಸಿದ್ದಾರೆ. ಇದೇ ವೇಳೆ ನವೆಂಬರ್ 1ಕ್ಕೆ ವಿಧಾನಸೌಧದಲ್ಲಿ ನಿರ್ಮಾಣ ಆಗುತ್ತಿರುವ ಭುವನೇಶ್ವರಿ ಪ್ರತಿಮೆಯನ್ನು ಉದ್ಘಾಟನೆ ಮಾಡುವುದಾಗಿ ಘೋಷಣೆ ಮಾಡಿದ್ದಾರೆ.

ಮೊಬೈಲ್ ಕೊಟ್ಟಿಲ್ಲ ಎಂದು ಬಾವಿಗೆ ಹಾರಿದ ಪಿಯು ವಿದ್ಯಾರ್ಥಿ ಸಾವು!

ಉಡುಪಿ: ಇತ್ತೀಚಿನ ದಿನಗಳಲ್ಲಿ ಮೊಬೈಲ್ ಗೀಳು ಹೆಚ್ಚಾಗುತ್ತಿದೆ. ಮಕ್ಕಳಿಂದ ಹಿಡಿದು ಯುವ ಜನತೆ ಮೊಬೈಲ್ ಬಳಕೆಯಲ್ಲಿ ಮುಳುಗುತ್ತಿದೆ. ಇನ್ನು ಮೊಬೈಲ್ ಕೊಡಲಿಲ್ಲ ಎಂಬ ಕಾರಣಕ್ಕೆ ಹಲವು ಜೀವವನ್ನು ಕಳೆದುಕೊಂಡಿದ್ದಾರೆ. ಅದೇ ರೀತಿಯ ಘಟನೆ ಇದೀಗ ಉಡುಪಿಯಲ್ಲಿ ನಡೆದಿದೆ. ಮೊಬೈಲ್ ಕೊಡದಿದ್ದಕ್ಕೆ ಬೇಸರ ಮಾಡಿಕೊಂಡು ಮನೆ ಬಿಟ್ಟು ಹೋಗಿದ್ದ ವಿದ್ಯಾರ್ಥಿ 17 ವರ್ಷದ ಪ್ರಥಮೇಶ್ ಮೃತದೇಹ ಹಿರಿಯಡಕ ಸರ್ಕಾರಿ ಪದವಿಪೂರ್ವ ಕಾಲೇಜಿನ ಬಳಿಯ ಬಾವಿಯಲ್ಲಿ ಪತ್ತೆಯಾಗಿದೆ.



ಹಿರಿಯಡಕ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮೇಶ್ ಪ್ರಥಮ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿದ್ದನು. ನಿನ್ನೆ ಮೊಬೈಲ್ ಕೊಡಲಿಲ್ಲ ಎಂಬ ಕಾರಣಕ್ಕೆ ಪ್ರಥಮೇಶ್ ಮನೆ ಬಿಟ್ಟು ಹೋಗಿದ್ದನು. ಈ ಹಿನ್ನೆಲೆಯಲ್ಲಿ ಪೋಷಕರು ಮತ್ತು ಸ್ನೇಹಿತರು ಹುಡುಕಾಟ ನಡೆಸಿದ್ದರೂ ಪ್ರಥಮೇಶ್ ಪತ್ತೆಯಾಗಿರಲಿಲ್ಲ. ಆದರೆ ಇಂದು ಬಾವಿಯಲ್ಲಿ ಪ್ರಥಮೇಶ್ ಶವ ಪತ್ತೆಯಾಗಿದ್ದು ಆತ್ಮಹತ್ಯೆ ಮಾಡಿಕೊಂಡಿರಬಹುದು ಎಂದು ಶಂಕಿಸಿದ್ದಾರೆ.

ರಾಜೀವ್ ಗಾಂಧಿ, ದೇವರಾಜ ಅರಸು ಶೋಷಿತರ ಪಾಲಿಗೆ ಆಶಾಕಿರಣ

ವಿಧಾನ ಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ ಅಭಿಮತ

ಮೈಸೂರು, ಆ. 20(ಎಸ್‌ಪಿಎನ್)– ಮಾಜಿ ಪ್ರಧಾನ ಮಂತ್ರಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರು ಯುವಕರು, ಮಧ್ಯಮ ಹಾಗೂ ಶೋಷಿತ ವರ್ಗಗಳ ಆಶಾಕಿರಣವಾಗಿದ್ದರು ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ ಬಣ್ಣಿಸಿದರು. ಮೈಸೂರು ಜೆಎಲ್‌ಬಿ ರಸ್ತೆಯಲ್ಲಿರುವ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಮೈಸೂರು ನಗರ ಹಾಗೂ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಘಟಕದ ಸಹಯೋಗದೊಂದಿಗೆ ಮಾಜಿ ಪ್ರಧಾನಮಂತ್ರಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ದೇವರಾಜ ಅರಸು ಮುಖ್ಯಮಂತ್ರಿಗಳಾಗಿದ್ದಾಗ ಉಳುವವನೇ ಭೂಮಿ ಒಡೆಯ ಎನ್ನುವ ಕಾಯ್ದೆ ಜಾರಿಗೊಳಿಸಿ ಶ್ರಮಿಕ ವರ್ಗದ ಆಶಾಕಿರಣವಾದರು. ಅದೇ ರೀತಿ, ರಾಜೀವ್ ಗಾಂಧಿ ಅವರು, ಟೆಲಿಕಾಂ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆ ತಂದರು. 18 ವರ್ಷ ದಾಟಿದ ಯುವಕ–ಯುವತಿಯರಿಗೆ ಮತದಾನದ ಹಕ್ಕು ನೀಡಿ, ಪ್ರಜಾಪ್ರಭುತ್ವದ ಬುನಾದಿಯನ್ನು ಮತ್ತಷ್ಟು ಗಟ್ಟಿಗೊಳಿಸಿದ ಕೀರ್ತಿ ಸಲ್ಲುತ್ತದೆ ಎಂದರು. ಮಾಜಿ ಪ್ರಧಾನಿ ರಾಜೀವ್‌ಗಾಂಧಿ ಅವರು ಸ್ಥಳೀಯ ಸಂಸ್ಥೆಗಳಲ್ಲಿಯೂ ರಾಜಕೀಯ ಮೀಸಲಾತಿ ಜಾರಿಗೊಳಿಸುವ ಮೂಲಕ ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಗೊಳಿಸಿದರು. ಅವರ ಆಡಳಿತಾವಧಿಯಲ್ಲಿ ಭಾರತ ಅನೇಕ ಅಭಿವೃದ್ಧಿ ಯೋಜನೆಗಳನ್ನು ಹೊಂದಿ ಸೂಪರ್ ಪವರ್ ರಾಷ್ಟ್ರವಾಗುತ್ತ ಮುನ್ನಡೆದಿತ್ತು. ವಿದೇಶಗಳು ಭಾರತದತ್ತ ಸ್ನೇಹ ಹಸ್ತ ಚಾಚುವಂತೆ ಮಾಡಿದ್ದ ಕೀರ್ತಿ ರಾಜೀವ್ ಗಾಂಧಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು. ಈ ವೇಳೆ ಮಾಜಿ ಶಾಸಕ ಡಾ. ಭಾರತಿಶಂಕರ್, ಕಾಂಗ್ರೆಸ್ ನಗರಾಧ್ಯಕ್ಷ ಆರ್ ಮೂರ್ತಿ, ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ. ವಿಜಯ್ ಕುಮಾರ್, ಮಾಜಿ ಮೇಯರ್‌ಗಳಾದ ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಮುಖಂಡರಾದ ಸುನಂದಕುಮಾರ್, ನಾಗೇಶ್, ಗಿರೀಶ್ ಉಪ್ಪಾರ್, ಶಿವರಾಂ, ಮೊಗಣ್ಣ, ನಗರ ಕಾರ್ಯದರ್ಶಿ ಎಂ.ಶಿವಣ್ಣ, ಈಶ್ವರ್ ಚಕ್ಕಡಿ, ರಾಜ್ಯ ಒಬಿಸಿ ಘಟಕದ ಕಮಲ, ಅನಂತರಾಮ್, ರವಿಕುಮಾರ್, ಒಬಿಸಿ ಘಟಕದ ಹಿರಿಯ ಉಪಾಧ್ಯಕ್ಷ ಗೋಪಾಲ್, ಮುಖಂಡರಾದ ರವಿ ಕುಂಬಾರ್, ಕೆ.ಎಸ್.ಶಿವರಾಂ, ಸತೀಶ್, ದಿನೇಶ್, ಲಕ್ಷ್ಮೀನಾರಾಯಣ್, ರಾಜೀವ್ ಉಪ್ಪಾರ್, ಮಹೇಶ್ ಮಡಿವಾಳ್, ಸೇವಾದಳದ ಮೋಹನ್ ಕುಮಾರ್, ಭಾಸ್ಕರ್ ಗೌಡ, ಮಹಿಳಾ ಮುಖಂಡರಾದ ಶಾರದಾ ಸಂಪತ್ತು, ಎಸ್ಸಿ ಘಟಕದ ರಮೇಶ್, ಗಿರೀಶ್, ನಗರ ಪಾಲಿಕೆ ಮಾಜಿ ಸದಸ್ಯ ಬಾಲರಾಜ್ ಸೇರಿದಂತೆ ಇತರರಿದ್ದರು. ಓಬಿಸಿ ಘಟಕದ ಜಿಲ್ಲಾಧ್ಯಕ್ಷ ಎನ್.ಆರ್. ನಾಗೇಶ್ ಸ್ವಾಗತಿಸಿದರೆ, ಗ್ರಾಮಾಂತರ ಅಧ್ಯಕ್ಷ ಮಾರುತಿ ನಿರೂಪಿಸಿದರು.



ಮೈಸೂರು ಜಿಲ್ಲಾ ಕಾಂಗ್ರೆಸ್‌ನ ಹಿಂದುಳಿದ ವರ್ಗಗಳ ಘಟಕದ ವತಿಯಿಂದ ಮಾಜಿ ಪ್ರಧಾನಮಂತ್ರಿ ರಾಜೀವ್ ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಜಯಂತಿ ಆಚರಿಸಲಾಯಿತು.

ರಾಜ್ಯಪಾಲರು ರಾಷ್ಟ್ರಪತಿಗಳ ಪ್ರತಿನಿಧಿಯಾಗಿ ಕೆಲಸ ಮಾಡಲಿ

ಕೇಂದ್ರದ ಪ್ರತಿನಿಧಿಯಾಗಿ ಅಲ್ಲ: ಸಿಎಂ ಸಿದ್ದರಾಮಯ್ಯ

ಬೆಂಗಳೂರು, ಆ.20– ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ರಾಷ್ಟ್ರಪತಿಗಳ ಪ್ರತಿನಿಧಿಯಂತೆ ಕಾರ್ಯ ನಿರ್ವಹಿಸಬೇಕೇ ಹೊರತು ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ವಿಷಯದಲ್ಲಿ ಕೆಲವರನ್ನು ಮಾತ್ರ ಆಯ್ಕೆ ಮಾಡಬಾರದು. ಗವರ್ನರ್ ಒಂದು ಸಾಂವಿಧಾನಿಕ ಹುದ್ದೆ ಮತ್ತು ನಾವು ಅದನ್ನು ಗೌರವಿಸುತ್ತೇವೆ. ನಾವು ಹೇಳುವುದೇನೆಂದರೆ ಅವರು ರಾಷ್ಟ್ರಪತಿಗಳ ಪ್ರತಿನಿಧಿಯಾಗಿ ಕೆಲಸ ಮಾಡಬೇಕೇ ಹೊರತು ಕೇಂದ್ರ ಸರ್ಕಾರದ ಪ್ರತಿನಿಧಿಯಾಗಿ ಅಲ್ಲ ಎಂದರು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಭ್ರಷ್ಟಾಚಾರ ತಡೆ ಕಾಯ್ದೆಯ 17ಎ ಅಡಿಯಲ್ಲಿ ಸಿದ್ದರಾಮಯ್ಯ ವಿರುದ್ಧ ತನಿಖೆ ನಡೆಸಲು ಮತ್ತು ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ, 2023 ರ ಸೆಕ್ಷನ್ 218 ರ ಅಡಿಯಲ್ಲಿ ಕಾನೂನು ಕ್ರಮ ಜರುಗಿಸಲು ಆಗಸ್ಟ್ 16 ರಂದು ರಾಜ್ಯಪಾಲರು ಅನುಮತಿ ನೀಡಿದ್ದಾರೆ. ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ 2023 ರ ನವೆಂಬರ್ 23 ರಂದು ಉಕ್ಕು ಮತ್ತು ಭಾರಿ ಕೈಗಾರಿಕೆಗಳ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಅವರನ್ನು ವಿಚಾರಣೆಗೆ ಒಳಪಡಿಸಲು ಕರ್ನಾಟಕ ಲೋಕಾಯುಕ್ತರು ರಾಜ್ಯಪಾಲರ ಅನುಮತಿ ಕೋರಿದೆ. ಆದರೆ ಇಲ್ಲಿಯವರೆಗೆ ಯಾವುದೇ ಅನುಮತಿ ನೀಡಲಾಗಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. 2007ರಲ್ಲಿ ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ ಖಾಸಗಿ ಸಂಸ್ಥೆಗೆ ಕಾನೂನು ಉಲ್ಲಂಘಿಸಿ ಗಣಿ ಗುತ್ತಿಗೆ ನೀಡಿರುವ ಆರೋಪದಡಿ ಅವರ ವಿರುದ್ಧ ಆರೋಪಪಟ್ಟಿ ಸಲ್ಲಿಸಲು ಅನುಮತಿ ನೀಡುವಂತೆ ಲೋಕಾಯುಕ್ತ ಸೋಮವಾರ ಮತ್ತೊಮ್ಮೆ ರಾಜ್ಯಪಾಲರಿಗೆ ಪ್ರಸ್ತಾವನೆ ಸಲ್ಲಿಸಿದೆ.

ಬಿಜೆಪಿಯ ಮಾಜಿ ಸಚಿವರಾದ ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ ಮತ್ತು ಜನಾರ್ದನ ರೆಡ್ಡಿ ಅವರನ್ನು ವಿಚಾರಣೆಗೆ ಒಳಪಡಿಸಲು ರಾಜ್ಯಪಾಲರು ಲೋಕಾಯುಕ್ತಕ್ಕೆ ಅನುಮತಿ ನೀಡಿಲ್ಲ ಎಂದು ಸಿದ್ದರಾಮಯ್ಯ ತಿಳಿಸಿದರು.

ಮತ್ತೊಂದೆಡೆ, ಟಿ.ಜೆ.ಅಬ್ರಹಾಂ ಅವರು ಜುಲೈ 26 ರಂದು ಬೆಳಗ್ಗೆ 11 ಗಂಟೆಗೆ ರಾಜ್ಯಪಾಲರಿಗೆ ನನ್ನ ವಿರುದ್ಧ(ಖಾಸಗಿ) ದೂರು ಸಲ್ಲಿಸಿದರು ಮತ್ತು 10 ಗಂಟೆಗಳ ನಂತರ ನನಗೆ ಶೋಕಾಸ್ ನೋಟಿಸ್ ನೀಡಲಾಗಿದೆ. ಇದು ತಾರತಮ್ಯವಲ್ಲವೇ. ಆ ಕಾರಣದಿಂದಲೇ ಪಿಕ್ ಅಂಡ್ ಸೆಲೆಕ್ಟ್ ಮಾಡಬೇಡಿ ಎಂದು ರಾಜ್ಯಪಾಲರಿಗೆ ತಿಳಿಸಲಾಗಿದೆ ಎಂದರು.

ಸಿದ್ದರಾಮಯ್ಯ ಸಿಎಂ ಸ್ಥಾನದಿಂದ ಇಳಿಸುವ ಪ್ರಶ್ನೆಯೇ ಇಲ್ಲ

ಬೆಂಗಳೂರು, ಆ.20(ಕೆಎಂಶಿ)– ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸುವ ಪ್ರಶ್ನೆಯೇ ಇಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ.



ಸತೀಶ್ ಜಾರಕಿಹೊಳಿ

ಕರ್ನಾಟಕದಲ್ಲಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಿದರೆ ತೆಲಂಗಾಣದಲ್ಲೂ ನಮ್ಮ ಪಕ್ಷ ಅಧಿಕಾರ ಕಳೆದುಕೊಳ್ಳುತ್ತದೆ. ಇದನ್ನು ಗಮನದಲ್ಲಿ ಇರಿಸಿಕೊಂಡೇ ಕಾಂಗ್ರೆಸ್ ವರಿಷ್ಠರು ಸಿದ್ದರಾಮಯ್ಯ ಬೆಂಬಲಕ್ಕೆ ನಿಂತು ಬಿಜೆಪಿಯಿಂದ ಎರಡು ಸರ್ಕಾರಗಳನ್ನು ಉಳಿಸಿಕೊಳ್ಳಲು ಗಟ್ಟಿಯಾಗಿ ನಿಂತಿದ್ದಾರೆ.

ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಮತ್ತು ಜೆಡಿಎಸ್ ಮುಡಾ ಹಗರಣ ಇಟ್ಟುಕೊಂಡು ಸಿದ್ದರಾಮಯ್ಯ ಅವರನ್ನು ಕುಗ್ಗಿಸಲು ಹೊರಟಿದ್ದಾರೆ, ಅವರನ್ನು ಕುಗ್ಗಿಸಿದರೆ ಸರ್ಕಾರವನ್ನು ಬೀಳಿಸಬಹುದೆಂಬ ಲೆಕ್ಕಾಚಾರ ಅವರದ್ದಾಗಿದೆ. ಇದೆಲ್ಲವನ್ನು ಗಮನದಲ್ಲಿಟ್ಟುಕೊಂಡಿರುವ ಪಕ್ಷದ ವರಿಷ್ಠರು ರಾಜಕೀಯವಾಗಿ ತೀರ್ಮಾನ ಕೈಗೊಂಡು ಸಿದ್ದರಾಮಯ್ಯ ಬೆನ್ನಿಗೆ ಬಲವಾಗಿ ನಿಂತಿದ್ದಾರೆ, ಆದ್ದರಿಂದ ನಾಯಕತ್ವ ಬದಲಾವಣೆ ಪ್ರಶ್ನೆಯೇ ಇಲ್ಲ. ಸಿದ್ದರಾಮಯ್ಯ ವಿರುದ್ಧ ಯಾವುದೇ ಆರೋಪ ಸಾಬೀತಾಗಿಲ್ಲ, ಬೇಕಿದ್ದರೆ ತನಿಖೆ ಆಗಲಿ, ಬಿಜೆಪಿಯ ತೆರೆಮರೆಯ ಆಟ ಕರ್ನಾಟಕದಲ್ಲಿ ನಡೆಯುವುದಿಲ್ಲ ಎಂದರು. ರಾಜ್ಯಪಾಲರು ತಮ್ಮ ಅಧಿಕಾರ ದುರುಪಯೋಗ ಮಾಡಿಕೊಂಡು ಸರ್ಕಾರವನ್ನು ಉರುಳಿಸುವ ಪ್ರಯತ್ನ ಮಾಡಿದ್ದಾರೆ, ಬಿಜೆಪಿ ಆಟದಿಂದ ನಾವು ಮತ್ತಷ್ಟು ಗಟ್ಟಿಯಾಗಿ, ಒಂದಾಗಿ ಸಿದ್ದರಾಮಯ್ಯ ಬೆಂಬಲಕ್ಕೆ ನಿಂತಿದ್ದೇವೆ ಎಂದರು.

ಮಂಗಳೂರು–ಬೆಂಗಳೂರು ರೈಲು ಸಂಚಾರ ಪುನರಾರಂಭ



ಮಂಗಳೂರು: ಸಕಲೇಶಪುರ–ಬಾಳ್ಳುಪೇಟೆ ನಡುವಿನ ಮಂಗಳೂರು–ಬೆಂಗಳೂರು ರೈಲು ಹಳಿ ಮೇಲೆ ಗುಡ್ಡ ಕುಸಿತದಿಂದ ಬಿದ್ದಿದ್ದ ಮಣ್ಣು ತೆರವು ಕಾರ್ಯಾಚರಣೆ ಸಂಪೂರ್ಣಗೊಂಡಿದ್ದು, ಇದರ ಬೆನ್ನಲ್ಲೇ ರೈಲು ಸಂಚಾರ ಮತ್ತೆ ಆರಂಭಗೊಂಡಿದೆ. ರೈಲು ಮಾರ್ಗಕ್ಕೆ ಬಿದ್ದಿದ್ದ ಮಣ್ಣನ್ನು ತೆರವು ಮಾಡುವ ಕಾರ್ಯವು ಸೋಮವಾರ ಸಂಜೆಗೆ ಪೂರ್ಣಗೊಂಡಿದೆ. ರೈಲು ಮಾರ್ಗವನ್ನು ರೈಲುಗಳ ಸಂಚಾರಕ್ಕೆ ಮುಕ್ತವಾಗುವಂತೆ ಮತ್ತೆ ಮರು ಹೊಂದಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇಂದು (ಆಗಸ್ಟ್ 20) ಸಂಚರಿಸಬೇಕಿದ್ದ 07378 ಮಂಗಳೂರು ಸೆಂಟ್ರಲ್–ವಿಜಯಪುರ ಎಕ್ಸ್ ಪ್ರೆಸ್ ರೈಲು ಮಾತ್ರ ರದ್ದಾಗಿದ್ದು, ಉಳಿದ ಎಲ್ಲಾ ರೈಲುಗಲು ನಿಗದಿತ ದಿನಾಂಕ ಹಾಗೂ ಸಮಯದ ಪ್ರಕಾರ ಸಂಚರಿಸಲಿದೆ. ಮಣ್ಣು ಕುಸಿತಗೊಂಡ ಸ್ಥಳದಲ್ಲಿ ರೈಲು ಸಂಚಾರದ ವೇಗಕ್ಕೆ ಮಿತಿ ಹೇರಲಾಗಿದೆ. ಮೇಲ್ಭಾಗದಿಂದಲೇ ಮಣ್ಣನ್ನು ತೆರವು ಗೊಳಿಸುವ ಮೂಲಕ ಸಂಚಾರಕ್ಕೆ ಮಾರ್ಗವನ್ನು ಮುಕ್ತಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ವಾರದ ಹಿಂದೆ ಗುಡ್ಡ ಕುಸಿದಿದ್ದ ಜಾಗದಲ್ಲಿ ಶುಕ್ರವಾರ ಮತ್ತೆ ಮಣ್ಣು ಕುಸಿದಿತ್ತು. ಇದೇ ಕಾರಣಕ್ಕೆ ರೈಲು ಸಂಚಾರವನ್ನು ಮತ್ತೊಮ್ಮೆ ಸ್ಥಗಿತಗೊಳಿಸಲಾಗಿತ್ತು. ಮೂರು ದಿನಗಳಿಂದ ಮಣ್ಣು ತೆರವು ಕಾರ್ಯ ನಡೆಸಲಾಗಿತ್ತು. ಇದೀಗ ಮರಳಿ ರೈಲು ಸೇವೆಗಳು ಪ್ರಾರಂಭವಾಗಿದೆ.

ರಾಜ್ಯಪಾಲರ ಅವಹೇಳನ; ಕಾಂಗ್ರೆಸ್ ನಾಯಕರ ವಿರುದ್ಧ ಜಾತಿ ನಿಂದನೆ ಪ್ರಕರಣ ದಾಖಲಿಸಲು ಡಿಜಿಪಿಗೆ ಬಿಜೆಪಿ ಮನವಿ

ಬೆಂಗಳೂರು, ಆ.20(ಕೆಎಂಶಿ)– ಪರಿಶಿಷ್ಟ ಜಾತಿಗೆ ಸೇರಿದ ಕರ್ನಾಟಕದ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಬಗ್ಗೆ ಸಾರ್ವಜನಿಕವಾಗಿ ಅವಹೇಳನಕಾರಿ ಮಾತುಗಳನ್ನು ಆಡುತ್ತಿರುವ ಕಾಂಗ್ರೆಸ್ ನಾಯಕರ ವಿರುದ್ಧ ಜಾತಿ ನಿಂದನೆ ಪ್ರಕರಣ ದಾಖಲಿಸುವಂತೆ ಪೋಲಿಸ್ ಮಹಾನಿರ್ದೇಶಕರಿಗೆ ರಾಜ್ಯ ಬಿಜೆಪಿ ಇಂದಿಲ್ಲಿ ಒತ್ತಾಯಿಸಿದೆ.

ಮಾಜಿ ಉಪಮುಖ್ಯಮಂತ್ರಿ, ಸಂಸದ ಗೋವಿಂದ ಕಾರಜೋಳ್, ವಿಧಾನಪರಿಷತ್‌ನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಹಾಲಿ ಶಾಸಕರು, ಮಾಜಿ ಸಚಿವರುಗಳ ನಿಯೋಗ ಪೊಲೀಸ್ ಮಹಾನಿರ್ದೇಶಕರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ.

ಕಾಂಗ್ರೆಸ್ ನಾಯಕರು ರಾಜ್ಯಪಾಲರ ಕುರಿತು ನೀಡುತ್ತಿರುವ ಹೇಳಿಕೆಗಳು ಸಂವಿಧಾನಕ್ಕೆ ಮತ್ತು ಪರಿಶಿಷ್ಟ ಜನಾಂಗಕ್ಕೆ ಮಾಡಿದ ಅವಮಾನ, ಅಲ್ಲದೆ, ಈ ರೀತಿಯ ಹೇಳಿಕೆಗಳು ಅತ್ಯಂತ ಸೂಕ್ಷ್ಮವಾಗಿದ್ದು ಸಮಾಜವನ್ನು ಪ್ರಚೋದಿಸುವುದಾಗಿವೆ. ಸಂವಿಧಾನದ ಗದ್ದುಗೆಯಲ್ಲಿ ಕುಳಿತಿರುವ ವ್ಯಕ್ತಿಯ ವಿರುದ್ಧ ಇಂತಹ ಹೇಳಿಕೆಗಳನ್ನು ನೀಡಿರುವ ಸಚಿವರಾದ ಜಮೀರ್ ಅಹಮದ್ ಖಾನ್, ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್, ಶಾಸಕರಾದ ನಂಜೇಗೌಡ, ಐವಾನ್ ಡಿಸೋಜ ಹಾಗೂ ಇನ್ನೂ ಅನೇಕ ನಾಯಕರ ವಿರುದ್ಧ ಜಾತಿ ನಿಂದನೆ ಹಾಗೂ ಗೂಂಡಾ ಕಾಯಿದೆಯಡಿ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಿ ಎಂದಿದ್ದಾರೆ. ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾರಜೋಳ್, ಮುಖ್ಯಮಂತ್ರಿ ಸಿದ್ದರಾಮಯ್ಯ ತನಿಖೆ ಎದುರಿಸಿ ಆರೋಪಮುಕ್ತರಾಗಿ ಹೊರಬರಬೇಕು, ಅದನ್ನು ಬಿಟ್ಟು ರಾಜ್ಯಪಾಲರ ವಿರುದ್ಧ ವಾಗ್ದಾಳಿ ಮಾಡುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಮೇಲೆ ಆರೋಪ ಬಂದಾಗ ಅವರನ್ನು ಅಪರಾಧಿ ಎನ್ನುವುದಿಲ್ಲ, ನಿರಪರಾಧಿ ಎಂದು ಸಾಬೀತುಪಡಿಸುವ ಜವಾಬ್ದಾರಿ ಸಿದ್ದರಾಮಯ್ಯ ಮೇಲಿದೆ, ಅದಕ್ಕಾಗಿ ಅವರು ರಾಜೀನಾಮೆ ಕೊಟ್ಟು ನಿಷ್ಪಕ್ಷಪಾತ ತನಿಖೆಗೆ ಅವಕಾಶ ಮಾಡಿಕೊಡಬೇಕು.

ಅದನ್ನು ಬಿಟ್ಟು ಸಂವಿಧಾನಿಕ ಹುದ್ದೆಯಲ್ಲಿರುವ, ರಾಷ್ಟ್ರಪತಿಗಳ ಪ್ರತಿನಿಧಿ ಎನಿಸಿದ ರಾಜ್ಯಪಾಲರನ್ನು ಅವಮಾನಿಸಿದ್ದಾರೆ, ಕಾಂಗ್ರೆಸ್ ಪಕ್ಷಕ್ಕೆ ಸಂಸ್ಕೃತಿ ಎಂಬುದು ಇದೆಯೇ ಎಂದರು. ಸಾಮಾಜಿಕ ನ್ಯಾಯದ ಗಂಧವೇ ತಿಳಿಯದವರು ಕಾಂಗ್ರೆಸ್ಸಿಗರು, ಚಪ್ಪಲಿಯಿಂದ ರಾಜ್ಯಪಾಲರ ಫೋಟೊಗೆ ಹೊಡೆದುದಲ್ಲದೆ ಅವರ ಭಾವಚಿತ್ರ ಸುಟ್ಟಿದ್ದೀರಿ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಅಂಬೇಡ್ಕರ್‌ಗೆ ಅವಮಾನ ಮಾಡಿದವರು: ದಲಿತ ವ್ಯಕ್ತಿ ರಾಜ್ಯಪಾಲರ ಹುದ್ದೆಯಲ್ಲಿ ಇರುವುದು ನಿಮ್ಮ ಗಮನದಲ್ಲಿಲ್ಲವೇ ಡಾ.ಅಂಬೇಡ್ಕರ್ ಅವರಿಗೆ ಅವಮಾನ ಮಾಡಿದ ಕಾಂಗ್ರೆಸ್ಸಿಗರಿಗೆ ಸಂಸ್ಕೃತಿ ಇರಲು ಸಾಧ್ಯವೇ ಎಂದರು.

ರಾಮಕೃಷ್ಣ ಹೆಗಡೆ ಅವರ ಮೇಲೆ ಟೆಲಿಫೋನ್ ಕದ್ದಾಲಿಕೆ ಆರೋಪ ಬಂದಾಗ ರಾಜೀನಾಮೆ ಕೊಟ್ಟಿದ್ದರು, ಕಾಂಗ್ರೆಸ್ಸಿನವರೇ ಆದ ಲಾಲ್ ಬಹದ್ದೂರ್ ಶಾಸ್ತ್ರಿ ಅವರು ರೈಲ್ವೆ ಸಚಿವರಾಗಿದ್ದಾಗ ರೈಲು ಅವಘಡ ನಡೆದಿದ್ದು, ನಿಷ್ಪಕ್ಷಪಾತ ತನಿಖೆಗಾಗಿ ರಾಜೀನಾಮೆ ನೀಡಿದ್ದರು.

ಶಾಸಕ ಐವಾನ್ ಡಿಸೋಜ ಅವರು ಬಾಂಗ್ಲಾದ ಪರಿಸ್ಥಿತಿ ಕರ್ನಾಟಕದಲ್ಲೂ ಬರಲಿದೆ, ರಾಜಭವನಕ್ಕೆ ನುಗ್ಗಿ ತೊಂದರೆ ಮಾಡುತ್ತೇವೆ ಎಂದಿದ್ದಾರೆ, ಇದರಿಂದ ಅವರಿಗೆ ಪಾಕ್ ಉಗ್ರರ ನಂಟಿದೆಯೇ ಎಂಬ ಸಂಶಯ ನನಗೆ ಬರುತ್ತಿದೆ.

ಐವಾನ್ ಡಿಸೋಜ ವಿರುದ್ಧ ಕೂಡಲೇ ಕಾನೂನು ಕ್ರಮ ಕೈಗೊಂಡು ದೇಶದ್ರೋಹಿ ಎಂಬ ಹಣೆಪಟ್ಟಿ ಕಟ್ಟಬೇಕು, ಎಂಎಲ್‌ಸಿ ಸ್ಥಾನದಿಂದ ವಜಾ ಮಾಡಬೇಕು ಎಂದು ಗೋವಿಂದ ಕಾರಜೋಳ ಒತ್ತಾಯಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ 2 ಪ್ರಮುಖ ಹಗರಣಗಳಲ್ಲಿ ಸಿಲುಕಿದ್ದಾರೆ, ಮುಡಾದಲ್ಲಿ ಅನಧಿಕೃತ, ಕಾನೂನು ಬಾಹಿರವಾಗಿ ಅವರ ಪತ್ನಿ ಹೆಸರಿನಲ್ಲಿ 14 ನಿವೇಶನಗಳನ್ನು ಪಡೆದಿರುವುದು, ರಾಜ್ಯದ ಪರಿಶಿಷ್ಟ ಜಾತಿ, ಜನಾಂಗಗಳಿಗೆ ಸೇರಿದ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಹಗಲು ದರೋಡೆಯಲ್ಲಿ ಸಿಕ್ಕಿ ಹಾಕಿಕೊಂಡಿದ್ದಾರೆ ಎಂದರು.

ಮುಡಾ ಹಗರಣದಲ್ಲಿ ಆರ್‌ಟಿಐ ಕಾರ್ಯಕರ್ತ ಅಬ್ರಹಾಂ, ಹಗರಣಗಳ ಲೂಟಿಯ ವಿವರ ಪಡೆದು ಕೇಸು ದಾಖಲಿಸಿದ್ದಾರೆ, ಯುಪಿಎ ಆಡಳಿತದಲ್ಲಿ ಮಾಹಿತಿ ಹಕ್ಕು ಕಾಯ್ದೆ ಜಾರಿಗೊಳಿಸಿದ್ದಾಗಿ ಕಾಂಗ್ರೆಸ್‌ನವರು ಡಂಗೂರ ಸಾರುತ್ತ ಓಡಾಡಿದರು. ಈಗ ಅವರೇ ತಂದ ಕಾಯ್ದೆಯನ್ನು ಅವರೇ ಗೌರವಿಸುತ್ತಿಲ್ಲ ಎಂದು ಆಕ್ಷೇಪಿಸಿದರು.

ನಕ್ಕರೆ ಅದೇ ಸ್ವರ್ಗ

ಹೊಸದಾಗಿ ಮದುವೆ ಆದ ಅಳಿಯನೊಬ್ಬ ತನ್ನ ಮಾವನ ಊರಿಗೆ ಮೊದಲನೇ ಸಲ ಹೋದ... ಅಲ್ಲಿ ಸೋಮಾರಿ ಕಟ್ಟೆ ಮೇಲೆ ಕುಳಿತಿದ್ದ ಕೆಲವು ಯುವಕರನ್ನು ಮಾತಾಡಿಸಿದ.

ಅಳಿಯ : ಈ ಊರಲ್ಲಿ ಎಂಟರ್‌ಟೈನ್‌ಮೆಂಟ್ ಅಂತ ಏನು ಇಲ್ವಾ?

ಒಬ್ಬ : ಒಂದು ಇತ್ತು ಅದನ್ನೂ ನೀವು ಕರ್ಕೊಂಡು ಹೋಗ್ಬಿಟ್ರಿ!!

ಮೈಸೂರು ಮಿತ್ರ

ಬುಧವಾರ, 21 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಮನೆ ನಿಂತಿರುವುದು ಮಡದಿಯಿಂದ,
ಅದು ಬಿದ್ದರೆ ಗಂಡನ ತಲೆಯ ಮೇಲೆ – ಬೀಚೀ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮಕ್ಕಳ ಬಾಯಿಗೆ ಹಣ್ಣು ಕೊಟ್ಟು ಮಣ್ಣು ಬಿಡಿಸು.

ನಿಮ್ಮ ಪತ್ರಗಳು

■ ವೀಣೆ ಶಾಮಣ್ಣ ರಸ್ತೆಯ ಅವ್ಯವಸ್ಥೆ

ಮಾನ್ಯರೆ,



ಮೈಸೂರಿನ ಅಗ್ರಹಾರದ ಚಾವಡಿ ರಸ್ತೆಯ ಹಿಂಭಾಗವಿರುವ ವೀಣೆಶಾಮಣ್ಣ ರಸ್ತೆಯ ಪಶ್ಚಿಮಕ್ಕೆ ನ್ಯೂ ಸಯ್ಯಾಜಿರಾವ್ ರಸ್ತೆ ಹಾಗೂ ಪೂರ್ವಕ್ಕೆ ರಾಮಾನುಜ ರಸ್ತೆ ಇದ್ದು, ಈ ರಸ್ತೆ 'ವೀಣೆ' ಎಂಬ ಹೆಸರಿಗೆ ತಕ್ಕಂತೆ ಪಶ್ಚಿಮಕ್ಕೆ ಅಗಲವಾಗಿದ್ದು, ಪೂರ್ವಕ್ಕೆ ಕಿರಿದಾಗಿದೆ. ಇಲ್ಲಿ ವಾಹನಗಳು ಇಕ್ಕಟ್ಟಿನಲ್ಲಿ ಸಾಗಬೇಕಾಗಿದೆ. ಅಲ್ಲದೆ ಹಲವು ಬಾರಿ ಚಾವಡಿ ರಸ್ತೆಯಲ್ಲಿ ಕಾಮಗಾರಿ ನಿಮಿತ್ತ ರಸ್ತೆ ಬಂದ್ ಮಾಡಿದರೆ, ಅಥವಾ ಪೊಲೀಸರು ಚಾವಡಿ ರಸ್ತೆಯಲ್ಲಿ ವಾಹನ ತಪಾಸಣೆ ಮಾಡುತ್ತಿದ್ದರೆ ಆಟೋ, ದ್ವಿಚಕ್ರ ವಾಹನ ಹಾಗೂ ಕಾರುಗಳು ಈ ರಸ್ತೆಯಲ್ಲೇ ಸಾಗುವುದರಿಂದ ಟ್ರಾಫಿಕ್ ಜಾಮ್ ಆಗುತ್ತದೆ.

ಎರಡನೆಯದಾಗಿ ಈ ಓಣಿಯಂತಹ ರಸ್ತೆಗೆ ಟಾರ್ ಹಾಕುವುದು ತ್ರಾಸ ಎಂಬ ಕಾರಣದಿಂದಲೋ ಏನೋ ಕೆಲ ವರ್ಷಗಳ ಹಿಂದೆ ಇಂಟರ್ ಲಾಕ್ ಟೈಲ್ಸ್‌ಗಳನ್ನು ಹಾಕಲಾಗಿದೆ. ಆದರೆ ರಸ್ತೆ ಚಿಕ್ಕದು ಎಂಬ ಕಾರಣದಿಂದಲೋ ಅಥವಾ ಮನೆಗಳವರು ಒತ್ತುವರಿ ಮಾಡಿಕೊಂಡಿರುವ ಕಾರಣದಿಂದ ಈ ರಸ್ತೆಯಲ್ಲಿ ಮಳೆ ನೀರು ಹರಿದು ಹೋಗಲು ಮೋರಿಯನ್ನೇ ನಿರ್ಮಾಣ ಮಾಡಿಲ್ಲ! ಇದರಿಂದಾಗಿ ಒಂದು ಸಣ್ಣ ಮಳೆ ಬಂದರೂ ರಸ್ತೆಯಲ್ಲಿ ನೀರು ಹರಿದು, ಅಲ್ಲಲ್ಲಿ ಕೆರೆಯಂತೆ ನಿಂತುಕೊಳ್ಳುತ್ತದೆ. ಇಂಟರ್‌ಲಾಕ್ ಟೈಲ್ಸ್‌ಗಳು ಕುಸಿದು ಸಣ್ಣ ಸಣ್ಣ ಹಳ್ಳಗಳಾಗಿದ್ದು ನೀರು ನಿಂತುಕೊಳ್ಳುತ್ತದೆ. ಇದರಿಂದಾಗಿ ಪಾದಚಾರಿಗಳು ಕುಂಟೆ ಬಿಲ್ಲೆ ಆಡುವಂತೆ ಮನೆಯಿಂದ ಮನೆಗೆ ನೆಗೆಯುತ್ತ ರಸ್ತೆಯಲ್ಲಿ ನಡೆಯಬೇಕಾಗುತ್ತದೆ! ಮೂರನೆಯದಾಗಿ ಭಾರಿ ಮಳೆಯಾದರೆ ಅಗ್ರಹಾರದ ಮಾಧವರಾವ್ ವೃತ್ತ, ವಾಣಿ ವಿಲಾಸ ರಸ್ತೆ, ಜಟಕಾ ಸ್ಟ್ಯಾಂಡ್‌ಗಳ ಕಡೆಯ ರಸ್ತೆಯ ಎಲ್ಲಾ ನೀರೂ ಹರಿದು ಹೋಗಲು ಈ ರಸ್ತೆ ರಾಜ ಕಾಲುವೆಯಂತಾಗಿದೆ. ಅಲ್ಲದೆ ಜೋರು ಮಳೆಯಾದರೆ ಇಲ್ಲಿನ ಒಳಚರಂಡಿಗೆ ರಸ್ತೆ ನೀರು ತುಂಬಿಕೊಂಡು ಡ್ರೈನೇಜ್ ಮುಚ್ಚಳ ತೆರೆದುಕೊಂಡು, ನಿಜವಾದ ರಾಜ ಕಾಲುವೆಯಾಗಿ ಈ ವೀಣೆ ಶಾಮಣ್ಣ ರಸ್ತೆ ಮಾರ್ಪಾಡಾಗುತ್ತದೆ. ಇದೇ ವೇಳೆ ಒಳಚರಂಡಿ ತುಂಬಿ ಈ ರಸ್ತೆಯ ಮ್ಯಾನ್‌ಹೋಲ್ ಮುಚ್ಚಳ ತೆರೆದುಕೊಂಡು ಈಗ ನಿಜವಾದ ರಾಜ ಕಾಲುವೆಯಾಗಿ ಮಾರ್ಪಾಡಾಗುತ್ತದೆ.

ನಾಲ್ಕನೆಯದಾಗಿ, ಡ್ರೈನೇಜ್ ಪೈಪ್ ಚಿಕ್ಕದಿರುವ ಕಾರಣದಿಂದಲೊ ಏನೊ ಈ ರಸ್ತೆಯ ಮನೆಗಳಲ್ಲಿ ಡ್ರೈನೇಜ್ ಬ್ಲಾಕ್ ಆಗುವುದು ಸಾಮಾನ್ಯ ಎನ್ನುವಂತಾಗಿದೆ.

ಈ ಸಮಸ್ಯೆಗಳು ಇಲ್ಲಿ ಆಗಾಗ್ಗೆ ಕಾಡುವುದು ಸಾಮಾನ್ಯವಾಗಿದೆ. ಆದ್ದರಿಂದ ಇಲ್ಲಿನ ನಿವಾಸಿಗಳು ಕೂಡ ಇದಕ್ಕೆ ಒಗ್ಗಿ ಹೋಗಿದ್ದಾರೆ. ಯಾರಿಗೂ ಹೇಳಿ ಪ್ರಯೋಜನ ಇಲ್ಲಾ ಎನ್ನುವುದು ಇಂತಹ ಮೌನಕ್ಕೆ ಕಾರಣವಾಗಿರಬಹುದು. 'ಅಗ್ರಹಾರ' ಎನ್ನುವ ಹೆಸರು ಯು.ಆರ್. ಅನಂತಮೂರ್ತಿಯವರ ಜನಪ್ರಿಯ 'ಸಂಸ್ಕಾರ' ಕೃತಿಯಲ್ಲೂ ಕಂಡು ಬರುತ್ತದೆ!

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಕಾಂಗ್ರೆಸ್ ಪಕ್ಷದ ದ್ವಂದ್ವ ನೀತಿ ಸರಿಯಲ್ಲ

ಮಾನ್ಯರೆ,

ಮುಡಾ ನಿವೇಶನ ಅಕ್ರಮ ಪ್ರಕರಣ ಸಂಬಂಧ ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮದ ವಿರುದ್ಧ ಪ್ರತಿಭಟನೆಗಳು ನಡೆಯುತ್ತಿದ್ದು, ಇದು ಕಾಂಗ್ರೆಸ್ ಪಕ್ಷಕ್ಕೆ ಶೋಭೆ ತರುವ ವಿಚಾರವಲ್ಲ. ರಾಜ್ಯಪಾಲರು ಕೇವಲ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆಯೇ ವಿನಹ ರಾಜ್ಯ ಸರ್ಕಾರವನ್ನು ವಜಾ ಮಾಡಿಲ್ಲ. ಕೇವಲ ಕಾನೂನಿನ ಚೌಕಟ್ಟಿನಡಿ ತಮ್ಮ ಕರ್ತವ್ಯ ನಿರ್ವಹಿಸಿದ್ದಾರೆಯೇ ವಿನಹ ದುರುದ್ದೇಶಪೂರಿತ ಎಂಬುದೆಲ್ಲ ಕೇವಲ ಕಾಲ್ಪನಿಕ.

ಸಂವಿಧಾನದ ಬಗ್ಗೆ ಅಪಾರ ಕಾಳಜಿ ಗೌರವ ವ್ಯಕ್ತಪಡಿಸುವ ಕಾಂಗ್ರೆಸ್ ಪಕ್ಷ ಸಾಂವಿಧಾನಿಕ ಹುದ್ದೆಯ ಮುಖ್ಯಸ್ಥರಾಗಿರುವ ರಾಜ್ಯಪಾಲರ ವಿರುದ್ಧ ಪ್ರತಿಭಟನೆಗೆ ಕರೆ ಕೊಡುವುದು ಉತ್ತಮ ಬೆಳವಣಿಗೆ ಅಂತೂ ಅಲ್ಲ. ರಾಜ್ಯಪಾಲರ ಕ್ರಮದ ವಿರುದ್ಧ ಈಗಾಗಲೇ ಕಾನೂನು ಪ್ರಕ್ರಿಯೆಗಳು ನಡೆಯುತ್ತಿದ್ದು ನ್ಯಾಯಾಲಯದ ಮೂಲಕವೇ ಇದನ್ನು ಬಗೆಹರಿಸಿಕೊಳ್ಳಲು ಹಲವಾರು ಮಾರ್ಗಗಳಿವೆ. ಹೀಗಿದ್ದೂ ಹಾದಿ –ಬೀದಿಯಲ್ಲಿ ರಾಜ್ಯಪಾಲರ ಪ್ರತಿಕೃತಿ ದಹಿಸುವುದು, ಭಾವಚಿತ್ರ ಸುಡುವುದರಿಂದ ಯಾವ ಪ್ರಯೋಜನವು ಆಗದು.

ಹದಿಮೂರು ವರ್ಷಗಳ ಹಿಂದೆ ಅಂದಿನ ಮುಖ್ಯಮಂತ್ರಿ ಯಡಿಯೂರಪ್ಪನವರ ವಿರುದ್ಧ ಆಗಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಅವರು ಇದೇ ಪ್ರಕ್ರಿಯೆಯನ್ನು ಕೈಗೊಂಡಾಗ ವಿಪಕ್ಷದಲ್ಲಿದ್ದ ಕಾಂಗ್ರೆಸ್ ಈ ನಿರ್ಧಾರವನ್ನು ಸ್ವಾಗತಿಸುವ ಮೂಲಕ ರಾಜ್ಯಪಾಲರ ಕ್ರಮವನ್ನು ಸಮರ್ಥಿಸಿಕೊಂಡಿದ್ದನ್ನು ಇಲ್ಲಿ ಉಲ್ಲೇಖಿಸಬಹುದು. ಆದರೆ ಈಗಿನ ಕ್ರಮವನ್ನು ವಿರೋಧಿಸುವ ಮೂಲಕ ದ್ವಂದ್ವ ನೀತಿ ಅನುಸರಿಸುತ್ತಿರುವುದು ಎಷ್ಟು ಸಮಂಜಸ?.


– ಹೆಚ್.ಆರ್.ಪ್ರಸಾದ್, ವಿವೇಕಾನಂದ ನಗರ, ಮೈಸೂರು.

■ ಶೋಷಿತರ ದನಿಯಾಗಿದ್ದ ಪ್ರೊ.ಮಹೇಶ್ಚಂದ್ರ ಗುರು

ಮಾನ್ಯರೆ,

ಪ್ರಗತಿಪರ ಚಿಂತಕರು, ಶೋಷಿತರು ಮತ್ತು ದಲಿತರ ದನಿಯಾಗಿದ್ದ ಮೈಸೂರು ವಿವಿಯಲ್ಲಿ ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗದ ಮುಖ್ಯಸ್ಥರಾಗಿದ್ದ ವಿಶ್ರಾಂತ ಪ್ರಾಧ್ಯಾಪಕ ಮಹೇಶ್ ಚಂದ್ರ ಗುರು ಅವರ ನಿಧನ ಹಿಂದುಳಿದ ವರ್ಗಗಳಿಗೆ ಅಪಾರ ನಷ್ಟವಾಗಿದೆ. ಅವರ ಸಾವು ದಲಿತ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ. ಯಾವುದೇ ವರ್ಗಕ್ಕೆ ಅನ್ಯಾಯವಾದಾಗ ಯಾರ ಮುಲಾಜಿಗೂ ಒಳಗಾಗದೆ ಧೈರ್ಯವಾಗಿ ದಿಟ್ಟತನದಿಂದ ಖಂಡಿಸುವ ನೇರನುಡಿಯವರಾಗಿದ್ದರು. ಪ್ರೊ. ಕೆ.ಎಸ್.ಭಗವಾನ್ ಮತ್ತು ಮಹೇಶ್ ಚಂದ್ರ ಗುರು ಜೋಡೆತ್ತಿನಂತೆ ಅನ್ಯಾಯ, ಅಸಮಾನತೆ, ಮೌಢ್ಯಗಳನ್ನು ಖಂಡಿಸುತ್ತ ನೈತಿಕ ಮೌಲ್ಯಗಳನ್ನು ಎತ್ತಿ ಹಿಡಿಯುವ ಕೆಲಸ ಮಾಡುತ್ತಿದ್ದರು. ಪ್ರತಿಕೋದ್ಯಮ ವಿಭಾಗದಲ್ಲಿ ನೂರಾರು ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿ ಜೀವನಕ್ಕೆ ದಾರಿ ತೋರಿಸಿಕೊಟ್ಟವರು. ಸದಾ ಬುದ್ಧ, ಬಸವ, ಅಂಬೇಡ್ಕರ್, ಚಿಂತನೆಗಳೊಂದಿಗೆ ನೂರಾರು ಕಾರ್ಯಕ್ರಮದಲ್ಲಿ ಶೋಷಿತರ ಜಾಗೃತಗೊಳಿಸುವ ಕೆಲಸ ಮಾಡುತ್ತಿದ್ದರು. ಇವರ ಹರಿತವಾದ ಮಾತುಗಳಿಂದ ಹಲವಾರು ಬಾರಿ ಜೈಲಿಗೆ ಹೋಗಿ ಕೇಸುಗಳನ್ನು ಹಾಕಿಸಿಕೊಂಡರು. ಯಾರಿಗೂ ಹೆದರದೆ ದಲಿತ ಸಂಸ್ಕೃತಿಯ ಮೇಲೆ ಅಪಾರ ಪ್ರೀತಿಯನ್ನು ಹೊಂದಿದ ಮಹೇಶ್ ಚಂದ್ರ ಗುರು ಇವರ ಜೀವಿತಾವಧಿ ಸ್ಮರಣೀಯ. ಇವರ ಆತ್ಮಕ್ಕೆ ಧಮ್ಮ ಶಾಂತಿ ದೊರೆಯಲಿ ಎಂದು ಪ್ರಾರ್ಥಿಸೋಣ.

– ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ.



ಕೆಬಿಜಿಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...

ಸದ್ಯ, ಬೀಸೋ ದೊಣ್ಣೆಯಿಂದ ಪಾರಾದ ಸಿದ್ದರಾಮಯ್ಯ

ಮುಡಾ ಅವ್ಯವಹಾರಗಳ ಬಗ್ಗೆ ಮಾಜಿ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗಡೆ ಅವರಿಂದ ತನಿಖೆ ನಡೆಯಲಿ



ಸಿದ್ದರಾಮಯ್ಯ
ಮುಖ್ಯಮಂತ್ರಿ



ಕರ್ನಾಟಕ
ಹೈಕೋರ್ಟ್



ಎನ್.ಸಂತೋಷ್ ಹೆಗಡೆ
ಮಾಜಿ ಲೋಕಾಯುಕ್ತ



ಡಿ.ಬಿ.ನಟೇಶ್
ಮುಡಾ ಮಾಜಿ ಆಯುಕ್ತ



ಜಿ.ಟಿ. ದಿನೇಶ್‌ಕುಮಾರ್
ಮುಡಾ ಮಾಜಿ ಆಯುಕ್ತ

ಮುಡಾ ನಿವೇಶನ ಹಂಚಿಕೆ ಹಗರಣದ ವಿಚಾರಣೆಯನ್ನು ನಿನ್ನೆ ರಾಜ್ಯ ಹೈಕೋರ್ಟ್ ಈ ತಿಂಗಳ 29ಕ್ಕೆ ಮುಂದೂಡಿದೆ. ಇದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸದ್ಯದ ಸುವಾರ್ತೆ. ಇದನ್ನು ಗಾದೆ ಮಾತಿನಂತೆ ಹೀಗೂ ಹೇಳಬಹುದು; 'ಬೀಸೋ ದೊಣ್ಣೆ ತಪ್ಪಿಸಿಕೊಂಡರೆ ಸಾವಿರ ವರ್ಷ ಆಯಸ್ಸು'.

ಆದರೆ ಇಲ್ಲಿ ಪರಿಸ್ಥಿತಿ ಹಾಗಿಲ್ಲ. ಈಗ ಅವರಿಗೆ ದೊರೆತಿರುವುದು ಒಂದು ತಾತ್ಕಾಲಿಕ ಉಪಶಮನವಷ್ಟೆ. ಇನ್ನೊಂದು ರೀತಿಯಲ್ಲಿ ಕಾಯ್ದಿಟ್ಟ ಸಮಯ (waiting period). ಸಿದ್ದರಾಮಯ್ಯನವರ ರಾಜಕೀಯ ಭವಿಷ್ಯ ಈ ಪ್ರಕರಣದ ವಿಚಾರಣೆಯ ತೀರ್ಪಿನ ಮೇಲೆ ನಿಂತಿದೆ. ಆದುದರಿಂದ ಬಹಿರಂಗವಾಗಿ ಏನೇ ಧೈರ್ಯ ಮತ್ತು ಆತ್ಮವಿಶ್ವಾಸವನ್ನು ಪ್ರದರ್ಶಿಸಿದರೂ, ಅಂತರಂಗದಲ್ಲಿ ತಳಮಳ, ತಲ್ಲಣ ಇದ್ದೇ ಇರುತ್ತದೆ.

ಆದುದರಿಂದಲೇ ಅವರು ತಮ್ಮ ಪರ ವಾದಿಸಲು ರಾಷ್ಟ್ರದ ಹೆಸರಾಂತ, ಸುಪ್ರೀಂಕೋರ್ಟ್‌ನ ಹಿರಿಯ ವಕೀಲರಾದ **ಅಭಿಷೇಕ್ ಮನು ಸಿಂಘ್ವಿ** ಹಾಗೂ **ಕಪಿಲ್ ಸಿಬಲ್** ಅವರನ್ನು ಕರೆಸಿಕೊಂಡಿರುವುದು. ಕರ್ನಾಟಕದ ಘಟಾನುಘಟಿ ಹಿರಿಯ ವಕೀಲರು ಬಹುಶಃ ಈ ಗುರುತರ ಜವಾಬ್ದಾರಿಯನ್ನು ಅಷ್ಟರಮಟ್ಟಿಗೆ ನಿರ್ವಹಿಸಲಾರರು ಎಂದು ಅವರಿಗೇ ಅನ್ನಿಸಿರಲೂ ಬಹುದು ಇಲ್ಲ ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಿರಬಹುದು.

ಅಂದ ಹಾಗೆ ಈ ಕಾರಣಕ್ಕಾಗಿಯೇ ಇರಬೇಕು ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯ ಪರ ಭಾರತದ ಹೆಸರಾಂತ ಕಾನೂನು ತಜ್ಞ, **ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ** ವಾದಕ್ಕಿಳಿದಿದ್ದಾರೆ. ಒಂದು ರೀತಿಯಲ್ಲಿ ಇದು ಕುರುಕ್ಷೇತ್ರ ಯುದ್ಧದ ಹಾಗೆ ಕಾನೂನು ಸಮರದ ತೀವ್ರತೆಯನ್ನು ಪಡೆದುಕೊಂಡಿದೆ.

ಹೇಳಿ–ಕೇಳಿ ಮುಖ್ಯಮಂತ್ರಿ ಸಿದ್ದರಾಮಯ್ಯನವರೇನು ಸಾಧಾರಣ ರಾಜಕಾರಣಿಯೇ? ರಾಜಕೀಯಕ್ಕೆ ಕಾಲಿಟ್ಟು, ನಾಲ್ಕು ದಶಕಗಳಿಂದಲೂ ಅವರು ಅಧಿಕಾರವನ್ನು ಅನುಭವಿಸಿಕೊಂಡು ಬಂದವರು. ಸುದೀರ್ಘ ರಾಜಕೀಯ ಪಯಣದಲ್ಲಿ ಅನಿವಾರ್ಯ ಏಳು–ಬೀಳು, ಸೆಣಸಾಟಗಳು ಅವರಲ್ಲಿ ಅತೀವ ಆತ್ಮವಿಶ್ವಾಸವನ್ನು ತುಂಬಿದೆ. ಮಾತ್ರವಲ್ಲ, ಅವರು ಒಬ್ಬ ದಿಟ್ಟ, ಕರ್ನಾಟಕದ ಛಲವಾದಿ ರಾಜಕಾರಣಿಯಾಗಿ ಬಿಂಬಿತರಾಗಿದ್ದಾರೆ. ಬಹುಶಃ ಅವರು ಮುಖ್ಯಮಂತ್ರಿಯಾಗಿ ಎರಡನೇ ಅವಧಿಯಲ್ಲಿ ತಾನು ಈ ರೀತಿಯ ಸಂದಿಗ್ಧ ಹಾಗೂ ಅತೀ ಸಂಕಷ್ಟ ಪರಿಸ್ಥಿತಿಗೀಡಾಗಬೇಕಾಗುತ್ತದೆ ಎಂದು ಸ್ವಲ್ಪವೂ ಯೋಚಿಸಿರಲಿಕ್ಕಿಲ್ಲ. ಆದರೆ, ಕಾಲ! ಯಾರ ಕಾಲ ಹೇಗೆ ಎಳೆಯುತ್ತದೆ ಎಂದು ಹೇಳುವ ಜ್ಯೋತಿಷ್ಯ ಇನ್ನೂ ಹುಟ್ಟಿಲ್ಲ.

ಅದೇನೇ ಇರಲಿ, ಈ ಮುಡಾ ಹಗರಣದ ಹೊಗೆ ಕಾಣಿಸಿಕೊಂಡ ತಕ್ಷಣವೇ ಸಿದ್ದರಾಮಯ್ಯನವರು ಎಚ್ಚೆತ್ತುಕೊಂಡು ಅವರ ನಂಬಿಕಾರ್ಹ, ಸಮಕಾಲೀನ ಸಹಪಾಠಿ ರಾಜಕಾರಣಿಗಳ ಮಾತನ್ನು ಕೇಳಿದ್ದರೆ ಬಹುಶಃ ಹಗರಣದ ಬೆಂಕಿ ಜ್ವಾಲೆ ಈ ರೀತಿ ಹೊರ ಹೊಮ್ಮುತ್ತಿರಲಿಲ್ಲ ಎಂಬುದು ಹಲವರ ಅನಿಸಿಕೆ. ಈಗ ಸಮಯ ಕೈ ಮೀರಿ ಹೋಗಿದೆ. ಯುದ್ಧದ ಕಹಳೆ ಮೊಳಗಿದೆ–ನೈತಿಕತೆಯ ಸಮರ್ಥನೆಯನ್ನು ಬದಿಗಿಟ್ಟು ಕಾನೂನಿನ ಕಾಳಗ ಮುಂದುವರಿಸುವುದೊಂದೇ ಅವರಿಗಿರುವ ಅನಿವಾರ್ಯ ಮಾರ್ಗ ಎನ್ನಿಸುತ್ತದೆ.

ಇನ್ನು ಮುಡಾದ ವಿಷಯಕ್ಕೆ ಬರೋಣ: ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಿಗಳು (ಭೂಸ್ವಾಧೀನ ಪರಿಹಾರವಾಗಿ ನಿವೇಶನಗಳ ಮಂಜೂರು) ನಿಯಮಾವಳಿಗಳು 2009 (Karnataka Urban Development Authorities (allotment of sites as compensation for land acquisition) Rules 2009), ಜಾರಿಗೆ ಬಂದ ನಂತರ ಮುಡಾ, ಅಲ್ಲಿನ ಆಯುಕ್ತರ (Commissioner's) ಆಸ್ತಿಯಾಗಿ ಬಿಟ್ಟಿದೆ ಎಂಬ ಕಟುಸತ್ಯವನ್ನು ರಾಜಕಾರಣಿಗಳು, ಜನಪ್ರತಿನಿಧಿಗಳು ಹಾಗೂ ಮುಡಾದ ಕೌನ್ಸಿಲ್ ಸದಸ್ಯರು, ರಾಜಕೀಯವಾಗಿ ನೇಮಿಸಿದಂತಹ ಅಧ್ಯಕ್ಷರಾದಿಯಾಗಿ ಎಲ್ಲರೂ ತಿಳಿಯಬೇಕಿತ್ತು. ಮತ್ತು ಇದರ ಬಗ್ಗೆ ಎಚ್ಚರವಹಿಸಬೇಕಿತ್ತು. **ಆದರೆ ಈ ಲಂಚಾವತಾರದ ಆಡಳಿತದಲ್ಲಿ ರಾಜಕಾರಣಿಗಳೂ ಲಂಚದ ಪಾಲುದಾರರಾಗಿರಬೇಕಾದರೆ ಏನು ಮಾಡುವುದು? ಬೇಲಿಯೇ ಎದ್ದು ಹೊಲ ಮೇಯ್ದಂತೆ ಆಗಲಿಲ್ಲವೆ?**

ಮುಡಾದವರು ಬಡಾವಣೆಗಳ ನಿರ್ಮಾಣ ಮಾಡಲು ರೈತರಿಂದ ಭೂಮಿ ಸ್ವಾಧೀನಪಡಿಸಿಕೊಳ್ಳುವಾಗ (acquire) ಈ ಮೊದಲು ಅವರಿಗೆ ಹಣದ ರೂಪದಲ್ಲಿ ಪರಿಹಾರ ನೀಡುತ್ತಿದ್ದರು. ನಂತರ ಭೂಮಾಲೀಕನಿಗೆ ಅವನಿಂದ ಪಡೆದ ಭೂಮಿಯಲ್ಲಿ ಅಭಿವೃದ್ಧಿಪಡಿಸಿದ ಬಡಾವಣೆಯಲ್ಲಿ ಹಣದ ಪರಿಹಾರದ ಜೊತೆಗೆ ಒಂದು ನಿವೇಶನ (Land Loser Site) ಕೊಡುವ ಕ್ರಮ ಆಚರಣೆಗೆ ಬಂತು.

> **ಮುಡಾಗೆ ಬಂದ ಪರಿಸ್ಥಿತಿಯ ಕಂಡು...**
>
> ನಗೆಯು ಬರುತಿದೆ
> ಎನಗೆ ನಗೆಯು ಬರುತಿದೆ
> ಜಗದೊಳಿರುವ ಮನುಜರೆಲ್ಲ
> ಹಗರಣವ ಮಾಡುವುದ ಕಂಡು॥
>
> ನಗೆಯು....
> ....
> ....
> ....॥
>
> ಕಾಮ ಕ್ರೋಧ ಮನದೊಳಿಟ್ಟು
> ತಾನು ವಿಷದ ಪುಂಜನಾಗಿ
> ಸ್ವಾಮಿ ಪುರಂದರವಿಠಲನಾಮ
> ನೆನೆವ ಮನುಜರನ್ನು ಕಂಡು ॥
> ನಗೆಯು....
>
> –ನಮ್ಮ ಪುರಂದರದಾಸರ ಸಾಹಿತ್ಯವಿದು

ಆನಂತರದ ವರ್ಷಗಳಲ್ಲಿ ಖಾಸಗಿಯವರೂ ಬಡಾವಣೆ ಅಭಿವೃದ್ಧಿಪಡಿಸುವ ಅವಕಾಶ ಕಲ್ಪಿಸಿದರು. ಈ ಕಾಲಘಟ್ಟದಲ್ಲಿ ಮುಡಾ ಹೊಸ ಬಡಾವಣೆ ನಿರ್ಮಾಣ ಮಾಡುವುದರ ಬಗ್ಗೆ ಅಷ್ಟೇನು ಆಸಕ್ತಿ ಹೊಂದಿದಂತೆ ಕಂಡುಬರಲಿಲ್ಲ.

(i) ಕಾರಣ; ರೈತರಿಂದ ಭೂಮಿ ಪಡೆಯಲು ಹರಸಾಹಸಪಡಬೇಕಿತ್ತು. (ii) ಖಾಸಗಿಯವರು ಬಡಾವಣೆ ನಿರ್ಮಾಣ ಮಾಡಲು ಸಹಕರಿಸಿದರೆ ಅಧಿಕಾರಿಗಳು–ರಾಜಕಾರಣಿಗಳಿಗೆ ಭರಪೂರ ಲಾಭವಿತ್ತು.

ಇಷ್ಟಾಗಿಯೂ ಮೈಸೂರಿನಲ್ಲಿ 80,000ಕ್ಕೂ ಹೆಚ್ಚು ಮಂದಿ ನಿವೇಶನಾಕಾಂಕ್ಷಿಗಳು ಮುಡಾದಲ್ಲಿ ಮುಂಗಡ ಹಣ ಪಾವತಿಸಿ ನಿವೇಶನಕ್ಕಾಗಿ ಕಾದು ಕುಳಿತಿದ್ದಾರೆ. ಮುಡಾ ಮಾತ್ರ ರೈತರೊಂದಿಗೆ ವ್ಯವಹರಿಸಿ ಭೂಮಿ ಪಡೆಯುವಲ್ಲಿ ಖಾಸಗಿ ಬಡಾವಣೆಯವರೊಂದಿಗೆ ಪೈಪೋಟಿ ನಡೆಸಲಾಗದೇ, ಕೊನೆಗೆ ತನ್ನ ಮೂಲ ಉದ್ದೇಶವನ್ನೇ ಮರೆತು ಅಡ್ಡದಾರಿ ಹಿಡಿದಿತ್ತು.

ಈ ಒಂದು ಸಮಯದಲ್ಲಿ ಮುಡಾದಲ್ಲಿನ ಜನಪ್ರತಿನಿಧಿ ಸದಸ್ಯರು, ಅಧಿಕಾರಿ ವರ್ಗಕ್ಕೆ ಹೊಳೆದದ್ದೆ ಈ 40:60, ನಂತರ 50:50ರ ಅನುಪಾತದ ನೀತಿ. ಅಂದರೆ, ಮುಡಾಕ್ಕೆ ಭೂಮಿ ನೀಡಿದ ರೈತರಿಗೆ ಹಣದ ಪರಿಹಾರದ ಬದಲು 50:50 ಅನುಪಾತದಡಿ ಅಭಿವೃದ್ಧಿಪಡಿಸಿದ ಬಡಾವಣೆಯಲ್ಲಿ ನಿವೇಶನವನ್ನು ಕೊಡುವುದು. ಇಲ್ಲಿಂದ ಶುರುವಾಯ್ತು ನೋಡಿ ಲೂಟಿ ಯುಗ.

ರಾಜಕಾರಣಿಗಳು ಹಾಗೂ ಅಧಿಕಾರಿಗಳು ಸೇರಿ ಈ 50:50 ಅನುಪಾತದ ನೀತಿಯನ್ನು ಮನಬಂದಂತೆ ದುರ್ಬಳಕೆ ಮಾಡಿಕೊಂಡರು. ಬರೀ ತಮ್ಮ ಸ್ವಾರ್ಥಕ್ಕೆ ಈ ಯೋಜನೆ ಬಳಸಿ, ನಿವೇಶನಕ್ಕಾಗಿ ಹೆಸರು ನೋಂದಾಯಿಸಿದವರ ವಂಚಿಸಿ, ಸಾವಿರಾರು ನಿವೇಶನಗಳಬೇಕು ಬೇಕಾದವರಿಗೆ ಹಂಚಿಕೆ ಮಾಡಿ, ಮುಡಾ ಹಾಗೂ ಸರ್ಕಾರದ ಬೊಕ್ಕಸಕ್ಕೆ ಸಾವಿರಾರು ಕೋಟಿ ನಷ್ಟ ಉಂಟು ಮಾಡಿದರು. ಅದರ ಫಲವನ್ನೇ ಈಗ ನಮ್ಮ **ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನುಭವಿಸುವಂತಾಗಿದೆ.**

ಇದೊಂದು ರೀತಿ ಬೇರೆಯವರು ತೋಡಿದ ಬಾವಿಗೆ ಇನ್ಯಾರೋ ಬಿದ್ದಂತಲ್ಲವೇ? ಅವರ ಈ ಸುದೀರ್ಘ ರಾಜಕೀಯದಲ್ಲಿ ಒಂದು ಕಪ್ಪು ಚುಕ್ಕೆಯನ್ನೂ ನಾವು ನೋಡಿಲ್ಲ ನಿಜ. ಆದರೆ ಈಗ ಅವರು ಕಪ್ಪು ಮಸಿಯನ್ನೇ ಮೈಮೇಲೆಲ್ಲಾ ಸುರಿದುಕೊಂಡಂತಾಗಿದೆ ಅಲ್ಲವೇ?

ನಾನು, ಮೊದ ಮೊದಲು ಈ ಹಗರಣ ಮಾಮೂಲಿ, ನಾವು ಎಲ್ಲಾ ಕಡೆ ಕಾಣುವಂತದ್ದು ಎಂದುಕೊಂಡಿದ್ದೆ. ಆದರೆ, ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಅಪ್ಪಿ–ತಪ್ಪಿ ಸಿಲುಕಿಕೊಂಡಿರುವುದರಿಂದ ಈ ಹಗರಣ ಇಷ್ಟೊಂದು ಪ್ರಚಾರ ಪಡೆದುಕೊಂಡು ಎಲ್ಲರನ್ನೂ ಬಡಿದೆಬ್ಬಿಸಿದೆ. ಆದರೆ, ಹಗರಣದಿಂದ ಮುಡಾ ಮತ್ತು ಸರ್ಕಾರಕ್ಕೆ ಆದ ಸಾವಿರಾರು ಕೋಟಿ ನಷ್ಟ ಮತ್ತೆ ಭರಿಸಲಾದಿತೇ? ಯಾರು ಭರಿಸುತ್ತಾರೆ? ಇದರಲ್ಲಿ ಮುಖ್ಯ ಪಾತ್ರಧಾರಿಗಳಾದ ಇಬ್ಬರು ಆಯುಕ್ತರು–**ಡಾ.ಡಿ.ಬಿ. ನಟೇಶ್** ಮತ್ತು **ಜಿ.ಟಿ.ದಿನೇಶ್ ಕುಮಾರ್**–ಅವರುಗಳಿಂದ ಲೂಟಿಯಾದ ಹಣವನ್ನು ವಸೂಲಿ ಮಾಡಿ, ಅವರನ್ನು ಕಾನೂನಿನಡಿ ತರಲು ನಮ್ಮ ವ್ಯವಸ್ಥೆಯಿಂದ ಸಾಧ್ಯವೇ? ಇದಕ್ಕೆ ಬೇಕಾದ ರಾಜಕೀಯ ಇಚ್ಛಾಶಕ್ತಿ ನಮ್ಮ ಸಿದ್ದರಾಮಯ್ಯನವರಲ್ಲಿದೆಯೇ?

ಬಹುಶಃ ಅವರು ಎ.ಹೆಚ್. ವಿಶ್ವನಾಥ್, ವಿಧಾನಪರಿಷತ್ ಸದಸ್ಯರು, ಹೇಳಿದ ಹಾಗೆ ಅವರ ಶ್ರೀಮತಿ ಅವರಿಗೆ ಮುಡಾ ಕೊಟ್ಟ ನಿವೇಶನಗಳನ್ನು ಹಿಂತಿರುಗಿಸಿ ಮುಂದೆ ಕಾನೂನಿನನ್ವಯ ಪರಿಹಾರ ಪಡೆಯಲು ಒಪ್ಪಿದ್ದರೆ, ಅವರನ್ನು ಜನ ಮೆಚ್ಚಿ ಅವರು ಒಬ್ಬ ಆದರ್ಶ ರಾಜಕಾರಣಿ ಎಂದು ಹಾಡಿ–ಹೊಗಳುತ್ತಿದ್ದರು. ಬಹುಶಃ ಅವರ ಹಿಂದೆ–ಮುಂದೆ, ಆಜು–ಬಾಜಲ್ಲಿ ಮೈಗಂಟಿಕೊಂಡೇ ಇರುವವರು ಅವರನ್ನು ದಾರಿ ತಪ್ಪಿಸಿದರೇನೋ? ಗೊತ್ತಿಲ್ಲ.

ಅದೇನೇ ಇರಲಿ, ಸಿದ್ದರಾಮಯ್ಯನವರ ಈಗಿನ ಹೇಳಿಕೆಗಳು ಬಹಳ ಸ್ಪಷ್ಟವಾಗಿದ್ದ ಹಾಗೆ ಕಾಣುವುದಿಲ್ಲ. ಮೊದಲಿನಿಂದಲೂ ಅವರು ಅವರ ಪತ್ನಿಗೆ ಮುಡಾ ನೀಡಿರುವ ಬದಲಿ ನಿವೇಶನಗಳ ಕುರಿತು ಸಮರ್ಥಿಸಿಕೊಂಡೇ ಬಂದಿದ್ದಾರೆ. ಒಂದು ಬಾರಿ ಅವರು 62 ಕೋಟಿ ಕೊಟ್ಟರೆ 14 ನಿವೇಶನ ವಾಪಸು ಕೊಟ್ಟು ಬಿಡುವೆ ಎಂಬುದಾಗಿ ಹೇಳಿದ್ದಾರೆ. ಸಹಜವಾಗಿ ಅದು ಜನರಿಗೆ ತಪ್ಪು ಸಂದೇಶವನ್ನು ರವಾನಿಸಿದಂತಾಯಿತು. ಜೊತೆಗೆ ಆ 3.16 ಎಕರೆ ಜಮೀನಿನ ಕ್ರಯಪತ್ರದ ಬಗ್ಗೆ, ಭೂಪರಿವರ್ತನೆ ಬಗ್ಗೆ, ಮುಡಾದ ನೋಟಿಫಿಕೇಷನ್, ಡಿ ನೋಟಿಫಿಕೇಷನ್, ವ್ಯವಸಾಯ ಭೂಮಿ ಅಲ್ಲದಿದ್ದನ್ನು ವ್ಯವಸಾಯ ಭೂಮಿ ಎಂದು ಅಧಿಕಾರಿಗಳು ಪರಿಗಣಿಸಿ ಅದರ ಭೂಪರಿವರ್ತನೆ ಮಾಡಿದ್ದು ಮೊದಲಾಗಿ ಎಲ್ಲಾ ವ್ಯವಹಾರಗಳು ಒಂದು ರೀತಿ ಸಂಶಯಾಸ್ಪದವಾಗಿವೆ.

ಮತ್ತೊಂದು ಗಮನಾರ್ಹ ಸಂಗತಿ ಎಂದರೆ, ಈ ವಿಚಾರವನ್ನು ವಿಧಾನಸಭೆಯಲ್ಲಿ ಚರ್ಚೆ ಮಾಡಲು ಸರ್ಕಾರ ಸಿದ್ಧವಿರಲಿಲ್ಲ. ಏಕೆ?

ಈ ಮುಡಾ ಹಗರಣದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಮುಳುಗಿವೆ ಎನ್ನುವುದರಲ್ಲಿ ಎರಡು ಮಾತಿಲ್ಲ. ಹಾಗಾದರೆ ಸರ್ಕಾರದ ಮೇಲೆ ಅಂದರೆ ಸಿದ್ದರಾಮಯ್ಯ ಅವರ ಮೇಲೆ, ಭ್ರಷ್ಟಾಚಾರದ ಅಪವಾದ ಮಾಡಿ ಈಗ ಹಾದಿ–ಬೀದಿಯಲ್ಲಿ ಹಾಗೂ ನ್ಯಾಯಾಲಯದಲ್ಲಿ ನಡೆಯುತ್ತಿರುವ ಹೋರಾಟದ ಉದ್ದೇಶ ಏನಿರಬಹುದು. ಹೋಗಲಿ, ಈಗ ನಡೆಯುತ್ತಿರುವ ಈ ಹಗರಣದ ವಿರೋಧಿ ಹೋರಾಟ ಹಾಗೂ ಆರೋಪ–ಪ್ರತ್ಯಾರೋಪದಿಂದ ಜನರಿಗೆ ಗೆಲುವು ಸಿಕ್ಕರೆ ಸಂತೋಷ. ಅದು ಯಾವ ರೀತಿಯ ಗೆಲುವು?– ಮೌಲ್ಯಾಧಾರಿತ ರಾಜಕೀಯ, ನೈತಿಕತೆಗೆ ಮನ್ನಣೆ ಕೊಡುವ ರಾಜಕೀಯ, ಹೊಂದಾಣಿಕೆಯನ್ನು ಬದಿಗಿಡುವ ರಾಜಕೀಯ, ಸರ್ಕಾರಿ ಅಧಿಕಾರಿಗಳ ಕಪಿಮುಷ್ಠಿಯಿಂದ ರಾಜಕಾರಣಿಗಳು ಹೊರ ಬಂದು ನಮಗೆ ಸಿಗಬಹುದಾದ ಭ್ರಷ್ಟಾಚಾರರಹಿತ ರಾಜಕೀಯ– ಬರೀ ಇದೆಲ್ಲಾ ನಮ್ಮ ಲೆಕ್ಕಾಚಾರವಷ್ಟೆ!

ಮುಡಾ ಒಂದು ಸ್ವಾಯತ್ತ ಸಂಸ್ಥೆಯಾದರೂ ಸರ್ಕಾರದ ಮೇಲ್ವಿಚಾರಣೆಯಲ್ಲಿ ನಿರ್ವಹಣೆ ಆಗುವ ಸಂಸ್ಥೆ. ಆದುದರಿಂದ ಈ ತತ್‌ಕ್ಷಣ ಕರ್ನಾಟಕದವರೇ ಆದ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಹಾಗೂ ಮಾಜಿ ಕರ್ನಾಟಕ ಲೋಕಾಯುಕ್ತ **ಎನ್. ಸಂತೋಷ್ ಹೆಗಡೆ** ಅವರಿಂದ ಕೂಲಂಕಷ ತನಿಖೆಯ ಅವಶ್ಯಕತೆ ಅಕ್ಷರಶಃ ಇದೆ. ಈ ಕಾಂಗ್ರೆಸ್ ಸರ್ಕಾರ,– ಯಾರೇ ಇರಲಿ, ಯಾರೇ ಬರಲಿ– ಈ ಒಂದು ಒಳ್ಳೆಯ ಕೆಲಸ ಮಾಡಬಹುದೆಂದು ಆಶಿಸೋಣವೇ?.

email:
voice@starofmysore.com

ವಿಧಾನಪರಿಷತ್‌ನಲ್ಲಿ ಬಹುಮತ ಬಂದ್ರೆ ಬಿಜೆಪಿ ತಂದಿದ್ದ ಭೂ ಕಂದಾಯ ಕಾಯ್ದೆ ರದ್ದು

ಬೆಂಗಳೂರು, ಆ.20– ವಿಧಾನಪರಿಷತ್‌ನಲ್ಲಿ ಬಹುಮತ ಬಂದ ಕೂಡಲೇ ಬಿಜೆಪಿ ಅವಧಿಯಲ್ಲಿ ಜಾರಿಗೆ ತಂದಿರುವ ಭೂ ಕಂದಾಯ ಕಾಯ್ದೆ ರದ್ದು ಮಾಡುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ವಿಧಾನಸೌಧದಲ್ಲಿ ನಡೆದ ದೇವರಾಜ್ ಅರಸ್ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇವರಾಜ್ ಅರಸ್ ಅವರು ಉಳುವವನೆ ಭೂಮಿಯ ಒಡೆಯ ಎಂಬ ಕಾಯ್ದೆ ಜಾರಿಗೆ ತಂದರು. ಆದರೆ ಇವತ್ತು ಉಳುಮೆ ಮಾಡದವನೂ ಭೂಮಿ ಪಡೆಯುತ್ತಿದ್ದಾನೆ ಎಂದು ಅಸಮಾಧಾನ ಹೊರಹಾಕಿದರು.

ಕೃಷಿ ಭೂಮಿಯನ್ನು ಈಗ ಯಾರು ಬೇಕಾದರೂ ಖರೀದಿ ಮಾಡಬಹುದಾಗಿದೆ. ಅದಕ್ಕೆ ಬಿಜೆಪಿಯವರು ನಿಯಮ ಬದಲಾವಣೆ ಮಾಡಿದರು. ನೇಗಿಲು ಹಿಡಿಯದೇ ಇದ್ದವರು ಸಹ ಕೃಷಿ ಭೂಮಿ ಖರೀದಿ ಮಾಡಬಹುದಾಗಿದೆ. ಇದಕ್ಕೆ ನಾವು ಅವಕಾಶ ಕೊಡಬಾರದು. ವಿಧಾನ ಪರಿಷತ್‌ನಲ್ಲಿ ನಮಗೆ ಬೆಂಬಲ ಇಲ್ಲ. ವಿಧಾನ ಪರಿಷತ್‌ನಲ್ಲಿ ನಮಗೆ ಬಹುಮತ ಬಂದ ಬಳಿಕ ಈ ನಿಯಮ ಬದಲಾವಣೆ ಮಾಡುತ್ತೇನೆ. ಭೂ ಕಂದಾಯ ಕಾಯ್ದೆ 79/A/B ನಿಯಮ ರದ್ದು ಮಾಡೇ ಮಾಡುತ್ತೇನೆ ಎಂದು ಘೋಷಿಸಿದರು.

ರಾಜ್ಯಪಾಲರ ನಮ್ಮ ನಾಯಕರು ನಿಂದನೆ ಮಾಡಿಲ್ಲ; ಇರೋದನ್ನೆ ಹೇಳಿದ್ದಾರೆ

ಬೆಂಗಳೂರು, ಆ.20– ರಾಜ್ಯಪಾಲರು ಮಾಡಿರುವ ಕೆಲಸವನ್ನು ನಮ್ಮ ನಾಯಕರು ಹೇಳಿದ್ದಾರೆ. ಅದನ್ನು ರಾಜ್ಯಪಾಲರನ್ನು ಹೀಯ್ಯಾಳಿಸಿದರು ಅನ್ನೋದು ಸರಿಯಲ್ಲ ಎಂದು ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ನಾಯಕರು ಆಡಿದ್ದ ಮಾತುಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ ಮಾಡಿಕೊಂಡಿದ್ದಾರೆ.

ರಾಜ್ಯಪಾಲರನ್ನು ಕಾಂಗ್ರೆಸ್ ನಾಯಕರು ನಿಂದಿಸಿರುವ ಕುರಿತು ಬಿಜೆಪಿಯಿಂದ ಗುರುವಾರ ರಾಜ್ಯಾದ್ಯಂತ ಪ್ರತಿಭಟನೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯಪಾಲರು ಮಾಡಿರುವ ಕೆಲಸವನ್ನು ಕಾಂಗ್ರೆಸ್ ನಾಯಕರು ಹೇಳಿದ್ದಾರೆ. ಇದನ್ನು ಹೇಳಿದರೆ ಹೀಯ್ಯಾಳಿಸಿದ ರೀತೀನಾ. ಶಶಿಕಲಾ ಜೊಲ್ಲೆ ಕೇಸ್ ಇದೆ, ನಿರಾಣಿ ಕೇಸ್ ಇದೆ. ಕುಮಾರಸ್ವಾಮಿ ಕೇಸ್ ಇದೆ. ಜನಾರ್ದನ ರೆಡ್ಡಿ ಮೇಲೆ ಕೇಸ್ ಇದೆ. ಇವುಗಳಿಗೆ ಪರ್ಮಿಷನ್ ಕೊಟ್ಟಿಲ್ಲ. ಇದನ್ನು ಹೇಳಿದ್ರೆ ತಪ್ಪಾ ಎಂದು ಪ್ರಶ್ನಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ವಕೀಲರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ನೈತಿಕ ಬೆಂಬಲ

ಕೋರ್ಟ್ ಕಲಾಪದಿಂದ ಹೊರಗುಳಿದು ರಾಜ್ಯಪಾಲರ ಕ್ರಮಕ್ಕೆ ಖಂಡನೆ



ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಮೈಸೂರು ಜಿಲ್ಲಾ ವಕೀಲರ ಸಂಘದ ಸದಸ್ಯರು ಮಂಗಳವಾರ ಕಲಾಪ ಬಹಿಷ್ಕರಿಸಿ, ಪ್ರತಿಭಟನೆ ನಡೆಸಿದರು.

ಮೈಸೂರು, ಆ.20(ಎಂಟಿವೈ)– ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಇಕ್ಕಟ್ಟಿಗೆ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೈತಿಕ ಬೆಂಬಲ ನೀಡುವ ನಿಟ್ಟಿನಲ್ಲಿ ಮೈಸೂರು ಜಿಲ್ಲಾ ವಕೀಲರ ಸಂಘ ಮಂಗಳವಾರ ನ್ಯಾಯಾಲಯದ ಕಲಾಪದಿಂದ ದೂರ ಉಳಿದು ಸಿಎಂ ಸಿದ್ದರಾಮಯ್ಯ ಅವರಿಗೆ ಕಾನೂನು ಹೋರಾಟದಲ್ಲಿ ಬೆಂಬಲ ನೀಡಲು ನಿರ್ಧರಿಸಿತು.

ಮೈಸೂರಿನ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಮಂಗಳವಾರ ವಿಶೇಷ ಸಭೆ ನಡೆಸಿದ ವಕೀಲರು ಮುಖ್ಯಮಂತ್ರಿ ಸಿದ್ದರಾಮಯ್ಯ 'ಮೈಸೂರು ಜಿಲ್ಲಾ ವಕೀಲರ ಸಂಘ'ದ ಆಜೀವ ಸದಸ್ಯರೂ ಹಾಗೂ ಮಾಜಿ ಕಾರ್ಯದರ್ಶಿಗಳೂ ಆಗಿರುವುದರಿಂದ ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ತಪ್ಪು ಮಾಡದಿದ್ದರೂ ತೊಂದರೆಗೆ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ನೈತಿಕ ಬೆಂಬಲ ನೀಡುವ ಅಗತ್ಯವಿದೆ ಎಂದು ವಿಷಯ ಮಂಡಿಸಲಾಯಿತು. ಇದಕ್ಕೆ ಸದಸ್ಯರು ಸರ್ವಾನುಮತದಿಂದ ಬೆಂಬಲ ವ್ಯಕ್ತಪಡಿಸಿದರು. ಬಳಿಕ ಕಲಾಪದಿಂದ ದೂರ ಉಳಿಯಲು ನಿರ್ಧರಿಸಲಾಯಿತು.

ಪ್ರತಿಭಟನೆ: ನ್ಯಾಯಾಲಯದ ಆವರಣದಿಂದ ಹೊರ ಬಂದ ವಕೀಲರು ನ್ಯಾಯಾಲಯದ ಮುಂಭಾಗವಿರುವ ಮಹಾತ್ಮಗಾಂಧಿ ಪುತ್ಥಳಿ ಮುಂದೆ ಪ್ರತಿಭಟನೆ ನಡೆಸಿದ ಮೈಸೂರು ಜಿಲ್ಲಾ ವಕೀಲರ ಸಂಘದ ಸದಸ್ಯರು, ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ, ಸಿದ್ದರಾಮಯ್ಯ ಪರ ಘೋಷಣೆಗಳನ್ನು ಕೂಗಿದರು.

ಇದೇ ವೇಳೆ ವಕೀಲರ ಸಂಘದ ಅಧ್ಯಕ್ಷ ಲೋಕೇಶ್ ಮಾತನಾಡಿ, ಮೈಸೂರು ಜಿಲ್ಲಾ ವಕೀಲರ ಸಂಘದ ಸದಸ್ಯರಿಗೆ ಸಮಸ್ಯೆ ಆದರೆ, ಅವರ ಪರ ಧ್ವನಿ ಎತ್ತುವುದು ವಕೀಲರ ಸಂಘದಲ್ಲಿ ಸಂಪ್ರದಾಯವಾಗಿ ನಡೆದುಕೊಂಡು ಬಂದಿದೆ. ನಮ್ಮ ಸಂಘದ ಸದಸ್ಯರಿಗೆ ಅನ್ಯಾಯವಾದಾಗ ಅವರ ಪರ ನಿಲ್ಲುವುದು ನಮ್ಮ ಧರ್ಮವಾಗಿದೆ. ಸಿದ್ದರಾಮಯ್ಯ ಅವರು ವಕೀಲರೂ ಆಗಿದ್ದು, ನಮ್ಮ ಸಂಘದ ಆಜೀವ ಸದಸ್ಯರಾಗಿರುವುದರಿಂದ ಅವರಿಗೆ ಬೆಂಬಲ ಸೂಚಿಸಿ ಪ್ರತಿಭಟನೆ ನಡೆಸಿದ್ದೇವೆ. ಮುಡಾದಲ್ಲಿ 50:50 ನಿವೇಶನ ಹಂಚಿಕೆ ವಿಷಯದಲ್ಲಿ ಹಗರಣ ಆಗಿದೆ ಎಂದು ರಾಜ್ಯಪಾಲರು ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಪ್ರಕರಣದಲ್ಲಿ ಸಿದ್ದರಾಮಯ್ಯ ಅವರಿಗೆ ಅನ್ಯಾಯವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ ಎಂದು ಪ್ರತಿಭಟನಾಕಾರರು ತಿಳಿಸಿದರು. ಪ್ರತಿಭಟನೆಯಲ್ಲಿ ವಕೀಲರಾದ ಉಮೇಶ್, ಕಾಂತರಾಜು, ತಿಮ್ಮಯ್ಯ, ತನುಜಾ ಮಹೇಶ್ ಸೇರಿದಂತೆ ಹಲವರು ವಕೀಲರು ಪಾಲ್ಗೊಂಡಿದ್ದರು.

ವೈದ್ಯರ ರಕ್ಷಣೆಗೆ ಟಾಸ್ಕ್‌ಫೋರ್ಸ್ ರಚನೆ



ಬೆಂಗಳೂರಿನಲ್ಲಿ ಮಂಗಳವಾರ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಆರೋಗ್ಯಾಧಿಕಾರಿಗಳ ಸಭೆ ನಡೆಸಿದರು.

ಬೆಂಗಳೂರು, ಆ.20(ಬಿಎಲ್‌ಯು)– ಕೊಲ್ಕತ್ತಾದಲ್ಲಿ ವೈದ್ಯೆ ಮೇಲೆ ಅತ್ಯಾಚಾರ ಎಸಗಿ ಹತ್ಯೆ ಮಾಡಿರುವ ಪ್ರಕರಣದ ನಂತರ ಎಚ್ಚೆತ್ತಿರುವ ರಾಜ್ಯ ಸರ್ಕಾರ ವೈದ್ಯರಿಗೆ ರಕ್ಷಣೆ ನೀಡಲು ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದು, ಒಂದು ತಿಂಗಳಲ್ಲಿ ಟಾಸ್ಕ್ ಫೋರ್ಸ್ ರಚಿಸಲು ತೀರ್ಮಾನಿಸಿದೆ.

ಬೆಂಗಳೂರಿನಲ್ಲಿ ಇಂದು ಆರೋಗ್ಯಾಧಿಕಾರಿಗಳ ಸಭೆ ನಡೆಸಿದ ನಂತರ ಈ ಬಗ್ಗೆ ಮಾಹಿತಿ ನೀಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹಿಂಸಾತ್ಮಕ ಚಟುವಟಿಕೆಗಳನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವ ಕುರಿತಂತೆ ಚರ್ಚಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ವೈದ್ಯರ ಮೇಲಿನ ಹಲ್ಲೆ ಹಾಗೂ ಹಿಂಸಾಚಾರ ತಡೆಗಟ್ಟಲು ವಿಧಾನಮಂಡಲದ ಅಧಿವೇಶನದಲ್ಲಿ ವೈದ್ಯಕೀಯ ನೋಂದಣಿ ಕಾನೂನು ತಿದ್ದುಪಡಿ ಮಾಡಲಾಗಿದೆ. ಜೊತೆಗೆ ಅಸ್ತಿತ್ವದಲ್ಲಿರುವ ಕಾನೂನು ನಿಯಮಗಳನ್ನು ಮತ್ತಷ್ಟು ಬಲಪಡಿಸಲಾಗಿದೆ ಎಂದು ಸಚಿವರು ಹೇಳಿದರು.

ವೈದ್ಯರ ಮೇಲೆ ಹಲ್ಲೆ ನಡೆಸಿದರೆ 3 ರಿಂದ 7 ವರ್ಷ ಜೈಲು ಶಿಕ್ಷೆ ಮತ್ತು 25 ಸಾವಿರದಿಂದ 2 ಲಕ್ಷದವರೆಗೆ ದಂಡ ವಿಧಿಸಲಾಗುವುದು. ವೈದ್ಯಕೀಯ ವೃತ್ತಿಪರರನ್ನು ಗುರಿಯಾಗಿಸಿಕೊಂಡು ಸಾಮಾಜಿಕ ಜಾಲತಾಣಗಳನ್ನು ದುರ್ಬಳಕೆ ಮಾಡಿಕೊಳ್ಳುವವರ ವಿರುದ್ಧ ಕೂಡ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಒಟ್ಟಾರೆ ವೈದ್ಯರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಡಾ.ಸಿ.ಎನ್.ಮಂಜುನಾಥ್‌ರಿಗೆ ಅಭಿನಂದನೆ...



ಮೈಸೂರಿನಲ್ಲಿ ನಡೆದ ಡಾ ಸುಕನ್ಯಾ ಸೂನಗಹಳ್ಳಿ ಸಂಪಾದಕತ್ವದಲ್ಲಿ ಪ್ರಕಟಗೊಂಡಿದ್ದ ಜಯದೇವ ಹೃದ್ರೋಗ ವಿಜ್ಞಾನ ಸಂಸ್ಥೆಯ ವಿಶ್ರಾಂತ ನಿರ್ದೇಶಕರು ಹಾಗೂ ಸಂಸದರಾದ ಡಾ.ಸಿ.ಎನ್.ಮಂಜುನಾಥ್ ಅವರ ಕುರಿತ ಅಭಿನಂದನಾ ಗ್ರಂಥದ ಲೋಕಾರ್ಪಣೆ ಸಮಾರಂಭದಲ್ಲಿ ಡಾ.ಸಿ.ಎನ್.ಮಂಜುನಾಥ್ ಅವರನ್ನು ಮೈಸೂರು ಜಯದೇವ ಹೃದ್ರೋಗ ವಿಜ್ಞಾನ ಸಂಸ್ಥೆಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ ಅಭಿನಂದಿಸಿದರು. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ, ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ, ಡಾ.ಸಿ.ಶರತ್ ಕುಮಾರ್, ಪಡುವಾರಹಳ್ಳಿ ಬಿ.ಶ್ರೀನಿವಾಸ್, ಚಿಕ್ಕತಿಮ್ಮಯ್ಯ ಮತ್ತಿತರರು ಇದ್ದಾರೆ.

ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮೈಸೂರು, ಆ.20– ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಸಹಾಯಧನ, ಸಾಲ–ಸೌಲಭ್ಯ ವನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ (ಬ್ಯಾಂಕ್ ಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ(ನೂತನ), ಅರಿವು ಶೈಕ್ಷಣಿಕ ಸಾಲಯೋಜನೆ (ನವೀ ಕರಣ), ವಿದೇಶಿ ವ್ಯಾಸಂಗ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ (ಯೋಜನೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು, ಉತ್ತರಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಇತರೇ ಜಿಲ್ಲೆಗಳಲ್ಲಿ ಕನಿಷ್ಠ 2 ಎಕರೆ ಹೊಂದಿರಬೇಕು) ಹಾಗೂ ಸ್ವಾವಲಂಬಿ ಸಾರಥಿ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಬೆಂಗಳೂರು ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರಿಕ ಸೇವಾ ಕೇಂದ್ರಗಳಲ್ಲಿ ಸೆ.16 ರೊಳಗೆ ಅರ್ಜಿ ಸಲ್ಲಿಸಬಹುದು.

2023–24ನೇ ಸಾಲಿನ ಯೋಜನೆಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ http://upparadevelopment. karnataka. gov.in ಅಥವಾ ನಿಗಮದ ಕೇಂದ್ರ ಕಚೇರಿ ದೂ.ಸಂ: 080–222 52555 ಅಥವಾ ಡಿ.ದೇವ ರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗ ಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಯನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ (ನಿ)ದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಎ. ಶೋಭ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಟ್ರಸ್ಟ್ ಉದ್ಘಾಟನಾ ಸಮಾರಂಭಕ್ಕೆ ಆಹ್ವಾನ...



ಆ.28ರಂದು ಪಡುವಾರಹಳ್ಳಿ ಗ್ರಾಮ ಅಭಿವೃದ್ಧಿಯ ಟ್ರಸ್ಟ್ ವತಿಯಿಂದ ವಿನಾಯಕ ನಗರದಲ್ಲಿ ನೂತನವಾಗಿ ನಿರ್ಮಿಸಿರುವ ವಿನಾಯಕ ಕನ್ವೆನ್ಷನ್ ಹಾಲ್‌ನ ಉದ್ಘಾಟನಾ ಸಮಾರಂಭಕ್ಕೆ ನಗರದ ನಿವಾಸಿ ಹಿರಿಯ ಸಾಹಿತಿ ಡಾ.ಸಿ.ಪಿ. ಕೃಷ್ಣಕುಮಾರ್ ಅವರನ್ನು ಟ್ರಸ್ಟ್ ವತಿಯಿಂದ ಆಹ್ವಾನಿಸಲಾಯಿತು. ಈ ವೇಳೆ ಟ್ರಸ್ಟ್‌ನ ಉಪಾಧ್ಯಕ್ಷ ರಾಮಣ್ಣ, ಸದಸ್ಯರಾದ ಬಸವರಾಜು, ನಿಂಗಪ್ಪ, ವೆಂಕಟಗಿರಿ, ಮಹೇಂದ್ರ, ಸುರೇಶ್, ಒಕ್ಕಲಿಗರ ಸಂಘದ ನಿರ್ದೇಶಕ ಎ.ರವಿ ಉಪಸ್ಥಿತರಿದ್ದರು

ಎಸ್‌ಎಸ್‌ಎಲ್‌ಸಿ, ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅಭಿನಂದನೆ



78ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಮೈಸೂರಿನ ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ ಸದಸ್ಯರ ಎಸ್‌ಎಸ್‌ಎಲ್‌ಸಿ, ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು. ಈ ವೇಳೆ ವಿರಕ್ತ ಮಠದ ಶ್ರೀ ಗೌರಿಶಂಕರ ಸ್ವಾಮೀಜಿ, ಎಂಎಲ್‌ಸಿ ಹೆಚ್.ವಿಶ್ವನಾಥ್, ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು, ನಿರ್ದೇಶಕರಾದ ನಂ.ಸಿದ್ದಪ್ಪ, ಎಂ.ಡಿ.ಪಾರ್ಥಸಾರಥಿ, ಹೆಚ್.ವಿ.ಭಾಸ್ಕರ್, ಅರುಣ್‌ಸಿದ್ದಪ್ಪ, ಶಂಕರನಾರಾಯಣ ಶಾಸ್ತ್ರಿ, ಶ್ರೀಮತಿ ಸರ್ವಮಂಗಳಾ, ಎಂ.ಎನ್.ನವೀನ್‌ಕುಮಾರ್, ಬಿ.ನಾಗರಾಜು, ಪ್ರಭಾರ ವ್ಯವಸ್ಥಾಪಕ ಡಿ.ಅನಂತ ವೀರಪ್ಪ ಇನ್ನಿತರರಿದ್ದರು.

ಮಂಗಳಮುಖಿಯ ದತ್ತು ಪುತ್ರಿ ಬಾಕ್ಸಿಂಗ್‌ನಲ್ಲಿ ಸಾಧನೆ

ಮೈಸೂರು, ಆ.20(ಜಿಎ)–ಮಂಗಳಮುಖಿಯ ದತ್ತು ಪುತ್ರಿ ಬಾಕ್ಸಿಂಗ್‌ನಲ್ಲಿ ಸಾಧನೆ ಮಾಡಿದ್ದಾರೆ. ಸ್ವತಃ ಮಂಗಳಮುಖಿ ಅಕ್ರಂಪಾಷ ಅಲಿಯಾಸ್ ಶಬಾನ ಈ ವಿಷಯ ತಿಳಿಸಿದ್ದು, ತಾವು ದತ್ತು ಪಡೆದು ಪೋಷಿಸುತ್ತಿರುವ ಎಸ್.ಬೀಬಿ ಫಾತಿಮಾ ರಾಜ್ಯ ಕಿಕ್ ಬಾಕ್ಸಿಂಗ್ ಸಂಸ್ಥೆ ವತಿಯಿಂದ ಇತ್ತೀಚೆಗೆ ನಗರದ ಯುವರಾಜ ಕಾಲೇಜು ಒಳಾಂಗಣ ಕ್ರೀಡಾಂಗಣದಲ್ಲಿ ನಡೆಸಿದ ರಾಜ್ಯ ಮಕ್ಕಳ ಕೆಡೆಟ್ ಜ್ಯೂನಿಯರ್, ಸೀನಿಯರ್, ಮಾಸ್ಟರ್ ಕಿಕ್ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ಪಾಲ್ಗೊಂಡು ಒಂದು ಚಿನ್ನದ ಪದಕ, ಒಂದು ಬೆಳ್ಳಿ ಪದಕ ಗಳಿಸುವ ಸಾಧನೆ ಮಾಡಿದ್ದಾಳೆ ಎಂದಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾವು ಈಕೆಯನ್ನು ದತ್ತು ಪಡೆದು, ಶಿಕ್ಷಣ ಕೊಡಿಸುತ್ತಿರುವುದಲ್ಲದೆ, ಕ್ರೀಡಾ ಕ್ಷೇತ್ರದಲ್ಲಿ ಏನಾದರೂ ಸಾಧನೆ ಮಾಡಲೆಂದು ಕಿಕ್ ಬಾಕ್ಸಿಂಗ್ ತರಬೇತಿಗೆ ಕಳುಹಿಸಿದ್ದು, ಈಕೆ ಈಗಾಗಲೇ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಅನೇಕ ಪದಕ ಗಳಿಸಿದ್ದಾಳೆ. ಮುಂದೆ ಅಂತರರಾಷ್ಟ್ರೀಯ ಸ್ಪರ್ಧೆಗಳಲ್ಲೂ ಭಾಗವಹಿಸಬೇಕೆಂಬ ಆಕಾಂಕ್ಷೆಯಿದೆ. ತಮ್ಮ ಈ ಕಾರ್ಯ ಗಮನಿಸಿ ಹಲವರು ನೆರವಾಗುತ್ತಿರುವುದು ಸಂತಸ ತಂದಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಎಸ್.ಬೀಬಿ ಫಾತಿಮಾ, ಲೈಂಗಿಕ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಪ್ರಣತಿ ಪ್ರಕಾಶ್ ಉಪಸ್ಥಿತರಿದ್ದರು.

ಮತ್ಸ್ಯ ಸಂಪದ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ



ಮೈಸೂರು,ಆ.20– ಮೀನುಗಾರಿಕೆ ಇಲಾಖೆ ವತಿಯಿಂದ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ 2024–25ನೇ ಸಾಲಿಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಮೀನು ಮರಿ ಪಾಲನಾ ಕೊಳಗಳ ನಿರ್ಮಾಣ, ಹೊಸ ಮೀನು ಕೃಷಿ ಕೊಳಗಳ ನಿರ್ಮಾಣ ಮತ್ತು ಹೂಡಿಕೆ ವೆಚ್ಚಗಳು, ಒಳನಾಡಿನಲ್ಲಿ ಬಯೋಫ್ಲಾಕ್ ಕೊಳಗಳ ನಿರ್ಮಾಣ ಮತ್ತು ಹೂಡಿಕೆ ವೆಚ್ಚ, ಬ್ಯಾಕ್ಯಾರ್ಡ್ ಅಲಂಕಾರಿಕ ಮೀನು ಸಾಕಾಣಿಕೆ ಘಟಕ, ಮಧ್ಯಮ ಆರ್.ಎ.ಎಸ್ ಸ್ಥಾಪನೆ, ಸಣ್ಣ ಆರ್.ಎ.ಎಸ್ ಸ್ಥಾಪನೆ ಮತ್ತು ಎಫ್. ಆರ್.ಪಿ. ದೋಣಿಗಳ ಖರೀದಿಗೆ ಸಹಾಯಧನ ಯೋಜನೆಗಳಡಿ ಆಸಕ್ತಿ ಹೊಂದಿರುವ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.40ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ/ಪಂಗಡ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.60ರಷ್ಟು ಸಹಾಯಧನವನ್ನು ನೀಡಲಾಗುವುದು.

ಅರ್ಜಿ ನಮೂನೆಯನ್ನು ಸಂಬಂಧಿಸಿದ ತಾಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಸೆ.2ರೊಳಗೆ ಸಂಬಂಧಪಟ್ಟ ತಾಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಹಿಂದಿನ ಸಾಲಿನಲ್ಲಿ ಈಗಾಗಲೇ ಇಲಾಖೆಗೆ ಅರ್ಜಿ ಸಲ್ಲಿಸಿರುವ ಫಲಾನುಭವಿಗಳು ಆಸಕ್ತಿ ಇದ್ದಲ್ಲಿ ಪುನಃ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.:9448273093, ಟಿ.ನರಸೀಪುರ :9164562927, ನಂಜನಗೂಡು 9731357199, ಹುಣಸೂರು, ಪಿರಿಯಾಪಟ್ಟಣ: 6362209792, ಕೆ.ಆರ್‌ನಗರ ಹಾಗೂ ಎಚ್‌ಡಿಕೋಟೆ: 7829028415 ಹಾಗೂ ಮೈಸೂರು ಜಿಲ್ಲೆಯ ಮೀನುಗಾರಿಕೆ ಉಪ ನಿರ್ದೇಶಕರ ಮೊ: 9448425462 ಅನ್ನು ಸಂಪರ್ಕಿಸಬಹುದು.

ಪಡುವಾರಹಳ್ಳಿಯಲ್ಲಿ ದೇವರಾಜ ಅರಸು ಜಯಂತಿ ಆಚರಣೆ



ಮೈಸೂರಿನ ಪಡುವಾರಹಳ್ಳಿಯಲ್ಲಿ ಡಿ.ದೇವರಾಜ ಅರಸು ಅವರ ಜಯಂತಿ ಆಚರಿಸಲಾಯಿತು.

ಮೈಸೂರು, ಆ.20(ಎಸ್‌ಬಿಡಿ)– ಮೈಸೂರಿನ ಪಡುವಾರಹಳ್ಳಿ(ವಿನಾಯಕ ನಗರ)ಯಲ್ಲಿ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರ 109ನೇ ಜಯಂತಿ ಆಚರಿಸಲಾಯಿತು.

ಈ ವೇಳೆ ದಿ ಮೈಸೂರು ಕೋಆಪರೇಟಿವ್ ಬ್ಯಾಂಕಿನ ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ಕೆ.ಉಮಾಶಂಕರ್ ಮಾತನಾಡಿ, ಡಿ.ದೇವರಾಜ ಅರಸರು ಶೋಷಿತರ ಒಡಲ ನೋವು ಹಾಗೂ ಅವರ ನಾಡಿಮಿಡಿತವನ್ನು ಅರಿತು ಆಡಳಿತ ನಡೆಸಿದರು. ರಾಜಕೀಯ, ಸಾಮಾಜಿಕ, ಆರ್ಥಿಕ ಸುಧಾರಣೆಗೆ ಆದ್ಯತೆ ನೀಡುವ ಮೂಲಕ ನೊಂದವರ ಪಾಲಿನ ಧ್ವನಿಯಾದರು ಎಂದು ಬಣ್ಣಿಸಿದರು.

ಅರಸರು ಮುಖ್ಯಮಂತ್ರಿಯಾಗಿದ್ದಾಗ ಕಂದಾಯ ಸಚಿವರಾಗಿದ್ದ ಹುಚ್ಚಮಾಸ್ತಿಗೌಡರೊಂದಿಗೆ ದಿಟ್ಟ ನಿರ್ಧಾರ ಕೈಗೊಂಡು ಉಳುವವನೇ ಭೂಮಿ ಒಡೆಯ ಕಾಯ್ದೆಯನ್ನು ರಾಜ್ಯದಲ್ಲಿ ಅನುಷ್ಠಾನಕ್ಕೆ ತಂದರು. ಶತಮಾನಗಳಿಂದ ನೊಂದು–ಬೆಂದಿದ್ದವರ ಹಸಿವು ನೀಗಿದರು. ಈ ಮೂಲಕ ದೇಶದಲ್ಲೇ ಸಾಮಾಜಿಕ ಕ್ರಾಂತಿ ಆರಂಭಿಸಿದರು. ಕರ್ನಾಟಕದ ಪ್ರಥಮ ಹಿಂದುಳಿದ ವರ್ಗಗಳ ಆಯೋಗವನ್ನು ಎಲ್.ಜಿ.ಹಾವನೂರ್ ನೇತೃತ್ವದಲ್ಲಿ ರಚಿಸುವ ಮೂಲಕ ಹಿಂದುಳಿದ ವರ್ಗಗಳ ಜಾಗೃತಿಗೆ ಮುನ್ನುಡಿ ಬರೆದಿದ್ದು ಸದಾ ಸ್ಮರಣೀಯ ಎಂದರು.

ಚಾಮರಾಜ ಕ್ಷೇತ್ರದ ಬಿಜೆಪಿ ಮುಖಂಡ ಎಲ್.ಚೌಡಪ್ಪ ಮಾತನಾಡಿ, ಹಿಂದೆ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ, ಕನ್ನಡವನ್ನು ಅಧಿಕೃತ ಆಡಳಿತ ಭಾಷೆಯಾಗಿ ಮಾಡಿದ ಕೀರ್ತಿ ಅರಸರಿಗೆ ಸಲ್ಲುತ್ತದೆ. ಸದಾ ಬಡವರ ಪರವಾಗಿ ಕೆಲಸ ಮಾಡಿದ ಅರಸರಿಗೆ ಅವರೇ ಸಾಟಿ ಎಂದು ಸ್ಮರಿಸಿಕೊಂಡರು.

ಈ ವೇಳೆ ಬಿಜೆಪಿ ಮೈಸೂರು ನಗರ ಎಸ್.ಟಿ.ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ನಗರ ಕಾಂಗ್ರೆಸ್ ಉಪಾಧ್ಯಕ್ಷ ಟಿ.ಸುಂದರ್ ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಎಂ.ಚಿಕ್ಕವೆಂಕಟು, ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕರಾದ ಸಿ.ರೇವಣ್ಣ, ಎಸ್.ಶಿಲ್ಪ ಸೋಮಣ್ಣ, ಹರೀಶ್ ರೆಡ್ಡಿ, ಚೆಲುವರಾಜ ಕುಮಾರ್, ಯೋಗಾ ನರಸಿಂಹೇಗೌಡ, ಚಾಮ, ಯತೀಶ್, ಧರಣಿ ವೆಂಕಟೇಶ, ವಿಕ್ರಮ್, ಅಜಯ್‌ಶಾಸ್ತ್ರಿ, ಟೆನ್ನಿಸ್ ಗೋಪಿ, ಈ.ಬಸವರಾಜ್, ಸಿ.ಸಂತೋಷ್, ಕೇಬಲ್ ಕಿಟ್ಟಿ ವೇಣು ಮತ್ತಿತರರು ಉಪಸ್ಥಿತರಿದ್ದರು.

ಭದ್ರತೆ ಹೆಚ್ಚಿಸುವಂತೆ ಕೇಂದ್ರ ಸರ್ಕಾರಿ ಆಸ್ಪತ್ರೆಗಳಿಗೆ ಕೇಂದ್ರ ಆರೋಗ್ಯ ಸಚಿವಾಲಯ ಸೂಚನೆ

ನವದೆಹಲಿ: ಏಮ್ಸ್ ಸೇರಿದಂತೆ ಎಲ್ಲಾ ಕೇಂದ್ರ ಸರ್ಕಾರಿ ಆಸ್ಪತ್ರೆಗಳು ಮತ್ತು ವೈದ್ಯಕೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುವ ಮಹಿಳಾ ಆರೋಗ್ಯ ಸಿಬ್ಬಂದಿಗೆ ಹೆಚ್ಚಿನ ಭದ್ರತೆ ನೀಡಲಾಗುವುದು ಎಂದು ಕೇಂದ್ರ ಆರೋಗ್ಯ ಸಚಿವಾಲಯ ಮಂಗಳವಾರ ತನ್ನ ಪತ್ರದಲ್ಲಿ ತಿಳಿಸಿದೆ.

ರಾತ್ರಿ ವೇಳೆ ಮಹಿಳಾ ಸಿಬ್ಬಂದಿಯ ಪ್ರಯಾಣಕ್ಕಾಗಿ ಸೂಕ್ತ ಸುರಕ್ಷಿತ ಸಾರಿಗೆಯನ್ನು ಸಹ ಒದಗಿಸಲಾಗುತ್ತದೆ. ಇದಲ್ಲದೆ, ರಾತ್ರಿ ಪಾಳಿಯಲ್ಲಿ ಒಂದಕ್ಕಿಂತ ಹೆಚ್ಚು ಮಹಿಳಾ ಆರೋಗ್ಯ ಸಿಬ್ಬಂದಿಯನ್ನು ನಿಯೋಜಿಸಲಾಗುವುದು ಮತ್ತು ಆಸ್ಪತ್ರೆಯ ಆವರಣದಲ್ಲಿ, ವಿಶೇಷವಾಗಿ ಮಹಿಳಾ ಆರೋಗ್ಯ ಸಿಬ್ಬಂದಿ ಕೆಲಸ ಮಾಡುವ ಸ್ಥಳಗಳಲ್ಲಿ ಸಾಕಷ್ಟು ಬೆಳಕನ್ನು ಒದಗಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಅಪರಿಚಿತ ವ್ಯಕ್ತಿ ಸಾವು

ಮೈಸೂರು,ಆ.20(ಆರ್‌ಕೆ)–ಮೈಸೂರಿನ ಕೆಆರ್ ಆಸ್ಪತ್ರೆಗೆ ದಾಖಲಿಸಿದ್ದ ಅಪರಿಚಿತ ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ. ಆಗಸ್ಟ್ 15ರಂದು ಶ್ರೀರಂಗಪಟ್ಟಣ ರೈಲು ನಿಲ್ದಾಣದಲ್ಲಿ ನಿತ್ರಾಣವಾಗಿ ಬಿದ್ದಿದ್ದ ವ್ಯಕ್ತಿಯನ್ನು ರೈಲ್ವೆ ಪೊಲೀಸರು ಕೆಆರ್ ಆಸ್ಪತ್ರೆಗೆ ಕರೆತಂದು ದಾಖಲಿಸಿದ್ದರಾದರೂ, ಚಿಕಿತ್ಸೆ ಫಲಕಾರಿಯಾಗದೇ ಇಂದು ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. 50 ವರ್ಷ ವಯಸ್ಸು, 5.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ದೃಢಕಾಯ ಶರೀರ, ದುಂಡು ಮುಖ ಹೊಂದಿರುವ ವ್ಯಕ್ತಿ ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರದಲ್ಲಿರಿಸಲಾಗಿದ್ದು, ವಾರಸುದಾರರಿದ್ದಲ್ಲಿ ಮೈಸೂರು ರೈಲ್ವೆ ಪೊಲೀಸ್ ಠಾಣೆ (0821–2516579, 9480802122) ಸಂಪರ್ಕಿಸಬೇಕೆಂದು ಕೋರಲಾಗಿದೆ.

ಶರಣ ಸಾಹಿತ್ಯ ಆರಾಧಕರಿಗೆ ಅಭಿನಂದನೆ...



ಮೈಸೂರಿನ ಬೋಗಾದಿಯ ಶಾರದಾನಗರ ರೈಲ್ವೆ ಬಡಾವಣೆಯ ಶರಣು ವಿಶ್ವವಚನ ಫೌಂಡೇಷನ್‌ನ ಶರಣು ಕುಟೀರಕ್ಕೆ ಭೇಟಿ ನೀಡಿದ ಜಮಖಂಡಿಯ ಶರಣ ಸಾಹಿತ್ಯ ಆರಾಧಕರಾದ ರಮೇಶ್ ಸತ್ಯಪ್ಪ ವಾಜಂತ್ರಿ ಮತ್ತು ನೀಲವ್ವ ರಮೇಶ್ ವಾಜಂತ್ರಿ ದಂಪತಿಯನ್ನು ಅಭಿನಂದಿಸಲಾಯಿತು. ಈ ವೇಳೆ ಫೌಂಡೇಷನ್ ಸಂಸ್ಥಾಪಕ ವಚನ ಕುಮಾರಸ್ವಾಮಿ, ರೂಪ ಕುಮಾರಸ್ವಾಮಿ, ಜಿಲ್ಲಾಧ್ಯಕ್ಷ ಅನಿಲ್‌ಕುಮಾರ್ ವಾಜಂತ್ರಿ, ನಿಜಗುಣ ಉಪಸ್ಥಿತರಿದ್ದರು.

ವಿಶ್ವ ಛಾಯಾಗ್ರಹಣ ದಿನಾಚರಣೆ; ಹಿರಿಯ ಛಾಯಾಗ್ರಾಹಕರಿಗೆ ಸನ್ಮಾನ



ಮೈಸೂರಿನ ಕುವೆಂಪುನಗರದ ಚಿಕ್ಕಮ್ಮಾನಿಕೇತನ ಕಲ್ಯಾಣ ಮಂಟಪದಲ್ಲಿ ನಡೆದ ವಿಶ್ವ ಛಾಯಾಗ್ರಹಣ ದಿನಾಚರಣೆಯಲ್ಲಿ ಹಿರಿಯ ಛಾಯಾಗ್ರಾಹಕರನ್ನು ಸನ್ಮಾನಿಸಲಾಯಿತು.

ಮೈಸೂರು,ಆ.20(ಪಿಎಂ)– ಮೈಸೂರು ಡಿಸ್ಟ್ರಿಕ್ಟ್ ಫೋಟೋಗ್ರಾಫರ್ಸ್ ಅಂಡ್ ವೀಡಿಯೋಗ್ರಾಫರ್ಸ್ ಅಸೋಸಿಯೇಷನ್ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಛಾಯಾಗ್ರಹಣ ದಿನಾಚರಣೆಯಲ್ಲಿ ಹಿರಿಯ ಛಾಯಾಗ್ರಾಹಕರನ್ನು ಶಾಸಕ ಜಿ.ಟಿ.ದೇವೇಗೌಡರು ಸನ್ಮಾನಿಸಿದರು.

ಮೈಸೂರಿನ ಕುವೆಂಪುನಗರದ ಚಿಕ್ಕಮ್ಮಾನಿಕೇತನ ಕಲ್ಯಾಣ ಮಂಟಪದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸಂತೋಷ್ ಫೋಟೋ ಮನೆಯ ಕೆ.ಜಿ.ಸಿದ್ದಲಿಂಗ ಪ್ರಸಾದ್, ಮೈಸೂರು ಪತ್ರಕರ್ತರ ಸಂಘದ ಕಾರ್ಯಕಾರಿ ಸಮಿತಿ ಸದಸ್ಯ ನಾರಾಯಣ್ (ನಾಣಿ ಹೆಬ್ಬಾಳ್), ನಿಧಿ ಫೋಟೋಗ್ರಫಿ ಮಂಜುನಾಥ್, ಎಂಎಂ ವಿಡಿಯೋ ರವಿಶಂಕರ್, ಗೌತಮ್ ಸ್ಟುಡಿಯೋ ಲಕ್ಷ್ಮೀನಾರಾಯಣ, ಎಂ.ಎಸ್.ಅನಿಲ್ ಕುಮಾರ್, ದೀಪಕ್ ಪಾರೇಖ್, ಅಶೋಕ್ ಕುಮಾರ್, ಸ್ಫೂರ್ತಿ ಸ್ಟುಡಿಯೋ ಶಿವಕುಮಾರ್, ಗಣೂಸ್ ಲೈಫ್ ಸ್ಟೈಲ್ ಸ್ಟುಡಿಯೋ ಗಣೇಶ್, ಶಂಕರ್ ಡಿಜಿಟಲ್ ಸ್ಟುಡಿಯೋ ನಾಗೇಂದ್ರಸ್ವಾಮಿ, ಹುಣಸೂರು ಜೋಸೆಫ್, ಕೆಆರ್ ನಗರ ಶಶಿಭೂಷಣ್, ಹೆಚ್‌ಡಿ ಕೋಟೆ ಹೊನ್ನೇಗೌಡ, ಭವ್ಯಶ್ರೀ ಸ್ಟುಡಿಯೋ ಮಹದೇವಪ್ಪ ಅವರನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಛಾಯಾಗ್ರಾಹಕರ ಪ್ರತಿಭಾನ್ವಿತ ಮಕ್ಕಳಿಗೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪ್ರತಿಭಾ ಪುರಸ್ಕಾರ ನೀಡಿದರು. ಇದಕ್ಕೂ ಮುನ್ನ ಕ್ಯಾಮರಾ ಕ್ಲಿಕ್ ಮಾಡುವ ಮೂಲಕ ಸಮಾರಂಭ ಉದ್ಘಾಟಿಸಿದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಛಾಯಾಗ್ರಹಣವು ಸಮಾಜದಲ್ಲಿ ಗೌರವವನ್ನು ತಂದು ಕೊಡುವ ಜವಾಬ್ದಾರಿಯುತ ವೃತ್ತಿ. ಇತಿಹಾಸ ದಾಖಲಿಸಲು, ಸೌಂದರ್ಯದ ಕ್ಷಣಗಳನ್ನು ಸೆರೆಹಿಡಿಯಲು ಮತ್ತು ಸೃಜನಶೀಲತೆ ವ್ಯಕ್ತಪಡಿಸಲು ಛಾಯಾಗ್ರಹಣ ಒಂದು ಉತ್ತಮ ಕಲೆ. 100 ಪದಗಳಲ್ಲಿ ಹೇಳುವುದನ್ನು ಕೇವಲ ಒಂದು ಛಾಯಾಚಿತ್ರ ಹೇಳುತ್ತದೆ. ಅದರಲ್ಲಿನ ಅಂಶಗಳನ್ನು ಅರಿಯಲು ಯಾವುದೇ ಭಾಷೆ ಅಂಗಿಲ್ಲ. ಇದರಿಂದಲೇ ಛಾಯಾಗ್ರಾಹಣ ಮಹತ್ವ ಅರಿವಾಗುತ್ತದೆ ಎಂದು ತಿಳಿಸಿದರು.

ಒಂದು ಚಿತ್ರ ತೆಗೆಯಲು ಕ್ಷಣ ಮಾತ್ರವೇ ಸಾಕು. ಆದರೆ ತಾಳ್ಮೆ–ಸಹನೆಯಿಂದ ತಮ್ಮ ಅಮೂಲ್ಯ ಸಮಯವನ್ನು ವ್ಯಯಿಸಿ ಅತ್ಯುತ್ತಮ ಚಿತ್ರಗಳನ್ನು ಸೆರೆ ಹಿಡಿಯುವುದು ಛಾಯಾಗ್ರಾಹಣದ ಅದ್ಭುತ ಕಲೆ. ಸಪ್ಪೆಮೋರೆ ಹಾಕಿಕೊಂಡವರೂ ಮೊಗದಲ್ಲೂ ನಗು ತರಿಸುವ ಸಾಮರ್ಥ್ಯ ಇರುವುದು ಛಾಯಾಗ್ರಾಹಕರಿಗೆ ಮಾತ್ರವೇ. ಹಾಗಾಗಿ ಛಾಯಾಗ್ರಾಹಕರು ತಮ್ಮ ಕಲೆ ಪ್ರದರ್ಶಿಸಲು ಈ ದಿನ ಅತ್ಯಂತ ಮಹತ್ವದ್ದಾಗಿದೆ. ಛಾಯಾಗ್ರಹಣ ವೃತ್ತಿ ನಂಬಿ ಕೆಟ್ಟವರಿಲ್ಲ. ಆದರೆ ವೃತ್ತಿ ಗೌರವ, ತಾಳ್ಮೆ ಸಹನೆ ಆಯಾಯ ಸಂದರ್ಭಕ್ಕೆ ತಕ್ಕಂತೆ ಹೊಸ ತಂತ್ರಜ್ಞಾನಕ್ಕೆ ಹೊಂದಿಕೊಂಡು ಹೋಗುವ ಗುಣ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವನ್ಯಜೀವಿ ಛಾಯಾಗ್ರಾಹಕ ಕೃಪಾಕರ್, ನ್ಯೂ ಪ್ರಿನ್ಸ್ ಕಲರ್ ಲ್ಯಾಬ್‌ನ ಸೋಮಸುಂದರ್, ಮಹದೇವಸ್ವಾಮಿ, ಅಸೋಸಿಯೇಷನ್ ಅಧ್ಯಕ್ಷ ಮಹೇಶ್ ದಡದಹಳ್ಳಿ, ಕಾರ್ಯದರ್ಶಿ ಸುದರ್ಶನ್, ಸಹ ಕಾರ್ಯದರ್ಶಿ ಆರ್.ಪ್ರಮೋದ್, ಉಪಾಧ್ಯಕ್ಷ ಮಂಜುನಾಥ್, ಖಜಾಂಚಿ ಮಾದೇಶ್, ಆರೋಗ್ಯ ನಿಧಿ ಅಧ್ಯಕ್ಷ ಶಿವಕುಮಾರ್, ಜನ ಸಂಪರ್ಕಾಧಿಕಾರಿ ಚೈತನ್ಯ ರಾವ್, ನಿರ್ದೇಶಕರಾದ ಮೋಹನ್, ಲೋಕೇಶ್, ಉಮೇಶ್, ಮಂಜುನಾಥ್, ರವಿಚಂದ್ರ, ಕಾಂತರಾಜ್ ಮತ್ತಿತರರು ಹಾಜರಿದ್ದರು.

ಡಿ.ದೇವರಾಜ ಅರಸು ಚಿಂತನೆ, ಆದರ್ಶವನ್ನು ಅಳವಡಿಸಿಕೊಳ್ಳಿ

ಮಂಡ್ಯ, ಆ.20– ಪ್ರತಿಯೊಬ್ಬರೂ ಕೂಡ ಸಾಮಾಜಿಕ ಹರಿಕಾರ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ ಚಿಂತನೆ ಹಾಗೂ ಆದರ್ಶಗಳನ್ನು ತಮ್ಮ ವೈಯಕ್ತಿಕ ಬದುಕಿನಲ್ಲಿ ಅಳವಡಿಸಿಕೊಳ್ಳಿ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಸಲಹೆ ನೀಡಿದರು.

ಮಂಗಳವಾರ ನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಸಾಮಾಜಿಕ ಪರಿವರ್ತನೆಯ ಹರಿಕಾರ, ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ ದೇವರಾಜ ಅರಸು ಅವರ 109 ನೇ ಜನ್ಮ ದಿನಾಚರಣೆಯನ್ನು ದೀಪ ಬೆಳಗಿಸುವುದರ ಮುಖಾಂತರ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ.ದೇವರಾಜು ಅರಸು ಅವರನ್ನು ಅವರು ಕೇವಲ ಒಬ್ಬ ರಾಜಕಾರಣಿ ಅಲ್ಲ, ಆದರ್ಶ ವ್ಯಕ್ತಿತ್ವವುಳ್ಳವರು, ಅವರ ಚಿಂತನೆಯಲ್ಲಿ, ಸಮಾಜವಾದಿ ತತ್ವ, ಅಭಿವೃದ್ಧಿಪರ ಚಿಂತನೆ, ಸಾಮಾಜಿಕ ನ್ಯಾಯ ಹಾಗೂ ಸಾಮಾಜಿಕ ಸುಧಾರಣೆಯಂತಹ ದೃಷ್ಟಿಕೋನವನ್ನು ಇಟ್ಟುಕೊಂಡಿದ್ದವರು. ಅವರನ್ನು ಒಬ್ಬ ಮಹಾನ್ ಧೀಮಂತ ನಾಯಕ ಎಂದು ಕರೆಯಬಹುದು ಎಂದರು.

ಕರ್ನಾಟಕ ರಾಜ್ಯದಲ್ಲಿ ಸುಮಾರು 8 ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ ಅರಸು ಅವರು, ಕೇವಲ ರಾಜಕೀಯ ಚಿಂತನೆಯಲ್ಲದೆ ಕರ್ನಾಟಕ ರಾಜ್ಯಕ್ಕೆ ಆರ್ಥಿಕ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿಪಥದ ಯೋಜನೆ ಹಾಕಿಕೊಟ್ಟಂತಹ ವ್ಯಕ್ತಿ. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿದವರು ಅರಸು. ಇಂದು ಕರ್ನಾಟಕ ರಾಜ್ಯದ ಸಂಭ್ರಮ 50ರ ಗಡಿ ದಾಟಿದ ಸಂಭ್ರಮದಲ್ಲಿ ನಾವಿದ್ದೇವೆ. 50 ವರ್ಷಗಳ ಹಿಂದೆ ಅವರು ಹಾಕಿಕೊಟ್ಟಿರುವ ಚಿಂತನೆಗಳು ಹಾಗೂ ಕೊಡುಗೆಗಳು ಇವತ್ತಿಗೂ ಪ್ರಸ್ತುತ. ಹೀಗಾಗಿ, ನಾವು ಅವರನ್ನು ಇಂದಿಗೂ ಪೂಜ್ಯ ಭಾವನೆಯಿಂದ ಕಾಣುತ್ತೇವೆ ಎಂದು ಹೇಳಿದರು.

ಅರಸು ಅವರು ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಬಹಳ ಶ್ರಮಿಸಿದ್ದಾರೆ. ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ಮೊಟ್ಟ ಮೊದಲು ಇವರು ಸ್ಥಾಪನೆ ಮಾಡಿ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಮೀಸಲಾತಿ ಇರಬೇಕು, ಗ್ರಾಮೀಣ ಪ್ರದೇಶದ ಮಕ್ಕಳು ಓದಿ ಉನ್ನತ ಸಾಧನೆ ಮಾಡಬೇಕು ಎಂಬ ನಿಟ್ಟಿನಲ್ಲಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ವಸತಿ ನಿಲಯವನ್ನು ಸ್ಥಾಪಿಸಿದರು. ಇಂದಿಗೂ ಅವರ ಹೆಸರಿನಲ್ಲಿ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದರು.

ಮೈಸೂರು ವಿಶ್ವ ವಿದ್ಯಾನಿಲಯದ ಮಾಜಿ ಸಿಂಡಿಕೇಟ್ ಸದಸ್ಯ ಹೆಚ್.ಎ.ವೆಂಕಟೇಶ್ ಮಾತನಾಡಿದರು. ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಹಿಂದುಳಿದ ವರ್ಗಗಳ ವಸತಿ ನಿಲಯದ ವಿದ್ಯಾರ್ಥಿಗಳಾದ ಮೋಹನ್ ವಿ, ಕಾವ್ಯ ಅವರನ್ನು ಸನ್ಮಾನಿಸಲಾಯಿತು. ಕಳೆದ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಹಿಂದುಳಿದ ವರ್ಗಗಳ ವಸತಿ ನಿಲಯದ ವಿದ್ಯಾರ್ಥಿಗಳಾದ ನಿತಿನ್ ಎ, ಶ್ರೇಯಸ್ ಗೌಡ ಅವರನ್ನು ಸನ್ಮಾನಿಸಲಾಯಿತು. ವಿವಿಧ ರೀತಿಯ ಕ್ರೀಡಾಕೂಟದಲ್ಲಿ ವಿಜೇತರಾದ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಾದ ಪ್ರೀತಮ್ ಗೌಡ, ಮನೀಶ್ ಗೌಡ, ಪುಣ್ಯಶ್ರೀ, ಸೌಮ್ಯ, ಯಶಸ್ವಿನಿ, ಭೂಮಿಕಾ, ಮಧುಸೂದನ ವಿ, ಸ್ಪಂದನ ಅವರುಗಳನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಡಿ.ದೇವರಾಜ ಅರಸು ವೇದಿಕೆ ಅಧ್ಯಕ್ಷ ಎಲ್.ಸಂದೇಶ್, ದೇವರಾಜ ಅರಸು ಪ್ರತಿಷ್ಠಾನ ಅಧ್ಯಕ್ಷರಾದ ವಿ.ಅಂಜನಪ್ಪ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಎಮ್.ಎನ್.ಸುರೇಶ್, ಮುಡಾ ಸದಸ್ಯ ಎನ್ ದೊಡ್ಡಯ್ಯ, ಜಿಲ್ಲಾ ಕಸಾಪ ಜಿಲ್ಲಾ ಅಧ್ಯಕ್ಷರಾದ ಎಂ.ಡಿ ಸತೀಶ್, ಜಿಲ್ಲಾ ಮಡಿವಾಳ ಅಧ್ಯಕ್ಷರಾದ ಸಿದ್ದಶೆಟ್ಟಿ, ಹಿಂದುಳಿದ ವರ್ಗಗಳ ಮುಖಂಡ ರಮೇಶ್ ಸೇರಿದಂತೆ ವಿವಿಧ ಸಂಘಟನೆಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಮುಖಂಡರುಗಳು ಉಪಸ್ಥಿತರಿದ್ದರು.



ಡಿ ದೇವರಾಜ ಅರಸು ಅವರ ಜನ್ಮ ದಿನವನ್ನು ಆಚರಿಸಲಾಯಿತು.

ಇಂದು ನಾನು ಈ ವೇದಿಕೆಯ ಮೇಲೆ ಜಿಲ್ಲಾಧಿಕಾರಿಯಾಗಿ ಮಾತನಾಡುತ್ತಿದ್ದೀನಿ ಎಂದರೆ ಅದಕ್ಕೆ ಬಹುಮುಖ್ಯ ಕಾರಣ ನಾನು ಓದಿ ಬೆಳೆದಂತಹ ಬಿಸಿಎಂ ಹಾಸ್ಟೆಲ್. ಏಕೆಂದರೆ ಒಂದು ವೇಳೆ ನನಗೆ ಬಿಸಿಎಂ ಹಾಸ್ಟೆಲ್‌ನಲ್ಲಿ ಸೀಟು ಸಿಗದಿದ್ದರೆ, ಕಲಿಯುವ ಸೌಲಭ್ಯ ಇಲ್ಲದಿದ್ದರೆ, ನಾನು ಹಳ್ಳಿಯಿಂದ ಬಂದು ನಗರದಲ್ಲಿ ಓದಲಿಕ್ಕೆ ಸಾಧ್ಯವಾಗುತ್ತಿರಲಿಲ್ಲ. ಇಡೀ ನನ್ನ ಶಿಕ್ಷಣವನ್ನು ನಾನು ಬಿಸಿಎಂ ಹಾಸ್ಟೆಲ್‌ನಲ್ಲಿ ಪಡೆದಿದ್ದೇನೆ. ನಾನು ಈ ಹಾಸ್ಟೆಲ್ ಅನ್ನು ಕೇವಲ ಕಟ್ಟಡ ಎಂದು ನೋಡುವುದಿಲ್ಲ. ಅದೊಂದು ಜ್ಞಾನದ ದೇಗುಲ ಎಂದು ಭಾವಿಸುತ್ತಿದ್ದೇನೆ.

- ಡಾ. ಕುಮಾರ್, ಜಿಲ್ಲಾಧಿಕಾರಿ.

ಶ್ರೀರಂಗಪಟ್ಟಣದಲ್ಲಿ ವಿಶ್ವ ಸೊಳ್ಳೆ ದಿನ ಆಚರಣೆ



ತಾಲೂಕು ಮಟ್ಟದ ವಿಶ್ವ ಸೊಳ್ಳೆ ದಿನಾಚರಣೆ ಕಾರ್ಯಕ್ರಮವನ್ನು ತಾಲೂಕು ಆರೋಗ್ಯಾಧಿಕಾರಿ ಡಾ. ಡಿ.ಟಿ. ಮಂಜುನಾಥ್ ಉದ್ಘಾಟಿಸಿದರು.


ಶ್ರೀರಂಗಪಟ್ಟಣ, ಆ.20– ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಸಾರ್ವಜನಿಕ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಶ್ರೀರಂಗಪಟ್ಟಣದ ಜ್ಯೋತಿ ನಿವಾಸ್ ವಿದ್ಯಾ ಸಂಸ್ಥೆಯಲ್ಲಿ ತಾಲೂಕು ಮಟ್ಟದ "ವಿಶ್ವ ಸೊಳ್ಳೆ ದಿನಾಚರಣೆ" ಕಾರ್ಯಕ್ರಮವನ್ನು ತಾಲೂಕು ಆರೋಗ್ಯಾಧಿಕಾರಿ ಡಾ. ಡಿ.ಟಿ. ಮಂಜುನಾಥ್ ಉದ್ಘಾಟಿಸಿದರು.

ನಂತರ ತಾಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಿ ಮೋಹನ ಮಾತನಾಡಿ, ಸೊಳ್ಳೆಗಳ ಜೀವನ ಚಕ್ರ, ಸೊಳ್ಳೆಗಳ ನಿಯಂತ್ರಣ ವಿಧಾನಗಳಾದ ಭೌತಿಕ ವಿಧಾನ, ರಾಸಾಯನಿಕ ವಿಧಾನ ಹಾಗೂ ಜೈವಿಕ ವಿಧಾನಗಳ ಬಗ್ಗೆ ವಿದ್ಯಾರ್ಥಿಗಳಿಗೆ ವಿವರವಾಗಿ ಪಿಪಿಟಿ ಮೂಲಕ ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಸೊಳ್ಳೆಗಳ ಜೀವನ ಚಕ್ರ ಹಂತಗಳಾದ ಲಾರ್ವ, ಪ್ಯೂಪ ಹಾಗೂ ವಯಸ್ಕ ಸೊಳ್ಳೆಗಳ ಹಾಗೂ ಲಾರ್ವ ಹಾರಿ ಮೀನುಗಳಾದ ಗ್ಯಾಂಬೂಸಿಯ ಮತ್ತು ಗಪ್ಪಿ ಮೀನುಗಳನ್ನು ಪ್ರಾತ್ಯಕ್ಷಿಕೆ ಮೂಲಕ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಲಾಯಿತು. ನಂತರ ತಾಲೂಕು ಪ್ರಭಾರ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಬಿ ಮಂಗಳ ಸೊಳ್ಳೆಗಳ ನಿಯಂತ್ರಣ ಕುರಿತು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಾಂಶುಪಾಲ ಸೋಜಿ ಜೇಕಬ್, ಉಪನ್ಯಾಸಕರಾದ ಜಬಿವುಲ್ಲಾ, ಪುಟ್ಟಸ್ವಾಮಿ, ನಮಿತಾ, ಪೂಜಾ, ಜಿಲ್ಲಾ ಮೇಲ್ವಿಚಾರಕ ಎಂ ಶಿವಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಸಿ. ಚಂದನ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಬಿ.ಮಂಗಳ, ಎಂ. ಮಹದೇವಮ್ಮ ಹಾಗೂ ಶಾಲಾ–ಕಾಲೇಜು ಮಕ್ಕಳು ಉಪಸ್ಥಿತರಿದ್ದರು.

ಪಾಂಡವಪುರದಲ್ಲಿ ಡಿ. ದೇವರಾಜ ಅರಸು ಜಯಂತಿ ಆಚರಣೆ

ಹಲವಾರು ಜನಪರ ಕೆಲಸ ಮಾಡಿ, ಸುಧಾರಣೆ ತಂದ ಧೀಮಂತ ನಾಯಕ



ಪಾಂಡವಪುರ ಪಟ್ಟಣದ ಬಿಸಿಎಂ ಹಾಸ್ಟೆಲ್ ಆವರಣದಲ್ಲಿ ನಡೆದ ಡಿ.ದೇವರಾಜ ಅರಸು ಜಯಂತಿಯನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯ ಉದ್ಘಾಟಿಸಿದರು.

ಪಾಂಡವಪುರ, ಆ.20– ಡಿ.ದೇವರಾಜ ಅರಸು ದೇಶಕಂಡ ಉತ್ತಮ ಆಡಳಿತಗಾರ, ಸಾಮಾಜಿಕ ಸುಧಾರಣೆ ಮೂಲಕ ತಳ ಸಮುದಾಯದ ಏಳಿಗೆಗೆ ಸಹಕರಿಸಿದ ಶ್ರಮಿಸಿದ ಹಿಂದುಳಿದ ವರ್ಗಗಳ ನಾಯಕ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಬಣ್ಣಿಸಿದ್ದಾರೆ.

ಪಟ್ಟಣದ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ತಾಲೂಕು ಆಡಳಿತ, ತಾಪಂ, ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ನಡೆದ ಡಿ.ದೇವರಾಜಅರಸು ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಡಿ.ದೇವರಾಜ ಅರಸು ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಹಲವಾರು ಜನಪರವಾದ ಯೋಜನೆ ತಂದು ಹಲವು ಕಾಯ್ದೆಗಳಿಗೆ ಸುಧಾರಣೆ ತಂದರು. ಸಾಮಾಜಿಕ ಸುಧಾರಣೆಯ ಬಗ್ಗೆ ಸಾಕಷ್ಟು ಕಳಕಳಿಹೊಂದಿದ್ದ ಇವರು ಸಮಾಜದಲ್ಲಿ ಸಾಮಾಜಿಕ ಸುಧಾರಣೆ ಮಾಡುವುದು ಹೇಗೆ ಎನ್ನುವುದನ್ನು ತೋರಿಸಿಕೊಟ್ಟಿದ್ದಾರೆ ಎಂದರು. ಐದು ವರ್ಷಗಳ ಮುಖ್ಯಮಂತ್ರಿಯಾಗಿ ಅಧಿಕಾರ ಪೂರೈಸಿದ ಮೊದಲ ಮುಖ್ಯಮಂತ್ರಿಯಾಗಿದ್ದರು. ವ್ಯವಸ್ಥೆ ಹದಗೆಟ್ಟಿದೆ, ಹಾಗಾಗಿ ವಿದ್ಯಾರ್ಥಿಗಳು ವ್ಯವಸ್ಥೆಯನ್ನು ಸರಿಪಡಿಸಲು ಎಲ್ಲರೂ ಒಗ್ಗಟ್ಟಿನ ಹೋರಾಟ ನಡೆಸಬೇಕಾಗಿದೆ. ವಿದ್ಯಾರ್ಥಿಗಳು ಅರಸು ಅವರು ನಡೆದು ಬಂದ ದಾರಿ, ಸತ್ಯ, ಧರ್ಮವನ್ನು ಅಳವಡಿಸಿಕೊಂಡು ಮುನ್ನಡೆಯಬೇಕು. ಇಲ್ಲಿರುವ ಯಾರಾದರೂ ಒಬ್ಬರು ದೇವರಾಜು ಅರಸು ಅವರಂತಾಗಬೇಕು ಎಂದರು.

ತಹಶೀಲ್ದಾರ್ ಸಂತೋಷ್ ಮಾತನಾಡಿ, ದೇವರಾಜ ಅರಸು ದೇಶಕಂಡ ಧೀಮಂತ ರಾಜಕಾರಣಿ, ಇವರು ಮುಖ್ಯಮಂತ್ರಿಯಾಗಿ ಸಾಕಷ್ಟು ಜನಪರವಾದ ಕೆಲಸ ಮಾಡಿದ್ದಾರೆ. ಇವರ ಅವಧಿಯಲ್ಲಿ ಉಳುವವನೆ ಭೂಮಿಯ ಒಡೆಯ ಕಾಯ್ದೆಗೆ ತಿದ್ದುಪಡಿ ತಂದು ಲಕ್ಷಾಂತರ ರೈತರಿಗೆ ಅನುಕೂಲ ಮಾಡಿಕೊಟ್ಟರು ಎಂದರು.

ಇದೇ ವೇಳೆ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಅಧಿಕ ಅಂಕಪಡೆದ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಾದ ಕೆ.ಎಲ್. ಚೇತನ್, ಮೋಹನ್, ಚಂದನ, ಭೂಮಿಕ ಅವರನ್ನು ಸನ್ಮಾನಿಸಲಾಯಿತು. ಇದೇ ವೇಳೆ ಹಿಂದುಳಿದ ವರ್ಗದ ಇಲಾಖೆಯ ವತಿಯಿಂದ ಶಾಸಕ ದರ್ಶನ್‌ಪುಟ್ಟಣ್ಣಯ್ಯ ಅವರನ್ನು ಅಭಿನಂಧಿಸಲಾಯಿತು.

ಈ ಸಂದರ್ಭದಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ, ಜೆಡಿಎಸ್ ತಾಲೂಕು ಅಧ್ಯಕ್ಷ ಎಸ್.ಎ.ಮಲ್ಲೇಶ್, ಬಿಜೆಪಿ ತಾಲೂಕು ಅಧ್ಯಕ್ಷ ಧನಂಜಯ, ರೈತಸಂಘದ ಅಧ್ಯಕ್ಷ ನಾಗರಾಜ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸತೀಶ್, ಪುರಸಭೆ ಮುಖ್ಯಾಧಿಕಾರಿ ಸತೀಶ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಮ್ಯಾನೇಜರ್ ಕೋಮಲ, ನಿಲಯ ಪಾಲಕರಾದ ಸಿ.ನಂದಕುಮಾರ್, ಚಂದ್ರಕಲಾ, ಕುಮಾರ್, ನಾಗರತ್ನ, ತೇಜಾವತಿ, ಪುರಸಭಾ ಸದಸ್ಯರಾದ ಅಶೋಕ್, ಜಯಲಕ್ಷ್ಮಿ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ನಾಗಶೆಟ್ಟಿ, ಕೃಷಿ ಸಹಾಯಕ ನಿರ್ದೇಶಕ ಮಂಜುನಾಥ್, ಪಶುಸಂಗೋಪನ ಇಲಾಖೆಯ ಅಧಿಕಾರಿ ಪ್ರಕಾಶ್, ಸಿಬ್ಬಂದಿಗಳಾದ ಅಶೋಕ್, ದಿನೇಶ್, ಕಾಂಗ್ರೆಸ್ ಮುಖಂಡ ಸಿ.ಆರ್.ರಮೇಶ್, ದಸಂಸ ಮುಖಂಡ ಅಂಕಯ್ಯ ಸೇರಿದಂತೆ ಹಲವರು ಇದ್ದರು.

ಕನ್ನಡ ಜಾಗೃತಿ ರಥ ಕೆ.ಆರ್.ಪೇಟೆ ತಾಲೂಕಿನಲ್ಲಿ ಸಂಚಾರ



ಕನ್ನಡ ಜಾಗೃತಿ ರಥ ಯಾತ್ರೆಗೆ ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಅವರು ವಿಶೇಷ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಸ್ವಾಗತಿಸಿದರು.

ಕೆ.ಆರ್.ಪೇಟೆ, ಆ.20– ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಬೋಗಾದಿ ಗ್ರಾಮದ ಮೂಲಕ ಕೆ.ಆರ್.ಪೇಟೆ ತಾಲೂಕಿನ ರಂಗನಾಥಪುರ ಕ್ರಾಸ್ ಗ್ರಾಪಂ ಪ್ರವೇಶಿಸಿದ ಕನ್ನಡ ಜಾಗೃತಿ ರಥವನ್ನು ಶಾಸಕ ಹೆಚ್.ಟಿ.ಮಂಜು, ತಹಶೀಲ್ದಾರ್ ಆದರ್ಶ, ತಾಪಂ ಇಓ ಸುಷ್ಮಾ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಗ್ರಾಪಂ ಅಧಿಕಾರಿಗಳು ಸಿಬ್ಬಂದಿಗಳು ವಿಶೇಷ ಪೂಜೆ ಸಲ್ಲಿಸಿ ಕನ್ನಡ ಜಾಗೃತಿ ರಥವನ್ನು ತಾಲ್ಲೂಕಿಗೆ ಬರಮಾಡಿಕೊಂಡರು.

ತಾಲೂಕಿನ ರಂಗನಾಥಪುರ ಕ್ರಾಸ್ ಗ್ರಾಪಂ ಆವರಣದಲ್ಲಿ ನಡೆದ ಕನ್ನಡ ಜಾಗೃತಿ ರಥಕ್ಕೆ ಶಾಸಕ ಹೆಚ್.ಟಿ.ಮಂಜು ಪೂಜೆ ಸಲ್ಲಿಸಿ ರಥಕ್ಕೆ ಭವ್ಯ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಸಾವಿತ್ರಮ್ಮ, ಉಪಾಧ್ಯಕ್ಷೆ ಸುಧಾ, ತಾ.ಪಂ.ಇಓ ಸುಷ್ಮಾ, ತಹಸೀಲ್ದಾರ್ ಲೋಕೇಶ್, ಪಿಡಿಓ ಕೆ. ವಿನೋದ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಶಾಂತವ್ವ ಮತ್ತಿತರರು ಉಪಸ್ಥಿತರಿದ್ದರು.

ಅಗ್ರಹಾರಬಾಚಹಳ್ಳಿ ಗ್ರಾ.ಪಂ: ತಾಲೂಕಿನ ಕಸಬಾ ಹೋಬಳಿಯ ಅಗ್ರಹಾರಬಾಚಹಳ್ಳಿ ಗ್ರಾಪಂ ವ್ಯಾಪ್ತಿಯ ಬಿ.ಕೋಡಿಹಳ್ಳಿ ಗ್ರಾಮಕ್ಕೆ ಆಗಮಿಸಿದ ಕನ್ನಡ ಜಾಗೃತಿ ರಥ ಯಾತ್ರೆಗೆ ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಅವರು ಭುನವೇಶ್ವರಿ ತಾಯಿಗೆ ವಿಶೇಷ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಿ ಸ್ವಾಗತಿಸಿದರು.

ಅಂಗನವಾಡಿ ಕಾರ್ಯಕರ್ತೆಯರು ಪೂರ್ಣಕುಂಭ ಹೊತ್ತು ರಥವನ್ನು ಸ್ವಾಗತಿಸಿದರು. ತಹಸೀಲ್ದಾರ್ ಲೋಕೇಶ್, ತಾಪಂ ಸಹಾಯಕ ನಿರ್ದೇಶಕ ಡಾ.ನರಸಿಂಹರಾಜು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಶಾಂತವ್ವ, ಗ್ರಾಪಂ ಉಪಾಧ್ಯಕ್ಷೆ ಸುನಿತಾದ್ಯಾವಯ್ಯ, ಪಿಡಿಓ ಹರ್ಷವರ್ಧನ್, ಕಾರ್ಯದರ್ಶಿ ಚಂದ್ರಕುಮಾರ್, ರಾಜಸ್ವ ನಿರೀಕ್ಷಕ ಜ್ಞಾನೇಶ್, ರಾಜಮೂರ್ತಿ, ಗ್ರಾಮ ಲೆಕ್ಕಾಧಿಕಾರಿ ಸುನಿಲ್, ಗ್ರಾಪಂ ಸದಸ್ಯರಾದ ಫಯಾಜ್ ಅಹಮದ್, ಆಶಾ ಆನಂದ್, ಶ್ರೀನಿವಾಸ್.ಆರ್, ಅಗ್ರಹಾರಬಾಚಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕ ಎ.ಹೆಚ್.ಯೋಗೇಶ್, ಸರ್ಕಾರಿ ಪ್ರೌಢಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಕುಮಾರ್, ತಾಲೂಕು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಡಿ.ಎಸ್.ವೇಣು, ತಾಲೂಕು ಕರವೇ ಅಧ್ಯಕ್ಷ ಎ.ಎಸ್.ಶ್ರೀನಿವಾಸ್, ತಾಲೂಕು ಜಯಕರ್ನಾಟಕ ಸಂಘಟನೆಯ ಅಧ್ಯಕ್ಷ ಹೆಚ್.ಆರ್.ಸೋಮಶೇಖರ್, ಮುಖಂಡರಾದ ಅರ್ಚಕ ಮಂಜುನಾಥ್, ಎ.ವಿ.ಕೃಷ್ಣ, ಅಂಗನವಾಡಿ ಶಿಕ್ಷಕಿಯರಾದ ಶಶಿಕಲಾ, ವಲ್ಲಿದೇವಿ, ಗ್ರಾಮಸ್ಥರು ಈ ಸಂದರ್ಭದಲ್ಲಿ ಭಾಗವಹಿಸಿದ್ದರು.

ಮಂಡ್ಯದಲ್ಲಿ ಬಿಜೆಪಿ ಯುವ ಮೋರ್ಚಾದಿಂದ ಪ್ರತಿಭಟನೆ



ಶಾಸಕ ಐವಾನ್ ಡಿಸೋಜಾ ವಿರುದ್ಧ ಬಿಜೆಪಿ ಜಿಲ್ಲಾ ಯುವ ಮೋರ್ಚಾ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಂಡ್ಯ, ಆ.20– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿರುದ್ಧ ಶಾಸಕ ಐವಾನ್ ಡಿಸೋಜಾ ಅವಹೇಳನಕಾರಿಯಾಗಿ ಮಾತನಾಡಿದ್ದಾರೆಂದು ಆರೋಪಿಸಿ ಬಿಜೆಪಿ ಜಿಲ್ಲಾ ಯುವ ಮೋರ್ಚಾ ಕಾರ್ಯಕರ್ತರು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಮಂಗಳೂರಿನಲ್ಲಿ ನಡೆದ ಪ್ರತಿಭಟನೆಯಲ್ಲಿ ಶಾಸಕ ಐವಾನ್ ಡಿಸೋಜಾ ರಾಜ್ಯಪಾಲರ ಬಗ್ಗೆ ಬಾಯಿಗೆ ಬಂದಂತೆ ಮಾತನಾಡಿದ್ದಾರೆ. ಇವರ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯಿಸಿ ಯುವ ಮೋರ್ಚಾ ಅಧ್ಯಕ್ಷ ಎಚ್.ಎಂ.ರಘುಗೌಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರಿಗೆ ಮನವಿ ನೀಡಿದರು.

ನಂತರ ಎಚ್.ಎಂ.ರಘುಗೌಡ ಮಾತನಾಡಿ, ಶಾಸಕರಾಗಿರುವ ಐವಾನ್ ಡಿಸೋಜಾ ಅವರು ಆ ಸ್ಥಾನಕ್ಕೆ ಗೌರವ ತರುವ ರೀತಿಯಲ್ಲಿ ಮಾತನಾಡದೆ, ಸಾಂವಿಧಾನಿಕ ಹುದ್ದೆಯಲ್ಲಿರುವವರು ಕಾನೂನಾತ್ಮಕವಾಗಿ ನಡೆದುಕೊಂಡಾಗ ಬಾಂಗ್ಲಾದೇಶದ ಪ್ರಧಾನಿ ರೀತಿ ಕರ್ನಾಟಕದಿಂದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಬಾಂಗ್ಲಾದೇಶದಿಂದ ಅಲ್ಲಿನ ಪ್ರಧಾನಿಯನ್ನು ಹೊರಹಾಕಿದಂತೆ ಕರ್ನಾಟಕದಿಂದ ಕಳುಹಿಸುತ್ತೇವೆ ಎಂದು ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ ಎಂದು ದೂರಿದರು.

ಸಂವಿಧಾನದಡಿಯಲ್ಲಿ ಕಾರ್ಯನಿರ್ವಹಿಸುವ ರಾಜ್ಯಪಾಲರ ಹುದ್ದೆಗೆ ಹಾಗೂ ದಲಿತ ಸಮುದಾಯದ ವ್ಯಕ್ತಿಗೆ ಇಂತಹ ಹೇಳಿಕೆ ನೀಡಿರುವ ಐವಾನ್ ಡಿಸೋಜಾ ವಿರುದ್ಧ ಪ್ರಕರಣ ದಾಖಲಿಸಬೇಕು. ರಾಜ್ಯಪಾಲರು ಸರ್ಕಾರದ ಗುಲಾಮರೇ ನಲ್ಲ. ಸರ್ಕಾರ ಏನೇ ಮಾಡಿದರೂ ನೋಡಿಕೊಂಡು ಕೂರುವುದಕ್ಕೆ ರಾಜ್ಯಪಾಲ ಸ್ಥಾನದಲ್ಲಿ ಕೂರಿಸಿಲ್ಲ. ಭ್ರಷ್ಟಾಚಾರ ನಡೆಸಿರುವವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮಂಜು, ಪ್ರದೀಪ್, ದಯಾಕರ್, ಮೋಹನ್, ನಾಗರಾಜು, ನಂದಿ, ಪ್ರಸನ್ನ, ಶಿವಕುಮಾರ್, ಚಂದ್ರು ಭಾಗವಹಿಸಿದ್ದರು.

ವೆಂಕಟಾಚಲಧಾಮದಲ್ಲಿ ವಿವಿಧ ಧಾರ್ಮಿಕ ಕಾರ್ಯ



ಶ್ರೀ ರಾಘವೇಂದ್ರ ಸ್ವಾಮಿಗಳ ಉತ್ತರ ಆರಾಧನಾ ಮಹೋತ್ಸವದ ಅಂಗವಾಗಿ ಮೈಸೂರಿನ ಚಾಮರಾಜ ಜೋಡಿ ರಸ್ತೆಯ ವೆಂಕಟಾಚಲ ಧಾಮದಲ್ಲಿ ಮಂಗಳವಾರ ಸಂಜೆ ಕೌಸಲ್ಯಾ ರಘುರಾಮ್ ತಂಡ ದೇವರ ನಾಮಗಳ ಗಾಯನ ಪ್ರಸ್ತುತಪಡಿಸಿತು.

ಮೈಸೂರು, ಆ.20– ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಉತ್ತರ ಆರಾಧನಾ ಮಹೋತ್ಸವದ ಅಂಗವಾಗಿ ಮೈಸೂರಿನ ಚಾಮರಾಜ ಜೋಡಿರಸ್ತೆ ಭಂಡಾರಕೇರಿ ಮಠದ ವೇಂಕಟಾಚಲ ಧಾಮದಲ್ಲಿ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಮಂಗಳವಾರ ಚಾಲನೆ ದೊರಕಿತು.

ಶ್ರೀ ವಿದ್ಯೇಶತೀರ್ಥ ಸ್ವಾಮೀಜಿ ಪ್ರತಿಷ್ಠಾಪಿಸಿರುವ ಶ್ರೀನಿವಾಸ ಮತ್ತು ಮೃತ್ತಿಕಾ ಸನ್ನಿಧಿ ಕ್ಷೇತ್ರದಲ್ಲಿ ರಾಯರ ವೃಂದಾವನಕ್ಕೆ ಬೆಳಗ್ಗೆ 7ಕ್ಕೆ ಅಷ್ಟೋತ್ತರ ಪಾರಾಯಣ ನಂತರ ಪಂಚಾಮೃತಾಭಿಷೇಕ ನೆರವೇರಿಸಲಾಯಿತು. ಇದೇ ವೇಳೆ ಪ್ರಧಾನ ಅರ್ಚಕರಾದ ರಾಘವೇಂದ್ರ ಆಚಾರ್ಯರ ನೇತೃತ್ವದಲ್ಲಿ ವೃಂದಾವನ ಪೂಜೆ, ವಿಶೇಷ ಹೂವಿನ ಅಲಂಕಾರ, ಮಹಾಮಂಗಳಾರತಿ ನೆರವೇರಿತು. ನೂರಾರು ಭಕ್ತರು ಸಾಕ್ಷಿಯಾಗಿ, ಪುನೀತರಾದರು.

ಅರ್ಚಕ ಗಿರೀಶ ಆಚಾರ್ಯರ ಮಾರ್ಗದರ್ಶನದಲ್ಲಿ ಭಕ್ತರಿಂದ ರಾಯರ ಪಾದುಕೆಗಳಿಗೆ ಪಾದಪೂಜೆ, ಕನಕಾಭಿಷೇಕ ಜರುಗಿತು. ಈ ವೇಳೆ ಶ್ರೀ ಸತ್ಯಧ್ಯಾನ ಭಜನಾ ಮಂಡಳಿಯ 30ಕ್ಕೂ ಹೆಚ್ಚು ಮಹಿಳೆಯರು ದಾಸರ ಪದಗಳನ್ನು ಹಾಡಿ ಭಕ್ತಿಸುಧೆ ಹರಿಸಿದರು. ಭಕ್ತರು ರಥೋತ್ಸವ ಸೇವೆ ಮೂಲಕ ಭಕ್ತಿಭಾವ ಮೆರೆದರು. ನಂತರ ನೂರಾರು ಜನರಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

ದೇವರನಾಮ: ಆರಾಧನಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಸಾಂಸ್ಕೃತಿಕ ಕಾರ್ಯಕ್ರಮ ಸರಣಿಯಲ್ಲಿ ಮಂಗಳವಾರ ಸಂಜೆ ಯುವ ಗಾಯಕಿ ಎ.ಆರ್.ಕೌಸಲ್ಯಾ ರಘುರಾಂ ತಂಡದಿಂದ ದೇವರ ನಾಮಗಳ ಗಾಯನ ಭಕ್ತವೃಂದವನ್ನು ಮಂತ್ರಮುಗ್ಧಗೊಳಿಸಿತು. ಪ್ರಮಥ್ ರವಿಶಂಕರ್(ಮೃದಂಗ) ಮತ್ತು ಶ್ರೀಲಲಿತಾ ರಾಮಕೃಷ್ಣ(ವಯೋಲಿನ್) ಪಕ್ಕವಾದ್ಯ ಸಹಕಾರಕ್ಕೆ ಪ್ರಶಂಸೆ ವ್ಯಕ್ತವಾಯಿತು.

ನಂತರ ಪ್ರಾಕಾರ ಉತ್ಸವ, ಅಷ್ಟಾವಧಾನ ಸೇವೆ ಮತ್ತು ರಂಗಪೂಜೆ, ರಾಯರು ಮತ್ತು ಶ್ರೀನಿವಾಸ ದೇವರಿಗೆ ಮಹಾಮಂಗಳಾರತಿಯೊಂದಿಗೆ ಮೊದಲ ದಿನದ ಕೈಂಕರ್ಯ ಸಂಪನ್ನಗೊಂಡಿತು. ಬುಧವಾರ ರಾಯರ ಮಧ್ಯಾರಾಧನೆ ಅಂಗವಾಗಿ ದಿನಪೂರ್ತಿ ಧಾರ್ಮಿಕ ವಿಧಿ ವಿಧಾನಗಳು ನೆರವೇರಲಿವೆ.

ಬಿಕೆಎಸ್ ಅಯ್ಯಂಗಾರ್ ಸಂಸ್ಮರಣಾ ಕಾರ್ಯಕ್ರಮ



ಯೋಗ ಶಿಕ್ಷಕ ಡಾ. ಬಿ ಶ್ರೀನಾಥ್ ರಚಿಸಿರುವ 'ಯೋಗ ಭೀಷ್ಮ' ಕೃತಿ ಬಿಡುಗಡೆ

ಮೈಸೂರು, ಆ.20(ಎಸ್‌ಪಿಎನ್)– ಮೈಸೂರು ಗೋಕುಲಂ ಮೂರನೇ ಹಂತದ ಯೋಗ ವಿತ್ ಶ್ರೀನಾಥ್ ಸಂಸ್ಥೆ ಆವರಣದಲ್ಲಿ ಹಿಮಾಲಯ ಪ್ರತಿಷ್ಠಾನ ಹಾಗೂ ಯೋಗ ವಿತ್ ಶ್ರೀನಾಥ್ ಸಂಸ್ಥೆ ಸಹಯೋಗದೊಂದಿಗೆ ಯೋಗಾಚಾರ್ಯ ಬಿ.ಕೆ.ಎಸ್.ಅಯ್ಯಂಗಾರ್ ಸಂಸ್ಮರಣಾ ಕಾರ್ಯಕ್ರಮ ನಡೆಯಿತು.

ಅಂತರರಾಷ್ಟ್ರೀಯ ಯೋಗಶಿಕ್ಷಕ ಭರತಶೆಟ್ಟಿ ಮಾತನಾಡಿ, ಯೋಗವನ್ನು ವಿಶ್ವಮಟ್ಟಕ್ಕೆ ಅಲ್ಲದೆ ಜನಸಾಮಾನ್ಯರಿಗೂ ತಲುಪಿಸಿದ ಕೀರ್ತಿ ಯೋಗ ಗುರು ಬಿಕೆಎಸ್ ಅಯ್ಯಂಗಾರ್‌ರಿಗೆ ಸಲ್ಲುತ್ತದೆ. ಅಲ್ಲದೆ ನಮ್ಮ ದೇಹವನ್ನು ಕಾಡುವ ಹಲವಾರು ರೋಗ–ರುಜಿನಗಳಿಗೆ ಯೋಗದ ಮೂಲಕ ಪರಿಹಾರ ಕಂಡುಕೊಳ್ಳುವ ವಿಧಾನವನ್ನು ತೋರಿಸಿಕೊಟ್ಟಿದ್ದಾರೆ ಎಂದರು.

ಬಿಕೆಎಸ್ ಅಯ್ಯಂಗಾರ್ ಅವರು ಕೃಷ್ಣಮಾಚಾರ್ಯರಲ್ಲಿ ಯೋಗವನ್ನು ಅಭ್ಯಸಿಸಿ ಅದನ್ನು ತನ್ನದೇ ಆದ ವೈಜ್ಞಾನಿಕ ಮಾರ್ಗದಲ್ಲಿ ದೇಶ–ವಿದೇಶಗಳಲ್ಲಿ ಪರಿಚಯಿಸಿದರು. 'ಸ್ಟೈಲ್' ಎಂಬ ನವೀನ ಯೋಗ ಆವಿಷ್ಕಾರಕ್ಕೆ ಕಾರಣಕರ್ತರಾದ ಬಿಕೆಎಸ್ ಅಯ್ಯಂಗಾರ್ ಜೀವನದಲ್ಲಿ ಅಪಾರ ತಾಳ್ಮೆಯನ್ನು ರೂಡಿಸಿಕೊಂಡಿದ್ದರು. ಅಲ್ಲದೆ, ಪುಣೆಯಲ್ಲಿ ಡಾ.ಬಿ.ಕೆ.ಎಸ್ ಅಯ್ಯಂಗಾರ್ ಅವರಲ್ಲಿ ಶಿಷ್ಯರಾಗಿ ಸೇರಿ, ಯೋಗ ಕಲಿತ ಅನುಭವಗಳನ್ನು ವಿವರಿಸಿದರು.

ಈ ವೇಳೆ ಯೋಗ ಶಿಕ್ಷ ಡಾ. ಬಿ ಶ್ರೀನಾಥ ಅವರು ರಚಿಸಿರುವ 'ಯೋಗ ಭೀಷ್ಮ' ಕೃತಿಯನ್ನು ಲೋಕಾರ್ಪಣೆ ಗೊಳಿಸಲಾಯಿತು. ವೇದಿಕೆಯಲ್ಲಿ ಮೈಸೂರು ಯೋಗ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಯೋಗಕುಮಾರ್ ಹಾಗೂ ಪ್ಯಾರಿಸ್‌ನ ಯೋಗ ಶಿಕ್ಷಕ ವಾಂಡೆವಿಲ್ಲೆ ಥಾಮಸ್ ಹಾಗೂ ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ, ಹಿಮಾಲಯ ಪ್ರತಿಷ್ಠಾದ ಸಂಚಾಲಕ ಎಂ.ವಿ ನಾಗೇಂದ್ರ ಬಾಬು, ಮುಕ್ತಕ ಸಾಹಿತಿ ಸ್ವಾಮಿ, ಹರ್ಷವರ್ಧನ, ಲೇಖಕ ವಿನಾಯಕ ಹೊನ್ನಾವರ ಮುಂತಾದವರು ಉಪಸ್ಥಿತರಿದ್ದರು.


ದರ್ಶನ್‌ಗೆ ಸಿಗದ ಮನೆಯೂಟ: ಸೆ.5ಕ್ಕೆ ವಿಚಾರಣೆ ಮುಂದೂಡಿಕೆ



ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ಮನೆಯೂಟಕ್ಕೆ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಸೆ.5ಕ್ಕೆ ಮುಂದೂಡಿದೆ. ಮನೆ ಊಟ ಪಡೆಯಲು ನಿರ್ದೇಶನ ಕೋರಿದ್ದ ಅರ್ಜಿಯನ್ನು ವಿಚಾರಣಾಧೀನ ನ್ಯಾಯಾಲಯ ತಿರಸ್ಕರಿಸಿದ್ದನ್ನು ಪ್ರಶ್ನಿಸಿ ನಟ ದರ್ಶನ್ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಎಂ ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಇಂದು ವಿಚಾರಣೆ ನಡೆಸಿತು. ಈ ಹಿಂದೆ ಅರ್ಜಿಯ ವಿಚಾರಣೆ ನಡೆಸಿದ್ದ ನ್ಯಾಯಪೀಠವು, ಜೈಲು ಅಧಿಕಾರಿಗಳಿಗೆ ವರದಿ ನೀಡುವಂತೆ ಸೂಚಿಸಿತ್ತು. ಜೈಲು ಅಧಿಕಾರಿಗಳು ತಮ್ಮ ನಿರ್ಣಯವನ್ನು ನೀಡುವಂತೆ ತಿಳಿಸಿತ್ತು.

ಅಂತೆಯೇ ನಿರ್ಧಾರವನ್ನು ಹೈಕೋರ್ಟ್‌ಗೆ ನೀಡಿದ್ದ ಜೈಲು ಅಧಿಕಾರಿಗಳು ಜೈಲು ಊಟ ಸಾಕೆಂದಿದ್ದರು. ಜೈಲಿನ ವೈದ್ಯಾಧಿಕಾರಿ ನೀಡಿದ್ದ ವರದಿಯನ್ನು ಸಹ ನ್ಯಾಯಾಲಯಕ್ಕೆ ಸಲ್ಲಿಸಿದರು. ವೈದ್ಯಾಧಿಕಾರಿಗಳು ದರ್ಶನ್‌ಗೆ ಮನೆ ಊಟವನ್ನು ನಿರಾಕರಿಸಿದ್ದಾರೆ ಎಂದು ಹೈಕೋರ್ಟ್‌ನಲ್ಲಿ ರಾಜ್ಯ ಅಭಿಯೋಜಕ ಬೆಳ್ಳಿಯಪ್ಪ ಹೇಳಿದರು. ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಿರುವುದಾಗಿ ತಿಳಿಸಿದರು. ಈ ವೇಳೆ ದರ್ಶನ್ ಪರ ವಕೀಲೆ ಸಂಜೀವಿನಿ ನಾವದಗಿ ಅವರು ವಾದ ಮಂಡಿಸಿ, ನಮ್ಮ ಕೋರಿಕೆಯನ್ನು ತಿರಸ್ಕರಿಸಿರುವ ಆದೇಶವನ್ನು ಪರಿಶೀಲಿಸಿಲ್ಲ. ಅದನ್ನು ನೋಡಿ ಮೆರಿಟ್ ಮೇಲೆ ವಾದಿಸಲಾಗುವುದು. ನ್ಯಾಯಾಲಯ ಸಮಯ ನಿಗದಿಪಡಿಸಬಹುದು ಎಂದು ತಿಳಿಸಿದರು. ಇದಕ್ಕೆ ಒಪ್ಪಿದ ನ್ಯಾಯಪೀಠ, ವಿಚಾರಣೆಯನ್ನು ಸೆ.5ಕ್ಕೆ ಮುಂದೂಡಿತು.

ಕಾನೂನು ಪದವಿ ಪ್ರದಾನ



ಹಿರಿಯ ಪತ್ರಕರ್ತ ಎಂ.ಬಿ.ಮರಮ್‌ಕಲ್ ಪುತ್ರ ಚೆನ್ನಬಸವರೆಡ್ಡಿ ಮರಮ್‌ಕಲ್ ಮೈಸೂರಿನ ಜೆಎಸ್‌ಎಸ್ ಕಾನೂನು ಕಾಲೇಜಿನಲ್ಲಿ ಪದವಿ ಪೂರೈಸಿದ್ದು, ಕಾಲೇಜಿನ ಘಟಿಕೋತ್ಸವದಲ್ಲಿ ಇವರಿಗೆ ಕರ್ನಾಟಕ ಕಾನೂನು ವಿವಿ ಕುಲಪತಿ ಪ್ರೊ.ಬಸವರಾಜು ಹಾಗೂ ಜೆಎಸ್‌ಎಸ್ ವಿದ್ಯಾಪೀಠದ ಸಿಇಓ ಡಾ.ಬೆಟ್ಟಸೂರ ಮಠ ಪದವಿ ಪ್ರಮಾಣ ಪತ್ರ ನೀಡಿದರು. ಬಳಿಕ ಚೆನ್ನಬಸವರೆಡ್ಡಿ ಅವರಿಗೆ ಲಾ ಗೈಡ್ ಕನ್ನಡ ಕಾನೂನು ಮಾಸಪತ್ರಿಕೆ ಬಳಗದಿಂದ ಅಭಿನಂದನೆ ಸಲ್ಲಿಸಲಾಯಿತು.

ಎಸ್‌ಸಿ–ಎಸ್‌ಟಿ ಮೀಸಲಾತಿ ತೀರ್ಪು ವಿರೋಧಿಸಿ ಇಂದು ಭಾರತ್ ಬಂದ್

ನವದೆಹಲಿ: ಎಸ್‌ಸಿ/ಎಸ್‌ಟಿ ಮೀಸಲಾತಿ ಕುರಿತು ಸುಪ್ರೀಂ ಕೋರ್ಟ್ ತೀರ್ಪಿನ ವಿರುದ್ಧ ಪ್ರತಿಭಟಿಸಲು ಮೀಸಲಾತಿ ಬಚಾವೋ ಸಂಘರ್ಷ ಸಮಿತಿಯು ಆಗಸ್ಟ್ 21 ರಂದು ರಾಷ್ಟ್ರವ್ಯಾಪಿ ಬಂದ್‌ಗೆ ಕರೆ ನೀಡಿದೆ.

ಆಗಸ್ಟ್ 1 ರಂದು ಸರ್ವೋಚ್ಚ ನ್ಯಾಯಾಲಯವು ಪರಿಶಿಷ್ಟ ಜಾತಿಗಳು (ಎಸ್‌ಸಿಗಳು) ಮತ್ತು ಪರಿಶಿಷ್ಟ ಪಂಗಡಗಳು (ಎಸ್‌ಟಿಗಳು) ಒಳಗೆ ಉಪ–ವರ್ಗಗಳನ್ನು ರಚಿಸಲು ರಾಜ್ಯಗಳಿಗೆ ಅನುಮತಿ ನೀಡಿದೆ. ನಿಜವಾಗಿಯೂ ಅಗತ್ಯವಿರುವವರಿಗೆ ಮೀಸಲಾತಿಯಲ್ಲಿ ಆದ್ಯತೆ ನೀಡಬೇಕು ಎಂದು ಹೇಳಿದೆ. ಆದರೆ ಸರ್ವೋಚ್ಚ ನ್ಯಾಯಾಲಯದ ಈ ತೀರ್ಪನ್ನು ವಿರೋಧಿಸಿ ಮತ್ತು ನ್ಯಾಯಾಲಯದ ಆದೇಶವನ್ನು ಹಿಂಪಡೆಯುವಂತೆ ಒತ್ತಾಯಿಸಿ ಭಾರತ್ ಬಂದ್ ನಡೆಸಲಾಗುತ್ತಿದೆ. ರಾಜಸ್ಥಾನದ ಎಸ್‌ಸಿ/ಎಸ್‌ಟಿ ಗುಂಪುಗಳು ಬಂದ್‌ಗೆ ಬೆಂಬಲ ವ್ಯಕ್ತಪಡಿಸಿವೆ. ಕರ್ನಾಟಕದಲ್ಲಿ ಈ ಬಂದ್ ಪರಿಣಾಮ ಬೀರಲಿದೆಯೇ ಎಂಬುದರ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

ಭಾರತ್ ಬಂದ್ ವೇಳೆ ಹಿಂಸಾಚಾರವನ್ನು ತಪ್ಪಿಸಲು ಬಂದ್‌ಗೆ ಸಿದ್ಧತೆಯನ್ನು ಪರಿಶೀಲಿಸಲು ಹಿರಿಯ ನಾಗರಿಕ ಮತ್ತು ಪೊಲೀಸ್ ಅಧಿಕಾರಿಗಳು ಸಭೆ ನಡೆಸಿದ್ದಾರೆ. ಎಲ್ಲ ವಿಭಾಗೀಯ ಆಯುಕ್ತರು, ಜಿಲ್ಲಾಧಿಕಾರಿಗಳು ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದು, ಬಂದ್‌ಗೆ ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

ಸುಪ್ರೀಂಕೋರ್ಟ್‌ನ ತೀರ್ಪು ಎಸ್‌ಸಿ ಮತ್ತು ಎಸ್‌ಟಿ ಗುಂಪುಗಳೊಳಗೆ ಉಪ–ವರ್ಗಗಳನ್ನು ರಚಿಸಲು ರಾಜ್ಯಗಳಿಗೆ ಅವಕಾಶ ಮಾಡಿಕೊಟ್ಟಿದ್ದು, ನಿಜವಾಗಿಯೂ ಅಗತ್ಯವಿರುವವರಿಗೆ ಮೀಸಲಾತಿಯಲ್ಲಿ ಆದ್ಯತೆ ನೀಡಬೇಕು ಎಂದು ಹೇಳಿದೆ. ಈ ನಿರ್ಧಾರವು ವ್ಯಾಪಕ ಚರ್ಚೆಗೆ ಕಾರಣವಾಗಿದ್ದು, ಮೀಸಲಾತಿ ಕುರಿತ ಸುಪ್ರೀಂಕೋರ್ಟ್ ತೀರ್ಪನ್ನು ಪ್ರಶ್ನಿಸುವುದು ಮತ್ತು ಅದನ್ನು ಹಿಂಪಡೆಯುವಂತೆ ಒತ್ತಾಯಿಸುವುದು ಭಾರತ್ ಬಂದ್‌ನ ಮುಖ್ಯ ಉದ್ದೇಶವಾಗಿದೆ ಎಂದು ವರದಿಗಳು ತಿಳಿಸಿವೆ. ತುರ್ತು, ಆಂಬುಲೆನ್ಸ್ ಸೇವೆಗಳು, ಆಸ್ಪತ್ರೆಗಳು ಮತ್ತು ವೈದ್ಯಕೀಯ ಸೇವೆಗಳು, ಪೊಲೀಸ್ ಸೇವೆಗಳು ಸಕ್ರಿಯವಾಗಿರಲಿವೆ. ಅಗತ್ಯ ಔಷಧಿಗಳನ್ನು ಒದಗಿಸಲು ಫಾರ್ಮಸಿಗಳು ಸಹ ತೆರೆದಿರುತ್ತವೆ. ಸರ್ಕಾರಿ ಕಚೇರಿಗಳು, ಬ್ಯಾಂಕ್‌ಗಳು, ಶಾಲಾ–ಕಾಲೇಜುಗಳು ಎಂದಿನಂತೆ ಇರುತ್ತವೆ ಎಂದು ವರದಿಗಳು ತಿಳಿಸಿವೆ. ಬಂದ್ ವೇಳೆ ಹಿಂಸಾಚಾರದ ಸಾಧ್ಯತೆಯ ಹಿನ್ನೆಲೆಯಲ್ಲಿ ಉನ್ನತ ಪೊಲೀಸ್ ಅಧಿಕಾರಿಗಳು ವಿಡಿಯೊ ಕಾನ್ಫರೆನ್ಸ್ ಮೂಲಕ ಸಿದ್ಧತೆಗಾಗಿ ಸಭೆ ನಡೆಸಿದ್ದಾರೆ. ಎಲ್ಲಾ ವಿಭಾಗೀಯ ಆಯುಕ್ತರು, ಜಿಲ್ಲಾಧಿಕಾರಿಗಳು ಮತ್ತು ಹಿರಿಯ ಪೊಲೀಸ್ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು ಎಂದು ವರದಿಗಳು ತಿಳಿಸಿವೆ.

ಪಶ್ಚಿಮ ಉತ್ತರ ಪ್ರದೇಶವನ್ನು ವಿಶೇಷವಾಗಿ ಸೂಕ್ಷ್ಮವೆಂದು ಪರಿಗಣಿಸಲಾಗಿದೆ. ಈ ಕಾರಣದಿಂದಾಗಿ ಇಲ್ಲಿ ಪೊಲೀಸರು ಹೆಚ್ಚಿನ ನಿಗಾ ವಹಿಸಿದ್ದಾರೆ. ಪ್ರತಿಭಟನೆಯ ಸಂದರ್ಭದಲ್ಲಿ ಸಾರ್ವಜನಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿಗಳು ವ್ಯಾಪಕ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಅಂತಹ ದಿನಗಳಲ್ಲಿ ಸಾರ್ವಜನಿಕ ಸಾರಿಗೆ ಮತ್ತು ಖಾಸಗಿ ಕಚೇರಿಗಳು ಸಾಮಾನ್ಯವಾಗಿ ಕಾರ್ಯನಿರ್ವಹಿಸುವುದಿಲ್ಲ, ಆಂಬ್ಯುಲೆನ್ಸ್‌ಗಳಂತಹ ತುರ್ತು ಸೇವೆಗಳು ಕಾರ್ಯನಿರ್ವಹಿಸಲಿವೆ.

ಮೈಸೂರು ಲೋಕಾಯುಕ್ತ ನೂತನ ಎಸ್ಪಿ ಟಿ.ಜೆ.ಉದೇಶ



ಮೈಸೂರು, ಆ.20(ಎಸ್‌ಬಿಡಿ)– ಮೈಸೂರು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ)ಯಾಗಿ ಟಿ.ಜೆ.ಉದೇಶ ನಿಯೋಜನೆಗೊಂಡಿದ್ದಾರೆ.

ಈ ಮೊದಲು ಇವರು ಚಾಮರಾಜನಗರ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ)ಯಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಈವರೆಗೆ ಮೈಸೂರಿನ ಇನ್‌ಚಾರ್ಜ್ ಆಗಿದ್ದ ಮಂಡ್ಯ ಲೋಕಾಯುಕ್ತ ಎಸ್ಪಿ ಸುರೇಶ್ ಬಾಬು ಅವರು ಟಿ.ಜೆ.ಉದೇಶ ಅವರಿಗೆ ಅಧಿಕಾರ ಹಸ್ತಾಂತರಿಸಿದ್ದಾರೆ.

ಮೈಸೂರು ಮಿತ್ರ ಬುಧವಾರ 21 ಆಗಸ್ಟ್ 2024

ದಸರಾ ಗಜಪಡೆ ಸ್ವಾಗತಕ್ಕೆ ಮೈಸೂರು ಅರಮನೆಯಲ್ಲಿ ಭರದ ಸಿದ್ಧತೆ

ಮಾವುತರು, ಕಾವಾಡಿಗಳ ಕುಟುಂಬಸ್ಥರಿಗೆ 18 ಟೆಂಟ್ ನಿರ್ಮಾಣ

- ಅರಮನೆಯಲ್ಲಿ 54 ದಿನ ಗಜಪಡೆ ವಾಸ್ತವ್ಯ
- ಆನೆ ಶಿಬಿರದ ಬಳಿ ಸಿಸಿಟಿವಿ ಕಣ್ಗಾವಲು
- ತಾತ್ಕಾಲಿಕ ಅರಣ್ಯಾಧಿಕಾರಿ ಕಚೇರಿ ಆರಂಭ
- ಮೈಸೂರಿನಲ್ಲಿ ಆನೆಗಳದ್ದೇ ದರ್ಬಾರ್





ಮೈಸೂರು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಆನೆಗಳ ವಾಸ್ತವ್ಯಕ್ಕೆ ಮೈಸೂರು ಅರಮನೆ ಆವರಣದಲ್ಲಿ ಸಿದ್ಧತಾ ಕಾರ್ಯಗಳು ಭರದಿಂದ ಸಾಗುತ್ತಿವೆ (ಎಡಚಿತ್ರ). ಆನೆಗಳ ಮಾವುತರು ಹಾಗೂ ಕಾವಾಡಿಗಳ ವಾಸ್ತವ್ಯಕ್ಕಾಗಿ ಅರಮನೆಯಲ್ಲಿ ನಿರ್ಮಾಣ ಮಾಡಿರುವ ತಾತ್ಕಾಲಿಕ ಟೆಂಟ್‌ಗಳ (ಬಲಚಿತ್ರ) ಕಾಣಬಹುದು.

ಮೈಸೂರು, ಆ.20(ಬಿಎಲ್‌ಯು)– ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಗಜಪಡೆಯ ವಾಸ್ತವ್ಯಕ್ಕೆ ಮೈಸೂರು ಅರಮನೆಯಲ್ಲಿ ಸಿದ್ಧತೆಗಳು ಭರದಿಂದ ಸಾಗುತ್ತಿವೆ. ಆನೆಗಳ ಮಾವುತರು ಹಾಗೂ ಕಾವಾಡಿಗಳ ಕುಟುಂಬಗಳು ವಾಸ್ತವ್ಯ ಹೂಡಲು ಅರಮನೆ ಆವರಣದಲ್ಲಿ ತಾತ್ಕಾಲಿಕ ಟೆಂಟ್ ನಿರ್ಮಾಣ ಮಾಡಲಾಗುತ್ತಿದೆ.

ಮೈಸೂರಿನ ನಾಗರಹೊಳೆಯ ಹೆಬ್ಬಾಗಿಲು ವೀರನಹೊಸಳ್ಳಿಯಲ್ಲಿ ನಾಳೆ (ಆಗಸ್ಟ್ 21) ಗಜಪಯಣಕ್ಕೆ ವಿಧ್ಯುಕ್ತ ಚಾಲನೆ ದೊರೆಯಲಿದೆ. ನಾಳೆ ಸಂಜೆ ವೇಳೆಗೆ ದಸರಾದಲ್ಲಿ ಪಾಲ್ಗೊಳ್ಳುವ ಮೊದಲ ಹಂತದ ಎಲ್ಲಾ 9 ಆನೆಗಳು ಮೈಸೂರಿನ ಅಶೋಕ ಪುರಂನ ಅರಣ್ಯ ಭವನ ಸೇರಲಿದೆ.

ತರುವಾಯ ಆಗಸ್ಟ್ 23 ರಂದು ಗಜನಾಯಕ ಅಭಿಮನ್ಯು ನೇತೃತ್ವದ ಗಜಪಡೆಯನ್ನು ಅರಮನೆಯ ಜಯಮಾರ್ತಾಂಡ ದ್ವಾರದಲ್ಲಿ ಸಾಂಪ್ರದಾಯಿಕವಾಗಿ ಸ್ವಾಗತಿಸಲಾಗುವುದು. ಅಂದಿನಿಂದ ದಸರಾ ಜಂಬೂಸವಾರಿ ಮುಗಿಯುವ ತನಕ ಆನೆಗಳು ಅರಮನೆ ಆವರಣದಲ್ಲೇ ವಾಸ್ತವ್ಯ ಹೂಡಲಿವೆ.

ಆಗಸ್ಟ್ 23ರಿಂದ ಅಕ್ಟೋಬರ್ 15 ವರೆಗೆ ಅಂದರೆ 54 ದಿನಗಳ ಕಾಲ ದಸರಾ ಗಜಪಡೆ ಅರಮನೆ ಆವರಣದಲ್ಲಿ ವಾಸ್ತವ್ಯ ಹೂಡಲಿದೆ. ಇದಕ್ಕಾಗಿ ಅರಮನೆಯ ಜಯಮಾರ್ತಾಂಡ ದ್ವಾರದ ಸೋಮೇಶ್ವರ ದೇವಸ್ಥಾನದ ಬಳಿ ಸಿದ್ಧತೆಗಳು ಭರದಿಂದ ಸಾಗುತ್ತಿವೆ.



ಅರಣ್ಯಾಧಿಕಾರಿಗಳು ಕಾರ್ಯನಿರ್ವಹಿಸಲು ತಾತ್ಕಾಲಿಕ ಕಚೇರಿ ತೆರೆಯಲಾಗಿದೆ.

18 ಟೆಂಟ್ ನಿರ್ಮಾಣ: ಮೊದಲ ಹಂತದಲ್ಲಿ ಆಗಮಿಸುವ 9 ಆನೆಗಳ ಮಾವುತರು ಹಾಗೂ ಕಾವಾಡಿಗಳ ಕುಟುಂಬಸ್ಥರಿಗೆ ಪ್ರತ್ಯೇಕವಾಗಿ 18 ಟೆಂಟ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಇದಲ್ಲದೆ ಎರಡನೇ ಹಂತದಲ್ಲಿ ಆಗಮಿಸುವ 5 ಆನೆಗಳು ಹಾಗೂ ಆನೆಗಳ ಮಾವುತರು ಮತ್ತು ಕಾವಾಡಿಗಳ ಕುಟುಂಬಸ್ಥರಿಗೆ ಟೆಂಟ್ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ.

ಸುತ್ತಲಿನ ಪ್ರದೇಶದ ಹಳ್ಳಗಳನ್ನು ಜೆಸಿಬಿ ಯಂತ್ರದಿಂದ ಮುಚ್ಚಿ ಸಮತಟ್ಟು ಮಾಡಲಾಗುತ್ತಿದೆ. ಜೊತೆಗೆ ಇಡೀ ಆವರಣವನ್ನು ಸ್ವಚ್ಛಗೊಳಿಸಲಾಗಿದೆ.

ಈಗಾಗಲೇ ನಿರ್ಮಾಣ ಮಾಡಿರುವ ಶಾಶ್ವತ ಸೂರಿನಲ್ಲಿ 9 ಆನೆಗಳು ವಾಸ್ತವ್ಯ ಹೂಡಲಿದೆ. ಆನೆಗಳಿಗೆ ಆಹಾರ ತಯಾರಿಸುವ ಅಡುಗೆ ಮನೆ ಹಾಗೂ ಆಹಾರ ದಾಸ್ತಾನು ಕೊಠಡಿ ಕೂಡ ನಿರ್ಮಿಸಲಾಗಿದೆ.

ಆನೆಗಳ ಮಾವುತರು ಹಾಗೂ ಕಾವಾಡಿಗಳ ಕುಟುಂಬ ಕಾಡು ಬಿಟ್ಟು ನಾಡಿಗೆ ಬಂದಾಗ ಅವರ ಮಕ್ಕಳು ವಿದ್ಯಾಭ್ಯಾಸದಿಂದ ವಂಚಿತರಾಗಬಾರದು ಎಂಬ ದೃಷ್ಟಿಯಿಂದ ಟೆಂಟ್ ಶಾಲೆ ನಿರ್ಮಾಣ ಮಾಡಲಾಗುತ್ತಿದೆ.

ತಾಲೀಮು ಮುಗಿಸಿ ಬರುವ ಆನೆಗಳಿಗೆ ಪ್ರತಿದಿನ ಮಜ್ಜನ ಮಾಡಿಸಲಿದ್ದು, ಅವುಗಳಿಗೆ ನೀರು ಸರಬರಾಜು ಮಾಡಲು ಅರಮನೆ ಮಂಡಳಿ ಎಲ್ಲಾ ವ್ಯವಸ್ಥೆ ಮಾಡಿದೆ. ಜೊತೆಗೆ ಮಾವುತರು ಮತ್ತು ಕಾವಾಡಿಗಳ ಕುಟುಂಬಸ್ಥರಿಗೆ ಪ್ರತ್ಯೇಕ ಶೌಚಾಲಯದ ವ್ಯವಸ್ಥೆ ಕೂಡ ಮಾಡಲಾಗಿದೆ. ಚಿನ್ನದ ಅಂಬಾರಿ ಹೊರುವ ಬಲರಾಮ ಸೇರಿದಂತೆ ಇತರೆ 14 ಆನೆಗಳು ವಾಸ್ತವ್ಯ ಹೂಡುವ ಪ್ರದೇಶವನ್ನು ಸೂಕ್ಷ್ಮ ಸ್ಥಳವೆಂದು ಪರಿಗಣಿಸಲಾಗಿದ್ದು, ಆನೆಗಳ ಹತ್ತಿರ ಹೋಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಜೊತೆಗೆ ಕಣ್ಗಾವಲಿಗೆ ಆನೆ ಶಿಬಿರದ ಬಳಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುತ್ತಿದೆ. ಗಜಪಡೆ ವಾಸ್ತವ್ಯ ಹೂಡಿರುವ ಸ್ಥಳಕ್ಕೆ ಬಂದ ಸಂದರ್ಭದಲ್ಲಿ ಅರಣ್ಯಾಧಿಕಾರಿಗಳಿಗೆ ಕೂರಲು ಈ ತನಕ ಸ್ಥಳವಿರಲಿಲ್ಲ. ಸ್ಥಳ ಪರಿಶೀಲನೆ ನಡೆಸಿ, ಸಿಬ್ಬಂದಿಗಳಿಂದ ಮಾಹಿತಿ ಪಡೆದು ವಾಪಸಾಗಬೇಕಿತ್ತು. ಈ ಹಿನ್ನೆಲೆಯಲ್ಲಿ ಈ ಬಾರಿ ಕಂಟೇನರ್ ಮಾದರಿಯ ತಾತ್ಕಾಲಿಕ ಅರಣ್ಯ ಇಲಾಖೆಯ ಕಚೇರಿಯನ್ನು ತೆರೆಯಲಾಗಿದೆ.

ಆನೆಗಳ ಮಾವುತರು ಹಾಗೂ ಕಾವಾಡಿಗಳು ಮೈಸೂರಿನಲ್ಲಿ ವಾಸ್ತವ್ಯ ಹೂಡುವಷ್ಟು ದಿನ ಅವರಿಗೆ ಉಚಿತವಾಗಿ ಪಡಿತರ ನೀಡಲಾಗುವುದು. ಜೊತೆಗೆ ತರಕಾರಿ ಸೇರಿದಂತೆ ಇತರೆ ಖರ್ಚಿಗೆ ವಾರಕ್ಕೊಮ್ಮೆ ಹಣ ಕೂಡ ನೀಡಲಾಗುತ್ತದೆ. ಇದಲ್ಲದೆ ಎಲ್ ಪಿಜಿ ಸಂಪರ್ಕ ಕೂಡ ನೀಡಲಾಗುವುದು.

ಮೈಸೂರಿನ ರಾಜಮಾರ್ಗದಲ್ಲಿ ಇನ್ನು 54 ದಿನಗಳ ಕಾಲ ಜಂಬೂ ಸವಾರಿ ಮೆರವಣಿಗೆಗಾಗಿ ಬೆಳಿಗ್ಗೆ ಮತ್ತು ಸಂಜೆ ಆನೆಗಳ ತಾಲೀಮು ನಡೆಯಲಿದೆ. ರಾಜಮಾರ್ಗದಲ್ಲಿ ಸಾಲು ಸಾಲಿನಲ್ಲಿ ಸಾಗುವ ಆನೆಗಳನ್ನು ಹತ್ತಿರದಿಂದ ನೋಡಲು ಪ್ರವಾಸಿಗರ ದಂಡೆ ಮೈಸೂರಿಗೆ ಆಗಮಿಸಲಿದೆ. ಇದರಿಂದ ಮೈಸೂರಿನಲ್ಲಿ ಇನ್ನು ಕೆಲವು ದಿನಗಳ ಕಾಲ ಆನೆಗಳು ದರ್ಬಾರು ನಡೆಸಲಿವೆ.

ದಸರಾ ಗಜಪಡೆಗೆ ಟನ್‌ಗಟ್ಟಲೆ ಆಹಾರ

ಸುಮಾರು 54 ದಿನಗಳ ಕಾಲ ಮೈಸೂರು ಅರಮನೆಯಲ್ಲಿ ವಾಸ್ತವ್ಯ ಹೂಡುವ ಆನೆಗಳಿಗೆ ಮೇವು ಸರಬರಾಜು ಮಾಡಲು ಅರಣ್ಯ ಇಲಾಖೆ ಎಲ್ಲಾ ತಯಾರಿ ಮಾಡಿಕೊಂಡಿದೆ. ಹಸಿರು ಹುಲ್ಲು, ಭತ್ತದ ಹುಲ್ಲು, ಬ್ಯಾಂಚ್ ಫಾಡರ್ (ಆಲದ ಸೊಪ್ಪು, ಅರಳಿ ಸೊಪ್ಪು) ಹಾಗೂ ಕಬ್ಬು ನೀಡಲು ಈಗಾಗಲೇ ಟೆಂಡರ್ ಕರೆಯಲಾಗಿದೆ. ಬ್ರ್ಯಾಂಚ್ ಫಾಡರ್ 340 ಟನ್, ಹಸಿರು ಹುಲ್ಲು 170 ಟನ್, ಭತ್ತದ ಹುಲ್ಲು 52 ಟನ್ ಹಾಗೂ ಕಬ್ಬು 52 ಟನ್ ನೀಡಲು ಅಂದಾಜು ಮಾಡಲಾಗಿದೆ.

ಆನೆಗಳು ಮೈಸೂರಿಗೆ ಬಂದ ದಿನವೇ ಅವುಗಳನ್ನು ತೂಕ ಮಾಡಿಸಲಾಗುತ್ತದೆ. ತರುವಾಯ ಆನೆಗಳಿಗೆ ಎಷ್ಟು ಪ್ರಮಾಣದಲ್ಲಿ ಆಹಾರ ನೀಡಬೇಕು ಎಂಬ ಬಗ್ಗೆ ಪಶು ಆರೋಗ್ಯಾಧಿಕಾರಿಗಳು ತಿಳಿಸುತ್ತಾರೆ. ಅದರ ಆಧಾರದ ಮೇಲೆ ಆನೆಗಳಿಗೆ ಆಹಾರ ನೀಡಲಾಗುವುದು ಎಂದು ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ತಿಳಿಸಿದರು.

ಮೊದಲ ಹಾಗೂ ಎರಡನೇ ಹಂತದಲ್ಲಿ ಆಗಮಿಸುವ ಎಲ್ಲಾ 14 ಆನೆಗಳನ್ನು ರಾಜ್ಯದ ವಿವಿಧ ಆನೆ ಶಿಬಿರಗಳಿಂದ ಲಾರಿಯಲ್ಲಿ ತರಲಾಗುವುದು. ಇವುಗಳ ಪ್ರಯಾಣದ ದೂರ ಸುಮಾರು 6 ಸಾವಿರ ಕಿಲೋ ಮೀಟರ್ ಎಂದು ಅಂದಾಜಿಸಲಾಗಿದೆ.

ಶರಣರ ಕಾಲಘಟ್ಟ ಸಜ್ಜನರ ಕಾಲ



'ಜೇಡರ ದಾಸೀಮಯ್ಯ' ವಚನ ಕುರಿತು ಮಾತನಾಡಿದ ಸದ್ವಿದ್ಯಾ ಕಾಲೇಜಿನ ಪ್ರಾಧ್ಯಾಪಕಿ ವಿದ್ಯಾ ಫಣಿರಾಜ್ ಅವರನ್ನು ಅಭಿನಂದಿಸಲಾಯಿತು.

ಮೈಸೂರು, ಆ.20(ಎಸ್‌ಪಿಎನ್)– ತನ್ನ ನಡೆ–ನುಡಿ, ಕ್ರಿಯೆ ಒಂದಾದರೆ ಸಜ್ಜನರ ಸಾಲಿಗೆ ಬರುತ್ತಾರೆ. ಹಾಗಾಗಿ 12ನೇ ಶತಮಾನದ ಶರಣರ ಕಾಲಘಟ್ಟವನ್ನು ಸಜ್ಜನರ ಕಾಲ ಎಂದರೆ ತಪ್ಪಾಗಲಾರದು ಎಂದು ಸದ್ವಿದ್ಯಾ ಕಾಲೇಜಿನ ಪ್ರಾಧ್ಯಾಪಕಿ ವಿದ್ಯಾ ಫಣಿರಾಜ್ ಅಭಿಪ್ರಾಯಪಟ್ಟರು.

ಮೈಸೂರು ಶ್ರೀರಾಂಪುರ 2ನೇ ಹಂತದಲ್ಲಿರುವ ಡಾ.ಕೃಪಾಫಡ್ಕೆ ಅವರ ನೃತ್ಯಗಿರಿ ಆವರಣದಲ್ಲಿ ಶರಣ ಸಾಹಿತ್ಯ ಪರಿಷತ್ ಮೈಸೂರು ಘಟಕ, ಕದಳಿ ಮಹಿಳಾ ವೇದಿಕೆ ಸಹಯೋಗದೊಂದಿಗೆ ನಡೆದ ವಚನ ಶ್ರಾವಣ: ಮನೆಮನೆಗೆ ವಚನ ಶ್ರಾವಣ ಸಂದೇಶ ಕಾರ್ಯಕ್ರಮದಲ್ಲಿ 'ಜೇಡರ ದಾಸೀಮಯ್ಯ' ವಚನ ಕುರಿತು ಮಾತನಾಡಿದರು. ಮನುಷ್ಯ ಬದುಕಿನ ಗುರಿ ತಲುಪಬೇಕಾದರೆ, ಆಧಾರವಾದ ಸನ್ನಡತೆ ಎಂಬ ಕಡೆಗೋಲು ಅಗತ್ಯವಿದೆ. ಹಾಗಾಗಿ ಶರಣ ಜೀವನ, ಅನುಭವಗಳು ತಿಳಿಯಲು ವಚನಗಳ ಅಧ್ಯಯನ ಅತೀಮುಖ್ಯ ಎಂದರು.

ಈ ವೇಳೆ ಶರಣ ಸಾಹಿತ್ಯ ಪರಿಷತ್ ನಗರ ಘಟಕ ಅಧ್ಯಕ್ಷ ಮ.ಗು.ಸದಾನಂದಯ್ಯ, ಹಿರಿಯ ಕಲಾವಿದೆ ಡಾ.ಕೃಪಾ ಫಡ್ಕೆ, ಸಹನಾ, ಸಮೀಕ್ಷಾ, ಯುಕ್ತ ಉಪಸ್ಥಿತರಿದ್ದರು. ಈ ವೇಳೆ ವಚನ ಆಧಾರಿತ ನೃತ್ಯವನ್ನು ತನ್ಮಯ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಲೋಕೇಶಪ್ಪ, ಭವಾನಿ, ಅದ್ವೈತ್, ರಾಜರತ್ನಂ ಮುಂತಾದವರು ಭಾಗವಹಿಸಿದ್ದರು.

270ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮ



ಮೈಸೂರು ಶ್ರೀಸುತ್ತೂರು ಮಠದಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ 270ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮದಲ್ಲಿ ವಿದ್ವಾನ್ ಅಮಿತ್ ಎ.ನಾಡಿಗ್(ಕೊಳಲು), ವಿದ್ವಾನ್ ಜಿ.ಗುರುಪ್ರಸನ್ನ (ಖಂಜರ), ವಿದ್ವಾನ್ ಬಿ.ಸಿ.ಮಂಜುನಾಥ್(ಮೃದಂಗ) ಹಾಗೂ ವಿದ್ವಾನ್ ಬಿ.ಆರ್.ಸೋಮಶೇಖರ್ ಜೋಯಿಸ್ (ಕೊನ್ನಕ್ಕೋಲ್) ಅವರುಗಳು ವಾದ್ಯ ಸಂಗೀತವನ್ನು ಪ್ರಸ್ತುತಪಡಿಸಿದರು.

ಆ.23, ನಾಡಕುಸ್ತಿ ಮಟ್ಟಿ ಪೂಜೆ



ಮೈಸೂರು, ಆ.20(ಜಿಎ)–ಕನ್ನೇಗೌಡನ ಕೊಪ್ಪಲಿನ ಶ್ರೀರಾಮ ಸೇವಾ ಟ್ರಸ್ಟ್, ಶ್ರೀ ರಾಮ ಮಂದಿರ ಹೊಸ ಬೀದಿ ಹತ್ತೂ ಜನಗಳ ಗರಡಿ ವತಿಯಿಂದ ಆ.23ರ ಸಂಜೆ 7ಗಂಟೆಗೆ ಗರಡಿ ಆವರಣದಲ್ಲಿ ನಾಡಕುಸ್ತಿ ಮಟ್ಟಿ ಪೂಜೆ ಎಂಬ ಅಂಬಾತಾಯಿ ಪೂಜೆ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಯಜಮಾನರಾದ ಎಲ್.ಚಂದ್ರು ಈ ವಿಷಯ ತಿಳಿಸಿ, ಇತ್ತೀಚೆಗೆ ಪಾಯಿಂಟ್ ಕುಸ್ತಿ ಜನಪ್ರಿಯವಾದ ಬಳಿಕ ನಾಡ ಕುಸ್ತಿ ಕ್ರೀಡೆ ಕಣ್ಮರೆಯಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಮತ್ತೆ ಉತ್ತೇಜನ ನೀಡಬೇಕೆಂಬ ಕಾರಣದಿಂದ ವಿವಿಧ ಗರಡಿಗಳು ಒಟ್ಟುಗೂಡಿ ಈ ಮಟ್ಟಿ ಪೂಜೆ ಹಮ್ಮಿಕೊಳ್ಳಲಾಗುತ್ತಿದೆ. ಬಳಿಕ ಯುವ ಜನರನ್ನು ನಾಡಕುಸ್ತಿಯತ್ತ ಸೆಳೆಯುವ ಕೆಲಸ ಮಾಡಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಪಾಲಿಕೆ ಮಾಜಿ ಸದಸ್ಯ ಚನ್ನಪ್ಪ, ಆರ್.ರಾಜ್‌ಕುಮಾರ್, ಜಿ.ಶ್ರೀನಿವಾಸ್, ಪೈಲ್ವಾನ್ ಕೃಷ್ಣಪ್ಪ, ಮಂಜು, ಬಾಲು ಮತ್ತಿತರರು ಉಪಸ್ಥಿತರಿದ್ದರು.

ಎನ್.ವಿ.ರಮೇಶ್, ಉಮಾ ರಮೇಶ್‌ಗೆ 'ಜನಪದ ಐಸಿರಿ' ಪ್ರಶಸ್ತಿ



ಮೈಸೂರು ಪುರಭವನದಲ್ಲಿ ಶ್ರೀ ಮಾತಾ ಜನಪದ ಚಾರಿಟೇಬಲ್ ಟ್ರಸ್ಟ್ ವತಿಯಿಂದ ನಡೆದ ಸಂಸ್ಥೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಮೈಸೂರಿನ ಅಭಿರುಚಿ ಬಳಗ ಸಂಸ್ಥೆಯ ಸಂಸ್ಥಾಪನಾ ಅಧ್ಯಕ್ಷ ಎನ್.ವಿ.ರಮೇಶ್, ಕಾರ್ಯದರ್ಶಿ ಉಮಾ ರಮೇಶ್ ಅವರಿಗೆ 'ಜನಪದ ಐಸಿರಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪೂರ್ವಭಾವಿ ಸಭೆ

ಮೈಸೂರು, ಆ. 20–ಮೈಸೂರಿನ ಪ್ರಸಾರಾಂಗದ ಮಾಜಿ ನಿರ್ದೇಶಕರಾದ ಕೆ.ಟಿ. ವೀರಪ್ಪ ಅವರಿಗೆ ಇದೇ ವರ್ಷದ ಅಕ್ಟೋಬರ್ ತಿಂಗಳ 10ನೇ ತಾರೀಖಿಗೆ 90 ವರ್ಷಗಳು ತುಂಬಲಿದೆ. ಈ ಶುಭ ಸಂದರ್ಭದಲ್ಲಿ ಅವರಿಗೆ ಅಭಿನಂದನಾ ಸಮಾರಂಭವನ್ನು ಏರ್ಪಡಿಸಲು, ಅವರ ಸ್ನೇಹಿತರು, ಹಿತೈಷಿಗಳು ಹಾಗೂ ಅವರ ಅಭಿಮಾನಿಗಳು ಮೊನ್ನೆ ಶುಕ್ರವಾರ ಸಂಜೆ ನಗರದ ಖಾಸಗಿ ಹೋಟೆಲ್‌ನಲ್ಲಿ ಪೂರ್ವಭಾವಿ ಸಭೆ ನಡೆಸಿದರು. ಸಭೆಯಲ್ಲಿ ಹಿರಿಯ ಸಾಹಿತಿ ಸಿಪಿಕೆ, ಡಾ.ಸಿ. ನಾಗಣ್ಣ, ಡಾ. ತಾರಾನಾಥ, ಡಾ. ಪಿ. ಬೋರೇಗೌಡ, ಮಡ್ಡಿಕೆರೆ ಗೋಪಾಲ್, ತಿಮ್ಮಣ್ಣೇಗೌಡ ಸೇರಿದಂತೆ ಹಲವು ಪ್ರಮುಖರು ಹಾಜರಿದ್ದರು.

ಕೋಲ್ಕತ್ತ ವೈದ್ಯೆ ಮೇಲೆ ಅತ್ಯಾಚಾರ; ಹತ್ಯೆ: ಖಂಡನೆ



ಕೋಲ್ಕತ್ತದಲ್ಲಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ ಹಾಗೂ ಹತ್ಯೆಯನ್ನು ರೋಟರಿ ಮೈಸೂರು ಸದಸ್ಯರು ಕಪ್ಪುಪಟ್ಟಿ ಧರಿಸಿ ಖಂಡಿಸಿದರು. ಜಿಲ್ಲಾ ರೋಟರಿ ಗವರ್ನರ್ ವಿಕ್ರಮದತ್ತ ರೋಟರಿ ಉತ್ತರದ ಅಧ್ಯಕ್ಷ ಪ್ರಭಾಕರ್, ಸದಸ್ಯರಾದ ಯಶಸ್ವಿ ಸೋಮಶೇಖರ್, ರಾಜಶೇಖರ ಕದಂಬ, ಎಂ.ಕೆ. ನಂಜುಯ್ಯ, ಯಶವಂತ್, ಸತ್ಯನಾರಾಯಣ, ಜಗದೀಶ್, ರತ್ನರಾಜ್, ರೂಪ ಶಿವಣ್ಣ ಇದ್ದರು.

ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ರಕ್ಷಾಬಂಧನ...



ಮೈಸೂರಿನ ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ರಕ್ಷಾಬಂಧನ ಕಾರ್ಯಕ್ರಮ ಆಚರಿಸಲಾಯಿತು. ಸಂಸ್ಕೃತ ಉಪನ್ಯಾಸಕ ನಾರಾಯಣ ದೇಸಾಯಿ ರಕ್ಷಾಬಂಧನ ಹಾಗೂ ಸಂಸ್ಕೃತೋತ್ಸವಾದ ಮಹತ್ವ ಕುರಿತು ಮಾತನಾಡಿದರು. ವಿದ್ಯಾರ್ಥಿಗಳು ಪರಸ್ಪರ ರಕ್ಷೆಯನ್ನು ಕಟ್ಟಿ ಸಂಭ್ರಮಿಸಿದರು. ವೇದಿಕೆಯಲ್ಲಿ ಸಂಸ್ಥೆಯ ಹಿರಿಯ ಪ್ರಾಚಾರ್ಯ ಗೋಪಾಲಸ್ವಾಮಿ, ಕಾಲೇಜು ಪ್ರಾಚಾರ್ಯ ಎಂ.ಮಹದೇವಸ್ವಾಮಿ, ಶಾಲೆಯ ಶಿಕ್ಷಕರು, ಬೋಧಕೇತರ ವೃಂದದವರು ಹಾಜರಿದ್ದರು.

ಪತ್ರಿಕೋದ್ಯಮದಲ್ಲಿ ಕೃತಕ ಬುದ್ಧಿಮತ್ತೆ ಬಳಕೆ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ ಕುರಿತು ವಿಚಾರ ಸಂಕಿರಣ

ಮೈಸೂರು, ಆ.20– ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೈಸೂರು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ಮಾನಸಗಂಗೋತ್ರಿ ಮೈಸೂರು ಹಾಗೂ ಮಹಾರಾಣಿ ಮಹಿಳಾ ಕಲಾ ಕಾಲೇಜು, ಪತ್ರಿಕೋದ್ಯಮ ವಿಭಾಗ, ಮೈಸೂರು ಇವರ ವತಿಯಿಂದ ಪತ್ರಿಕಾ ದಿನಾಚರಣೆಯ ಅಂಗವಾಗಿ ಆ.22ರಂದು ಮಧ್ಯಾಹ್ನ 2.30 ಗಂಟೆಗೆ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಜಯಲಕ್ಷ್ಮಮ್ಮಣ್ಣಿ ಸಭಾಂಗಣದಲ್ಲಿ "ಪತ್ರಿಕೋದ್ಯಮದಲ್ಲಿ ಕೃತಕ ಬುದ್ಧಿಮತ್ತೆ ಬಳಕೆ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ" ಕುರಿತು ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿದೆ.

ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲರಾದ ಡಾ. ವಸಂತ್ ಕುಮಾರ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಮಾನಸಗಂಗೋತ್ರಿಯ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥೆ ಪ್ರೊ.ಸಪ್ನ ಎಂ.ಎಸ್., ಆಕಾಶವಾಣಿಯ ಕಾರ್ಯಕ್ರಮ ನಿರ್ವಾಹಕ ಎನ್.ಕೇಶವಮೂರ್ತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕ ಅಶೋಕ್‌ಕುಮಾರ್ ಉಪಸ್ಥಿತರಿರಲಿದ್ದು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಹರೀಶ್ ಟಿ.ಕೆ ಮತ್ತು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಅಶ್ವಿನಿ ಸ್ವಾಗತ ಮಾಡಲಿದ್ದಾರೆ.

ಕಬ್ಬು ಬೆಳೆಗಾರರ ಹೋರಾಟ ಸಮಿತಿಯಿಂದ ರೈತರಿಗೆ ಸನ್ಮಾನ

ಮೈಸೂರು, ಆ.20(ಜಿಎ)–ಕಬ್ಬು ಬೆಳೆಗಾರರ ಹೋರಾಟ ಹಿತ ರಕ್ಷಣಾ ಸಮಿತಿ ವತಿಯಿಂದ ಆ.26ರಂದು ಸಂಜೆ 4 ಗಂಟೆಗೆ ಜೆಪಿ ನಗರದ ಸಿದ್ದಲಿಂಗೇಶ್ವರ ನಗರದಲ್ಲಿ ಆಗಸ್ಟ್ ತಿಂಗಳ ಕಾರ್ಯಕ್ರಮವಾಗಿ ಪ್ರಗತಿಪರ ರೈತರನ್ನು ಸನ್ಮಾನಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ರಾಜ್ಯಾಧ್ಯಕ್ಷ ಬ್ಯಾತಹಳ್ಳಿ ಮಾದಪ್ಪ ಈ ವಿಷಯ ತಿಳಿಸಿ, ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರಾದ ಕೆ.ಆರ್.ಪೇಟೆ ತಾಲೂಕಿನ ಕೆಡಗ ಗ್ರಾಮದ ಮೀನಾಕ್ಷಮ್ಮ, ಕೊಳ್ಳೇಗಾಲದ ಮತ್ತೀಪುರ ಮಲ್ಲಿಕಾರ್ಜುನಪ್ಪ, ನಂಜನಗೂಡು ತಾಲೂಕಿನ ಗುರುಸಿದ್ದಪ್ಪ, ಕಾ.ಸು.ನಂಜಪ್ಪ, ಜೆ.ಪಿ.ನಗರದ ಸಿ.ಜಿ.ಸಿದ್ದಲಿಂಗಸ್ವಾಮಿ, ಪತ್ರಿಕಾ ವರದಿಗಾರ ಎಂ.ಎನ್.ಕಿರಣ್, ಶೇಖರ್ ಕಿರಗುಂದ ಅವರನ್ನು ಸನ್ಮಾನಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಕಾ.ಸು. ನಂಜಪ್ಪ, ಸಿ.ಜಿ.ಸಿದ್ದಲಿಂಗಸ್ವಾಮಿ, ಜೀಮಾರಳ್ಳಿ ಶಿವಕುಮಾರ್ ಉಪಸ್ಥಿತರಿದ್ದರು.

ದೇಶ – ವಿದೇಶ

ಇಟಲಿ ಕರಾವಳಿಯಲ್ಲಿ ಮುಳುಗಿದ ವಿಹಾರ ನೌಕೆ: ಉದ್ಯಮಿ ಮೈಕ್ ಲೆಂಚ್ ನಾಪತ್ತೆ



ಇಟಲಿ: 'ಬ್ರಿಟಿಷ್ ಬಿಲ್ ಗೇಟ್ಸ್' ಎಂದು ಖ್ಯಾತಿಯಾಗಿದ್ದ ಸಾಫ್ಟ್‌ವೇರ್ ಉದ್ಯಮಿ ಮೈಕ್ ಲೆಂಚ್ ಅವರು ಇಲ್ಲಿನ ಇಟಲಿ ಕರಾವಳಿಯಲ್ಲಿ ವಿಹಾರ ನೌಕೆ ಮುಳುಗಿ ನಾಪತ್ತೆಯಾಗಿದ್ದಾರೆ. ಶನಿವಾರ ಇಟಲಿಯ ಸಿಸಿಲಿ ಕರಾವಳಿಯಲ್ಲಿ ಭಾರಿ ಬಿರುಗಾಳಿಗೆ ಸಿಕ್ಕು ವಿಹಾರ ನೌಕೆ ಮುಳುಗಿತ್ತು. ನೌಕೆಯಲ್ಲಿ ಮೈಕ್ ಲೆಂಚ್, ಅವರ ಹೆಂಡತಿ ಹಾಗೂ ಮಗಳು ಸೇರಿದಂತೆ 22 ಜನ ಇದ್ದರು.

ಪತ್ತೆ ಕಾರ್ಯಾಚರಣೆ ನಡೆಯುತ್ತಿದ್ದು ಒಬ್ಬರ ಶವ ದೊರಕಿದೆ. ಆದರೆ, ಮೈಕ್ ಅವರು ಇನ್ನೂ ಪತ್ತೆಯಾಗಿಲ್ಲ ಎಂದು ಅಂತರರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಹಡಗು ಬಿರುಗಾಳಿಗೆ ಸಿಕ್ಕ ಕೂಡಲೇ ಕೋಸ್ಟ್ ಗಾರ್ಡ್ ಸಿಬ್ಬಂದಿ ರಕ್ಷಣೆಗೆ ಧಾವಿಸಿ ಮೈಕ್ ಹೆಂಡತಿ ಸೇರಿದಂತೆ 15 ಜನರನ್ನು ರಕ್ಷಿಸಿದ್ದರು. ಮೈಕ್ ಹಾಗೂ ಅವರ ಮಗಳು ಸೇರಿದಂತೆ ಇನ್ನೂ ಆರು ಜನ ಪತ್ತೆಯಾಗಿಲ್ಲ. ಐರ್ಲೆಂಡ್ ಮೂಲದ ಮೈಕ್, ಯು.ಕೆ ದೇಶದ ಬಿಲಿಯನೇರ್ ಉದ್ಯಮಿ.

ದೆಹಲಿಯ ಹಲವು ಆಸ್ಪತ್ರೆಗಳಿಗೆ ಬಾಂಬ್ ಬೆದರಿಕೆ: ತೀವ್ರ ಶೋಧ



ನವದೆಹಲಿ: ರಾಷ್ಟ್ರ ರಾಜಧಾನಿ ದೆಹಲಿಯ ಹಲವು ಆಸ್ಪತ್ರೆಗಳಿಗೆ ಬಾಂಬ್ ಬೆದರಿಕೆ ಇ–ಮೇಲ್ ಸಂದೇಶ ಬಂದಿದ್ದು, ತೀವ್ರ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಂಗಲೋಯಿ ಆಸ್ಪತ್ರೆ ಮತ್ತು ಕೇಂದ್ರ ದೆಹಲಿಯ ಚಾಣಕ್ಯ ಪುರಿಯ ಪ್ರೈಮಸ್ ಆಸ್ಪತ್ರೆಯಿಂದ ಮಧ್ಯಾಹ್ನ ಸುಮಾರು 1 ಗಂಟೆಗೆ ಹೊತ್ತಿಗೆ ಬಾಂಬ್ ಬೆದರಿಕೆ ಕುರಿತು ದೂರು ಲಭಿಸಿರುವುದಾಗಿ ದೆಹಲಿ ಅಗ್ನಿಶಾಮಕ ಸೇವೆಗಳ (ಡಿಎಫ್‌ಎಸ್) ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಗ್ನಿಶಾಮಕ ದಳ, ಬಾಂಬ್ ಪತ್ತೆ ಹಾಗೂ ನಿಷ್ಕ್ರಿಯದಳ ಮತ್ತು ಪೊಲೀಸರು ಆಸ್ಪತ್ರೆಗಳಿಗೆ ಧಾವಿಸಿದ್ದಾರೆ. ತೀವ್ರ ಶೋಧ ನಡೆಸುತ್ತಿದ್ದಾರೆ. ದೆಹಲಿಯ ಹಲವು ಆಸ್ಪತ್ರೆ ಹಾಗೂ ಶಾಲೆಗಳಿಗೆ ಬಾಂಬ್ ಬೆದರಿಕೆ ಸಂದೇಶಗಳು ನಿರಂತರವಾಗಿ ಬರುತ್ತಲೇ ಇವೆ. ಆದರೆ ಯಾವುದೇ ಅನುಮಾನಾಸ್ಪದ ವಸ್ತುಗಳು ಪತ್ತೆಯಾಗಿಲ್ಲ. ಅಲ್ಲದೆ ಬಹುತೇಕ ಸಂದರ್ಭಗಳಲ್ಲಿ ಹುಸಿ ಬಾಂಬ್ ಕರೆಗಳು ಬಂದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.


ಎಂಪಾಕ್ಸ್ ಹೊಸ ಕೋವಿಡ್ ಅಲ್ಲ



ಬರ್ಲಿನ್: 'ಎಂಪಾಕ್ಸ್ ವೈರಾಣುವಿನ ಹೊಸ ಅಥವಾ ಹಳೆಯ ತಳಿಯಾಗಿರಲಿ, ಅದು ಹೊಸ ಕೋವಿಡ್ ಅಲ್ಲ' ಎಂದು ವಿಶ್ವ ಆರೋಗ್ಯ ಸಂಸ್ಥೆಯ ಅಧಿಕಾರಿಯೊಬ್ಬರು ಹೇಳಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ವಿಶ್ವ ಆರೋಗ್ಯ ಸಂಸ್ಥೆ ಯುರೋಪ್‌ನ ಪ್ರಾದೇಶಿಕ ನಿರ್ದೇಶಕ ಹ್ಯಾನ್ಸ್ ಕ್ಲೂಗ್, 'ಎಂಪಾಕ್ಸ್ ಸೋಂಕು ಹರಡುವುದನ್ನು ತಡೆಗಟ್ಟಲು ಅಧಿಕಾರಿಗಳಿಗೆ ಚೆನ್ನಾಗಿ ಗೊತ್ತಿದೆ' ಎಂದು ಹೇಳಿದ್ದಾರೆ. 'ಎಂಪಾಕ್ಸ್ ಸೋಂಕನ್ನು ನಾವೆಲ್ಲರೂ ಒಟ್ಟಾಗಿ ನಿಯಂತ್ರಿಸಬಹುದಾಗಿದೆ. ಸಾರ್ವಜನಿಕ ಆರೋಗ್ಯ ಹಾಗೂ ಕಣ್ಗಾವಲು ಮೇಲೆ ಗಮನ ಕೇಂದ್ರೀಕರಿಸಲು ಇದರಿಂದ ಸಾಧ್ಯವಾಗಲಿದೆ' ಎಂದು ಹೇಳಿದ್ದಾರೆ. ಎಂಪಾಕ್ಸ್‌ನ clade 1b ತಳಿ ಹರಡುತ್ತಿರುವುದು ಜಾಗತಿಕವಾಗಿ ತೀವ್ರ ಕಳವಳಕ್ಕೆ ಕಾರಣವಾಗಿದೆ. ಆಫ್ರಿಕಾದಲ್ಲಿ ಹೆಚ್ಚು ಹರಡುತ್ತಿರುವ ಈ ತಳಿಯ ಪ್ರಕರಣ ಕಳೆದ ವಾರ ಸ್ವೀಡನ್‌ನಲ್ಲೂ ದೃಢಪಟ್ಟಿತ್ತು. ಪ್ರತಿ ತಿಂಗಳು ಯುರೋಪ್ ವಲಯದಲ್ಲಿ ಎಂಪಾಕ್ಸ್‌ನ clade 2 ತಳಿಯ ಸುಮಾರು 100ರಷ್ಟು ಹೊಸ ಪ್ರಕರಣಗಳು ವರದಿಯಾಗುತ್ತಿವೆ ಎಂದು ಅವರು ತಿಳಿಸಿದ್ದಾರೆ.

ಭಾರತದಲ್ಲೂ ಕಟ್ಟೆಚ್ಚರ: ವಿವಿಧ ದೇಶಗಳಲ್ಲಿ ಎಂಪಾಕ್ಸ್ ಸೋಂಕು ವ್ಯಾಪಿಸುತ್ತಿರುವುದರಿಂದ ಭಾರತದಲ್ಲೂ ಕಟ್ಟೆಚ್ಚರ ವಹಿಸುವಂತೆ ಕೇಂದ್ರ ಆರೋಗ್ಯ ಸಚಿವಾಲಯವು ಸೂಚಿಸಿದೆ.

ಹಾವನ್ನು ಜಗಿದು ಸಾಯಿಸಿದ ಮಗು, ಕುಟುಂಬಸ್ಥರು, ವೈದ್ಯರಿಗೆ ಶಾಕ್!



ಗಯಾ: ಒಂದು ವರ್ಷದ ಮಗು ಆಟವಾಡುತ್ತಿದ್ದಾಗ, ಹಾವಿನ ಮರಿಯನ್ನು ಬಾಯಲ್ಲಿ ಜಗಿದು ಕೊಂದಿರುವ ಘಟನೆ ಫತೇಪುರ್ ಪೊಲೀಸ್ ಠಾಣಾ ವ್ಯಾಪ್ತಿಯ ಜಮುಹರ್ ಗ್ರಾಮದಲ್ಲಿ ನಡೆದಿದೆ.

ಮಗು ಮನೆಯ ಟೆರೇಸ್ ಮೇಲೆ ಆಟವಾಡುತ್ತಿತ್ತು. ಈ ವೇಳೆ ಹಾವಿನ ಮರಿ ಮನೆಯ ಟೆರೇಸ್ ಮೇಲೆ ಹರಿದಾಡುತ್ತಾ, ಮಗು ಇದ್ದ ಕಡೆ ಬಂದಿದೆ. ಆಗ ಮಗು ಮರಿ ಹಾವನ್ನು ಹಿಡಿದು ಅದರೊಂದಿಗೆ ಆಟವಾಡಲು ಆರಂಭಿಸಿದ್ದು, ಆಟವಾಡುತ್ತಲೇ ಹಾವಿನ ಮರಿಯನ್ನು ಜಗಿದು ಸಾಯಿಸಿದೆ. ಇದನ್ನು ಕಂಡ ಮಗುವಿನ ತಾಯಿ ಕೂಡಲೇ ಮಗುವಿನ ಬಾಯಲ್ಲಿದ್ದ ಹಾವನ್ನು ಹೊರತೆಗೆದು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ತಪಾಸಣೆ ನಡೆಸಿದಾಗ ಭಯಪಡುವ ಅಗತ್ಯವಿಲ್ಲ, ಮಗು ಸಂಪೂರ್ಣ ಆರೋಗ್ಯವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಆದರೆ, ಅದನ್ನು ನಂಬಲು ಕುಟುಂಬದವರಿಗೆ ಸಾಧ್ಯವಾಗಿರಲಿಲ್ಲ. ಹೀಗಾಗಿ ಮಗುವನ್ನು ಪುನಃ ಪರೀಕ್ಷಿಸುವಂತೆ ವೈದ್ಯರಿಗೆ ಪದೇ ಪದೆ ಕೇಳಿಕೊಂಡರು. ಗಾಯ ನೋಡಿದ ವೈದ್ಯರು, ಇದು ವಿಷಕಾರಿಯಲ್ಲ. ಮಳೆಗಾಲದಲ್ಲಿ ಈ ಸ್ಥಿತಿ ಹೆಚ್ಚಾಗಿ ಕಂಡುಬರುತ್ತದೆ. ಮಗುವಿಗೆ ಯಾವುದೇ ಅಪಾಯವಿಲ್ಲ ಎಂದಿದ್ದಾರೆ.

99 ವರ್ಷದ ಮಹಿಳೆ ವಿರುದ್ಧದ ತೀರ್ಪು ಎತ್ತಿಹಿಡಿದ ಜರ್ಮನಿ ಕೋರ್ಟ್



ಬರ್ಲಿನ್: ಎರಡನೇ ವಿಶ್ವಯುದ್ಧದ ಸಂದರ್ಭದಲ್ಲಿ ನಡೆದ 10,505 ಕೊಲೆಗಳಿಗೆ ಪ್ರೇರಕಳಾಗಿದ್ದಾಳೆ ಎಂಬ ಅಪರಾಧ ಪ್ರಕರಣದಲ್ಲಿ ಶಿಕ್ಷೆಗೆ ಗುರಿಯಾಗಿದ್ದ 99 ವರ್ಷದ ಮಹಿಳೆ ಸಲ್ಲಿಸಿದ್ದ ಮೇಲ್ಮನವಿಯನ್ನು ಜರ್ಮನ್ ಕೋರ್ಟ್ ಮಂಗಳವಾರ ತಿರಸ್ಕರಿಸಿದೆ. ನಾಜಿ ಶಿಬಿರದ ಕಮಾಂಡರ್‌ನ ಕಾರ್ಯದರ್ಶಿಯಾಗಿದ್ದ ಇರ್ಮ್‌ಗರ್ಡ್ ಫರ್ಚ್‌ನರ್ ಈ ಎಲ್ಲ ಕೊಲೆಗಳಿಗೆ ಪ್ರೇರಕಳಾಗಿದ್ದಳು ಎಂಬ ಪ್ರಕರಣದಲ್ಲಿ ಸ್ಥಳೀಯ ಕೋರ್ಟ್ ಡಿಸೆಂಬರ್ 2022ರಲ್ಲಿ ಶಿಕ್ಷೆ ವಿಧಿಸಿತ್ತು. ಈ ತೀರ್ಪನ್ನು ಫೆಡರಲ್ ಕೋರ್ಟ್ ಎತ್ತಿಹಿಡಿದಿದೆ. ಜರ್ಮನಿಯ ಪ್ರಮುಖ ಯಹೂದಿ ನಾಯಕ ಜೋಸೆಫ್ ಶ್ಯೂಸ್ಟರ್ ಕೋರ್ಟ್ ತೀರ್ಪನ್ನು ಸ್ವಾಗತಿಸಿದ್ದಾರೆ. ಸಾಮೂಹಿಕ ಹತ್ಯೆ ನಡೆದ 80 ವರ್ಷಗಳ ನಂತರವೂ ನಾಜಿಯ ಕೃತ್ಯವನ್ನು ಅಲ್ಲಗಳೆಯದೆ ನ್ಯಾಯಾಂಗ ವ್ಯವಸ್ಥೆಯು ಮಹತ್ವದ ಸಂದೇಶ ಸಾರಿದೆ ಎಂದು ಹೇಳಿದ್ದಾರೆ.

ಮೈಸೂರು ಮಿತ್ರ ಬುಧವಾರ 21 ಆಗಸ್ಟ್ 2024

ನಿರ್ಗತಿಕರನ್ನು ಮುಖ್ಯವಾಹಿನಿಗೆ ತಂದ ದೇವರಾಜ ಅರಸು

ಡಿ.ದೇವರಾಜ ಅರಸು ಜನ್ಮ ದಿನಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಸ್ಮರಣೆ



ಮಡಿಕೇರಿ ಗಾಂಧಿ ಭವನದಲ್ಲಿ ನಡೆದ ಡಿ.ದೇವರಾಜ ಅರಸು ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಉದ್ಘಾಟಿಸಿದರು.

> ಡಿ.ದೇವರಾಜ ಅರಸು ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಬಡವರಿಗೆ ಕಾರ್ಯಕ್ರಮಗಳನ್ನು ರೂಪಿಸಿದ್ದರು. ಅವರ ದೂರದೃಷ್ಟಿ ಹಾಗೂ ದಾರ್ಶನಿಕತ್ವದಿಂದ ಇಂದು ಹಲವರು ಇತರರಂತೆ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ.
>
> -ಟಿ.ಪಿ.ರಮೇಶ್, ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾಧ್ಯಕ್ಷ

ಮಡಿಕೇರಿ, ಆ.20– ರಾಜ್ಯದ ಬಡವರು, ನಿರ್ಗತಿಕರು, ಅಲೆಮಾರಿಗಳನ್ನು ಗುರುತಿಸಿ ಮುಖ್ಯವಾಹಿನಿಗೆ ತರಲು ಶ್ರಮಿಸಿದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ವಿನೂತನ ಹಾಗೂ ವಿಶಿಷ್ಟ ವ್ಯಕ್ತಿತ್ವ ಹೊಂದಿದ್ದರು ಎಂದು ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಸ್ಮರಿಸಿದರು.

ನಗರದ ಗಾಂಧಿ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ದಿವಂಗತ ಡಿ.ದೇವರಾಜ ಅರಸು ಅವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಡವರ ಹಾಗೂ ದುರ್ಬಲರ ಬಗ್ಗೆ ಅಪಾರ ಕಾಳಜಿ ಹಾಗೂ ಕಳಕಳಿ ಹೊಂದಿದ್ದರು ಎಂದು ಹೇಳಿದರು.

ವಿದ್ಯಾರ್ಥಿನಿಲಯಗಳ ಆರಂಭ, ಭಾಗ್ಯಜ್ಯೋತಿ, ಹಿಂದುಳಿದ ವರ್ಗಗಳಿಗೆ ಭೂಮಿ ಹಂಚಿಕೆ ಹೀಗೆ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸುವ ಮೂಲಕ ಸಮಾಜದಲ್ಲಿ ಬದಲಾವಣೆ ಮತ್ತು ಸುಧಾರಣೆಗೆ ಶ್ರಮಿಸಿದರು. ಸಮಾಜದಲ್ಲಿ ಕಟ್ಟಕಡೆಯವರು ಸಹ ಮುಖ್ಯವಾಹಿನಿಗೆ ಬರಬೇಕು ಎಂದು ದೇವರಾಜ ಅರಸು ಅವರ ಆಶಯವಾಗಿತ್ತು. ಆ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸಿದ್ದರು ಎಂದರು. ಆಲೂರು ಸಿದ್ದಾಪುರ ಮೊರಾರ್ಜಿ ವಸತಿ ಶಾಲೆ ಪ್ರಾಂಶುಪಾಲೆ ಕೆ.ಆರ್.ಭಾರತಿ ಮಾತನಾಡಿ, ಬಡವರ ಸಂಕಷ್ಟಕ್ಕೆ ಸ್ಪಂದಿಸಿದ ಕೀರ್ತಿ ಅರಸು ಅವರಿಗೆ ಸಲ್ಲುತ್ತದೆ. ಹಿಂದುಳಿದ ವರ್ಗಗಳ ಹರಿಕಾರರಾಗಿ ರಾಜ್ಯದಲ್ಲಿ ಪರಿವರ್ತನೆಯತ್ತ ಹೆಜ್ಜೆ ಹಾಕಿದರು. ಸಮಾನತೆ ಸಮಾಜ ನಿರ್ಮಾಣಕ್ಕೆ ಪ್ರಯತ್ನಿಸಿದರು ಎಂದು ತಿಳಿಸಿದರು.

ಸರ್ಕಾರದ ಯೋಜನೆಗಳು ಪ್ರತಿಯೊಬ್ಬರಿಗೂ ತಲುಪಬೇಕು ಎಂದು ದೇವರಾಜ ಅರಸು ಅವರ ಇಚ್ಛಾಶಕ್ತಿ ಹಾಗೂ ಬದ್ಧತೆಯಾಗಿತ್ತು. ವಿಧಾನಸೌಧದ ಮೂರನೇ ಮಹಡಿಯಲ್ಲಿ ಕೃಷಿಕರು, ಬಡವರು, ನಿರ್ಗತಿಕರು, ಇತರರು ಓಡಾಡುವಂತೆ ಮಾಡಿದರು. ಸಾಲಮನ್ನಾ ಯೋಜನೆ, ಜೀತ ಪದ್ಧತಿ ನಿರ್ಮೂಲನೆ, ಮಲ ಹೊರುವ ಪದ್ಧತಿ ನಿಷೇಧ, ವೃದ್ಧಾಪ್ಯ ವೇತನ ಹೀಗೆ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿದರು ಎಂದರು.

ಇದೇ ವೇಳೆ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಹಾಗೂ ಉತ್ತಮ ನೌಕರರನ್ನು ಸನ್ಮಾನಿಸಲಾಯಿತು. ಚಿತ್ರಕಲೆ, ಪ್ರಬಂಧ ಸ್ಪರ್ಧೆ ವಿಜೇತರಿಗೆ ಪ್ರಶಸ್ತಿ ವಿತರಿಸಲಾಯಿತು. ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಸ್.ಹೊನ್ನೇಗೌಡ, ಪ್ರಮುಖರಾದ ಮೇದಪ್ಪ, ಕೆ.ಟಿ.ಬೇಬಿ ಮ್ಯಾಥ್ಯೂ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಶೇಖರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಟರಾಜ, ಜಿಲ್ಲಾ ಖಜಾನಾಧಿಕಾರಿ ರಘುನಾಥ್, ಪೌರಾಯುಕ್ತ ವಿಜಯ್, ಜಿಲ್ಲಾ ಸಾಂಖ್ಯಿಕಾಧಿಕಾರಿ ನಾರಾಯಣ, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕಿ ಮಹಾದೇವಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಕೃಷ್ಣಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯವಸ್ಥಾಪಕ ಶಿವಶಂಕರ, ಭಾಗಮಂಡಲ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ ಪ್ರಾಂಶುಪಾಲ ಲೋಕೇಶ್, ಕೂಡಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಕಾಶ್ ಇತರರು ಇದ್ದರು.

ವೀರನಹೊಸಹಳ್ಳಿಗೆ ತೆರಳಿದ ದಸರಾ ಆನೆ...



ಮೈಸೂರು ದಸರಾ ಮಹೋತ್ಸವದ ಗಜಪಯಣಕ್ಕೆ ಬುಧವಾರ ಚಾಲನೆ ನೀಡಲಿದ್ದು, ಕುಶಾಲನಗರ ಸಮೀಪದ ನಂಜರಾಯಪಟ್ಟಣ ಬಳಿಯ ದುಬಾರೆ ಶಿಬಿರದಿಂದ ಧನಂಜಯ, ಗೋಪಿ ಹಾಗೂ ಕಂಜನ್ ಸಾಕಾನೆಗಳು ಮಂಗಳವಾರ ಹುಣಸೂರು ತಾಲೂಕಿನ ವೀರನಹೊಸಹಳ್ಳಿಗೆ ತೆರಳಿದವು. ಕುಶಾಲನಗರ ವಲಯ ಅರಣ್ಯಾಧಿಕಾರಿ ರತನ್ ಕುಮಾರ್, ಮಾವುತರಾದ ಜೆ.ಸಿ.ಭಾಸ್ಕರ್, ನವೀನ್ ಕುಮಾರ್, ಭೋಜಪ್ಪ, ಜೆ.ಡಿ.ವಿಜಯ, ಕಾವಾಡಿಗಳಾದ ಶಿವು, ಮಣಿ, ಬಿ.ಪಿ.ಭರತ್, ಮಣಿಕಂಠ, ಅರಣ್ಯ ಸಿಬ್ಬಂದಿ ಇದ್ದರು.

ಧಾರಾಕಾರ ಮಳೆ: ಮನೆಗಳಿಗೆ ನುಗ್ಗಿದ ಕೊಳಚೆ ನೀರು



ಧಾರಾಕಾರ ಮಳೆಯಿಂದ ಸುಂಟಿಕೊಪ್ಪ ಗದ್ದೆಹಳ್ಳದ ಹಲವು ಮನೆಗಳಿಗೆ ಕೊಳಚೆ ನೀರು ನುಗ್ಗಿರುವುದು.

ಸುಂಟಿಕೊಪ್ಪ, ಆ.20–ಸುಂಟಿಕೊಪ್ಪ ವ್ಯಾಪ್ತಿ ಮಂಗಳವಾರ ಧಾರಾಕಾರ ಮಳೆಯಾದ ಪರಿಣಾಮ ಗದ್ದೆಹಳ್ಳದ ಹಲವು ಮನೆಗಳಿಗೆ ಕೊಳಚೆ ನೀರು ನುಗ್ಗಿದೆ.

ಮಧ್ಯಾಹ್ನ 2.45ರಲ್ಲಿ ಭಾರಿ ಮಳೆ ಸುರಿದ ಪರಿಣಾಮ ಗದ್ದೆಹಳ್ಳದ ಗಿರಿಯಪ್ಪ ಮನೆಯ ತಗ್ಗು ಪ್ರದೇಶದ ಚರಂಡಿ ಹಾಗೂ ತೊರೆ ಗಳು ತುಂಬಿ ಹರಿದು ಅಲ್ಲಿನ ನಿವಾಸಿಗಳ ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಸಿತ್ತು. ಹನೀಫ, ಫೌಸಿಯ, ಇಸ್ಮಾಯಿಲ್, ಅಬು ಬಕ್ಕರ್, ಸಲೀಂ, ಉಮ್ಮರ್ ಅವರ ಮನೆಗಳಿಗೆ ಕೊಳಚೆ ನೀರು ನುಗ್ಗಿದೆ. ಇದರಿಂದ ಮನೆಯ ಗೃಹೋಪಯೋಗಿ ವಸ್ತುಗಳು ಹಾಗೂ ಪೀಠೋಪಕರಣಗಳನ್ನು ನೀರಿನಿಂದ ರಕ್ಷಿಸಲು ಹರಸಾಹಸ ಪಡುವಂತಾಯಿತು.

ಸುಂಟಿಕೊಪ್ಪ ಹೃದಯ ಭಾಗದಲ್ಲಿ ಅವೈಜ್ಞಾನಿಕ ಬಡಾವಣೆಗಳ ನಿರ್ಮಾಣದಿಂದ ಮುಂದಿನ ದಿನಗಳಲ್ಲಿ ಮತ್ತಷ್ಟು ಸಂಕಷ್ಟವನ್ನು ಗದ್ದೆಹಳ್ಳದ ಗಿರಿಯಪ್ಪ ಮನೆಯ ನಿವಾಸಿಗಳು ಎದುರಿಸುವ ಅನಿವಾರ್ಯಕ್ಕೆ ಸಿಲುಕಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನ ಹರಿಸಿ, ಕ್ರಮ ಕೈಗೊಳ್ಳುವಂತೆ ಇಲ್ಲಿನ ನಿವಾಸಿಗಳು ಮನವಿ ಮಾಡಿದ್ದಾರೆ.

ಸುಂಟಿಕೊಪ್ಪ ಗ್ರಾಪಂ ಅಧ್ಯಕ್ಷ ಪಿ.ಆರ್.ಸುನೀಲ್ ಕುಮಾರ್ ಹಾಗೂ ಉಪಾಧ್ಯಕ್ಷೆ ಶಿವಮ್ಮ ಮಹೇಶ್, ಸದಸ್ಯರಾದ ಪಿ.ಎಫ್.ಸಬಾಸ್ಟೀನ್ ಭೇಟಿ ನೀಡಿ, ಪರಿಶೀಲಿಸಿದರು.

ಕೊಡಗು ಪ್ರೆಸ್ ಕ್ಲಬ್‌ಗೆ ಆಯ್ಕೆ...



ಕೊಡಗು ಪ್ರೆಸ್‌ಕ್ಲಬ್ ಅಧ್ಯಕ್ಷರಾಗಿ ಬೊಳ್ಳಜೀರ ಬಿ.ಅಯ್ಯಪ್ಪ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಎಂ.ಕೆ.ಆದರ್ಶ್, ಹಿರಿಯ ಉಪಾಧ್ಯಕ್ಷರಾಗಿ ನವೀನ್ ಡಿಸೋಜ, ಉಪಾಧ್ಯಕ್ಷರಾಗಿ ವನಿತಾ ಚಂದ್ರಮೋಹನ್, ಖಜಾಂಚಿಯಾಗಿ ಚೀಯಂಡಿ ತೇಜಸ್ ಪಾಪಯ್ಯ, ಸಂಘಟನಾ ಕಾರ್ಯದರ್ಶಿಯಾಗಿ ಕೆ.ಜೆ.ಶಿವರಾಜ್, ಸಹ ಕಾರ್ಯದರ್ಶಿಯಾಗಿ ವಿ.ವಿ.ಅರುಣ್ ಕುಮಾರ್, ನಿರ್ದೇಶಕರಾಗಿ ಕೆ.ಎಂ.ವಿನೋದ್, ಎಂ.ಆರ್.ಲೋಹಿತ್, ಕೆ.ಎಸ್.ಲೋಕೇಶ್, ಕೆ.ಎಂ.ಇಸ್ಮಾಯಿಲ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕರ್ನಾಟಕ ಕೊಡವ ಸಾಹಿತ್ಯ ಮತ್ತು ಸಾಂಸ್ಕೃತಿಕ ಅಕಾಡೆಮಿ ರಿಜಿಸ್ಟ್ರಾರ್ ಅಜ್ಜಿಕುಟ್ಟಿರ ಸಿ.ಗಿರೀಶ್ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಬಿಲ್ಲವ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ



ಅಂಬಟ್ಟಿ ಮಂದಿರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಿಲ್ಲವ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವಿರಾಜಪೇಟೆ, ಆ.20– ಶ್ರೀ ನಾರಾಯಣ ಗುರು ಜಾತಿ ಮತ ಭೇದವಿಲ್ಲದೆ ಎಲ್ಲರೂ ಒಂದೇ ಎಂಬ ಸಂದೇಶ ಸಾರಿದ್ದಾರೆ. ಅವರ ಆದರ್ಶವನ್ನು ನಾವೆಲ್ಲರೂ ಪಾಲಿಸಬೇಕು ಎಂದು ಬಿಲ್ಲವ ಸಂಘದ ತಾಲೂಕು ಅಧ್ಯಕ್ಷ ಬಿ.ಎಂ.ಗಣೇಶ್ ಹೇಳಿದರು.

ಸಮೀಪದ ಬಿಟ್ಟಂಗಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಬಟ್ಟಿಯ ಮಂದಿರದಲ್ಲಿ ವಿರಾಜಪೇಟೆ ತಾಲೂಕು ಬಿಲ್ಲವ ಸೇವಾ ಸಂಘದ ವತಿಯಿಂದ ಬ್ರಹ್ಮ ಶ್ರೀ ನಾರಾಯಣ ಗುರು ಜಯಂತಿ ಅಂಗವಾಗಿ ಆಯೋಜಿಸಿದ್ದ ಪ್ರತಿಭಾವಂತ ವಿದ್ಯಾರ್ಥಿಗಳ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವಿರಾಜಪೇಟೆ ತಾಲೂಕಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಿಲ್ಲವ ಜನಾಂಗದವರು ಇದ್ದಾರೆ. ಜನಾಂಗದವರ ಕಾರ್ಯಕ್ರಮಗಳಿಗೆ ಶ್ರೀ ನಾರಾಯಣ ಗುರು ಮಂದಿರದ ಆವರಣದಲ್ಲಿ ಸಭಾಂಗಣ ನಿರ್ಮಾಣಕ್ಕಾಗಿ 1 ಎಕರೆ ಜಾಗ ಇರಿಸಲಾಗಿದ್ದು, ಇದಕ್ಕಾಗಿ ಅನುದಾನ ನೀಡುವಂತೆ ಸರ್ಕಾರಕ್ಕೆ ಮಾನವಿ ಮಾಡಲಾಗಿದೆ ಎಂದರು.

ಬಿಲ್ಲವ ಜನಾಂಗದ ಶುಭ ಕಾರ್ಯಗಳಿಗಾಗಿ ಸಮುದಾಯ ಭವನ ನಿರ್ಮಿಸಿಕೊಡುವಂತೆ ಹಲವಾರು ವರ್ಷಗಳಿಂದ ಮನವಿ ಸಲ್ಲಿಸಲಾಗಿದೆ. ಇದೀಗ ಶಾಸಕ ಎ.ಎಸ್.ಪೊನ್ನಣ್ಣ ಸಮುದಾಯ ಭವನ ನಿರ್ಮಿಸಿಕೊಡುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಾರಾಯಣ ಗುರುವಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಪಡೆದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಮೊಣ್ಣಪ್ಪ ಪೂಜಾರಿ, ಸರ್ಕಾರಿ ಅಭಿಯೋಜಕ ಅಂಮೃತ್ ಸೋಮಯ್ಯ, ನಿವೃತ್ತ ಶಿಕ್ಷಕಿ ಸುನಂದ, ದಾನಿಗಳಾದ ಬಿ.ಎಸ್. ನಾರಾಯಣ, ಬಿಲ್ಲವ ಸಂಘದ ಗೌರವಾಧ್ಯಕ್ಷ ಬಿ.ಆರ್.ರಾಜ, ಉಪಾಧ್ಯಕ್ಷ ಪುರುಷೋತ್ತಮ, ಖಜಾಂಚಿ ಬಿ.ಎಂ. ಸತೀಶ್ ಪೂಜಾರಿ, ಕಾರ್ಯದರ್ಶಿ ಜನಾರ್ಧನ ಭಾಗವಹಿಸಿದ್ದರು.

ಟಿ.ವೈ.ಸಿದ್ದಪ್ಪ ನಿಧನ



ಕುಶಾಲನಗರ, ಆ.20–ಸಮೀಪದ ತೊರೆನೂರು ಗ್ರಾಮದ ಗದ್ದೆಹೊಸಳ್ಳಿ ಗ್ರಾಮದ ನಿವೃತ್ತ ಪೋಸ್ಟ್‌ಮ್ಯಾನ್ ಟಿ.ವೈ.ಸಿದ್ದಪ್ಪ (69) ಅನಾರೋಗ್ಯದಿಂದ ಮಂಗಳವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಸ್ವಗ್ರಾಮದಲ್ಲಿ ಅಂತ್ಯಸಂಸ್ಕಾರ ನಡೆಯಿತು.

ಆಲೂರಲ್ಲಿ ನೇತ್ರ ತಪಾಸಣಾ ಉಚಿತ ಶಿಬಿರ



ಆಲೂರು ಗ್ರಾಮದಲ್ಲಿ ಎ.ವಿ.ನಾಗರಾಜು ಪುಣ್ಯಸ್ಮರಣೆ ಅಂಗವಾಗಿ ಆಯೋಜಿಸಿದ್ದ ನೇತ್ರ ತಪಾಸಣಾ ಶಿಬಿರದಲ್ಲಿ ಭಾಗವಹಿಸಿದ್ದ ಜನರು.

ಆಲೂರು, ಆ.20–ಚಾಮರಾಜನಗರ ತಾಲೂಕಿನ ಆಲೂರು ಗ್ರಾಮದಲ್ಲಿ ಪತ್ರಕರ್ತ ಎ.ವಿ.ನಾಗರಾಜು ಅವರ 2ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಉಚಿತ ನೇತ್ರ ತಪಾಸಣಾ ಶಿಬಿರ ಆಯೋಜಿಸಲಾಗಿತ್ತು.

ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಮೈಸೂರು ರೇಸ್ ಕ್ಲಬ್, ಚಾರಿಟಬಲ್ ಟ್ರಸ್ಟ್‌ನ ಕಣ್ಣಿನ ಆಸ್ಪತ್ರೆ, ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಜಿಲ್ಲಾ ಪತ್ರಿಕಾ ವಿತರಕರ ಸಂಘದ ಸಂಯುಕ್ತಾಶ್ರಯದಲ್ಲಿ ನೇತ್ರ ತಪಾಸಣಾ ಶಿಬಿರ ನಡೆಯಿತು.

ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಕನ್ನಡಪ್ರಭ ಹಿರಿಯ ಪ್ರಸಾರಣಾಧಿಕಾರಿ ಗಣೇಶ್, ಜಗತ್ತಿನ ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಬದಲಾವಣೆಯಲ್ಲಿ ಮಾಧ್ಯಮಗಳ ಪಾತ್ರ ಬಹುಮುಖ್ಯ. ಜೊತೆಗೆ ರೋಗಿ ಮತ್ತು ವೈದ್ಯರ ನಡುವಿನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿವೆ ಎಂದರು.

ಪತ್ರಿಕೆ ನಾಗಪ್ಪ ಎಂದೇ ಈ ಭಾಗದಲ್ಲಿ ಪರಿಚಿತರಾಗಿದ್ದ ಪತ್ರಕರ್ತ ಎ.ವಿ.ನಾಗರಾಜು ಅವರ ಪುಣ್ಯಸ್ಮರಣೆ ಹೆಸರಿನಲ್ಲಿ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗೂ ಉಚಿತ ಕನ್ನಡಕ ನೀಡುತ್ತಿರುವುದು ಅರ್ಥಪೂರ್ಣವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ರೈತ ಮುಖಂಡ ಎ.ಎಂ.ಚನ್ನಂಜಪ್ಪ ಮಾತನಾಡಿ, ಇಂತಹ ಆರೋಗ್ಯ ತಪಾಸಣಾ ಶಿಬಿರಗಳು ಗ್ರಾಮಾಂತರ ಜನರಿಗೆ ಅನುಕೂಲವಾಗಿವೆ ಎಂದು ತಿಳಿಸಿದರು.

ಶಿಬಿರದಲ್ಲಿ ಭಾಗವಹಿಸಿದ್ದ ನೂರಾರು ಜನರಿಗೆ ತಪಾಸಣೆ ನಡೆಸಲಾಯಿತು. ಇವರಲ್ಲಿ 15 ಜನರನ್ನು ಕಣ್ಣಿನ ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು. ಇದೇ ವೇಳೆ ಅನ್ನಸಂತರ್ಪಣೆ ಏರ್ಪಡಿಸಲಾಯಿತು. ಶಿಬಿರ ಆಯೋಜಕರಾದ ಆಲೂರು ನಾಗೇಂದ್ರ ಮೂರ್ತಿ, ಪರಶಿವಪ್ಪ, ಕೋಟಂಬಳ್ಳಿ ಸಿದ್ದರಾಜು, ಆಲೂರು ಅಕ್ಕಪಕ್ಕದ ಗ್ರಾಮಸ್ಥರು ಭಾಗವಹಿಸಿದ್ದರು.

ಆ.23ರಂದು ಜಿಲ್ಲಾ ಪ.ಜಾತಿ ಹಿತರಕ್ಷಣಾ ಸಮಿತಿ ಸಭೆ

ಚಾಮರಾಜನಗರ, ಆ.20–ಜಿಲ್ಲಾ ಪರಿಶಿಷ್ಟ ಜಾತಿ ಹಿತರಕ್ಷಣಾ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಆ.23ರಂದು ಬೆಳಗ್ಗೆ 11 ಗಂಟೆಗೆ ನಗರದ ಹಳೇ ಕೆಡಿಪಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಸಭೆಯಲ್ಲಿ ಚರ್ಚಿಸಬೇಕಾದ ಸಮಸ್ಯೆಗಳ ಪತ್ರವನ್ನು ಆ.21ರಂದು ಸಂಜೆ 5 ಗಂಟೆಯೊಳಗೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಹಾಗೂ ಚಾಮರಾಜನಗರ, ಕೊಳ್ಳೇಗಾಲ, ಯಳಂದೂರು, ಗುಂಡ್ಲುಪೇಟೆ ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸುವಂತೆ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬದಲಾವಣೆಯ ಕ್ರಾಂತಿಕಾರಿ ದೇವರಾಜ ಅರಸು

▶ ಶಾಸಕ ಸಿ.ಪುಟ್ಟರಂಗಶೆಟ್ಟಿ ಮೆಚ್ಚುಗೆ ▶ ನಗರದಲ್ಲಿ ಅರಸು ಜಯಂತಿ ಆಚರಣೆ



ಚಾಮರಾಜನಗರದಲ್ಲಿ ನಡೆದ ಡಿ.ದೇವರಾಜ ಅರಸು ಅವರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಪುಷ್ಪಾರ್ಚನೆ ಮಾಡಿದರು.

> “ಆಧುನಿಕ ಭಾರತದ ಚರಿತ್ರೆಯಲ್ಲಿ ಅರಸು ಅವರ ಸಮಾಜ ಸುಧಾರಣೆ, ರಾಜಕೀಯ ಜೀವನ, ಆಡಳಿತ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಸಾಧನೆಯಾಗಿದೆ. ಅವರ ಜನಪರ ಯೋಜನೆಗಳ ಜಾರಿ ನವ ಕರ್ನಾಟಕದ ಉದಯಕ್ಕೆ ಕಾರಣವಾಯಿತು. ಯಾವುದೇ ಪ್ರಭಾವವಿಲ್ಲದೆ ಸ್ವಸಾಮರ್ಥ್ಯದಿಂದ ಮೇಲೆ ಬಂದ ಅರಸು ಅವರು ನೇರ ಹಾಗೂ ನಿಷ್ಠುರವಾದಿಯಾಗಿದ್ದರು. ಕುವೆಂಪು ಅವರ ಅಭಿಮಾನಿಯಾಗಿದ್ದ ಅವರು ಸಂಗೀತ, ಸಾಹಿತ್ಯ ಹಾಗೂ ಲಲಿತ ಕಲೆಗಳ ಆರಾಧಕರೂ ಆಗಿದ್ದರು.
>
> -ಪ್ರೊ.ಸಿ.ನಾಗಣ್ಣ, ಮೈಸೂರು ವಿವಿಯ ಸಂದರ್ಶಕ ಪ್ರಾಧ್ಯಾಪಕ, ಲೇಖಕ

> “ಅರಸು ಅವರು ತಮ್ಮ ರಾಜಕೀಯ ಬದುಕಿನುದ್ದಕ್ಕೂ ರಾಜ್ಯದ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದರು. ಶಿಕ್ಷಣ ಸುಧಾರಣೆಗೆ ವಿದ್ಯಾರ್ಥಿನಿಲಯಗಳನ್ನು ಆರಂಭಿಸಿದರು. ಅರಸು ಅವರನ್ನು ಚಿರಸ್ಥಾಯಿಯಾಗಿಸುವ ಉದ್ದೇಶದಿಂದ ಪ್ರತಿವರ್ಷ ದೇವರಾಜ ಅರಸು ಪ್ರಶಸ್ತಿ ನೀಡಲಾಗುತ್ತಿದೆ.
>
> -ಶಿಲ್ಪನಾಗ್, ಜಿಲ್ಲಾಧಿಕಾರಿ

ಚಾಮರಾಜನಗರ, ಆ.20–ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಸಾಮಾಜಿಕ ಸುಧಾರಣೆಯಲ್ಲಿ ಕ್ರಾಂತಿಕಾರಿ ಬದಲಾವಣೆ ತಂದಿದ್ದಾರೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ ವರನಟ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಡಿ.ದೇವರಾಜ ಅರಸು ಅವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲೇ ಸಾಕಷ್ಟು ಜನಪರ ಹೋರಾಟಗಳಲ್ಲಿ ಭಾಗವಹಿಸಿದ್ದ ದೇವರಾಜ ಅರಸು ಪ್ರಜಾಪ್ರಭುತ್ವದ ಆಶಯದಂತೆ ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದರು ಎಂದು ತಿಳಿಸಿದರು.

ಬಡವರ, ಶೋಷಿತರ, ಹಿಂದುಳಿದ ವರ್ಗಗಳ, ದೀನದಲಿತರಿಗೆ ಸಾಮಾಜಿಕ ನ್ಯಾಯ ದೊರಕಿಸಲು ಮುನ್ನುಡಿ ಬರೆದರು. 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆ ತಂದು ಎಲ್ಲಾ ಸಮುದಾಯಗಳಿಗೂ ಶಿಕ್ಷಣ, ಉದ್ಯೋಗ ಕಲ್ಪಿಸಿದರು. ಭೂ ಸುಧಾರಣೆ, ಜೀತ ಪದ್ಧತಿ ನಿಷೇಧ, ಆಶ್ರಯ ಯೋಜನೆ ಮನೆಗಳು ಅರಸು ಅವರ ಪ್ರಮುಖ ಕೊಡುಗೆಗಳಾಗಿವೆ ಎಂದು ಸ್ಮರಿಸಿದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ದೇಶದ ಅಪ್ರತಿಮ ರಾಜಕಾರಣಿ, ರಾಜಕೀಯ ಮುತ್ಸದ್ಧಿ ದೇವರಾಜ ಅರಸು ಆಗಿದ್ದಾರೆ. ಕೃಷಿಕ ಕುಟುಂಬದಿಂದ ಬಂದ ಅವರು, ರೈತಾಪಿ ವರ್ಗಗಳ ಕಷ್ಟ–ಕಾರ್ಪಣ್ಯಗಳನ್ನು ಹತ್ತಿರದಿಂದ ಅರಿತಿದ್ದರು. ಸಮಾಜದಲ್ಲಿ ಬಡವರ, ಶೋಷಿತರ ಧ್ವನಿಯಾಗಿದ್ದ ಅವರು ಇಡೀ ದೇಶಕ್ಕೆ ಮಾದರಿ ರಾಜಕಾರಣಿ ಎಂದರೆ ತಪ್ಪಾಗಲಾರದು. ಅವರು ಸದಾ ಸ್ಮರಣೀಯರಾಗಿದ್ದಾರೆ ಎಂದು ತಿಳಿಸಿದರು.

ಇದೇ ವೇಳೆ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಜನಪದ ಗಾಯಕ ಸಿ.ಎಂ.ನರಸಿಂಹ ಮೂರ್ತಿ ಪ್ರಸ್ತುತಪಡಿಸಿದ ಡಿ.ದೇವರಾಜ ಅರಸು ಕುರಿತ ಗಾಯನ ಗಮನ ಸೆಳೆಯಿತು. ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಜಿಪಂ ಸಿಇಒ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಎಚ್.ವಿ.ಚಂದ್ರು, ಕುದೇರಿನ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ವೈ.ಸಿ.ನಾಗೇಂದ್ರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಕುಮಾರ್ ಕಾರ್ಯಕ್ರಮದಲ್ಲಿ ಹಾಜರಿದ್ದರು.

ಇದಕ್ಕೂ ಮೊದಲು ನಗರದ ಚಾಮರಾಜೇಶ್ವರ ದೇವಾಲಯದಿಂದ ಜಿಲ್ಲಾಡಳಿತ ಭವನದವರೆಗೆ ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಅರಸು ಭಾವಚಿತ್ರವನ್ನು ಮೆರವಣಿಗೆ ನಡೆಸಲಾಯಿತು.

ಗುಂಡ್ಲುಪೇಟೆಯಲ್ಲಿ ಅಂಬೇಡ್ಕರ್ ಜಯಂತಿ



ಗುಂಡ್ಲುಪೇಟೆಯಲ್ಲಿ ಅಂಬೇಡ್ಕರ್ ಜಯಂತಿ ಅಂಗವಾಗಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಗುಂಡ್ಲುಪೇಟೆ, ಆ.20– ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣಾ ಸಮಿತಿ ವತಿಯಿಂದ ಪಟ್ಟಣದಲ್ಲಿ ಸಂವಿಧಾನ ಶಿಲ್ಪಿ ಬಿ.ಆರ್.ಅಂಬೇಡ್ಕರ್ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ವಿವಿಧ ಜನಪದ ಕಲಾತಂಡಗಳೊಂದಿಗೆ ಅಂಬೇಡ್ಕರ್ ಭಾವಚಿತ್ರವನ್ನು ದೇವರಾಜ ಅರಸು ಕ್ರೀಡಾಂಗಣದಿಂದ ಕನಕದಾಸ ವೃತ್ತ, ಅಂಬೇಡ್ಕರ್ ಸರ್ಕಲ್, ನೆಹರು ಪಾರ್ಕ್, ಕೋಡಹಳ್ಳಿ ಸರ್ಕಲ್ ಮಾರ್ಗವಾಗಿ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆಗೆ ನಳಂದ ವಿಶ್ವವಿದ್ಯಾನಿಲಯದ ಬೋಧಿರತ್ನ ಮಹಾಥೇರಾ, ಶಾಸಕ ಹೆಚ್.ಎಸ್.ಗಣೇಶ್‌ಪ್ರಸಾದ್, ಮಾಜಿ ಶಾಸಕ ಸಿ.ಎಸ್.ನಿರಂಜನ ಕುಮಾರ್, ಮಾಜಿ ಸಂಸದ ಎ.ಸಿದ್ದರಾಜು ಚಾಲನೆ ನೀಡಿದರು.

ಕಾಂಗ್ರೆಸ್ ಕಚೇರಿಯಲ್ಲಿ ರಾಜೀವ್‌ಗಾಂಧಿ ಜನ್ಮ ದಿನಾಚರಣೆ...



ಚಾಮರಾಜನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಮಾಜಿ ಪ್ರಧಾನಿ ದಿ.ರಾಜೀವ್‌ಗಾಂಧಿ ಹಾಗೂ ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಜನ್ಮದಿನವನ್ನು ಆಚರಿಸಲಾಯಿತು. ಶಾಸಕ ಸಿ.ಪುಟ್ಟರಂಗಶೆಟ್ಟಿ ರಾಜೀವ್‌ಗಾಂಧಿ, ದೇವರಾಜ ಅರಸು ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು. ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಕೆಪಿಸಿಸಿ ಸದಸ್ಯ ಸಯ್ಯದ್ ರಫಿ, ನಗರಸಭೆ ಸದಸ್ಯರಾದ ಚಿನ್ನಮ್ಮ, ನೀಲಮ್ಮ, ಎಪಿಎಂಸಿ ಅಧ್ಯಕ್ಷ ಮಹದೇವಸ್ವಾಮಿ ಮತ್ತಿತರರಿದ್ದರು.

ಇಂದು ಮಹದೇಶ್ವರಬೆಟ್ಟದಲ್ಲಿ ಸಾಮೂಹಿಕ ವಿವಾಹ

ಚಾಮರಾಜನಗರ, ಆ.20–ಮಲೆ ಮಹದೇಶ್ವರ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಉಚಿತ ಸಾಮೂಹಿಕ ವಿವಾಹ ಮಹೋತ್ಸವ ಆ.21ರಂದು ಬೆಳಗ್ಗೆ 10.05ಕ್ಕೆ ಮಹದೇಶ್ವರ ಬೆಟ್ಟದ ದೇವಸ್ಥಾನ ರಂಗಮಂದಿರ ಆವರಣದಲ್ಲಿ ನಡೆಯಲಿದೆ.

ಸುತ್ತೂರು ಮಠಾಧ್ಯಕ್ಷರಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಸಾಲೂರು ಬೃಹನ್ಮಠದ ಹಿರಿಯಶ್ರೀ ಪಟ್ಟದ ಗುರುಸ್ವಾಮೀಜಿ ಹಾಗೂ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ ಸಮ್ಮುಖದಲ್ಲಿ ಕಾರ್ಯಕ್ರಮ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮೂಹಿಕ ವಿವಾಹಕ್ಕೆ ಚಾಲನೆ ನೀಡಲಿದ್ದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮಾಂಗಲ್ಯ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ವಧು–ವರರಿಗೆ ವಸ್ತ್ರ ವಿತರಿಸಲಿದ್ದಾರೆ. ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಸುನೀಲ್ ಬೋಸ್, ಶಾಸಕರಾದ ಎಂ.ಆರ್.ಮಂಜುನಾಥ್, ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಹೆಚ್.ಎಂ.ಗಣೇಶ್ ಪ್ರಸಾದ್ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಯಳಂದೂರಿನ ಮಾನ್ಯ ರಂಗ ಪ್ರವೇಶ



ಮೈಸೂರಿನ ಕಲಾಮಂದಿರದಲ್ಲಿ ನಡೆದ ಮಾನ್ಯ ಮಹೇಶ್ ಭರತನಾಟ್ಯ ರಂಗ ಪ್ರವೇಶ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ಯಳಂದೂರು, ಆ.20–ಇತ್ತೀಚೆಗೆ ಮೈಸೂರಿನ ಕಲಾಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಯಳಂದೂರಿನ ಕುಮಾರಿ ಮಾನ್ಯ ಮಹೇಶ್ ಭರತನಾಟ್ಯ ರಂಗ ಪ್ರವೇಶ ಮಾಡಿದರು.

ಈಕೆ ಅಮೆರಿಕಾದ ಪ್ರಸಿದ್ಧ ಭರತನಾಟ್ಯ ಗುರು ಶೀಲಾ ರಾಮನಾಥ್ ಅವರ ಬಳಿ ಅಭ್ಯಾಸ ಮಾಡಿ, ರಂಗಪ್ರವೇಶಿಸಿದ್ದಾರೆ. ಕಾರ್ಯಕ್ರಮದಲ್ಲಿ ಕಲಾವಾರಿಧಿ ಸಂಸ್ಥೆ ಅಧ್ಯಕ್ಷೆ ಶೀಲಾ ರಾಮನಾಥ್, ನಟ ಶ್ರೀಧರ್ ಜೈನ್, ಲೇಖಕ ಬಾಗೂರು ಮಾರ್ಕಂಡಯ್ಯ ಮತ್ತು ಪೊಲೀಸ್ ಅಧಿಕಾರಿ ಸತೀಶ್ ಉಪಸ್ಥಿತರಿದ್ದರು.

ವರಮಹಾಲಕ್ಷ್ಮೀ ಹಬ್ಬ ಕಳೆದರೂ ಗೃಹಲಕ್ಷ್ಮಿಯರಿಗೆ 'ಲಕ್ಷ್ಮಿ' ಬಂದಿಲ್ಲ!

ಬೆಂಗಳೂರು, ಆ.20–ಕಾಂಗ್ರೆಸ್ ಸರ್ಕಾರದ ಮಹತ್ವದ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆ ಕಳೆದ ಮೂರು ತಿಂಗಳಿನಿಂದ ನಿಂತೇ ಹೋಗಿದೆ. ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಗೃಹಿಣಿಯರ ಖಾತೆಗೆ ವರಮಹಾಲಕ್ಷ್ಮೀ ಹಬ್ಬದ ವೇಳೆಗೆ ಹಣ ಬರಲಿದೆ ಎಂದು ಭರವಸೆ ನೀಡಿದ್ದರು, ಆದರೆ ಹೇಳಿ 15 ದಿನ ಕಳೆಯುತ್ತಿದ್ದರೂ ಗೃಹಲಕ್ಷ್ಮಿ ಫಲಾನುಭವಿಗಳ ಖಾತೆಗಳಿಗೆ ಹಣ ಮಾತ್ರ ಬಂದಿಲ್ಲ. ಹೀಗಾಗಿ ಸರ್ಕಾರದ ವಿರುದ್ಧ ಮಹಿಳೆಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಅಲ್ಲದೇ ಹಣ ಜಮೆ ಆಗಿದೆಯೇ ಎಂದು ನೋಡಲು ಮಹಿಳೆಯರು ಬ್ಯಾಂಕ್‌ಗೆ ಅಲೆದಾಡುವಂತಾಗಿದೆ. ಕಳೆದ ಮೂರು ತಿಂಗಳಿನಿಂದ ಗೃಹಲಕ್ಷ್ಮೀ ಹಣ ನಿಂತೇ ಹೋಗಿದೆ. ವರಮಹಾಲಕ್ಷ್ಮಿ ಹಬ್ಬಕ್ಕಾದರೂ ಹಣ ಬರಬಹುದು ಎಂದು ಗೃಹಿಣಿಯರು ಕಾಯುತ್ತಿದ್ದರು. ಆದರೆ ಹಣ ಮಾತ್ರ ಬರಲೇ ಇಲ್ಲ. ಈ ಕುರಿತಾಗಿ ಮಾತನಾಡಿರುವ ಲಕ್ಷ್ಮಿ ಹೆಬ್ಬಾಳ್ಕರ್ ಹಣವನ್ನ ಬಿಡುಗಡೆ ಮಾಡಿದ್ದೇವೆ. ಕೆಲವೊಬ್ಬರಿಗೆ ಬಂದಿದೆ. ಕೆಲವೊಬ್ಬರಿಗೆ ಹಣ ಬಂದಿಲ್ಲ. ಸದ್ಯ ಎಲ್ಲಾ ಖಾತೆಗಳಿಗೂ ಹಣ ಹೋಗುವುದಕ್ಕೆ ಎಲ್ಲಾ ಪ್ರಕ್ರಿಯೆಗಳನ್ನ ಮಾಡಲಾಗುತ್ತಿದೆ. ಒಂದು ತಿಂಗಳ ಹಣವನ್ನ ಹಾಕಿದ್ದೇವೆ. ಮುಂದಿನ ತಿಂಗಳು ಉಳಿದ ಹಣವನ್ನ ಹಾಕತ್ತೇವೆ ಎಂದು ಹೇಳಿದ್ದಾರೆ.

ಒಂದನೇ ಪುಟದಿಂದ

57 ನಿವೇಶನ ಮಂಜೂರು

ಭೂಸ್ವಾಧೀನಾಧಿಕಾರಿಗಳು ದೃಢೀಕರಿಸುತ್ತಾರೆ. ಉಗ್ರಯ್ಯ ಪೌತಿಯಾಗಿದ್ದು, ಈತ ವಾರಸುದಾರನೆಂದು ವಂಶ ವೃಕ್ಷದೊಂದಿಗೆ ಮಗ ಡಿ. ನಾಗರಾಜು ಭೂ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸುತ್ತಾನೆ.

ಕೋರ್ಟ್ ತೀರ್ಪು, ಸರ್ಕಾರದ ಸುತ್ತೋಲೆ ನೆಪ: ಭೂ ಮಾಲೀಕನ ವಾರಸುದಾರನಿಗೆ ಪರಿಹಾರದ ರೂಪದಲ್ಲಿ ಶೇ. 50:50ರ ಅನುಪಾತದಡಿ ನಿವೇಶನಗಳನ್ನು ನೀಡುವ ಸಲುವಾಗಿ ಪರಿಹಾರ ಪಾವತಿಸದೇ ಭೂಮಿ ಬಳಸಿಕೊಂಡಲ್ಲಿ 2013ರ ಭೂಸ್ವಾಧೀನ ಕಾಯ್ದೆಯಡಿ ಪ್ರಸ್ತುತ ಮಾರುಕಟ್ಟೆ ದರ ನೀಡಬೇಕಾಗುತ್ತದೆ ಎಂಬುದಾಗಿ ಆಯುಕ್ತರು ಟಿಪ್ಪಣಿ ಬರೆಯುತ್ತಾರೆ.

ಅಲ್ಲದೇ ಸರ್ವೋಚ್ಚ ನ್ಯಾಯಾಲಯದ ಆರ್.ಎಲ್.ಜೈನ್ ವಿರುದ್ಧ ಡಿಡಿಎ (2004) ಎಸ್‌ಸಿಸಿ 79 ಪ್ರಕರಣದ ತೀರ್ಪು ಮತ್ತು ರಾಜ್ಯ ಸರ್ಕಾರ 2007ರ ಸೆಪ್ಟೆಂಬರ್ 17ರಂದು ಹೊರಡಿಸಿದ ಸುತ್ತೋಲೆ ಸಂಖ್ಯೆ ಆರ್‌ಟಿ 155 ಇಕ್ಯೂಡಬ್ಲ್ಯೂ 2007 ಅನ್ನು ಉಲ್ಲೇಖಿಸಿ ಅದರನ್ವಯ ಪ್ರಾಥಮಿಕ ಅಧಿಸೂಚನೆ ಹೊರಡಿಸುವ ಮುನ್ನ ಭೂಮಿ ಸ್ವಾಧೀನಪಡಿಸಿಕೊಂಡಲ್ಲಿ ಆ ದಿನಾಂಕದಿಂದ ಪ್ರಾಥಮಿಕ ಅಧಿಸೂಚನೆ ದಿನದವರೆಗೆ ನಷ್ಟ ಭರ್ತಿ ಪರಿಹಾರವನ್ನು ನೀಡಬೇಕಾಗುತ್ತದೆ ಎಂದು ಭಾವಿಸಬೇಕಾಗುತ್ತದೆ ಎಂಬುದನ್ನೂ ಆಯುಕ್ತರು ತಮ್ಮ ಅಧಿಕೃತ ಜ್ಞಾಪನದಲ್ಲಿ ನಮೂದಿಸುತ್ತಾರೆ.

98,206 ಚದರಡಿಯ 57 ನಿವೇಶನ: ಪರಿಹಾರ ನೀಡದೇ ಬಳಸಿಕೊಂಡಿದೆ ಎನ್ನಲಾದ 8.14 ಎಕರೆ ಜಮೀನಿಗೆ ಬದಲಾಗಿ ಪರಿಹಾರ ರೂಪದಲ್ಲಿ ಪೌತಿಯಾಗಿರುವ ಭೂ ಮಾಲೀಕನ ವಾರಸುದಾರನೆಂದು ಪರಿಗಣಿತ ಡಿ. ನಾಗರಾಜು ಎಂಬುವರಿಗೆ ಮುಡಾ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ 2024ರ ಜೂನ್ 15ರಂದು ಒಂದೇ ಆದೇಶದ ಮೂಲಕ ಅಭಿವೃದ್ಧಿಗೊಂಡಿರುವ ವಿಜಯನಗರ 2, 4ನೇ ಹಂತ ಹಾಗೂ ದಟ್ಟಗಳ್ಳಿ 3ನೇ ಹಂತಗಳಲ್ಲಿ 98,206 ಚದರ ಅಡಿ ವಿಸ್ತೀರ್ಣಕ್ಕೆ ಸರಿದೂಗುವ ಸುಮಾರು 80 ಕೋಟಿ ರೂ. ಮೌಲ್ಯದ ಒಟ್ಟು 57 ನಿವೇಶನಗಳನ್ನು ಮಂಜೂರು ಮಾಡಿದ್ದಾರೆ.

56 ವರ್ಷಗಳಿಂದ ಪರಿಹಾರ ಪಡೆದಿರಲಿಲ್ಲವೇ?: ಗೋಕುಲಂ ಬಡಾವಣೆಗಾಗಿ 1968ರಲ್ಲಿ ಸ್ವಾಧೀನಪಡಿಸಿಕೊಂಡ ಜಮೀನಿಗೆ ಪರಿಹಾರ ನೀಡದಿದ್ದರೂ, ಭೂ ಮಾಲೀಕ ಉಗ್ರಯ್ಯ ಮತ್ತು ಕುಟುಂಬದವರು ಸುಮ್ಮನಿದ್ದರೇಕೆ? ಪರಿಹಾರ ನೀಡದೆಯೇ ಗೋಕುಲಂ ಬಡಾವಣೆ ಮಾಡಿ ನಿವೇಶನ ಹಂಚಿಕೆ ಮಾಡಲು ಅವಕಾಶ ಕೊಟ್ಟಿದ್ದೇಕೆ, ಅವರೂ ಪರಿಹಾರ ಕೇಳಲಿಲ್ಲವೇ? ಹಾಗೊಂದು ವೇಳೆ ನಿಯಮಾನುಸಾರ ಭೂ ಪರಿಹಾರ ಪಾವತಿಸದೆಯೇ ಬಡಾವಣೆ ರಚಿಸಿ ಲೋಪವೆಸಗಿದ ಅಧಿಕಾರಿಗಳ ವಿರುದ್ಧ ಏಕೆ ಕ್ರಮ ಜರುಗಿಸಿಲ್ಲ. 56 ವರ್ಷಗಳಿಂದ ಸುಮ್ಮನಿದ್ದು, ಈಗ ಪರಿಹಾರ ಕೋರಲು ಡಿ. ನಾಗರಾಜು ಮುಂದಾಗಿದ್ದೇಗೆ? ಎಂಬಿತ್ಯಾದಿ ಪ್ರಶ್ನೆಗಳು ಈ ಪ್ರಕರಣದಲ್ಲಿ ಉದ್ಭವವಾಗದೇ ಇರದು.

ಒಂದೇ ದಿನ 57 ನಿವೇಶನಗಳ ಹಂಚಿಕೆ ಪತ್ರ: 2024ರ ಜೂನ್ 15ರಂದು ಡಿ. ನಾಗರಾಜುಗೆ 80 ಕೋಟಿ ರೂ. ಬೆಲೆ ಬಾಳುವ 98,206 ಚದರಡಿ ವಿಸ್ತೀರ್ಣದ 67 ನಿವೇಶನಗಳನ್ನು ಮಂಜೂರು ಮಾಡುವ ಪ್ರಾಧಿಕಾರದ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್, ಅದೇ ದಿನ ಎಲ್ಲಾ 57 ನಿವೇಶನಗಳಿಗೂ ಹಂಚಿಕೆ ಪತ್ರ ಸಿದ್ಧಪಡಿಸುವಂತೆಯೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ತರಾತುರಿಯಲ್ಲಿ ಆಂತರಿಕ ಪತ್ರ ಬರೆಯುತ್ತಾರೆ.

ಕೋಟ್ಯಾಂತರ ರೂ. ಅವ್ಯವಹಾರ: ಡಿ. ನಾಗರಾಜು ಎಂಬುವರ ಒಂದೇ ಪ್ರಕರಣದಲ್ಲಿ ಕೋಟ್ಯಾಂತರ ರೂ. ಅವ್ಯವಹಾರವಾಗಿದೆ. ಆದರೆ, ಭೂಮಿಯ ಮಾಲೀಕನ ವಾರಸುದಾರನ ಮೂಗಿಗೆ ತುಪ್ಪ ಸವರಿ ಮಧ್ಯವರ್ತಿಗಳು, ಜನಪ್ರತಿನಿಧಿಗಳು, ಅಧಿಕಾರಿಗಳು, ರಿಯಲ್ ಎಸ್ಟೇಟ್ ಉದ್ಯಮಿಗಳು ಅದರ ಬಹುಪಾಲು ಲಾಭ ಪಡೆದಿರುವ ಶಂಕೆ ಮೂಡಿದೆ. ಸಮಗ್ರ ತನಿಖೆ ಆಗಬೇಕಿದೆ. ಆದರೆ ಇದರ ಬಗ್ಗೆ ನಿರ್ಧಾರ ಕೈಗೊಳ್ಳುವವರು ಯಾರು?

ಹಗರಣ ಸದ್ದು ಮಾಡುತ್ತಿದ್ದರೂ ನಿಂತಿಲ್ಲ ನಿವೇಶನಗಳ ಖಾತಾ ಪ್ರಕ್ರಿಯೆ

ಮೈಸೂರು, ಆ.20(ಆರ್‌ಕೆ)–ಶೇ.50:50ರ ಅನುಪಾತದಡಿ ಅಕ್ರಮ ವಾಗಿ ಮುಡಾ ಅಧಿಕಾರಿಗಳು ಹಂಚಿಕೆ ಮಾಡಿದ ನಿವೇಶನಗಳಿಗೆ ಮೈಸೂರು ಮಹಾ ನಗರ ಪಾಲಿಕೆ, ನಗರ ಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಲಂಚ ಪಡೆದು ಖಾತಾ ನೋಂದಣಿ ಮಾಡಿ ಕೊಡಲಾಗುತ್ತಿದೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿ ಬರುತ್ತಿವೆ. ಇಡೀ ರಾಜ್ಯ ಸರ್ಕಾರವನ್ನೇ ಮುಜುಗರಕ್ಕೀಡು ಮಾಡಿರುವ

ಮುಡಾ ನಿವೇಶನ ಹಂಚಿಕೆ ಹಗರಣದಿಂದಾಗಿ ರಾಜ್ಯಾದ್ಯಂತ ಪರ–ವಿರುದ್ಧ ಪ್ರತಿಭಟನೆಗಳು ನಡೆಯುತ್ತಿದ್ದು, ಸದ್ದು ಮಾಡುತ್ತಿದ್ದಾಗ್ಯೂ ಭ್ರಷ್ಟಾಚಾರ ಆರೋಪದ ಸುಳಿಯಲ್ಲಿ ಸಿಲುಕಿ ವಿವಾದ ಉಂಟಾಗಿದ್ದರೂ, ಅಕ್ರಮ ನಿವೇಶನ ಮಂಜೂರು ಮಾಡಿಸಿಕೊಂಡಿರುವವರ ಹೆಸರಿಗೆ ಆಯಾ ವ್ಯಾಪ್ತಿಗೆ ಬರುವ ಪಾಲಿಕೆ ವಲಯಾಧಿಕಾರಿಗಳು, ಪಟ್ಟಣ ಪಂಚಾಯಿತಿ, ನಗರಸಭೆ ಮುಖ್ಯಾಧಿಕಾರಿಗಳು ಖಾತಾ–ಕಂದಾಯ ಮಾಡಿಕೊಡಲಾಗುತ್ತಿದೆ ಎಂದು ಸಾರ್ವಜನಿಕರು 'ಮೈಸೂರು ಮಿತ್ರ' ಕಚೇರಿಗೆ ದೂರವಾಣಿ ಮೂಲಕ ಮಾಹಿತಿ ನೀಡುತ್ತಿದ್ದಾರೆ. ಪ್ರಕರಣ ಬೆಳಕಿಗೆ ಬಂದ ನಂತರ ತನಿಖೆಗೆ ತಂಡ ರಚಿಸಿದ ಸರ್ಕಾರ, ವರದಿ ಸಲ್ಲಿಕೆಯಾಗುವವರೆಗೆ ಮುಡಾ ಕಚೇರಿಯ ದೈನಂದಿನ ಪ್ರಕ್ರಿಯೆಗಳನ್ನು ನಡೆಸದಂತೆ ಸೂಚನೆ ನೀಡಿದ್ದರಿಂದ ಸ್ಥಗಿತಗೊಂಡಿದ್ದ ದೈನಂದಿನ ಕೆಲಸ ಕಾರ್ಯಗಳನ್ನು ಮುಡಾ ಅಧಿಕಾರಿಗಳು ಸರ್ಕಾರ ಗ್ರೀನ್ ಸಿಗ್ನಲ್ ನೀಡಿದರೂ ಪುನಾರಂಭಿಸಿಲ್ಲ.

ಆದರೆ, ತಮ್ಮ ವ್ಯಾಪ್ತಿಗೆ ಬರುವ ನಿವೇಶನಗಳಿಗೆ ಇತರ ಸ್ಥಳೀಯ ಸಂಸ್ಥೆಗಳಲ್ಲಿ ಲಂಚ ಪಡೆದು ಅನಧಿಕೃತವಾಗಿ ನಿವೇಶನಗಳಿಗೆ ಖಾತಾ ಪ್ರಕ್ರಿಯೆ ನಡೆಸಲಾಗುತ್ತಿದ್ದು, ಆಸ್ತಿಗಳ ಪರಭಾರೆಗೆ ದಾರಿ ಸುಗಮ ಮಾಡಿಕೊಡಲಾಗುತ್ತಿದೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ. 50:50ರ ಅನುಪಾತದಡಿ ಮಂಜೂರಾಗಿರುವ ನಿವೇಶನಗಳನ್ನು ತನಿಖೆ ಪೂರ್ಣಗೊಳ್ಳುವವರೆಗೆ ನೋಂದಣಿ ಮಾಡಬಾರದು. ಕ್ರಯಪತ್ರ (ಟೈಟಲ್ ಡೀಡ್), ಸೆಟಲ್‌ಮೆಂಟ್ ಡೀಡ್, ಜಿಪಿಎ ನೋಂದಣಿ ಮಾಡಬಾರದೆಂದು ಸರ್ಕಾರ ಮುಡಾ ಕಚೇರಿಯ ಹೆಚ್ಚುವರಿ ನೋಂದಣಾಧಿಕಾರಿ ಹಾಗೂ ಮೈಸೂರು ನಗರದ ಇತರ ನಾಲ್ಕೂ ಉಪ ನೋಂದಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡದಿರುವುದು ಆಸ್ತಿಗಳ ಪರಭಾರೆ ಎಗ್ಗಿಲ್ಲದೆ ನಡೆಯಲು ಪ್ರಮುಖ ಕಾರಣವಾಗಿದೆ. ವಿವಾದಿತ ಈ ನಿವೇಶನಗಳಿಗೆ ಖಾತಾ ನೋಂದಣಿ, ವರ್ಗಾವಣೆ ಮಾಡದಂತೆ ಸರ್ಕಾರ ಪಾಲಿಕೆ, ಇತರ ಸ್ಥಳೀಯ ಸಂಸ್ಥೆಗಳಿಗೆ ಸೂಚನೆ ನೀಡದಿದ್ದರೆ ಅಕ್ರಮ ಭಯವಿಲ್ಲದೇ ಮುಂದುವರೆಯುವುದರಲ್ಲಿ ಸಂಶಯವಿಲ್ಲ.

ಲೋಕಾಯುಕ್ತ ಎಸ್‌ಐಟಿ ಮನವಿ

ಎಸ್‌ಐಟಿ ತನಿಖೆ ನಡೆಸುತ್ತಿದೆ. ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ, ಭಾರತೀಯ ಕಾಯ್ದೆ, ಭಾರತೀಯ ದಂಡ ಸಂಹಿತೆ ಹಾಗೂ ಗಣಿ ಮತ್ತು ಖನಿಜ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಲು ಅನುಮತಿ ನೀಡುವಂತೆ ಎಸ್‌ಐಟಿ 2023 ನವೆಂಬರ್ 21ರಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಪ್ರಸ್ತಾವನೆ ಸಲ್ಲಿಸಿತ್ತು. ಈ ಸಂಬಂಧ ಕೆಲವು ಸ್ಪಷ್ಟನೆಗಳನ್ನು ನೀಡುವಂತೆ ರಾಜ್ಯಪಾಲರು ಜುಲೈ 29ರಂದು ಎಸ್‌ಐಟಿಗೆ ಪತ್ರ ಬರೆದಿದ್ದರು.

ಇದು ತಾರತಮ್ಯವಲ್ಲವೆ; ಇದನ್ನು ಪ್ರಶ್ನಿಸಬಾರದೇ?: ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಟಿ.ಜೆ.ಅಬ್ರಹಾಂ ತಮ್ಮ ವಿರುದ್ಧ ನೀಡಿದ ದೂರಿಗೆ ಒಂದೇ ತಾಸಿನಲ್ಲಿ ನನಗೆ ನೋಟಿಸ್ ನೀಡುತ್ತಾರೆ, ಆದರೆ, ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ, ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ ಸೇರಿದಂತೆ ಕೆಲವರ ವಿರುದ್ಧ ಬಂದ ದೂರುಗಳಿಗೆ ಇದುವರೆಗೂ ನೋಟಿಸ್ ಜಾರಿ ಮಾಡಿಲ್ಲ.

ರಾಜ್ಯಪಾಲರು, ನಮ್ಮನ್ನು ಗುರಿಯಾಗಿಸಿಕೊಂಡು ನೋಟಿಸ್ ನೀಡಿದ್ದಾರೆ. ಇದು ತಾರತಮ್ಯವಲ್ಲವೆ, ಸಂವಿಧಾನ ಬಾಹಿರವಾಗಿ ನಡೆದುಕೊಳ್ಳುತ್ತಿರುವ ಇವರ ನಡೆಯ ಬಗ್ಗೆ ಸಾರ್ವಜನಿಕರು ಪ್ರಶ್ನೆ ಮಾಡಬಾರದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ಸಾಯಿ ಮಿನರಲ್ಸ್ ಪ್ರಕರಣದಲ್ಲಿ ಕುಮಾರಸ್ವಾಮಿ ವಿರುದ್ಧ ಚಾರ್ಜ್‌ಶೀಟ್ ರೆಡಿ ಇದೆ. ಈಗಲೂ ಅವರು ಕೇಂದ್ರದಲ್ಲಿ ಮಂತ್ರಿಯಾಗಿ ಮುಂದುವರೆಯಬಹುದೇ ಎಂದು ಪ್ರಶ್ನಿಸಿದರು. ವಿನಯ್ ಗೋಯಲ್ ಎಂಬುವರು ಗಣಿಗಾರಿಕೆಗೆ ಅರ್ಜಿ ಹಾಕಿರಲಿಲ್ಲ, ಅವರಿಗೆ ಅನುಕೂಲ ಮಾಡಿಕೊಡಲು ಅನುಮತಿ ನೀಡಿದರು. ಲೋಕಾಯುಕ್ತ ತನಿಖಾ ಸಂಸ್ಥೆ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳಿದೆ, ಇದನ್ನು ತಿರುಚಿ ಅವರು ಮಾತನಾಡುತ್ತಿದ್ದಾರೆ ಎಂದರು.

ಮೈಸೂರು ರಂಗಾಯಣದ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡ ರಂಗಕರ್ಮಿ ಸತೀಶ್ ತಿಪಟೂರು

ರಂಗಾಯಣದ ಕೆಲಸ ವ್ಯಕ್ತಿ ಕೇಂದ್ರೀತವಲ್ಲ, ಸಮಷ್ಟಿಯಾಗಿ ಎಲ್ಲರೂ ಕಟ್ಟಬೇಕು ; ಸತೀಶ್ ತಿಪಟೂರು ಅಭಿಮತ



ಮೈಸೂರು ರಂಗಾಯಣದ ನಿರ್ದೇಶಕರಾಗಿ ಸತೀಶ್ ತಿಪಟೂರು ಮಂಗಳವಾರ ಅಧಿಕಾರ ವಹಿಸಿಕೊಂಡರು.

ಮೈಸೂರು,ಆ.20(ಪಿಎಂ)– ಪ್ರತಿಷ್ಠಿತ ಮೈಸೂರು ರಂಗಾಯಣದ ನಿರ್ದೇಶಕರಾಗಿ ರಂಗಕರ್ಮಿ ಸತೀಶ್ ತಿಪಟೂರು ಮಂಗಳವಾರ ಅಧಿಕಾರ ಸ್ವೀಕರಿಸಿದರು.

ತುಮಕೂರು ಜಿಲ್ಲೆಯ ತಿಪಟೂರಿನ ಮೂಲದವರಾದ ಸತೀಶ್ ತಿಪಟೂರು ಮೈಸೂರು ರಂಗಾಯಣದ ನಿರ್ದೇಶಕರ ಕೊಠಡಿಯಲ್ಲಿಂದು ಸಂಬಂಧಿಸಿದ ದಾಖಲೆಗಳಿಗೆ ಸಹಿ ಮಾಡುವ ಮೂಲಕ ರಂಗಾಯಣದ ನಿರ್ದೇಶಕರಾಗಿ ಅಧಿಕಾರ ವಹಿಸಿಕೊಂಡರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ ಹಾಗೂ ರಂಗಾಯಣದ ಉಪನಿರ್ದೇಶಕ ಡಾ.ಎಂ.ಡಿ. ಸುದರ್ಶನ್ ನೂತನ ನಿರ್ದೇಶಕ ಸತೀಶ್ ತಿಪಟೂರು ಅವರಿಗೆ ಹೂಗುಚ್ಛ ನೀಡಿ ಸ್ವಾಗತಿಸಿದರು.

ಬಳಿಕ ಮಾತನಾಡಿದ ಸತೀಶ್ ತಿಪಟೂರು, ಬಿ.ವಿ.ಕಾರಂತರ ಹಾದಿಯಾಗಿ ಕಳೆದ 35 ವರ್ಷಗಳಲ್ಲಿ ರಂಗಾಯಣವನ್ನು ಕಟ್ಟಿ ಬೆಳೆಸಿದ ಎಲ್ಲಾ ನಿರ್ದೇಶಕರನ್ನು ನೆನೆಪಿಸಿಕೊಳ್ಳುತ್ತೇನೆ. ಅಲ್ಲದೆ, ನಿರ್ದೇಶಕರ ಜೊತೆಯಲ್ಲಿ ರಂಗಾಯಣವನ್ನು ಬೆಳೆಸಿ ರಂಗಭೂಮಿಯಲ್ಲಿ ದೊಡ್ಡ ಹೆಗ್ಗರುತು ಮಾಡಲು ಶ್ರಮಿಸಿದ ಎಲ್ಲಾ ಕಲಾವಿದರನ್ನು ನೆನೆಪಿಸಿಕೊಳ್ಳುತ್ತೇನೆ. ನಿರ್ದೇಶಕರ ಸ್ಥಾನ ದೊಡ್ಡ ಜವಾಬ್ದಾರಿ. ಏಕೆಂದರೆ ಈ ರಂಗಾಯಣಕ್ಕೆ ದೊಡ್ಡ ಪರಂಪರೆಯೇ ಇದೆ. ಕಳೆದ ಮೂರುವರೆ ದಶಕಗಳಿಂದ ರಂಗಾಯಣದ ನಡೆದು ಬಂದ ಹಾದಿಯನ್ನು ನಾನು ಗಮನಿಸಿದ್ದೇನೆ ಎಂದು ತಿಳಿಸಿದರು.

2005–06ರಲ್ಲಿ ಇದೇ ರಂಗಾಯಣದಲ್ಲಿ ಮಕ್ಕಳ ರಂಗಭೂಮಿ ಯೋಜನೆಯ ಮುಖ್ಯಸ್ಥನಾಗಿ ಕೆಲಸ ಮಾಡಿದ್ದೇನೆ. ಆ ಮೂಲಕ ಇಲ್ಲಿನ ಎಲ್ಲರೊಂದಿಗೆ ಒಡನಾಟ ಹೊಂದಿದ್ದೇನೆ. ಕಾಲಕ್ಕೆ ಅನುಗುಣವಾಗಿ ರಂಗಾಯಣವನ್ನು ಮುನ್ನಡೆಸಿಕೊಂಡು ಹೋಗಬೇಕಾದ ಜವಾಬ್ದಾರಿ ನನ್ನ ಹಾಗೂ ಜೊತೆಯಲ್ಲಿರುವ ಎಲ್ಲರ ಮೇಲಿದೆ. ರಂಗಾಯಣದ ಕೆಲಸ ವ್ಯಕ್ತಿ ಕೇಂದ್ರೀತವಲ್ಲ, ಸಮಷ್ಟಿಯಾಗಿ ಎಲ್ಲರು ಸೇರಿ ಕಟ್ಟಿ ಬೆಳೆಸಿಕೊಂಡು ಹೋಗಬೇಕಾಗುತ್ತದೆ. ಹಾಗಾಗಿ ನಿರ್ದೇಶಕನಾಗಿ ತುಂಬ ಜವಾಬ್ದಾರಿ ಇದ್ದು, ನನ್ನ ಅವಧಿಯಲ್ಲಿ ಗಟ್ಟಿಯಾಗಿ ರಂಗಾಯಣವನ್ನು ಮರು ನಿರೂಪಿಸಿ ಇದರ ಬೇರು ಗಟ್ಟಿಗೊಳಿಸುವ ಮೂಲಕ ಮುಂದಿನ ತಲೆಮಾರಿಗೆ ಕೊಡಮಾಡಬೇಕೆಂಬ ಸದುದ್ದೇಶದಲ್ಲಿ ಎಲ್ಲರ ಸಹಕಾರದಲ್ಲಿ ಕಾರ್ಯ ನಿರ್ವಹಿಸುತ್ತೇನೆ ಎಂದು ಹೇಳಿದರು.

ಮೈಸೂರಿನ ಹವ್ಯಾಸಿ ರಂಗಭೂಮಿ ಕೂಡ ದೊಡ್ಡ ಮಟ್ಟದಲ್ಲಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಹವ್ಯಾಸಿ ರಂಗಭೂಮಿಯ ಎಲ್ಲಾ ತಂಡಗಳ ಸಹಕಾರದೊಂದಿಗೆ ರಂಗಾಯಣ ಮುನ್ನಡೆಸಲಾಗುವುದು. ನಿರ್ದೇಶಕನಾಗಲು ಅವಕಾಶ ಕಲ್ಪಿಸಿದ ರಂಗ ಸಮಾಜದ ಸದಸ್ಯರು ಹಾಗೂ ಸರ್ಕಾರಕ್ಕೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ನಿರ್ದೇಶಕರಾಗಿ ತಮ್ಮ ಹೊಸ ಆಲೋಚನೆಗಳು ಏನಿವೆ? ಎಂಬುದಕ್ಕೆ ಪ್ರತಿಕ್ರಿಯಿಸಿದ ಅವರು, ರಂಗಾಯಣವನ್ನು ಈ ಕಾಲಕ್ಕೆ ಮರು ನಿರೂಪಿಸಬೇಕಿದೆ. ಈ ಸಂಸ್ಥೆಗೆ ಬಹಳ ದೊಡ್ಡ ಚರಿತ್ರೆ ಇದ್ದು, ಮುನ್ನಡೆಸುವಲ್ಲಿಯೂ ಸವಾಲುಗಳೂ ಇವೆ. ರಂಗಾಯಣದ ಬಹುತೇಕ ಎಲ್ಲಾ ಹಿರಿಯ ಕಲಾವಿದರು ನಿವೃತ್ತರಾಗಿದ್ದು, ಈ ಕೊರತೆ ನೀಗಿಸಿ ಮುಂದೆ ಸಾಗುವುದು ದೊಡ್ಡ ಸವಾಲು. ರಂಗಾಯಣ ತನ್ನ ರೆಪರ್ಟರಿಯ ಮೂಲಕ ಕನ್ನಡದ ದೊಡ್ಡ ಸಾಂಸ್ಕೃತಿಕ ಮತ್ತು ಸಾಕ್ಷಿಪ್ರಜ್ಞೆಯಾಗಿ ರಂಗಭೂಮಿಯಲ್ಲಿ ನೆಲೆಗೊಂಡಿದೆ ಎಂದು ತಿಳಿಸಿದರು.

ಕಲಾವಿದರ ಉಳಿಸಲು ಮಾದರಿ ಅನ್ವೇಷಣೆ ಅಗತ್ಯ: ರಂಗಾಯಣದ ರಂಗಶಾಲೆ ಮುನ್ನಡೆಸುವುದು ಬಹಳ ಮುಖ್ಯ ಜವಾಬ್ದಾರಿ ಎಂದು ಭಾವಿಸಿದ್ದೇನೆ. ಅದನ್ನು ಉತ್ತಮವಾಗಿ ನಿರ್ವಹಿಸಬೇಕಿದೆ. ಕಲಾವಿದರು ಉಳಿದು ಬೆಳೆಯುವುದು ಕಷ್ಟವಾಗಿದೆ. ಹಾಗಾಗಿ ರಂಗಾಯಣಕ್ಕೆ ನಾಟಕ ಮಾಡುವುದು, ಮಾಡಿಸುವುದರ ಆಚೆಗೂ ರಂಗಭೂಮಿಯಲ್ಲಿ ಕೆಲಸ ಮಾಡುವ ಎಲ್ಲರಿಗೂ ಸರ್ವೈವ್ ಮಾಡೆಲ್ ಅನ್ವೇಷಿಸುವುದು ಅಗತ್ಯ. ಏಕೆಂದರೆ ಕಲಾವಿದರು ಉಳಿದರೆ ಮಾತ್ರವೇ ಕಲೆ ಉಳಿಯಲು ಸಾಧ್ಯ. ಹಾಗಾಗಿ ಕಲಾವಿದರ ಉಳಿಸುವ ಮಾಡೆಲ್‌ಗಳನ್ನು ಅನ್ವೇಷಣೆ ಮಾಡಬೇಕಿದೆ. ರಂಗಾಯಣದ ಶಕ್ತಿಯೇ ಕಲಾವಿದರು ಎಂದು ಸತೀಶ್ ತಿಪಟೂರು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ರಂಗಸಮಾಜದ ಸದಸ್ಯ ಸುರೇಶ್‌ಬಾಬು ಮಾತನಾಡಿ, ಪ್ರತಿ ರಂಗಾಯಣಕ್ಕೂ ತಲಾ 20 ಕಲಾವಿದರನ್ನು ನೇಮಕ ಮಾಡುವ ಅಗತ್ಯತೆ ಬಗ್ಗೆ ರಂಗ ಸಮಾಜದಲ್ಲಿ ಚರ್ಚೆಯಾಗಿದೆ. ರಂಗಸಮಾಜದ ಮುಂದಿನ ಸಭೆಯಲ್ಲಿ ಚರ್ಚೆ ಮಾಡಿ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಯಾವುದೇ ರಂಗಾಯಣಕ್ಕೂ ಕಾಯಂ ಕಲಾವಿದರ ನೇಮಕಾತಿಗೆ ಅವಕಾಶವಿಲ್ಲ. ಮೂರು ವರ್ಷಗಳ ಅವಧಿಗೆ ನೇಮಕ ಮಾಡಿಕೊಳ್ಳಲಾಗುತ್ತದೆ. ಇರುವ ಹಿರಿಯ ಕಲಾವಿದರೊಂದಿಗೆ ಮುಖ್ಯ ರೆಪರ್ಟರಿಗೆ ಅಗತ್ಯವಿರುವ ಕಲಾವಿದರನ್ನು ಮಾತ್ರ ಈಗ ಆಯ್ಕೆ ಮಾಡಿಕೊಳ್ಳಬೇಕಿದೆ ಎಂದು ಪ್ರತಿಕ್ರಿಯಿಸಿದರು.

ಅಸಮಾಧಾನ ಸ್ವಾಗತಿಸುತ್ತೇನೆ ; ಎಲರನ್ನು ವಿಶ್ವಾಸದೊಂದಿಗೆ ರಂಗಾಯಣ ಕಟ್ಟುತ್ತೇನೆ ಸತೀಶ್ ತಿಪಟೂರು

ಮೈಸೂರು,ಆ.20(ಪಿಎಂ)– ಮೈಸೂರು ರಂಗಾಯಣದ ನಿರ್ದೇಶಕ ಸ್ಥಾನವನ್ನು ಸ್ಥಳೀಯರಿಗೆ ಕೊಡಬೇಕಿತ್ತು ಎಂದು ಕೆಲವು ತಮ್ಮ ನೇಮಕಾತಿ ವಿಚಾರಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದರು ಎಂಬುದಕ್ಕೆ ಪ್ರತಿಕ್ರಿಯಿಸಿದ ಸತೀಶ್ ತಿಪಟೂರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇದನ್ನು ಖಂಡಿತ ಸ್ವಾಗತಿಸುತ್ತೇನೆ. ಇದು ಇರಬೇಕು ಕೂಡ ಎಂದು ತಿಳಿಸಿದರು.

ರಂಗಭೂಮಿ ಎಂದರೆ ಎಲ್ಲರನ್ನೂ ಒಳಗೊಂಡು ಬೆಳೆಯುವ ಪ್ರಕ್ರಿಯೆಯಾಗಿದೆ. ಹಾಗಾಗಿ ರಂಗಭೂಮಿಯಲ್ಲಿಯೇ ಆ ರೀತಿಯ ಒಂದು ಗುಣವಿದೆ. ರಂಗಭೂಮಿ ಒಳಗಡೆಯೇ ಒಂದು ಸಂಘರ್ಷ, ನಂತರ ಒಂದು ಮನಮಿಕೆ ಭಾವ ಇರುತ್ತದೆ. ರಂಗಭೂಮಿಯ ಕಾರ್ಯವೇ ಅದು. ಈ ಹಿನ್ನೆಲೆಯಲ್ಲಿ ಅಸಮಾಧಾನ ಕೇಳಿ ಬಂದಿದ್ದು ಅಸಹಜವಲ್ಲ, ಸಹಜ. ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ರಂಗಾಯಣ ಕಟ್ಟುವ ಕೆಲಸ ಮಾಡುತ್ತೇನೆ. ಅಗತ್ಯವಿರುವಷ್ಟು ಅನುದಾನವನ್ನು ಸರ್ಕಾರದಿಂದ ಪಡೆದು ರಂಗಾಯಣ ಮುನ್ನಡೆಸುವ ವಿಶ್ವಾಸವಿದೆ ಎಂದು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಆದಿತ್ಯ ಅಧಿಕಾರಿ ಆಸ್ಪತ್ರೆಗೆ ಅಪರಿಚಿತ ತಂದಿತ್ತ ಕೇಕ್ ಬಾಕ್ಸ್; ಕೆಲಕಾಲ ಆತಂಕ

ವಿವಿ ಪುರಂ ಪೊಲೀಸರಿಗೆ ದೂರು ಸಲ್ಲಿಕೆ




ಆದಿತ್ಯ ಅಧಿಕಾರಿ ಆಸ್ಪತ್ರೆಗೆ ಅಪರಿಚಿತ ನೀಡಿದ ಕೇಕ್‌ಗಳು.

ಮೈಸೂರು, ಆ.20(ಎಸ್‌ಬಿಡಿ)– ಮೈಸೂರಿನ ಪ್ರತಿಷ್ಠಿತ ಆಸ್ಪತ್ರೆಗೆ ಅಪರಿಚಿತನೊಬ್ಬ ಕೇಕ್ ಬಾಕ್ಸ್‌ಗಳನ್ನು ನೀಡಿ, ನಂತರ ಸಂಪರ್ಕಕ್ಕೆ ಸಿಗದೆ ಆತಂಕ ಸೃಷ್ಟಿಸಿರುವ ಘಟನೆ ಮಂಗಳವಾರ ನಡೆದಿದೆ.

ಗೋಕುಲಂನ ಆದಿತ್ಯ ಅಧಿಕಾರಿ ಆಸ್ಪತ್ರೆಯಲ್ಲಿ ಈ ಘಟನೆ ನಡೆದಿದ್ದು, ಈ ಸಂಬಂಧ ವಿವಿ ಪುರಂ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ.

ಮಂಗಳವಾರ ಮಧ್ಯಾಹ್ನ 12.30ರಲ್ಲಿ ಆಸ್ಪತ್ರೆ ಬಳಿ ಬಂದ ವ್ಯಕ್ತಿಯೋರ್ವ ಇಲ್ಲಿನ ಭದ್ರತಾ ಸಿಬ್ಬಂದಿಯನ್ನು ಭೇಟಿಯಾಗಿ ತನ್ನ ಹೆಸರು ಜೋಶುವಾ ಜೊವಾನ್ಸ್ ಎಂದು ಪರಿಚಯಿಸಿಕೊಂಡಿದ್ದಾನೆ ಬಳಿಕ ತಾನು ತಂದಿದ್ದ ಮೂರು ಬಾಕ್ಸ್‌ಗಳನ್ನು ನೀಡಿ, ಇದರಲ್ಲಿರುವ ಕೇಕ್ ಅನ್ನು ಎಲ್ಲಾ ಸಿಬ್ಬಂದಿಗೂ ವಿತರಿಸುವಂತೆ ತಿಳಿಸಿದ್ದಾನೆ. ಆ ವೇಳೆ ಭದ್ರತಾ ಸಿಬ್ಬಂದಿ ಕೇಕ್ ನೀಡಿದ ವ್ಯಕ್ತಿಯ ಮೊಬೈಲ್ ಸಂಖ್ಯೆ ಪಡೆದಿದ್ದಾರೆ.

ಬಳಿಕ ಭದ್ರತಾ ಸಿಬ್ಬಂದಿ ಈ ವಿಷಯವನ್ನು ಆಸ್ಪತ್ರೆಯವರ ಗಮನಕ್ಕೆ ತಂದಿದ್ದಾರೆ. ಕೂಡಲೇ ಅಪರಿಚಿತ ನೀಡಿದ್ದ ಮೊಬೈಲ್ ಸಂಖ್ಯೆ(9108222143)ಗೆ ಕರೆ ಮಾಡಿ, ವಿಚಾರಿಸಿದ್ದಾರೆ. ಯಾವ ಬೇಕರಿಯಿಂದ ನೀಡಿದ್ದೀರಿ ಎಂದು ಕೇಳಿದ್ದಕ್ಕೆ ಆತ ತಮ್ಮದೇ ಸ್ವಂತ ಕೆಫೆಯಿಂದ ನೀಡಿದ್ದಾಗಿ ಹೇಳಿದ್ದಾನೆ. ಕೆಫೆಯ ವಿಳಾಸ ಕೇಳಿದಾಗ ವಿಜಯನಗರ ಒಂದನೇ ಹಂತ ಎಂದು ಹೇಳಿ ಲೊಕೇಷನ್ ಕಳುಹಿಸಿದ್ದಾನೆ. ಆತನ ವರ್ತನೆ ಅನುಮಾನಾಸ್ಪದವಾಗಿದ್ದರಿಂದ ಆಸ್ಪತ್ರೆಯವರು ಆತ ಕಳುಹಿಸಿದ್ದ ಲೊಕೇಷನ್‌ಗೆ ಹೋಗಿ ನೋಡಿದಾಗ ಅಲ್ಲಿ ಯಾವುದೇ ಕೆಫೆ ಇಲ್ಲ. ಮತ್ತೆ ಆತನಿಗೆ ಕರೆ ಮಾಡಿದರೆ ಮೊಬೈಲ್ ಸ್ವಿಚ್ಡ್ ಆಫ್ ಆಗಿದೆ.

ಈ ಎಲ್ಲಾ ಬೆಳವಣಿಗೆಯಿಂದ ಆತಂಕಗೊಂಡ ಆಸ್ಪತ್ರೆಯವರು ಆತ ನೀಡಿದ್ದ ಕೇಕ್ ಬಾಕ್ಸ್‌ಗಳು ಯಾರ ಕೈಗೂ ಸಿಗದಂತೆ ಇಟ್ಟಿದ್ದಾರೆ ಬಳಿಕ ಆಸ್ಪತ್ರೆಯ ಡಾ.ಎನ್.ಚಂದ್ರಶೇಖರ್ ಅವರು ವಿವಿ ಪುರಂ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಆ ಅಪರಿಚಿತನನ್ನು ಪತ್ತೆಹಚ್ಚಿ ಯಾವ ಉದ್ದೇಶಕ್ಕಾಗಿ ಅವರು ನಮ್ಮ ಆಸ್ಪತ್ರೆಗೆ ಕೇಕ್ ನೀಡಿದರು ಎಂದು ವಿಚಾರಣೆ ನಡೆಸುವ ಮೂಲಕ ಬೇರೆಲ್ಲೂ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸುವಂತೆ ಮನವಿ ಮಾಡಿದ್ದಾರೆ.

ಎಚ್ಚರದಿಂದಿರಿ ಯಾಮಾರಬೇಡಿ...

ಆದಿತ್ಯ ಆಸ್ಪತ್ರೆಗೆ ಅಪರಿಚಿತ ನೀಡಿರುವ ಕೇಕ್ ತುಂಬಾ ಸುಂದರವಾಗಿದ್ದು, ನೋಡಿದಾಕ್ಷಣ ತಿನ್ನಬೇಕೆನ್ನಿಸುತ್ತದೆ ಆದರೆ ಹೀಗೆ ಕೇಕ್ ಕಳುಹಿಸುವವರು ಪರಿಚಿತರಿರಬೇಕು. ಯಾವ ಕಾರಣಕ್ಕೆ ಕೇಕ್ ನೀಡಲಾಗುತ್ತಿದೆ ಎಂದು ತಿಳಿಸಬೇಕು. ಆದರೆ ಆಸ್ಪತ್ರೆಗೆ ಕೇಕ್ ನೀಡಿದ ವ್ಯಕ್ತಿ, ತಪ್ಪು ವಿಳಾಸ ನೀಡಿದ್ದಲ್ಲದೆ ಮೊಬೈಲ್ ಸ್ವಿಚ್ಡ್ ಆಫ್ ಮಾಡಿಕೊಂಡಿದ್ದಾನೆ ಎಂದರೆ ಈ ಬಗ್ಗೆ ಅನುಮಾನ ಮೂಡುವುದು ಸಹಜ. ಸ್ವಲ್ಪ ಯಾಮಾರಿದರೂ ಅನಾಹುತ ಸಂಭವಿಸುವ ಸಾಧ್ಯತೆ ಇರುತ್ತದೆ. ಇಂತಹ ಗಂಭೀರ ದೂರುಗಳು ಬಂದಾಗ ಪೊಲೀಸರು ತಕ್ಷಣ ಕಾರ್ಯಪ್ರವೃತ್ತರಾಗಬೇಕು. ಕೂಡಲೇ ಸ್ಥಳಕ್ಕೆ ದೌಡಾಯಿಸಿ, ಪರಿಶೀಲಿಸಬೇಕು. ಆದರೆ ಈ ಪ್ರಕರಣದಲ್ಲಿ ಪೊಲೀಸರು ನಿರ್ಲಕ್ಷ್ಯ ತೋರಿದ್ದಾರೆ ಎಂದು ಡಾ. ಚಂದ್ರಶೇಖರ್ ಅವರ ಸ್ನೇಹಿತರಾದ ಭಾಮಿ ವಿ.ಶೆಣೈ ಬೇಸರ ವ್ಯಕ್ತಪಡಿಸಿದ್ದಾರೆ.

ಅವಹೇಳನಕಾರಿ ಪದ ಬಳಕೆ ; ಕಾಂಗ್ರೆಸ್ ವಕ್ತಾರ ಲಕ್ಷ್ಮಣಗೆ ಶಾಸಕ ಟಿ.ಎಸ್.ಶ್ರೀವತ್ಸ ನೋಟಿಸ್



ಟಿ. ಎಸ್. ಶ್ರೀವತ್ಸ



ಎಂ. ಲಕ್ಷ್ಮಣ

ಮೈಸೂರು,ಆ.20(ಪಿಎಂ)– ಕಾಂಗ್ರೆಸ್ ವಕ್ತಾರ ಎಂ. ಲಕ್ಷ್ಮಣ ಅವರಿಗೆ ಶಾಸಕ ಟಿ. ಎಸ್. ಶ್ರೀವತ್ಸ, ವಕೀಲ ವಿ.ರವಿಕುಮಾರ್ ಮೂಲಕ ಲೀಗಲ್ ನೋಟಿಸ್ ಕೊಟ್ಟಿದ್ದಾರೆ. ಆ.16ರಂದು ಲಕ್ಷ್ಮಣ ಅವರು ಪತ್ರಿಕಾಗೋಷ್ಠಿ ನಡೆಸಿ ಶ್ರೀವತ್ಸ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಈ ಲೀಗಲ್ ನೋಟಿಸ್ ನೀಡಲಾಗಿದೆ.

ನೋಟಿಸ್ ಸ್ವೀಕರಿಸಿದ ಏಳು ದಿನಗಳೊಳಗೆ ಸ್ಥಳೀಯ ಮತ್ತು ರಾಜ್ಯ ಮಟ್ಟದ ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮಗಳ ಮೂಲಕ ಸಾರ್ವಜನಿಕವಾಗಿ ಬೇಷರತ್ ಕ್ಷಮೆಯಾಚಿಸಬೇಕು. ತಪ್ಪಿದ್ದಲ್ಲಿ ನನ್ನ ಕಕ್ಷಿದಾರರು ನಿಮ್ಮ ವಿರುದ್ಧ ಕ್ರಿಮಿನಲ್ ದೂರು ಮತ್ತು ಸಿವಿಲ್ ಮೊಕದ್ದಮೆ ಎರಡನ್ನೂ ಯಾವುದೇ ಸೂಚನೆ ಇಲ್ಲದೇ ದಾಖಲಿಸಿ ನ್ಯಾಯಾಲಯದ ಮೊರೆ ಹೋಗಲಿದ್ದಾರೆ ಎಂದು ನೋಟಿಸ್‌ನಲ್ಲಿ ವಕೀಲರು ಎಚ್ಚರಿಕೆ ನೀಡಿದ್ದಾರೆ.

ನೀವು (ಲಕ್ಷ್ಮಣ) ಯಾವುದೇ ಸರ್ಕಾರಿ ಕಚೇರಿ ಅಥವಾ ಯಾವುದೇ ಸರ್ಕಾರದ ಯಾವುದೇ ಸಾಂವಿಧಾನಿಕ ಹುದ್ದೆ ಹೊಂದಿಲ್ಲ. ಆದಾಗ್ಯೂ ರಾಜಕೀಯ ಕಾರ್ಯಕರ್ತನ ಹೆಸರಿನಲ್ಲಿ ಆ.16ರಂದು ಪ್ರತಿಕಾಗೋಷ್ಠಿ ಕರೆದು ನನ್ನ ಕಕ್ಷಿದಾರರೂ ಆದ ಶಾಸಕ ಟಿ.ಎಸ್.ಶ್ರೀವತ್ಸ ಅವರನ್ನು ವೈಯಕ್ತಿಕವಾಗಿ ಗುರಿಯಾಗಿಸಿ ನಿಂದಿಸಿದ್ದೀರಿ. ನನ್ನ ಕಕ್ಷಿದಾರರ ವಿರುದ್ಧ ದುರುದ್ದೇಶಪೂರಿತ ಹಾಗೂ ಅವಹೇಳಕಾರಿ ಹೇಳಿಕೆಗಳನ್ನು ನೀಡುವ ಮೂಲಕ ಅವರು ಹಲವು ವರ್ಷಗಳಿಂದ ಗಳಿಸಿದ ಗೌರವಕ್ಕೆ ಚ್ಯುತಿ ತರುವ ಪ್ರಯತ್ನ ಮಾಡಿದ್ದೀರಿ ಎಂದು ಲಕ್ಷ್ಮಣ ಅವರ ವಿರುದ್ಧ ವಕೀಲರು ನೋಟಿಸ್‌ನಲ್ಲಿ ದೂರಿದ್ದಾರೆ.

ಆ ನಿಮ್ಮ ಪತ್ರಿಕಾಗೋಷ್ಠಿಯನ್ನು ರಾಜ್ಯಾದ್ಯಂತ ಎಲ್ಲಾ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಸಾರ ಮಾಡಿವೆ. ಅಲ್ಲದೆ, ಮುದ್ರಣ ಮಾಧ್ಯಮಗಳಲ್ಲಿಯೂ ವರದಿ ಮಾಡಲಾಗಿದೆ. ಅಲ್ಲದೆ, ಸಾಮಾಜಿಕ ಜಾಲತಾಣಗಳಲ್ಲಿಯೂ ಪ್ರಚಾರವಾಗಿದೆ. ಪತ್ರಿಕಾಗೋಷ್ಠಿಯಲ್ಲಿ ನಿಮ್ಮ ದ್ವೇಷಪೂರಿತ ಹೇಳಿಕೆಗಳಿಂದಾಗಿ ನನ್ನ ಕಕ್ಷಿದಾರರ ಗೌರವಕ್ಕೆ ಧಕ್ಕೆ ಉಂಟಾಗಿದೆ. ಸ್ನೇಹಿತರು, ಕುಟುಂಬದ ಸದಸ್ಯರ ನಡುವೆ ಅವರು ಮುಜುಗರಕ್ಕೆ ಒಳಗಾಗುತ್ತಿದ್ದಾರೆ.

ಖಾಸಗಿ ದೂರು ದಾಖಲಿಸುವುದರ ಹೊರತುಪಡಿಸಿ, ನನ್ನ ಕಕ್ಷಿದಾರರು ತಮ್ಮ ಶಾಸಕ ಸ್ಥಾನದ ವಿಶೇಷ ಅವಕಾಶದಡಿ ನಿಮ್ಮ ವಿರುದ್ಧ ಕ್ರಮಕ್ಕೆ ಅಧಿಕಾರಿಗಳನ್ನು ಸಂಪರ್ಕಿಸಲು ತಮ್ಮ ಹಕ್ಕುಗಳನ್ನು ಕಾಯ್ದಿರಿಸಿದ್ದಾರೆ ಎಂದೂ ಪ್ರತ್ಯೇಕ ಸೂಚನೆ ಸಹ ಸದರಿ ನೋಟಿಸ್‌ನಲ್ಲಿ ನೀಡಲಾಗಿದೆ.

ಮುಡಾ ರಾದ್ಧಾಂತಕ್ಕೆ ಅಧ್ಯಕ್ಷ ಮರಿಗೌಡನೇ ಕಾರಣ...!

ಮಾವಿನಹಳ್ಳಿ ಸಿದ್ದೇಗೌಡ ಆರೋಪ



ಮೈಸೂರು ತಾಲೂಕು ಜಯಪುರ ಹೋಬಳಿ ಮಾವಿನಹಳ್ಳಿಯ ತಮ್ಮ ತೋಟದ ಮನೆಯಲ್ಲಿ ಮೈಮುಲ್ ಮಾಜಿ ಅಧ್ಯಕ್ಷ ಮಾವಿನಹಳ್ಳಿ ಸಿದ್ದೇಗೌಡ ಪತ್ರಿಕಾಗೋಷ್ಠಿ ನಡೆಸಿದರು.

ಮೈಸೂರು, ಆ.20(ಬಿಳಿಗಿರಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಕೀಯ ಜೀವನಕ್ಕೆ ಮುಡಾ ಅಧ್ಯಕ್ಷ ಮರಿಗೌಡ ಕಪ್ಪು ಚುಕ್ಕೆಯಾಗಿದ್ದು, ಮುಡಾದಲ್ಲಿ ನಡೆದಿರುವ ಇಷ್ಟೆಲ್ಲಾ ರಾದ್ಧಾಂತಕ್ಕೆ ಮರಿಗೌಡನೇ ಕಾರಣ ಎಂದು ಮೈಮುಲ್ ಮಾಜಿ ಅಧ್ಯಕ್ಷ ಮಾವಿನಹಳ್ಳಿ ಸಿದ್ದೇಗೌಡ ಆರೋಪಿಸಿದ್ದಾರೆ.

ಮೈಸೂರು ತಾಲೂಕು ಜಯಪುರ ಹೋಬಳಿ ಮಾವಿನಹಳ್ಳಿಯ ತಮ್ಮ ತೋಟದ ಮನೆಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಗಮನಕ್ಕೆ ತರದೆ, ವಿರೋಧ ಪಕ್ಷದ ನಾಯಕರೊಬ್ಬರ ಮಾತು ಕೇಳಿಕೊಂಡು ಪತ್ರ ಬರೆದಿದ್ದೆ ಇಷ್ಟೆಲ್ಲಾ ರಾದ್ಧಾಂತಕ್ಕೆ ಕಾರಣ ಎಂದು ಆಪಾದಿಸಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2013ರಲ್ಲಿ ನಡೆದ ಚುನಾವಣೆಯಲ್ಲಿ ಸತ್ಯನಾರಾಯಣ ಸೋಲಲು, 2018ರಲ್ಲಿ ಸಿದ್ದರಾಮಯ್ಯ ಸೋಲಲು, 2023ರಲ್ಲಿ ನಾನು ಸೋಲಲು ಮರಿಗೌಡನ ಕಿತಾಪತಿ ಹಾಗೂ ಅಪಪ್ರಚಾರವೇ ಕಾರಣ ಎಂದು ದೂರಿದರು.

ಕಾಂಗ್ರೆಸ್ ಕಾರ್ಯಕರ್ತರನ್ನು ಎತ್ತಿಕಟ್ಟಿ, ಗುಂಪುಗಾರಿಕೆ ಮಾಡಿ ನಮ್ಮ ಅಭ್ಯರ್ಥಿಗಳು ಸೋಲುವಂತೆ ಮಾಡುತ್ತಿರುವ ಮರಿಗೌಡನ ಕುತಂತ್ರದಿಂದ ಪ್ರಾಮಾಣಿಕ ಕಾರ್ಯಕರ್ತರು ಮೂಲೆಗುಂಪಾಗುತ್ತಿದ್ದಾರೆ ಎಂದು ಸಿದ್ದೇಗೌಡ ಕಿಡಿಕಾರಿದರು.

ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರ ಯಾವುದೇ ಪಾತ್ರವಿಲ್ಲ. ಇದರಿಂದ ಅವರು ರಾಜೀನಾಮೆ ನೀಡುವ ಪ್ರಮೇಯವೇ ಇಲ್ಲ. ಮುಡಾದಲ್ಲಿ ಪ್ರಭಾವಿಗಳು ಅಕ್ರಮವಾಗಿ ನಿವೇಶನ ಪಡೆದಿದ್ದು, ಅವರ ವಿರುದ್ಧ ಮೊದಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಾಮಾನ್ಯ ರೈತ ಮಗನಾದ ನನಗೆ ಸಿದ್ದ ರಾಮಯ್ಯ ಕಾಂಗ್ರೆಸ್ ಟಿಕೆಟ್ ನೀಡಿದರು. ಆದರೆ ಕೆಲವರ ಅಪಪ್ರಚಾರದಿಂದ ಸೋತೆ, ಈ ನೋವಿನಿಂದ ಪಕ್ಷದ ಕಾರ್ಯ ಚಟುವಟಿಕೆಯಿಂದ ದೂರವಿದ್ದೆ. ಆದರೆ ಇನ್ನು ಮುಂದೆ ಪಕ್ಷದ ಚಟುವಟಿಕೆಯಲ್ಲಿ ಭಾಗಿಯಾಗಿ ಸಿದ್ದರಾಮಯ್ಯ ಅವರ ಬೆನ್ನೆಲುಬಾಗಿ ನಿಲ್ಲುತ್ತೇನೆ. ನನ್ನ ಕೊನೆ ಉಸಿರು ಇರುವ ತನಕ ಕಾಂಗ್ರೆಸ್‌ನಲ್ಲಿ ಇರುತ್ತೇನೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಬರಡನಪುರ ಬಸವರಾಜಪ್ಪ, ಮಾವಿನಹಳ್ಳಿ ಚೌಡಪ್ಪ, ಗೋಪಾಲಪುರ ಬಸವರಾಜು, ಶಂಕರ್, ರವಿ, ರಾಮಕೃಷ್ಣಚಾರಿ, ಸಿದ್ದಣ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜಿ.ಟಿ.ದೇವೇಗೌಡರ ವಿರೋಧಿಸಲು ನಮಗೆ ಕುಮ್ಮಕ್ಕು ನೀಡಿದ್ದೇ ಕುಮಾರಸ್ವಾಮಿ!

ಶಾಸಕಾಂಗ ಪಕ್ಷದ ನಾಯಕನ ಸ್ಥಾನವನ್ನೇ ನೀಡದವರು ಇನ್ನು ಜಿ.ಟಿ.ದೇವೇಗೌಡರಿಗೆ ಮುಂದೆ ಯಾವ ಅಧಿಕಾರ ನೀಡ್ತಾರೆ....!?

ಮೈಸೂರು, ಆ.20– ಜಿ.ಟಿ.ದೇವೇಗೌಡರು ನನ್ನನ್ನು ಮೈಮುಲ್ ಮತ್ತು ಎಪಿಎಂಸಿ ಅಧ್ಯಕ್ಷರಾಗಿ ಮಾಡಿದ್ದರು. ಅವರಿಗೆ ಕಳಂಕ ಬರದಂತೆ ನಾನು ಅಧ್ಯಕ್ಷ ಸ್ಥಾನ ನಿಭಾಯಿಸಿದ್ದೆ ಎಂದು ಮಾವಿನಹಳ್ಳಿ ಸಿದ್ದೇಗೌಡರು ಸ್ಮರಿಸಿದರು. ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದಾಗ ಜಿ.ಟಿ.ದೇವೇಗೌಡರಿಗೆ ಸಹಕಾರ ಖಾತೆ ನೀಡದೆ, ಉನ್ನತ ಶಿಕ್ಷಣ ಖಾತೆ ನೀಡಿ ಅವಮಾನಿಸಿದರು. ತರುವಾಯ ಜಿ.ಟಿ.ದೇವೇಗೌಡರು ಕಾಂಗ್ರೆಸ್ ಸೇರುವ ಗುಮಾನಿ ಇತ್ತು. ಈ ವೇಳೆ ಕುಮಾರಸ್ವಾಮಿ ಅವರು ನನ್ನ, ಬೆಳವಾಡಿ ಶಿವಮೂರ್ತಿ, ಬೀರಿಹುಂಡಿ ಬಸವಣ್ಣ, ಮಾದೇಗೌಡ, ಹಿನಕಲ್ ಕೆಂಪನಾಯಕರನ್ನು ಕರೆಸಿ, ನಿಮ್ಮಲ್ಲಿ ಒಬ್ಬರನ್ನು ಶಾಸಕರಾಗಿ ಮಾಡುತ್ತೇನೆ ಎಂದು ಭರವಸೆ ನೀಡಿದ್ದರು. ಜಿ.ಟಿ.ದೇವೇಗೌಡರನ್ನು ವಿರೋಧಿಸಲು ಕುಮ್ಮಕ್ಕು ನೀಡಿದ ಕುಮಾರಸ್ವಾಮಿ ಮತ್ತೆ ಜಿ.ಟಿ.ದೇವೇಗೌಡರಿಗೆ ಟಿಕೆಟ್ ನೀಡಿದ್ದರು. ಇದು ಯಾವ ನ್ಯಾಯ ಕುಮಾರಣ್ಣ ಎಂದು ಪ್ರಶ್ನಿಸಿದರು. ಕುಮಾರಸ್ವಾಮಿ ಅವರು ಜಿ.ಟಿ.ದೇವೇಗೌಡರಿಗೆ ಯಾವ ಅಧಿಕಾರ ನೀಡುವುದಿಲ್ಲ. ಕೇವಲ 19 ಶಾಸಕರ ನಂಬರ್ ಲೆಕ್ಕ ಹಾಕಲು ಅವರನ್ನು ಇಟ್ಟುಕೊಂಡಿದ್ದಾರೆ. ಶಾಸಕಾಂಗ ಪಕ್ಷದ ನಾಯಕನ ಸ್ಥಾನವನ್ನೇ ನೀಡದವರು ಮುಂದೆ ಯಾವ ಅಧಿಕಾರ ನೀಡುತ್ತಾರೆ ಎಂದು ಸಿದ್ದೇಗೌಡ ಪ್ರಶ್ನಿಸಿದರು.

ಅನೇಕ ರಾಜಕಾರಣಿಗಳಿಗೆ ದೇವರಾಜ ಅರಸು ಸ್ಫೂರ್ತಿ

ಸಚಿವ ಕೆ.ವೆಂಕಟೇಶ್ ಬಣ್ಣನೆ


ಕಾರ್ಯಕ್ರಮವನ್ನು ಸಚಿವ ಕೆ.ವೆಂಕಟೇಶ್ ಉದ್ಘಾಟಿಸಿದರು.

ಪಿರಿಯಾಪಟ್ಟಣ, ಆ.20– ದಿ.ಡಿ.ದೇವರಾಜ ಅರಸು ಅವರು ಅನೇಕ ರಾಜಕಾರಣಿಗಳಿಗೆ ಸ್ಫೂರ್ತಿಯಾಗಿದ್ದರು ಎಂದು ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಪಟ್ಟಣದ ಅರಸು ಕಲಾ ಭವನದಲ್ಲಿ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅವರ 109ನೇ ಜಯಂತಿ ಉದ್ಘಾಟಿಸಿ ಮಾತನಾಡಿ, ದೇವರಾಜ ಅರಸು ಅವರು ತಾಲೂಕಿನ ಬೆಟ್ಟದತುಂಗದಲ್ಲಿ ಜನಿಸಿ, ಹುಣಸೂರು ತಾಲೂಕಿನ ಕಲ್ಲಹಳ್ಳಿ ಅಜ್ಜಿ ಮನೆಗೆ ದತ್ತು ಹೋದರು. ಸ್ವಾತಂತ್ರ್ಯ ನಂತರ 1952ರಲ್ಲಿ ರಾಜಕೀಯ ಪ್ರವೇಶ ಮಾಡಿ ಅನೇಕ ಸಚಿವ ಸಂಪುಟ ಅಲಂಕರಿಸಿ 2 ಬಾರಿ ಮುಖ್ಯಮಂತ್ರಿಯಾಗಿ ರಾಜ್ಯಾದ್ಯಂತ ಅನೇಕ ಕ್ರಾಂತಿಕಾರಿ ಯೋಜನೆಗಳನ್ನು ಜಾರಿಗೆ ತಂದು ಅಪ್ರತಿಮ ಸಾಧನೆಗೈದು ದೇಶದಲ್ಲಿ ಮಾದರಿ ರಾಜಕಾರಣಿ ಎನಿಸಿಕೊಂಡವರು ಎಂದರು.

ತುರ್ತು ಪರಿಸ್ಥಿತಿ ಸಂದರ್ಭ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಆದೇಶದಂತೆ ದೇಶಾದ್ಯಂತ 20 ಅಂಶಗಳ ಕಾರ್ಯಕ್ರಮ ಅನುಷ್ಠಾನಕ್ಕೆ ತರಲು ಉದ್ದೇಶಿಸಿದ್ದು, ಅದನ್ನು ಅನುಷ್ಠಾನಕ್ಕೆ ತಂದವರು ದೇವರಾಜ ಅರಸು ಮಾತ್ರ. ಅರಸು ಅವರು ಉಳುವವನೇ ಭೂಮಿ ಒಡೆಯ ಸೇರಿದಂತೆ ಅನೇಕ ಸುಧಾರಿತ ಯೋಜನೆ ಜಾರಿಗೆ ತಂದರು. ಅಲ್ಲದೇ ಮಲ ಹೊರುವ ಪದ್ಧತಿ, ಜೀತ ಪದ್ಧತಿ ಸೇರಿದಂತೆ ಅನೇಕ ಅನಿಷ್ಟ ಪದ್ಧತಿಗಳನ್ನು ತೊಡೆದು ಹಾಕಿದರು. ಹಿಂದುಳಿದ ವರ್ಗಗಳ ಹರಿಕಾರರಾಗಿ ಹೋರಾಡಿದ ಇವರ ಜಯಂತಿ ಇಂದಿನ ರಾಜಕಾರಣಿಗಳು, ಮಕ್ಕಳಿಗೆ ಆದರ್ಶಪ್ರಾಯ ಎಂದರು.

ಇದೇ ವೇಳೆ ಸಚಿವರು ತಮ್ಮ ತಂದೆ, ದೇವರಾಜ ಅರಸು ಅವರ ನಡುವೆ ಇದ್ದ ಸಂಬಂಧ ಹಾಗೂ ಮಾಜಿ ಸಚಿವ ಚೆನ್ನಬಸಪ್ಪನವರ ನಡುವೆ ಇದ್ದ ರಾಜಕೀಯ ಒಡನಾಟದ ಬಗ್ಗೆ ಮಾತನಾಡಿದರು.

ಈ ಸಂದರ್ಭ ಉಪನ್ಯಾಸಕ ಕಾಂತರಾಜ್, ಕಾಂಗ್ರೆಸ್ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿದರು. ಅಲ್ಲದೇ ಅತೀ ಹೆಚ್ಚು ಅಂಕ ಗಳಿಸಿದ ಪಿಯುಸಿ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು.

ಸಮಾರಂಭದಲ್ಲಿ ಮುಖಂಡರಾದ ಪಿ.ಎಸ್.ವಿಷಕಂಠಯ್ಯ, ಡಿ.ಟಿ.ಸ್ವಾಮಿ, ರವಿ, ವಿಜಯ, ನಿತಿನ್, ತಹಸೀಲ್ದಾರ್ ನಿಸರ್ಗಪ್ರಿಯ, ತಾಪಂ ಇಒ ಸುನೀಲ್ ಕುಮಾರ್, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕೃಷ್ಣೇಗೌಡ, ಬಿಇಒ ರವಿ ಪ್ರಸನ್ನ ಸೇರಿದಂತೆ ಇತರರಿದ್ದರು.

ಬೆಟ್ಟದತುಂಗದಲ್ಲೂ ಅರಸು ಜಯಂತಿ

ಬೆಟ್ಟದಪುರ, ಆ.20– ಮಾಜಿ ಸಿಎಂ ದಿ.ಡಿ.ದೇವರಾಜ ಅರಸು ಅವರ 109ನೇ ಜಯಂತಿಯನ್ನು ಅರಸು ಹುಟ್ಟೂರು ಬೆಟ್ಟದತುಂಗ ಗ್ರಾಮದಲ್ಲಿ ತಾಲೂಕು ಆಡಳಿತ, ಹಿಂದುಳಿದ ವರ್ಗಗಳ ಇಲಾಖೆ ಹಾಗೂ ಸ್ಥಳೀಯ ಗ್ರಾಪಂ ವತಿಯಿಂದ ಆಚರಿಸಲಾಯಿತು.

ಡಿ.ದೇವರಾಜ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಗ್ರಾಪಂ ಅಧ್ಯಕ್ಷೆ ಪ್ರೀತಿ ಅರಸ್, ನಾಡು ಕಂಡ ಕ್ರಿಯಾಶೀಲ ರಾಜಕಾರಣಿ ಡಿ.ದೇವರಾಜ್ ಅರಸು, ಅವರು ಹಿಂದುಳಿದ ವರ್ಗಗಳ ಅಭಿವೃದ್ಧಿ ಹತ್ತು ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಿದ ಧೀಮಂತ ನಾಯಕ. ಇಂದು ಅವರ ಜಯಂತಿಯನ್ನು ಅವರ ಸ್ವಗ್ರಾಮದಲ್ಲಿ ಆಚರಿಸುತ್ತಿರುವುದು ಹೆಮ್ಮೆಯ ವಿಚಾರ ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಕೃಷ್ಣೇಗೌಡ ಮಾತನಾಡಿದರು. ಈ ವೇಳೆ ಗ್ರಾಮದ ಯಜಮಾನ ಕೃಷ್ಣ ಅರಸ್, ಮುಖಂಡರಾದ ಅರುಣ್ ರಾಜ ಅರಸ್, ವಿಜಯ್ ರಾಜ ಅರಸ್, ಸತೀಶ್ ರಾಜ ಅರಸ್, ಮಹೇಂದ್ರ ರಾಜ ಅರಸ್, ವಿನೋದ್ ಕುಮಾರ್, ಪಿಡಿಒ ಚೇತನ್, ಗ್ರಾಮ ಲೆಕ್ಕಾಧಿಕಾರಿ ಕುಮುದಾ ಸೇರಿದಂತೆ ಇನ್ನಿತರರಿದ್ದರು.


ಬೆಟ್ಟದತುಂಗಾದಲ್ಲಿ ಅರಸು ಜಯಂತಿ ಆಚರಿಸಲಾಯಿತು.

ಅರಸು ಜಯಂತಿಯಲ್ಲಿ ಸನ್ಮಾನ


ಹುಣಸೂರಿನ ಡಿ.ದೇವರಾಜ ಅರಸು ಪ್ರತಿಮೆ ಆವರಣದಲ್ಲಿ ನಡೆದ ಅರಸು ಜಯಂತಿ ಕಾರ್ಯಕ್ರಮದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ಬಾಲಕರ ವಿದ್ಯಾರ್ಥಿ ನಿಲಯದ ಹಿರಿಯ ಅಡುಗೆ ಸಹಾಯಕ ಸಿ.ಎಲ್.ರಮೇಶ್ ಅವರನ್ನು ಶಾಸಕ ಜಿ.ಡಿ.ಹರೀಶ್ ಗೌಡ ಸನ್ಮಾನಿಸಿದರು. ಈ ವೇಳೆ ಸುಚೇಂದ್ರ ಕುಮಾರ್, ಮುಖಂಡರಾದ ನಿಂಗರಾಜ್ ಹಾಗೂ ಬಸವಲಿಂಗಯ್ಯ, ಪ್ರಜ್ವಲ್, ಮೋಹನ್ ಕುಮಾರ್ ಇದ್ದರು.

ಕಂಪಲಾಪುರದಲ್ಲಿ ವಿದ್ಯಾರ್ಥಿಗಳಿಗೆ ಸನ್ಮಾನ


ಕಂಪಲಾಪುರ ಗ್ರಾಪಂ ವತಿಯಿಂದ ಎಸ್‌ಎಸ್‌ಎಲ್‌ಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಅಧ್ಯಕ್ಷೆ ಜಾನಕಿ, ಉಪಾಧ್ಯಕ್ಷೆ ಸುಮ, ಪಿಡಿಒ ಪರಮೇಶ್, ಸುಷ್ಮ, ಸುಮಿತ್ರಾ, ಮುಖಂಡ ಪ್ರಕಾಶ್‌ಗೌಡ, ಸಂಜೀವಿನಿ ಒಕ್ಕೂಟದ ಜಯಶ್ರೀ, ಗ್ರಾಪಂ ಸದಸ್ಯರು, ಸಿಬ್ಬಂದಿ ಹಾಜರಿದ್ದರು.

ಹೈನುಗಾರಿಕೆಯಿಂದ ರೈತರ ಜೀವನ ಸುಧಾರಣೆ

ಅಂತರಸಂತೆಯಲ್ಲಿ ಡೇರಿ, ಬಿಎಂಸಿ ಕೇಂದ್ರ ಉದ್ಘಾಟಿಸಿದ ಶಾಸಕ ಅನಿಲ್

ಹೆಚ್.ಡಿ.ಕೋಟೆ, ಆ.20– ತಾಲೂಕಿನಲ್ಲಿ ಹೈನುಗಾರಿಕೆಯಿಂದ ರೈತರ ಜೀವನ ಮಟ್ಟ ಸುಧಾರಿಸಿದೆ. ಇದಕ್ಕೆ ಮೈಮುಲ್ ನಿರ್ದೇಶಕ ಈರೇಗೌಡರ ಪರಿಶ್ರಮವೇ ಕಾರಣ ಎಂದು ಶಾಸಕ ಅನಿಲ್ ತಿಳಿಸಿದರು.

ತಾಲೂಕಿನ ಅಂತರಸಂತೆಯಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ನೂತನ ಕಟ್ಟಡ ಹಾಗೂ ಬಿಎಂಸಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಕೋಟೆ, ಸರಗೂರು ತಾಲೂಕಿನಾದ್ಯಂತ ರೈತರು ಕೃಷಿಯಲ್ಲಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದರು. ಇದನ್ನು ಮನಗಂಡು ಮೈಮುಲ್ ನಿರ್ದೇಶಕ ಈರೇಗೌಡರು ಹೈನುಗಾರಿಕೆಗೆ ಹೆಚ್ಚು ಒತ್ತು ನೀಡಿದ ಪರಿಣಾಮ ಸಾಕಷ್ಟು ಬಡ ಕುಟುಂಬಗಳು ಸುಧಾರಣೆಗೊಂಡಿವೆ ಎಂದರು.

ಅಂತರಸಂತೆ ವ್ಯಾಪ್ತಿಯಲ್ಲಿ ನಿತ್ಯ 1200 ಲೀಟರ್ ಹಾಲು ಶೇಖರಣೆ ಆಗುತ್ತಿರುವ ಹಿನ್ನೆಲೆಯಲ್ಲಿ ಇಂದು ಬಿಎಂಸಿ ಕೇಂದ್ರವನ್ನು ಉದ್ಘಾಟಿಸಲಾಗಿದೆ. ಈಗಾಗಲೇ ತಾಲೂಕಿನಲ್ಲಿ 28 ಬಿಎಂಸಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದರು.


ಅಂತರಸಂತೆಯಲ್ಲಿ ಡೈರಿ ನೂತನ ಕಟ್ಟಡ, ಬಿಎಂಸಿ ಕೇಂದ್ರವನ್ನ ಶಾಸಕ ಅನಿಲ್ ಉದ್ಘಾಟಿಸಿದರು.

ಸಹಕಾರ ಸಂಘಗಳಿಗೆ ಸರ್ಕಾರ ಸಬ್ಸಿಡಿ ಸಾಲದ ಜೊತೆಗೆ ಅನೇಕ ಸೌಲಭ್ಯಗಳನ್ನು ನೀಡಿದೆ. ಅವುಗಳನ್ನು ಸಂಘದ ಸದಸ್ಯರು ಹಾಗೂ ಹಾಲು ಉತ್ಪಾದಕರು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಮುಂದೆ ಬರಬೇಕು. ಡೈರಿ ಅಭಿವೃದ್ಧಿಗೆ ಗುಣಮಟ್ಟದ ಹಾಲನ್ನು ಪೂರೈಕೆ ಮಾಡುವಂತೆ ತಿಳಿಸಿದರು.

ಮೈಮುಲ್ ನಿರ್ದೇಶಕ ಈರೇಗೌಡ ಮಾತನಾಡಿ, ಅಂತರಸಂತೆ ಹೋಬಳಿ ಕೇಂದ್ರವಾದ ಕಾರಣ ಬಿಎಂಸಿ ಕೇಂದ್ರ ಅವಶ್ಯಕತೆ ಇತ್ತು. ಅದರಂತೆ ಅಂತರಸಂತೆ ಹಾಲು ಉತ್ಪಾದಕರ ಸಹಕಾರ ಸಂಘದವರು ಯಾವುದೇ ಅನುದಾನ ಪಡೆಯದೆ, ಸಂಘದ ಹಣದಿಂದಲೇ ನೂತನ ಕಟ್ಟಡ ನಿರ್ಮಿಸಿದ್ದಾರೆ ಇದಕ್ಕೆ ಮುಖ್ಯ ಕಾರಣ ಉತ್ತಮ ಆಡಳಿತ ಮಂಡಳಿ. ಇದು ನಿಜಕ್ಕೂ ಸಂತೋಷದ ವಿಷಯ ಎಂದರು.

ಈ ವೇಳೆ ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಸುರೇಶ್ ನಾಯಕ ಅವರನ್ನು ಶಾಸಕ ಅನಿಲ್ ಚಿಕ್ಕಮಾದು ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಎ.ಪಿ.ನಾಗರಾಜು, ವ್ಯವಸ್ಥಾಪಕ ಎಲ್.ಆರ್.ಕರಿಬಸವರಾಜು, ಕರ್ನಾಟಕ ರಾಜ್ಯ ಬೀಜ ನಿಗಮದ ಮಾಜಿ ಅಧ್ಯಕ್ಷ ಡಿ. ಸುಂದರ್ ದಾಸ್, ಗ್ರಾಪಂ ಅಧ್ಯಕ್ಷೆ ರೇಖಾ, ವಿಸ್ತರಣಾಧಿಕಾರಿಗಳಾದ ಆರೀಫ್ ಇಕ್ಬಾಲ್, ರಾಮಪ್ಪ ಬಾರ್ಕಿ, ಪಿ.ಯೋಗೇಶ್, ಗ್ರಾಪಂ ಸದಸ್ಯರಾದ ಕಲೀಮ್ ಪಾಷಾ, ಮಾರುತಿ, ಸಂಘದ ನಿರ್ದೇಶಕರಾದ ಎ.ಎನ್. ಮಂಜುನಾಥ್, ಎ.ಎನ್.ರವೀಂದ್ರ ಅರುಣ್ ಗೋಪಾಲ್, ಎ.ಆರ್.ಅರವಿಂದ, ತಿಮ್ಮನಾಯ್ಕ ಹೆಚ್.ಜಿ.ಪರಿಮಳ, ಮುಖಂಡರಾದ ಅಶೋಕ್, ಸುಬ್ರಹ್ಮಣ್ಯ, ನಟರಾಜ್, ಸುರೇಶ್, ಮಹದೇವಸ್ವಾಮಿ ಇತರರಿದ್ದರು.

> ಕೋಟೆ, ಸರಗೂರು ತಾಲೂಕಿನಲ್ಲಿ ಕೃಷಿ ಹಾಗೂ ಹೈನುಗಾರಿಕೆಯನ್ನೇ ನಂಬಿ ಬಡ ಕುಟುಂಬಗಳು ಸ್ವಾವಲಂಬಿ ಬದುಕು ಕಟ್ಟಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ತಾಲೂಕಿನಲ್ಲಿ ಹೈನುಗಾರಿಕೆಗೆ ಹೆಚ್ಚು ಒತ್ತು ಕೊಡಲು ಮುಂದಾಗುತ್ತೇನೆ. - **ಅನಿಲ್**, ಶಾಸಕ.


ಕೆ.ಆರ್.ನಗರ: ಅರಸು, ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

ಕೆ.ಆರ್.ನಗರ, ಆ.20– ಮಾಜಿ ಸಿಎಂ ಡಿ.ದೇವರಾಜ ಅರಸು ಮುಖ್ಯಮಂತ್ರಿಯಾಗಿದ್ದ ವೇಳೆ ಅಭಿವೃದ್ಧಿ ಕೆಲಸಗಳು ಮತ್ತು ಜಾರಿಗೆ ತಂದ ಕಾನೂನುಗಳು ಜನಮಾನಸದಲ್ಲಿ ಉಳಿದಿದ್ದು, ಅಂತಹ ಧೀಮಂತ ನಾಯಕ ನಮ್ಮ ಜಿಲ್ಲೆಯವರು ಎಂಬುದೇ ಹೆಮ್ಮೆ ಪಡುವ ವಿಚಾರ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ನಡೆದ ಡಿ.ದೇವರಾಜ ಅರಸು ಮತ್ತು ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅರಸರು ಉಳುವವನೇ ಭೂಮಿ ಒಡೆಯ ಎಂಬ ಕಾನೂನು ಜಾರಿಗೆ ತಂದಿದ್ದರಿಂದ ರಾಜ್ಯದಲ್ಲಿ ಲಕ್ಷಾಂತರ ಬಡ ಕುಟುಂಬಗಳು ಬದುಕು ಕಟ್ಟಿಕೊಳ್ಳಲು ಸಾಧ್ಯವಾಯಿತು ಎಂದರು.

ಪಟ್ಟಣದ ಕಾಳೇನಹಳ್ಳಿ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಡಿ.ದೇವರಾಜ ಅರಸು ಭವನವನ್ನು ಆ.29 ರಂದು ಉದ್ಘಾಟಿಸಲಿದ್ದು, ಅಂದು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ, ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಬ್ರಹ್ಮಶ್ರೀ ನಾರಾಯಣ ಗುರುಗಳು ಸಮಾನತೆಯ ಹರಿಕಾರರಾಗಿದ್ದು, ಸಮಾಜದಲ್ಲಿ ಪ್ರತಿಯೊಬ್ಬರು ಜಾತ್ಯಾತೀತವಾಗಿ ಬದುಕಬೇಕು ಎಂಬ ಸಿದ್ಧಾಂತದಡಿ ಕೆಲಸ ಮಾಡಿ ಎಲ್ಲರ ಮನಸ್ಸಿನಲ್ಲೂ ಅಜರಾಮರವಾಗಿದ್ದಾರೆ. ಅವರ ನೆನಪಿಗಾಗಿ ಭವನ ನಿರ್ಮಾಣ ಮಾಡಲು ನಿರ್ಧರಿಸಿದ್ದು ಶೀಘ್ರ ಈಡಿಗ ಸಮಾಜದ ಮುಖಂಡರ ಸಭೆ ಕರೆದು ಈ ಬಗ್ಗೆ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದರಲ್ಲದೆ ಜೊತೆಗೆ ಸೂಕ್ತಾತೀ ಸೂಕ್ಷ್ಮ ಸಮಾಜದವರ ಬೇಡಿಕೆಯಂತೆ ಎಲ್ಲಾ ಸಮಾಜದವರಿಗೂ ಸಮುದಾಯ ಭವನ ನಿರ್ಮಾಣಕ್ಕೆ ನಿವೇಶನ ಮಂಜೂರು ಮಾಡಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು.


ಡಿ.ದೇವರಾಜ ಅರಸು, ನಾರಾಯಣ ಗುರುಗಳ ಜಯಂತಿಯನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಇದೇ ವೇಳೆ ತಹಸೀಲ್ದಾರ್ ಜಿ.ಸುರೇಂದ್ರ ಮೂರ್ತಿ, ಪುರಸಭೆ ಮಾಜಿ ಸದಸ್ಯ ಕೆ.ವಿನಯ್, ವಕೀಲೆ ಪೂರ್ಣಿಮಾ, ದಲಿತ ಮುಖಂಡ ರಾಮಯ್ಯ ಮಾತನಾಡಿದರು. ತಾಲೂಕು ಈಡಿಗ ಸಮಾಜದ ಅಧ್ಯಕ್ಷ ಶಿವಣ್ಣ ಅರಸು ಸಮಾಜದ ಅಧ್ಯಕ್ಷ ಮಂಜುನಾಥ್ ಅರಸ್, ಸರ್ವೋದಯ ಪಕ್ಷದ ತಾಲೂಕು ಅಧ್ಯಕ್ಷ ಗರುಡಗಂಭಸ್ವಾಮಿ, ಉದ್ಯಮಿ ಆದಿತ್ಯ, ಮುಖಂಡರಾದ ರಾಜಯ್ಯ, ಜಯರಾಮು, ನಾಗರಾಜು, ಭಾಸ್ಕರ್, ರಾಮ್ ಪ್ರಸಾದ್, ಗೋವಿಂದೇಗೌಡ, ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್, ತಾಲೂಕು ಆರೋಗ್ಯಾಧಿಕಾರಿ ಡಾ.ಡಿ. ನಟರಾಜು, ಸಿಡಿಪಿಒ ಸಿ.ಎಂ.ಅಣ್ಣಯ್ಯ ಸೇರಿದಂತೆ ಇನ್ನಿತರರಿದ್ದರು.

ರಾಜ್ಯ ಕಂಡ ಶ್ರೇಷ್ಠ ಸಾಮಾಜಿಕ ಸುಧಾರಕ ಅರಸು

ತಹಸೀಲ್ದಾರ್ ರುಕಿಯಾ ಬೇಗಂ

ಸರಗೂರು, ಆ.20– ಪಟ್ಟಣದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಡಿ.ದೇವರಾಜ ಅರಸು, ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಿಸಲಾಯಿತು.

ತಹಸೀಲ್ದಾರ್ ರುಕಿಯಾ ಬೇಗಂ ಮಾತನಾಡಿ, ಸಂಘರ್ಷಕ್ಕೆ ಎಡೆ ಮಾಡಿಕೊಡದೆ ಸುಧಾರಣೆ ಮೂಲಕ ಸಮಾಜದಲ್ಲಿ ಬದಲಾವಣೆ ತಂದ ಮಹಾನ್ ದಾರ್ಶನಿಕ ನಾರಾಯಣ ಗುರು ದೂರದೃಷ್ಟಿ ಕಲ್ಪನೆಯೊಂದಿಗೆ ಶಿಕ್ಷಣದ ಮಹತ್ವ ಸಾರಿದರು. ಸಮಾಜದ ಮೌಢ್ಯ ಹೋಗಲಾಡಿಸಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟರು ಎಂದರು.

ಮಾಜಿ ಸಿಎಂ ಡಿ.ದೇವರಾಜ ಅರಸು ಅವರು ರಾಜ್ಯ ಕಂಡ ಶ್ರೇಷ್ಠ ಸಾಮಾಜಿಕ ಸುಧಾರಕರು. ಸತತ 10 ವರ್ಷ ಶಾಸಕರಾಗಿ ಆಯ್ಕೆಯಾಗಿದ್ದ ಅರಸ್ ಅವರು 2 ಬಾರಿ ಮುಖ್ಯಮಂತ್ರಿಯಾಗಿದ್ದರು. ಅವರ ಅಧಿಕಾರವಧಿಯಲ್ಲಿ ಅನೇಕ ಸುಧಾರಣೆಗಳನ್ನು ತಂದರು ಎಂದರು.


ಸರಗೂರಲ್ಲಿ ಡಿ.ದೇವರಾಜ ಅರಸು, ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಿಸಲಾಯಿತು

ವರ್ತಕರ ಸಂಘದ ಅಧ್ಯಕ್ಷ ಶ್ರೀನಿವಾಸ್, ತಾಲೂಕು ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಆರ್ಯ ಈಡಿಗ ಸಮಾಜದ ಯಜಮಾನ ವೆಂಕಟೇಶ, ಎಸ್.ಎನ್. ನಾಗರಾಜು, ಮಾಜಿ ಯಜಮಾನ ರವಿಗೌಡ, ರಂಗಣ್ಣ, ಪಪಂ ಮಾಜಿ ಅಧ್ಯಕ್ಷೆ ರಾಧಿಕಾ, ಸದಸ್ಯರಾದ ನೂರಾಳಸ್ವಾಮಿ, ಉಮಾ, ಚೈತ್ರ, ಸಮಾಜದ ಮುಖಂಡರಾದ ರಂಗನಾಥ್, ಎಸ್.ಎನ್.ನಾಗರಾಜು, ಮಂಜು, ಲೋಕೇಶ್, ಗಣಪತಿ, ನಂಜುಂಡ, ನಾರಾಯಣ, ಟೈಲರ್ ವಾಸು, ರಾಘು, ಶ್ರೀನಿವಾಸ್, ಉಪ ತಹಸೀಲ್ದಾರ್ ಸುನೀಲ್, ರವೀಂದ್ರ ಆರ್‌ಐ ಮುಜೀಬ್, ಶ್ರೀನಿವಾಸ್, ಸುಶ್ಮಿತ, ಕಂದಾಯ ಇಲಾಖೆ ಸಿಬ್ಬಂದಿ ವರ್ಗ ಇದ್ದರು.

ಅರಸು, ನಾರಾಯಣ ಗುರು ತತ್ವಾದರ್ಶ ಯುವಕರಿಗೆ ಪ್ರೇರಣೆ

ನಂಜನಗೂಡು, ಆ.20– ಡಿ.ದೇವರಾಜ ಅರಸು ಮತ್ತು ನಾರಾಯಣ ಗುರು ಅವರ ತತ್ವಾದರ್ಶಗಳು ಯುವಕರಿಗೆ ಪ್ರೇರಣೆ ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಏರ್ಪಡಿಸಿದ್ದ ಡಿ.ದೇವರಾಜ ಅರಸು ಮತ್ತು ನಾರಾಯಣ ಗುರು ಜಯಂತೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು.

ಡಿ.ದೇವರಾಜ ಅರಸು ಅವರು ಭೂ ಸುಧಾರಣೆ ಕಾಯ್ದೆ, ಉಳುವವನೇ ಭೂಮಿ ಒಡೆಯ ಕಾಯ್ದೆಗಳನ್ನು ಜಾರಿಗೆ ತಂದಿದ್ದಲ್ಲದೆ ರಾಜ್ಯದಲ್ಲಿ ಬಡತನ ನಿವಾರಣೆಗಾಗಿ ಇಂದಿರಾ ಗಾಂಧಿ ಅವರ 20 ಅಂಶಗಳ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದು ಸಮಾಜದಲ್ಲಿ ಸುಧಾರಣೆ ತರಲು ಕಾರಣರಾದರು ಎಂದರು.

ನಾರಾಯಣ ಗುರುಗಳು ಸಮಾಜದಲ್ಲಿದ್ದ ಜಾತಿ ವ್ಯವಸ್ಥೆ ಹೋಗಲಾಡಿಸಲು ತಮ್ಮ ಜೀವನ ಪರ್ಯಂತ ಹೋರಾಟ ನಡೆಸಿದವರು. ಅಲ್ಲದೆ ಮೇಲ್ವರ್ಗದ ಜನರ ಜೊತೆ ಸಂಘರ್ಷಕ್ಕಿಳಿಯದೆ ತಮ್ಮ ಸಮಾಜದವರ ವಿದ್ಯೆಗೆ ಹೆಚ್ಚು ಆದ್ಯತೆ ನೀಡುವಂತೆ ಅರಿವು ಮೂಡಿಸಿದವರು. ಹೀಗಾಗಿ ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದರು.


ಮಹನೀಯರ ಭಾವಚಿತ್ರಕ್ಕೆ ಶಾಸಕ ದರ್ಶನ್ ಪುಷ್ಪಾರ್ಚನೆ ಮಾಡಿದರು.

ಮುಖ್ಯ ಭಾಷಣಕಾರ ಪೃಥ್ವಿರಾಜ್ ಮಾತನಾಡಿ, ಡಿ.ದೇವರಾಜ ಅರಸು ಅವರು ಉಳುವವನೇ ಭೂಮಿ ಒಡೆಯ ಕಾನೂನು ಜಾರಿಗೆ ತರುವ ಮೂಲಕ ಮೌನಕ್ರಾಂತಿ ನಡೆಸಿದವರು ಎಂದರು.

ಮತ್ತೊಬ್ಬ ಭಾಷಣಕಾರ ವಿದ್ಯಾಸಾಗರ್ ಕದಂಬ ಮಾತನಾಡಿ, ಮೇಲ್ವರ್ಗದ ಜನರು ಹಿಂದುಳಿದವರು, ಶೋಷಿತರಿಗೆ ದೇವಾಲಯ ಪ್ರವೇಶ ನಿರಾಕರಿಸುತ್ತಿದ್ದರು. ನಾರಾಯಣ ಗುರುಗಳು ಶೋಷಿತರಿಗಾಗಿಯೇ 300ಕ್ಕೂ ಹೆಚ್ಚು ದೇವಾಲಯ ನಿರ್ಮಿಸಿದರು ಎಂದರು.

ಸಮಾರಂಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ಮುಖಂಡರಾದ ಎನ್.ಟಿ.ಗಿರೀಶ್, ಶೇಖರ್, ಪ್ರಕಾಶ್ ರಾಜೇ ಅರಸ್, ತಾಪಂ ಮಾಜಿ ಅಧ್ಯಕ್ಷ ನಾಗೇಶ್ ರಾಜ್, ನಗರಸಭಾ ಸದಸ್ಯೆ ಗಾಯತ್ರಿ, ಸಿದ್ದಿಖ್, ಮಾಜಿ ನಗರಸಭೆ ಉಪಾಧ್ಯಕ್ಷ ದೊರೆಸ್ವಾಮಿ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ತಾಪಂ ಇಒ ಜೆರಾಲ್ಡ್ ರಾಜೇಶ್, ಡಿವೈಎಸ್ಪಿ ರಘು, ನಗರಸಭಾ ಆಯುಕ್ತ ನಂಜುಂಡಸ್ವಾಮಿ, ಹಿಂದುಳಿದ ವರ್ಗದ ಕಲ್ಯಾಣಾಧಿಕಾರಿ ಸ್ವರ್ಣಲತಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮುಖಂಡರು ಇದ್ದರು.

ಕಾರು ಡಿಕ್ಕಿ: ಪಾದಚಾರಿ ಸ್ಥಳದಲ್ಲೇ ಸಾವು

ತಿ.ನರಸೀಪುರ, ಆ.20– ಕಾರು ಡಿಕ್ಕಿ ಹೊಡೆದ ಪರಿಣಾಮ ಪಾದಚಾರಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಕೆಂಪಯ್ಯನಹುಂಡಿ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಮಂಗಳವಾರ ಬೆಳಗ್ಗೆ ನಡೆದಿದೆ.



ತಾಲೂಕಿನ ಹೊಸ ಕೆಂಪಯ್ಯನಹುಂಡಿ ಗ್ರಾಮದ ದೊಡ್ಡಗಂಡಶೆಟ್ಟಿ ಎಂಬುವರ ಪುತ್ರ ರಂಗನಾಥ(30) ಮೃತಪಟ್ಟವರು. ಅದೇ ಗ್ರಾಮದ ನಾಗಶೆಟ್ಟಿ ಎಂಬುವರ ಪುತ್ರ ನಾಗೇಂದ್ರ(28) ಗಾಯಗೊಂಡು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದಾರೆ. ಎಂದಿನಂತೆ ರಂಗನಾಥ ಮತ್ತು ನಾಗೇಂದ್ರ ರಾಷ್ಟ್ರೀಯ ಹೆದ್ದಾರಿಯಲ್ಲಿ ಬೆಳಗ್ಗೆ ವಾಕಿಂಗ್ ಹೋಗುತ್ತಿದ್ದ ವೇಳೆ ಮೈಸೂರು ಕಡೆಯಿಂದ ವೇಗವಾಗಿ ಬಂದ ಕಾರು(ಕೆಎ–09, ಎನ್–7587) ಇಬ್ಬರಿಗೂ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ರಂಗನಾಥ ಸ್ಥಳದಲ್ಲೇ ಸಾವನ್ನಪ್ಪಿದರೇ, ಗಾಯಗೊಂಡ ನಾಗೇಂದ್ರ ಅವರನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಮರಣೋತ್ತರ ಪರೀಕ್ಷೆ ನಂತರ ರಂಗನಾಥನ ಶವವನ್ನು ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಣೆ


ಮೂಗೂರಿನ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಗೆ ಮೈಸೂರಿನ ತಿರುಮಲ ಗ್ರೂಪ್ ವತಿಯಿಂದ ಉಚಿತ ನೋಟ್ ಬುಕ್ ವಿತರಿಸಲಾಯಿತು. ಈ ವೇಳೆ ಉಪ ಪ್ರಾಂಶುಪಾಲ ಸಿ.ಪುಟ್ಟಸ್ವಾಮಿ, ಇಂಡಿಯನ್ ಓವರ್‌ಸೀಸ್ ಬ್ಯಾಂಕ್ ನಿವೃತ್ತ ನೌಕರ ಜಿ.ಎನ್.ಸ್ವಾಮಿ, ಎಸ್.ರಾಮಚಂದ್ರ, ವೆಂಕಟೇಶ್ ಬಾಬು, ಸಿ.ಎಂ.ಮೂರ್ತಿ, ಎಂ.ರಮೇಶ್, ಶಿಕ್ಷಕರಾದ ಬಿ.ಎಸ್.ಕಾವೇರಿ, ರಮೇಶ್, ಕೇಶವ್, ಶಾಂತಮ್ಮ, ವಿದ್ಯಾರ್ಥಿಗಳಿದ್ದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ

ತಿ.ನರಸೀಪುರ, ನಂಜನಗೂಡಿನಲ್ಲಿ 'ಕೈ' ಪ್ರತಿಭಟನೆ



ತಿ.ನರಸೀಪುರ, ನಂಜನಗೂಡಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ತಿ.ನರಸೀಪುರ/ ನಂಜನಗೂಡು, ಆ.20– ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ಖಂಡಿಸಿ ಮಂಗಳವಾರ ತಿ.ನರಸೀಪುರ, ನಂಜನಗೂಡಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ತಿ.ನರಸೀಪುರ: ವರುಣ ಕ್ಷೇತ್ರದ ಮೆಲ್ಲಹಳ್ಳಿ ಮುಖ್ಯರಸ್ತೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ರಸ್ತೆ ತಡೆದು ಪ್ರತಿಭಟನೆ ನಡೆಸಿ ರಾಜ್ಯಪಾಲರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಗ್ರಾಪಂ ಅಧ್ಯಕ್ಷ ಎಂ.ನಾಗರಾಜು ಮಾತನಾಡಿ, ಎಲ್ಲಾ ವರ್ಗದ ಬಡವರು ಮತ್ತು ಹಿಂದುಳಿದ ಸಮುದಾಯಗಳ ಮೇಲೆ ಕಾಳಜಿ ಹೊಂದಿರುವ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ ಎಂದರು.

ಕಾಂಗ್ರೆಸ್ ಯುವ ಮುಖಂಡ ರವಿ ಎನ್.ಗೌಡ ಮಾತನಾಡಿದರು. ಪ್ರತಿಭಟನೆಯಲ್ಲಿ ತಾಪಂ ಮಾಜಿ ಸದಸ್ಯ ಮುದ್ದರಾಮೇಗೌಡ, ಗ್ರಾಪಂ ಅಧ್ಯಕ್ಷೆ ನಾಗರತ್ನ, ಸದಸ್ಯರಾದ ಪ್ರಶಾಂತ್, ನಾಗರಾಜ್, ಶಂಕರ್, ಸಿದ್ದರಾಜು, ರಮೇಶ್, ಮೋಹನ್ ಕುಮಾರ್, ಕುಮಾರ್, ವಿಜೇಂದ್ರ, ಗಂಗನತಿಮ್ಮಯ್ಯ, ಸಾಕಂತ್ಯು, ಎಂ.ಟಿ.ರವಿಕುಮಾರ್, ಸಿಂಡಿಕೇಟ್ ಸದಸ್ಯ ಸಿದ್ದಯ್ಯ, ಕುಮಾರ್, ಕಾಂಗ್ರೆಸ್ ಮುಖಂಡರಾದ ಬಸವರಾಜ್, ಸಿದ್ದೇಶ್, ಪುನೀತ್ ಇತರರಿದ್ದರು.

ನಂಜನಗೂಡು: ತಾಲೂಕಿನ ಚಿನ್ನದಗುಡಿ ಹುಂಡಿ ಗೇಟ್ ಬಳಿ ಜಮಾಯಿಸಿದ ಗ್ರಾಮಸ್ಥರು, ಸಿದ್ದರಾಮಯ್ಯ ಅಭಿಮಾನಿಗಳು ಚಾಮರಾಜನಗರ–ನಂಜನಗೂಡು ಹೆದ್ದಾರಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ರಾಜ್ಯ ಕುರುಬರ ಸಂಘದ ಅಧ್ಯಕ್ಷ ಸುಬ್ರಹ್ಮಣ್ಯ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ದೊಡ್ಡ ದುರಂತ. ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕಾದರೆ ತನಿಖೆ ಆಗಿರಬೇಕು ಎಂಬ ನಿಬಂಧನೆ ಇದೆ. ಕೇಂದ್ರ ಸರ್ಕಾರ 135ಕ್ಕೂ ಹೆಚ್ಚಿನ ಶಾಸಕರ ಬಹುಮತ ಹೊಂದಿದ ಸರ್ಕಾರದ ವಿರುದ್ಧ ಷಡ್ಯಂತ್ರ ರಚಿಸಿದೆ. ರಾಜ್ಯದಿಂದ ರಾಜ್ಯಪಾಲರನ್ನು ಹುದ್ದೆಯಿಂದ ಬಿಡುಗಡೆ ಮಾಡುವವರೆಗೂ ಪ್ರತಿಭಟನೆ ನಡೆಸಲಾಗುವುದು ಎಂದರು.

ಇದೇ ವೇಳೆ ಕುರಿಹುಂಡಿ ರಾಜು, ಮುಖಂಡ ಕುಳ್ಳಯ್ಯ ಮಾತನಾಡಿದರು. ಪ್ರತಿಭಟನೆಯಲ್ಲಿ ಗ್ರಾಪಂ ಸದಸ್ಯರಾದ ಶಿವಸ್ವಾಮಿ, ಶಿವು, ಅನಿತಾ, ಸುಶೀಲಾ, ರವಿಚಂದ್ರ, ಶೃತಿ, ರಂಗದಾಸ್, ರವಿ, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್‌ಕುಮಾರ್, ಮುಖಂಡರಾದ ಶ್ರೀನಿವಾಸಮೂರ್ತಿ, ವಿಜಯ್‌ಕುಮಾರ್, ನಾಗರಾಜು, ಬೀರೇಗೌಡ, ಪರಶಿವಮೂರ್ತಿ ಹಾಗೂ ಗ್ರಾಮಸ್ಥರು ಇದ್ದರು.

ಜನಪ್ರಿಯ ಯೋಜನೆಗಳ ಮೂಲಕ ಡಿ.ದೇವರಾಜ ಅರಸು ಹೆಸರು ಅಮರ

●ಶಾಸಕ ಕೆ.ಹರೀಶ್ ಗೌಡ ಅಭಿಮತ ●ಮೈಸೂರಲ್ಲಿ ಅರಸು ಜಯಂತಿ ಆಚರಣೆ ●ಅರಸು ಸುಧಾರಣೆ ಈಗಲೂ ಸಾಗಿದೆ

ಮೈಸೂರು,ಆ.20(ಎಂಟಿವೈ)– ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಆಡಳಿತ ನಡೆಸಿ ಹಲವು ಜನಪ್ರಿಯ ಯೋಜನೆಗಳನ್ನು ಜಾರಿಗೊಳಿಸಿದ ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರ ಹೆಸರು ಅಮರವಾಗಿದೆ ಎಂದು ಶಾಸಕ ಕೆ.ಹರೀಶ್‌ಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿ.ಪಂ, ಮೈಸೂರು ಮಹಾನಗರ ಪಾಲಿಕೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಮಾಜಿ ಮುಖ್ಯಮಂತ್ರಿ ದಿ. ಡಿ.ದೇವರಾಜ ಅರಸು ಅವರ 109ನೇ ಜನ್ಮ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ಕಂಡಂತಹ ಧೀಮಂತ ನಾಯಕ, ಹಿಂದುಳಿದ ವರ್ಗಗಳ ಆಶಾಕಿರಣ ಡಿ.ದೇವರಾಜ ಅರಸು ಅವರ ಆಡಳಿತದಲ್ಲಿ ಕೈಗೊಂಡ ನಿರ್ಧಾರ, ಜಾರಿಗೊಳಿಸಿದ ಕಾರ್ಯಕ್ರಮಗಳು ಸೂರ್ಯ–ಚಂದ್ರ ಇರುವವರೆಗೂ ಅಮರವಾಗಿರುತ್ತವೆ. ಅವರ ಆಡಳಿತದ ಅವಧಿಯಲ್ಲಾದ ಅಭಿವೃದ್ಧಿ ಕಾರ್ಯವನ್ನು ರಾಜ್ಯ ಸರ್ಕಾರ ನೆನೆದು ಶೋಷಿತರ ಹಿತ ಕಾಯುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ ಎಂದು ತಿಳಿಸಿದರು.



ಮೈಸೂರಿನ ಕಲಾಮಂದಿರದಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರ ಜನ್ಮ ಜಯಂತಿ ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತು.

ಡಿ.ದೇವರಾಜ ಅರಸು ಅವರು ತಂದಂತಹ ಸುಧಾರಣೆಗಳನ್ನು ನಮ್ಮ ಸರ್ಕಾರ ಆಡಳಿತದಲ್ಲಿ ಅಳವಡಿಸಿಕೊಂಡು ಸಾಗುತ್ತಿದೆ. ರಾಜ್ಯ ಅಭಿವೃದ್ಧಿ ಪಥದತ್ತ ಸಾಗಲು ಅರಸು ಅವರು ಅಡಿಪಾಯ ಹಾಕಿಕೊಟ್ಟರು. ಭೂ ಸುಧಾರಣೆ, ಜೀತ ಪದ್ಧತಿ, ಪರಿಶಿಷ್ಟ ಜಾತಿ–ಪಂಗಡದವರ ಹಿತ ಕಾಯಲು ಜಾರಿಗೆ ತಂದ ಕಾಯ್ದೆಗಳು, ಅಂಗವಿಕಲರಿಗೆ ಮಾಸಿಕ ವೇತನ, ವಿಧವಾ ವೇತನ ಜಾರಿ, ಸಾಮಾಜಿಕ ಸುಧಾರಣೆ ಕಾರ್ಯಕ್ರಮ, ಆಶ್ರಯ ಯೋಜನೆಯಡಿ ನಿವೇಶನ ಇಲ್ಲದಿರುವವರಿಗೆ ಮನೆ ನೀಡುವ ಯೋಜನೆ ಇವೆಲ್ಲವೂ ಮರೆಯಲಾಗದ ಕೊಡುಗೆಗಳಾಗಿವೆ ಎಂದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್ ಮಾತನಾಡಿ, ಶೋಷಿತ ಸಮುದಾಯ ಸಮಗ್ರ ಅಭಿವೃದ್ಧಿಯ ಹರಿಕಾರ, ನೊಂದವರ ನಂದಾದೀಪ, ಧೀಮಂತ ನಾಯಕ, ಸಾಮಾಜಿಕ ನ್ಯಾಯಕ್ಕಾಗಿ ನಿರಂತರ ಹೋರಾಡಿದ ಅದಮ್ಯ ಚೇತನ ಡಿ.ದೇವರಾಜ ಅರಸು. ಇಂತಹ ಮಹಾನ್ ವ್ಯಕ್ತಿ ಮೈಸೂರಿನವರಾಗಿರುವುದು ನಮ್ಮ ಹೆಮ್ಮೆ. ಶೋಷಿತ ವರ್ಗಗಳ ಧ್ವನಿಯಾಗಿದ್ದ ಅವರು ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಬಡವರ ಅಭಿವೃದ್ಧಿಗಾಗಿ ಶ್ರಮಿಸಿದರು. ಭೂ–ಸುಧಾರಣೆ ಕಾಯ್ದೆಯಿಂದ ಉಳುವವನೇ ಭೂಮಿಯ ಒಡೆಯ ಎಂದು ಮಾಡಿದ್ದ ಕಾರ್ಯ ಇಂದು ಪ್ರತಿಯೊಬ್ಬ ಬಡವರಿಗೆ ಸಿಕ್ಕಂತಹ ಜ್ಯೋತಿಯಾಗಿದೆ. ಇದರಿಂದ ಬಡವರಿಗೆ ಆರ್ಥಿಕ ಸಬಲೀಕರಣ ಸಿಕ್ಕಂತಾಗಿದೆ ಎಂದು ತಿಳಿಸಿದರು.

ವಿಧಾನಪರಿಷತ್ ಸದಸ್ಯ ಡಾ. ತಿಮ್ಮಯ್ಯ ಮಾತನಾಡಿ, ಡಿ.ದೇವರಾಜ ಅರಸು ಸಾಮಾನ್ಯ ಜನರಿಗೆ ದೇವರ ರೂಪದಲ್ಲಿ ರಾಜನಂತೆ ಆಳ್ವಿಕೆ ನಡೆಸಿ ಅರಸನಂತೆ ಬದುಕಿದ್ದಂತಹ ಚೇತನ ವ್ಯಕ್ತಿ. ಮುಖ್ಯಮಂತ್ರಿ ಆಗಿ ಅಧಿಕಾರ ನಡೆಸಿ ಬಡವರ ಪರ ನಿಂತರು. ರಾಷ್ಟ್ರ ರಾಜಕಾರಣ ಇತಿಹಾಸದಲ್ಲೇ ಉಳುವವನೇ ಭೂಮಿಯ ಒಡೆಯ ಕಾಯ್ದೆಗೆ ಒಪ್ಪಿಗೆ ಸೂಚಿಸಿ ಜಾರಿಗೆ ತಂದರು. ಅಂತಹ ವ್ಯಕ್ತಿಯನ್ನು ಪೂಜಿಸಬೇಕು. ಮನುಕುಲದ ಶಾಪದಂತೆ ಇದ್ದ ಜೀತ ಪದ್ಧತಿ, ಜಮಿನ್ದಾರಿ ಪದ್ಧತಿ ಹೋಗಲಾಡಿಸಿ ಪ್ರತಿಯೊಬ್ಬ ವ್ಯಕ್ತಿಯೂ ಸಮಾನತೆ, ಸ್ವಾಭಿಮಾನದಿಂದ ಬದುಕಲು ಅವಕಾಶ ಮಾಡಿಕೊಟ್ಟರು. ಅಂತಹವರ ಗುಣ, ವ್ಯಕ್ತಿತ್ವ ಪ್ರತಿಯೊಬ್ಬ ಯುವ ಪೀಳಿಗೆಗೂ ಮಾದರಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ಜಿ.ಪಂ. ಸಿಇಓ ಕೆ.ಎಂ.ಗಾಯಿತ್ರಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ, ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಜಾನಪದ ವಿದ್ವಾಂಸ ಹಿ.ಶಿ.ರಾಮಚಂದ್ರೇಗೌಡ, ಕನ್ನಡ ಪುಸ್ತಕ ಪ್ರಾಧಿಕಾರದ ಮಾನಸ, ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ರಾಘವೇಂದ್ರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಡಬಲ್ ಐಸ್ಮಾರ್ಟ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ವೇದ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ಡಬಲ್ ಐಸ್ಮಾರ್ಟ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಭೀಮಾ (ಕ): ಬೆ.10.20ಕ್ಕೆ, ರಾ.10.20ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ.
ಸ್ಕ್ರೀನ್ 2	ಗೌರಿ (ಕ): ಬೆ.10.50ಕ್ಕೆ, ಸಂ.4.30ಕ್ಕೆ, ವೇದಾ (ಹಿಂ): ಮ.1.25ಕ್ಕೆ, ಮಿ. ಬಚ್ಚನ್ (ತೆ): ರಾ.7.10ಕ್ಕೆ, ಡಿಮೊಂಟ್ ಕಾಲೋನಿ 2 (ತ): ರಾ.10.10ಕ್ಕೆ.
ಸ್ಕ್ರೀನ್ 3	ಇಟ್ ಎಂಡ್ಸ್ ವಿಥ್ ಅಸ್ (ಇಂ): ಬೆ.10.50ಕ್ಕೆ, ತಂಗಲಾನ್ (ತ): ಮ.1.25ಕ್ಕೆ, ಡಬಲ್ ಇಸ್ಮಾರ್ಟ್ (ತೆ): ಸಂ.4.25ಕ್ಕೆ, ಖೇಲ್ ಖೇಲ್ ಮೇನ್ (ಹಿ): ರಾ.7.30ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.15ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಭೀಮಾ (ಕ): ಮ.1.15ಕ್ಕೆ, ರಘು ತಾತ (ತ): ಸಂ.4.20ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸ್ತ್ರೀ 2 (ಹಿಂ): ಬೆ.8.05ಕ್ಕೆ, ಭೀಮಾ (ಕ): ಬೆ.10.30ಕ್ಕೆ, ಡಬಲ್ ಇಸ್ಮಾರ್ಟ್ (ತೆ): ಮ.1.25ಕ್ಕೆ, ಗೌರಿ (ಕ): ಸಂ.4.25ಕ್ಕೆ, ನುನಕ್ಕುಝಿ (ಮ): ರಾ.7ಕ್ಕೆ, ರಘು ತಾತ (ತ): ರಾ.9.30ಕ್ಕೆ.
ಸ್ಕ್ರೀನ್ 2	ಸ್ತ್ರೀ 2 (ಹಿಂ): ಬೆ.10ಕ್ಕೆ, ಭೀಮಾ (ಕ): ಮ.12.50ಕ್ಕೆ, ಮ.3.45ಕ್ಕೆ, ಸಂ.6.50ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ರಾ.9.45ಕ್ಕೆ.
ಸ್ಕ್ರೀನ್ 3	ಕೃಷ್ಣಂ ಪ್ರಣಯ ಸಖಿ (ಕ): ಬೆ.10ಕ್ಕೆ, ಮ.1ಕ್ಕೆ, ವೇದ (ಹಿಂ): ಸಂ.4.05ಕ್ಕೆ, ರಾ.9.45ಕ್ಕೆ, ಸ್ತ್ರೀ 2 (ಹಿಂ): ಸಂ.6.55ಕ್ಕೆ.
ಸ್ಕ್ರೀನ್ 4	ತಂಗಲಾನ್ (ತ): ಬೆ.10.05ಕ್ಕೆ, ಸಂ.6.45ಕ್ಕೆ, ಸ್ತ್ರೀ 2 (ಹಿಂ): ಮ.1ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.50ಕ್ಕೆ, ಡಬಲ್ ಇಸ್ಮಾರ್ಟ್ (ತೆ): ರಾ.9.40ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಶ್ರೀ ಷಷ್ಠಿ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ

ಮೈಸೂರು, ಆ.20(ಎಸ್‌ಪಿಎನ್)– ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿರುವ ಶ್ರೀ ಷಷ್ಠಿ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯ ತಮಿಳುನಾಡಿನ ಪಿಚ್ಚಮ್ಮ ಟ್ರಸ್ಟ್‌ನಿಂದ ಪೂರ್ಣಗೊಂಡಿದೆ. ಈ ಸಂಬಂಧ ಆ.21ರಿಂದ ಆ.23ರವರೆಗೆ ವಿವಿಧ ಪೂಜಾ ಕೈಂಕರ್ಯಗಳ ಹಮ್ಮಿಕೊಳ್ಳಲಾಗಿದ್ದು, ಆದರೆ, ಆ.23ರಂದು ಮಹಾಕುಂಭಾಭಿಷೇಕ, ಮಹಾಪ್ರಸಾದ ವಿನಿಯೋಗ ಆಯೋಜಿಸಲಾಗಿದೆ ಎಂದು ಪ್ರಧಾನ ಅರ್ಚಕ ಎಂ.ವಿ.ಸುಬ್ರಹ್ಮಣ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ ಮೊ:98450–68642 ಸಂಪರ್ಕಿಸಬಹುದು.

ಹಳೆ ನಿಶ್ಚಿತ ಪಿಂಚಣಿ ಜಾರಿಗೆ ಸರ್ಕಾರಕ್ಕೆ ಮನವಿ



ಪಿಂಚಣಿ ವಂಚಿತ ನೌಕರರು ಅಪರ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದರು.

ಮೈಸೂರು, ಆ.20(ಎಸ್‌ಪಿಎನ್)– 'ಹಳೆ ನಿಶ್ಚಿತ ಪಿಂಚಣಿ' ಜಾರಿಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಶಾಲಾ ಕಾಲೇಜು ಪಿಂಚಣಿ ವಂಚಿತ ನೌಕರರ ಸಂಘದ ಪದಾಧಿಕಾರಿಗಳು, ಮೈಸೂರು ಅಪರ ಜಿಲ್ಲಾಧಿಕಾರಿ ಶಿವರಾಜ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

ಕರ್ನಾಟಕ ಖಾಸಗಿ ಶೈಕ್ಷಣಿಕ ಸಂಸ್ಥೆ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ವಿಧೇಯಕ 2014ಕ್ಕೆ ತಿದ್ದುಪಡಿ ತಂದು 01.04.2006ರ ಪೂರ್ವದಲ್ಲಿ ನೇಮಕವಾಗಿ ನಂತರ ಅನುದಾನಕ್ಕೆ ಒಳಪಟ್ಟ ನೌಕರರಿಗೂ ಹಳೆಯ ನಿಶ್ಚಿತ ಪಿಂಚಣಿ ನೀಡುವಂತೆ ಒತ್ತಾಯಿಸಿದರು.

ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬರುವ ಪೂರ್ವದಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಪ್ರಣಾಳಿಕೆಯಲ್ಲಿ ಎನ್‌ಪಿಎಸ್ ರದ್ದುಗೊಳಿಸಿ, ಓಪಿಎಸ್ ಜಾರಿಗೆ ತರುವ ಸ್ಪಷ್ಟ ಭರವಸೆ ನೀಡಿತ್ತು. ಈ ಕೂಡಲೇ ಆ ಭರವಸೆಯನ್ನು ಜಾರಿಗೊಳಿಸುವಂತೆ ಮನವಿ ಮಾಡಿದ್ದಾರೆ. ಪದಾಧಿಕಾರಿಗಳಾದ ಜಿಲ್ಲಾಧ್ಯಕ್ಷ ಡಾ.ಶರತ್‌ಕುಮಾರ್, ಕಾರ್ಯದರ್ಶಿ ಬಿ.ಆರ್.ಶಿವಕುಮಾರ್, ಖಜಾಂಚಿ ಸಿದ್ದರಾಮು, ವಿಶ್ವನಾಥ್, ಹರೀಶ್, ಮಹೇಶ್, ಭಾಗ್ಯ, ಯಶೋಧ, ಶ್ರೀನಿವಾಸ ಸೇರಿದಂತೆ ಇತರರಿದ್ದರು.

ಮಾನಸಿಕ ಅಸ್ವಸ್ಥ ನಾಪತ್ತೆ

ಮೈಸೂರು, ಆ.20– ಮಾನಸಿಕ ಅಸ್ವಸ್ಥನೋರ್ವ ನಾಪತ್ತೆಯಾಗಿದ್ದು, ಈತನನ್ನು ಹುಡುಕಿಕೊಡುವಂತೆ ಪೋಷಕರು ವರುಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಮೈಸೂರು ತಾಲೂಕು ಕುಪ್ಪೆಗಾಲದಿಂದ ಸೋಮಶೇಖರ್ (30) ಆ.1ರಿಂದ ನಾಪತ್ತೆಯಾಗಿದ್ದಾರೆ. ಇವರು ಬಿಇ ವ್ಯಾಸಂಗ ಮುಗಿಸಿ, ಮೈಸೂರಿನ ಖಾಸಗಿ ಕಂಪನಿಯೊಂದರಲ್ಲಿ ಕೆಲ ತಿಂಗಳ ಹಿಂದೆ ಕೆಲಸ ಮಾಡುತ್ತಿದ್ದರು. ನಂತರ ಇದ್ದಕ್ಕಿದ್ದಂತೆ ಮಾನಸಿಕ ಅಸ್ವಸ್ಥನಂತೆ ವರ್ತಿಸಿ, ಕೆಲಸಕ್ಕೆ ಹೋಗುತ್ತಿರಲಿಲ್ಲ. ನಂತರ ತನ್ನ ತಾಯಿ ಮನೆಯಾದ ಮೈಸೂರು ತಾಲೂಕು ಕುಪ್ಪೆಗಾಲಕ್ಕೆ ಆರು ತಿಂಗಳಿಂದ ವಾಸವಿದ್ದರು. ಇದೀಗ ಅಲ್ಲಿಂದಲೂ ನಾಪತ್ತೆಯಾಗಿದ್ದು, ಈತನನ್ನು ಹುಡುಕಿಕೊಡುವಂತೆ ಸೋಮಶೇಖರ್ ಅವರ ತಾಯಿ ರಾಜಮ್ಮ ವರುಣ ಪೊಲೀಸರಲ್ಲಿ ಮನವಿ ಮಾಡಿದ್ದಾರೆ. ಈತನ ಸುಳಿವು ಸಿಕ್ಕಲ್ಲಿ ಮೈಸೂರು ಜಿಲ್ಲೆಯ ಎಸ್‌ಪಿ ಕಚೇರಿಯ ದೂ.ಸಂ:0821–2520040, ಜಿಲ್ಲಾ ಕಂಟ್ರೋಲ್ ರೂಂ ಸಂಖ್ಯೆ:0821–2444800 ಅಥವಾ ವರುಣ ಪೊಲೀಸ್ ಠಾಣೆಯ ದೂ.ಸಂ:0821–2594411 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗೋಕುಲಂನಲ್ಲಿ ಸ್ವಾತಂತ್ರ್ಯೋತ್ಸವ



ಮೈಸೂರಿನ ಗೋಕುಲಂ ಬಡಾವಣೆ ಎರಡನೇ ಹಂತದ ಕುವೆಂಪು ಉದ್ಯಾನದಲ್ಲಿ ಗೋಕುಲಂ ನಾಗರಿಕಾಭಿವೃದ್ಧಿ ವೇದಿಕೆ ವತಿಯಿಂದ 78ನೇ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ಮೇಜರ್(ನಿ) ಪುರುಷೋತ್ತಮ್, ಸುರೇಶ್, ಪ್ರೊ.ಶ್ರೀರಂಗರಾಜನ್, ಮಾಜಿ ಕಾರ್ಪೊರೇಟರ್ ಭಾಗ್ಯ ಮಾದೇಶ್, ಯಶೋಧಾ, ಸಂಘದ ಅಧ್ಯಕ್ಷ ಎಸ್.ಬಿ.ರಮೇಶ್, ಕಾರ್ಯದರ್ಶಿ ಗಾಯತ್ರಿ ನಾರಾಯಣಗೌಡ ಸೇರಿದಂತೆ ಸಂಘದ ಪದಾಧಿಕಾರಿಗಳು, ಬಡಾವಣೆ ನಿವಾಸಿಗಳು ಭಾಗವಹಿಸಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ ಮೈಸೂರಲ್ಲಿ ಅಹೋರಾತ್ರಿ ಧರಣಿ

— ಕರ್ನಾಟಕ ಜನರಂಗ ನಿರ್ಧಾರ —



ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಮಂಗಳವಾರ ಕರ್ನಾಟಕ ಜನರಂಗದ ವತಿಯಿಂದ ಸಭೆ ನಡೆಸಲಾಯಿತು.

ಮೈಸೂರು, ಆ.20(ಎಸ್‌ಬಿಡಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಅನುಮತಿ ನೀಡಿರುವುದನ್ನು ವಿರೋಧಿಸಿ ಮೈಸೂರಲ್ಲಿ ಅಹೋರಾತ್ರಿ ಧರಣಿ ನಡೆಸಲು ಕರ್ನಾಟಕ ಜನರಂಗ ನಿರ್ಧರಿಸಿದೆ.

ರಾಜ್ಯಪಾಲರ ನಡೆಗೆ ನುಡಿ ಖಂಡನೆ ಶೀರ್ಷಿಕೆಯಡಿ ಪ್ರಜಾಪ್ರಭುತ್ವದ ಉಳಿವು ಮತ್ತು ಸಂವಿಧಾನ ರಕ್ಷಣೆ ಘೋಷವಾಕ್ಯದೊಂದಿಗೆ ಆ.24ರ ಸಂಜೆ 5ರಿಂದ ಆ.25ರ ಸಂಜೆ 5 ಗಂಟೆವರೆಗೆ ನಗರದ ಚಿಕ್ಕಗಡಿಯಾರದ ಬಳಿ ಅಹೋರಾತ್ರಿ ಧರಣಿ ನಡೆಸಲು ಮಂಗಳವಾರ ಜಲದರ್ಶಿನಿ ಅತಿಥಿಗೃಹದಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಯಿತು.

ಜನಪರ ಆಡಳಿತ ನೀಡುತ್ತಿರುವ ಸಿಎಂ ಸಿದ್ದರಾಮಯ್ಯನವರ ತೇಜೋವಧೆ ಮಾಡಲೆಂದೇ ಸಂವಿಧಾನಕ್ಕೆ ವಿರುದ್ಧವಾಗಿ ರಾಜ್ಯಪಾಲರನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ. ರಾಜ್ಯಪಾಲರ ವಿಷಯದಲ್ಲಿ ಜಾತಿಯ ಬಗ್ಗೆ ಮಾತನಾಡುವವರು ಬುದ್ಧಿಹೀನರು. ಸಂಘ ಪರಿವಾರದವರು, ಕೋಮುವಾದಿಗಳು ಸಿದ್ದರಾಮಯ್ಯನವರನ್ನು ವಿರೋಧಿಸುತ್ತಾ ಬಂದಿದ್ದಾರೆ. ಸಿದ್ದರಾಮಯ್ಯನವರಿಗೆ ತೊಂದರೆ ನೀಡಲು ರಾಷ್ಟ್ರೀಯ ಮಟ್ಟದ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ. ಮುಡಾ ವಿಚಾರವಾಗಿ ಬಿಜೆಪಿ–ಜೆಡಿಎಸ್ ನಡೆಸಿದ ಪಾದಯಾತ್ರೆಯಲ್ಲಿ ಹಗರಣಗಳಲ್ಲಿ ಮುಳುಗಿರುವವರು ಪಾಲ್ಗೊಂಡಿದ್ದರು ಎಂಬಿತ್ಯಾದಿ ಆರೋಪಗಳು ಸಭೆಯಲ್ಲಿ ವ್ಯಕ್ತವಾದವು.

ಅಹೋರಾತ್ರಿ ಧರಣಿಯಲ್ಲಿ ಭಾಗವಹಿಸುವವರು ಕಪ್ಪುಪಟ್ಟಿ ಧರಿಸಬೇಕು. ಸಾಹಿತಿಗಳು, ಹೋರಾಟಗಾರರ ಭಾಷಣ ಏರ್ಪಡಿಸಬೇಕು. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನಬದ್ಧವಾಗಿ ನೀಡಿರುವ ಹೆಣ್ಣು ಮಕ್ಕಳ ಆಸ್ತಿಯ ಹಕ್ಕನ್ನು ಈ ರೀತಿಯಲ್ಲಿ ಕಸಿಯಲು ನಡೆಸಿರುವ ಪ್ರಯತ್ನವನ್ನು ಖಂಡಿಸಬೇಕು. ತನಿಖಾ ಸಂಸ್ಥೆಗಳ ದುರುಪಯೋಗವನ್ನು ವಿರೋಧಿಸಬೇಕು. ರಾಜಕೀಯ ಉದ್ದೇಶದಿಂದ ಸಮಾಜದ ದಿಕ್ಕು ತಪ್ಪಿಸುವ ಬಗ್ಗೆ ಕರಪತ್ರಗಳ ಮೂಲಕ ಅರಿವು ಮೂಡಿಸಬೇಕು. ಸಾಧ್ಯವಾದರೆ ನಿವೃತ್ತ ನ್ಯಾಯಮೂರ್ತಿಗಳಾದ ನಾಗಮೋಹನ್ ದಾಸ್ ಮತ್ತು ಸಂತೋಷ್ ಹೆಗಡೆಯವರ ಬೆಂಬಲ ಕೇಳಬೇಕು. ಇಂತಹ ಹತ್ತಾರು ಸಲಹೆಗಳು ಕೇಳಿಬಂದವು.

ಸಭೆಯಲ್ಲಿ ಕರ್ನಾಟಕ ಜನರಂಗ ಮೈಸೂರು ಸಂಚಾಲಕ ಟಿ.ಗುರುರಾಜ್, ಅಕ್ಕಮಹಾದೇವಿ ಮಹಿಳಾ ವಿವಿಯ ವಿಶ್ರಾಂತ ಕುಲಪತಿ ಪ್ರೊ.ಸಬಿಹಾ ಭೂಮಿಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯ್‌ಕುಮಾರ್, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್. ಶಿವರಾಮು, ಪ್ರೊ.ಕಾಳಚನ್ನೇಗೌಡ, ಸವಿತ ಪ.ಮಲ್ಲೇಶ್, ಗೋಪಾಲಕೃಷ್ಣ, ಜಗದೀಶ್, ಜಗನ್ನಾಥ್, ಶಿವಪ್ರಸಾದ್, ಯೋಗೀಶ್ ಉಪ್ಪಾರ್, ಲೋಕೇಶ್ ಮಾದಾಪುರ, ಎಂ.ಎಫ್.ಕಲೀಂ, ಗೋಪಿನಾಥ್ ಮತ್ತಿತರರು ಭಾಗವಹಿಸಿದ್ದರು.

ಮೈಸೂರು ಬೇಸಿಗೆ ರೇಸ್

7ನೇ ದಿನ, ಬುಧವಾರ, 21–08–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ಶಿವಾಜಿ ನಗರ್ ಪ್ಲೇಟ್–1400 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 2.00ಕ್ಕೆ
1. ಡೇವಿಡ್ಸ್ ಡಿಲೈಟ್ 2. ಡಿಮ್ಡ್ ಟು ಫೈರ್ 3. ಅಗೆನೆಸ್ಟ್ ಆಲ್ ಆಡ್ಸ್

II. ಹಾರಂಗಿ ಡ್ಯಾಂ ಪ್ಲೇಟ್–1200 ಮೀ. 3 ವರ್ಷ (ಟರ್ಮ್ಸ್). ಮ.2.30ಕ್ಕೆ
1. NRI ಏಸ್ 2. ಫರ್ಫೆಕ್ಟ್ ಹಾರ್ಟ್ 3. ಬೇಸಿಕ್ ಇಸ್ಟಿಂಗ್‌ಟ್

III. ಎ ವಿಟ್ ಪ್ಲೇಟ್ ಡಿ.2–1100 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1. ಸ್ಪಾರ್ಕ್‌ಲಿಂಗ್ ನೈಟ್ 2. ಚಿಚಿಲಿ ಪ್ರೈಡ್ 3. ಫೆರೊನಿಯಾ

IV. ವೈಟ್ ಫೀಡ್ ಪ್ಲೇಟ್–1400 ಮೀ. ರೇಟೆಡ್ 20 ರಿಂದ 45. ಮ.3.30ಕ್ಕೆ
1. ಔರ್ಲೆ (Aurele) 2. ರೈಸ್ ಎ ಬಕ್ 3. ಸಿಯೋಲ್

V. M.R.C. ಚಾರಿಟಬಲ್ ಟ್ರಸ್ಟ್ ಟ್ರೋಫಿ–1400 ಮೀ. ರೇಟೆಡ್ 80 ಮತ್ತು ಮೇಲ್ವರ್ಗ. ಸಂ.4.00ಕ್ಕೆ
1. ಪ್ರೈಸ್‌ಲೆಸ್ ಗೋಲ್ಡ್ 2. ಸ್ಪೆಕ್ಟಾಕ್ಯೂಲರ್ 3. ಸಗೇರಾ

VI. ತಲಕಾವೇರಿ ಪ್ಲೇಟ್ –1400 ಮೀ. ರೇಟೆಡ್ 40 ರಿಂದ 65. ಸಂಜೆ.4.30ಕ್ಕೆ
1. ನವೇದಾ ಗೋಲ್ಡ್ 2. ಸ್ವಾಗತಮ್ 3. ದಿ ಫ್ಲೇಯಿಂಗ್ ಫ್ಲೀಟ್

VII. ಎ ವಿಟ್ ಪ್ಲೇಟ್ ಡಿ.1–1100 ಮೀ. ರೇಟೆಡ್ 20 ರಿಂದ 45. ಸಂ.5.00ಕ್ಕೆ
1. ಇನ್‌ಎಫೆಬಲ್ 2. ರೋಡ್ ರನ್ನರ್ 3. ವಿಕ್ಟೋರಿಯಾನೋ

ದಿನದ ಅತ್ಯುತ್ತಮ	ನಿವೇದಾ ಗೋಲ್ಡ್
ಡಬ್ಬಲ್	ಔರ್ಲೆ, ಇನ್‌ಎಫೆಬಲ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ದಸರಾ ಗಜಪಡೆ, ಸಿಬ್ಬಂದಿಗೆ 2.33 ಕೋಟಿ ರೂ. ಜೀವ ವಿಮೆ

●ಆ.20ರಿಂದ ಅ.15ರವರೆಗೆ ಚಾಲ್ತಿಯಲ್ಲಿರುವ ಪಾಲಿಸಿ ●ಗಂಡಾನೆಗೆ 5 ಲಕ್ಷ, ಹೆಣ್ಣಾನೆಗೆ 4.50 ಲಕ್ಷ, 50 ಸಿಬ್ಬಂದಿಗೆ ತಲಾ 2 ಲಕ್ಷ, ಆಸ್ತಿ ಹಾನಿಗೆ 50 ಲಕ್ಷ ರೂ. ವಿಮಾ ಭದ್ರತೆ

ಮೈಸೂರು,ಆ.20(ಎಂಟಿವೈ)– ನಾಡಹಬ್ಬ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಗಜಪಡೆ, ಮಾವುತ, ಕಾವಾಡಿ, ಸಿಬ್ಬಂದಿಗೆ ಜೀವ ವಿಮೆ ಹಾಗೂ ಆಸ್ತಿ–ಪಾಸ್ತಿಗೆ ಹಾನಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಈ ಬಾರಿಯೂ ಅರಣ್ಯ ಇಲಾಖೆ 2.33 ಕೋಟಿ ರೂ. ವಿಮೆ ಮಾಡಿಸಿದೆ.

ಗಜಪಯಣಕ್ಕೂ ಮುನ್ನಾ ದಿನವಾದ ಆ.20ರಿಂದಲೇ ಜಾರಿಗೆ ಬರುವಂತೆ ವಿಮೆ ಮಾಡಿಸಲಾಗಿದ್ದು, ಅಂಬಾರಿ ಆನೆ ಅಭಿಮನ್ಯು ನೇತೃತ್ವದ 14 ಆನೆ ಹಾಗೂ ಮೀಸಲು ನಾಲ್ಕು ಆನೆ ಸೇರಿದಂತೆ ಈ ಬಾರಿ ಒಟ್ಟು 18 ಆನೆ, ಎಲ್ಲಾ ಆನೆಗಳ ಮಾವುತ, ಕಾವಾಡಿ, ಡಿಸಿಎಫ್, ಆರ್‌ಎಫ್‌ಓ, ಪಶುವೈದ್ಯರು, ಸಹಾಯಕರು ಹಾಗೂ 10 ಮಂದಿ ವಿಶೇಷ ಮಾವುತ ಹಾಗೂ ಸಹಾಯಕರು ಸೇರಿದಂತೆ 50 ಮಂದಿಗೆ ವಿಮೆ ಮಾಡಿಸಲಾಗಿದೆ. ಇದರೊಂದಿಗೆ ಆ.24ರಿಂದಲೇ ಜಂಬೂಸವಾರಿ ಮಾರ್ಗದಲ್ಲಿ ದಸರಾ ಆನೆಗಳು ತಾಲೀಮು ಆರಂಭಿಸಲಿದ್ದು, ಆಕಸ್ಮಿಕವಾಗಿ ಗಜಪಡೆಯಿಂದ ಏನಾದರೂ ಆಸ್ತಿ–ಪಾಸ್ತಿ ಹಾನಿಯಾದರೆ ಪರಿಹಾರ ನೀಡುವ ಮುಂದಾಲೋಚನೆಯಿಂದಲೂ ವಿಮಾ ಸೌಲಭ್ಯ ಮಾಡಿಸಲಾಗಿದೆ.



ಮೈಸೂರು ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ(ಡಿಸಿಎಫ್) ಕಚೇರಿ ವತಿಯಿಂದ ವಿಮೆ ಮಾಡಿಸಲಾಗಿದ್ದು, ದಿ.ನ್ಯೂ ಇಂಡಿಯಾ ಅಶುರೆನ್ಸ್ ಕಂಪನಿಯಿಂದ ವಿಮೆ ಮಾಡಿಸಲಾಗಿದೆ. ಈ ಬಾರಿ ಜಂಬೂಸವಾರಿ ಮೆರವಣಿಗೆಯಲ್ಲಿ ಅಂಬಾರಿ ಆನೆ ಅಭಿಮನ್ಯು ನೇತೃತ್ವದಲ್ಲಿ 14 ಆನೆಗಳು ಪಾಲ್ಗೊಳ್ಳಲಿವೆ. 4 ಆನೆಗಳನ್ನು ಮೀಸಲಿರಿಸಲಾಗಿದೆ ಆದರೂ ವಿಮೆಯಲ್ಲಿ 13 ಗಂಡಾನೆಗೆ ತಲಾ 5 ಲಕ್ಷರೂ, 5 ಹೆಣ್ಣಾನೆಗೆ ತಲಾ 4.50 ಲಕ್ಷ ರೂ. ವಿಮೆ ಮಾಡಿಸಲಾಗಿದ್ದು, ಗಜ ಪಡೆಯ ವಿಮಾ ಮೊತ್ತ 83.50 ಲಕ್ಷ ರೂ. ಆಗಿದೆ.

18 ಮಾವುತರು, 18 ಕಾವಾಡಿ, ಓರ್ವ ಡಿಸಿಎಫ್, ಓರ್ವ ಆರ್‌ಎಫ್‌ಓ, ಓರ್ವ ಪಶುವೈದ್ಯರು, ಒಬ್ಬರು ಸಹಾಯಕರು ಹಾಗೂ 10 ಮಂದಿ ವಿಶೇಷ ಮಾವುತ, ಸಹಾಯಕರಿಗೆ ತಲಾ 2 ಲಕ್ಷರೂ.ನಂತೆ 50 ಮಂದಿಗೆ ವಿಮೆ ಮಾಡಿಸಲಾಗಿದ್ದು, ಇದರ ಮೊತ್ತ 1 ಕೋಟಿ ರೂ. ಆಗಿದೆ ದಸರಾ ಆನೆಗಳಿಂದ ಸಾರ್ವಜನಿಕರಿಗೆ ತೊಂದರೆಯಾದರೆ ಹಾಗೂ ಆಸ್ತಿ–ಪಾಸ್ತಿಗೆ ಹಾನಿಯಾದರೆ ನಷ್ಟ ತುಂಬಿ ಕೊಡಲು 50 ಲಕ್ಷ ರೂ. ವಿಮೆ ಮಾಡಿಸಲಾಗಿದೆ. ಮೂರು ವಿಭಾಗದಿಂದ ಒಟ್ಟು 2.33.50.000 ರೂ. ವಿಮೆ ಮಾಡಿಸಲಾಗಿದ್ದು, ಇಲಾಖೆ ವತಿಯಿಂದ 71 ಸಾವಿರ ಪ್ರೀಮಿಯಂ ಮೊತ್ತ ಪಾವತಿಸಲಾಗುತ್ತದೆ.

ಮೊದಲ ತಂಡದ ಗಜಪಯಣಕ್ಕೆ ನಾಳೆ (ಆ.21) ಬೆಳಗ್ಗೆ ಚಾಲನೆ ನೀಡಲಾಗುತ್ತದೆ. ಆ ಕಾರಣದಿಂದ ವಿವಿಧ ಕ್ಯಾಂಪ್‌ಗಳಲ್ಲಿರುವ ದಸರಾ ಆನೆಗಳನ್ನು ಲಾರಿಗೆ ಹತ್ತಿಸುವ ಮುನ್ನವೇ ವಿಮೆ ಚಾಲ್ತಿಯಲ್ಲಿರುವಂತೆ ಕ್ರಮ ಕೈಗೊಳ್ಳಲಾಗಿದೆ. ಅಲ್ಲದೆ ದಸರಾ ಮಹೋತ್ಸವ ಮುಗಿದ ಮೂರು ದಿನವರೆಗೂ ವಿಮೆ ಚಾಲ್ತಿಯಲ್ಲಿರುವುದರಿಂದ ಅ.15ರೊಳಗೆ ದಸರಾ ಆನೆಗಳು ಮರಳಿ ಕ್ಯಾಂಪ್‌ಗೆ ಸೇರಲಿವೆ

ಸುರಕ್ಷತಾ ದೃಷ್ಟಿಯಿಂದ ವಿಮೆ ಮಾಡಿಸಲಾಗಿದೆ

ಪ್ರತಿ ವರ್ಷದಂತೆ ಈ ಬಾರಿಯೂ ದಸರಾ ಗಜಪಡೆಯ 18 ಆನೆ, ಎಲ್ಲಾ ಆನೆಗಳ ಮಾವುತ, ಕಾವಾಡಿ, ವಿಶೇಷ ಮಾವುತ, ಸಹಾಯಕರು ಸೇರಿದಂತೆ 50 ಮಂದಿಗೆ ವಿಮೆ ಮಾಡಿಸಲಾಗಿದೆ. ಅಲ್ಲದೆ, ಸಂಭವನೀಯ ಆಸ್ತಿ–ಪಾಸ್ತಿಗೆ ಹಾನಿಗೆ ನಷ್ಟ ಭರಿಸಲು 50 ಲಕ್ಷ ರೂ. ಸೇರಿದಂತೆ ಒಟ್ಟು 2.33.50.000 ರೂಗೆ ದಿ.ನ್ಯೂ ಇಂಡಿಯಾ ಅಶುರೆನ್ಸ್ ಕಂಪನಿಯಿಂದ ವಿಮೆ ಮಾಡಿಸಲಾಗಿದೆ. ಈ ವಿಮೆಯು ಆ.20ರಿಂದಲೇ ಚಾಲ್ತಿಗೆ ಬಂದಿದ್ದು, ಅ.15ಕ್ಕೆ ಕೊನೆಗೊಳ್ಳಲಿದೆ.



– ಡಾ.ಐ.ಬಿ.ಪ್ರಭುಗೌಡ, ಡಿಸಿಎಫ್, ಮೈಸೂರು ವನ್ಯಜೀವಿ ವಿಭಾಗ

ಉಚಿತ ಕಣ್ಣು ತಪಾಸಣೆ ಶಿಬಿರ



ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವದ ಹಿನ್ನೆಲೆಯಲ್ಲಿ ಮೈಸೂರು ಹೆಬ್ಬಾಳಿನ ಮಹದೇಶ್ವರ ಬಡಾವಣೆಯಲ್ಲಿ ನಾಡಪ್ರಭು ಕೆಂಪೇಗೌಡ ಬ್ರಿಗೇಡ್ ಟ್ರಸ್ಟ್ ವತಿಯಿಂದ ಮಂಗಳವಾರ ಆಯೋಜಿಸಿದ್ದ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಮಾಜಿ ಕಾರ್ಪೊರೇಟರ್ ಕೆ.ವಿ.ಶ್ರೀಧರ್ ಉದ್ಘಾಟಿಸಿದರು. ದೀಪಕ್ ಗೌಡ, ದಿಲೀಪ್ ಗೌಡ, ವಿಷ್ಣು, ಕಿರಣ್ ಮತ್ತಿತರರು ಚಿತ್ರದಲ್ಲಿದ್ದಾರೆ.

ರಾಹುಲ್ ಗಾಂಧಿ ಪೌರತ್ವ ವಿವಾದ

ಸ್ವಾಮಿ ಸಲ್ಲಿಸಿದ್ದ ಅರ್ಜಿ PIL ಪೀಠಕ್ಕೆ ವರ್ಗಾಯಿಸಿದ ದೆಹಲಿ ಹೈಕೋರ್ಟ್!

ನವದೆಹಲಿ: ಸಂಸದ ರಾಹುಲ್ ಗಾಂಧಿ ಭಾರತೀಯ ಪೌರತ್ವವನ್ನು ರದ್ದುಗೊಳಿಸುವಂತೆ ಕೋರಿ ಬಿಜೆಪಿ ನಾಯಕ ಸುಬ್ರಮಣಿಯನ್ ಸ್ವಾಮಿ ಸಲ್ಲಿಸಿರುವ ಅರ್ಜಿಯನ್ನು ದೆಹಲಿ ಹೈಕೋರ್ಟ್ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಾಗಿ ವಿಚಾರಣೆ ನಡೆಸಲಿದೆ. ಬಿಜೆಪಿ ನಾಯಕ ಸುಬ್ರಮಣಿಯನ್‌ಸ್ವಾಮಿ ಸಲ್ಲಿಸಿರುವ ಅರ್ಜಿಯನ್ನು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಎಂದು ಪರಿಗಣಿಸಬೇಕು ಎಂದು ದೆಹಲಿ ಹೈಕೋರ್ಟ್ ಹೇಳಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಭಾರತೀಯ ಪೌರತ್ವವನ್ನು ರದ್ದುಗೊಳಿಸಬೇಕೆಂಬ ಬೇಡಿಕೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವಂತೆ ಗೃಹ ಸಚಿವಾಲಯಕ್ಕೆ ನಿರ್ದೇಶನ ನೀಡಬೇಕು ಎಂದು ಸ್ವಾಮಿ ತಮ್ಮ ಅರ್ಜಿಯಲ್ಲಿ ಕೋರಿದ್ದಾರೆ.


ರಾಹುಲ್ ಗಾಂಧಿ

ನ್ಯಾಯಮೂರ್ತಿ ಸಂಜೀವ್ ನರುಲಾ ಅವರು ಸಂವಿಧಾನದ 226ನೇ ವಿಧಿಯ ಅಡಿಯಲ್ಲಿ ರಿಟ್ ಅರ್ಜಿ ನ್ಯಾಯವ್ಯಾಪ್ತಿಯನ್ನು ಅನ್ವಯಿಸಲು ಯಾವುದೇ ಜಾರಿಗೊಳಿಸಬಹುದಾದ ಕಾನೂನು ಹಕ್ಕನ್ನು ಸ್ವಾಮಿ ಪ್ರದರ್ಶಿಸಿಲ್ಲ ಎಂದು ಗಮನಿಸಿದರು. ಹೀಗಾಗಿ ಪಿಐಎಲ್ ನ್ಯಾಯವ್ಯಾಪ್ತಿಯಡಿ ಪ್ರಕರಣವನ್ನು ಪರಿಗಣಿಸಬಹುದು ಎಂದು ಸಲಹೆ ನೀಡಿದರು.

ವಿವಾದವು ಆಗಸ್ಟ್ 2019ರ ಹಿಂದಿನದು, ಸ್ವಾಮಿ ಅವರು ಕೇಂದ್ರಕ್ಕೆ ಪತ್ರ ಬರೆದು ರಾಹುಲ್ ಗಾಂಧಿ ಬ್ರಿಟಿಷ್ ಸರ್ಕಾರಕ್ಕೆ ಸಲ್ಲಿಸಿದ ದಾಖಲೆಗಳಲ್ಲಿ ತಮ್ಮನ್ನು ಬ್ರಿಟಿಷ್ ಪ್ರಜೆ ಎಂದು ಘೋಷಿಸುವ ಮೂಲಕ ಸಾಂವಿಧಾನಿಕ ನಿಬಂಧನೆಗಳನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿದರು. ಭಾರತೀಯ ಪ್ರಜೆಯಾದ ಗಾಂಧಿ ಭಾರತೀಯ ಸಂವಿಧಾನದ 9ನೇ ವಿಧಿ ಮತ್ತು 1955ರ ಭಾರತೀಯ ಪೌರತ್ವ ಕಾಯ್ದೆಯನ್ನು ಉಲ್ಲಂಘಿಸಿರಬಹುದು ಎಂದು ಅವರು ಪ್ರತಿಪಾದಿಸಿದರು. ಇದು ಭಾರತೀಯ ನಾಗರಿಕರು ದ್ವಿ ಪೌರತ್ವವನ್ನು ಹೊಂದುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸುತ್ತದೆ ಎಂದು ಹೇಳಿದ್ದರು.

CHANGE OF NAME
I, Deepak Vashdev, residing at No.412 in Vijayanagar 1st Stage, 5th Main, Mysore City, do hereby declare that my son PUNEET shall now be called as PUNEET DEEPAK only vide affidavit sworn in front of Notary Ramadevi.M, dated 05-07-2024.
Sd/- Deepak Vashdev

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಸಿದ್ದೇಗೌಡ್ರು
ಲೇಟ್ ಜೋರಮ್ಮ ಮತ್ತು ಲೇಟ್ ಪಾಪೇಗೌಡರ ಮಗ
ಇವರು ದಿ: 11.08.2024ನೇ ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ದಿ: 21.08.2024 ಬುಧವಾರ ಬೆಳಗ್ಗೆ 9.00 ರಿಂದ 11.30 ರವರೆಗೆ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ನಮ್ಮ ಸ್ವಗೃಹ #23, ಸಾಹುಕಾರ್ ಹುಂಡಿ ಗ್ರಾಮ, ಇಲವಾಲ ಹೋ., ಮೈಸೂರು ತಾ॥ ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.
ದುಃಖತಪ್ತರು: ಶ್ರೀಮತಿ ರಕ್ಷಾ.ಎಸ್ ಮತ್ತು ಶ್ರೀ ದೀಪು ಎಸ್., ಶ್ರೀಮತಿ ಭಾಗ್ಯಲಕ್ಷ್ಮಿ ಮತ್ತು ಶ್ರೀ ಚೇತನ್ ಎಸ್., ಶ್ರೀಮತಿ ವೀಣಾ.ಎಸ್. ಮತ್ತು ಮಧುಸೂಧನ್ ಎಂ. ಪಾಪೇಗೌಡರು ಮತ್ತು ರಾಜೇಗೌಡರ ಕುಟುಂಬವರ್ಗದವರು

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀಮತಿ ಎನ್.ಭಾಗ್ಯಲಕ್ಷ್ಮಿ
ಇವರು ದಿ: 11.08.2024ನೇ ಭಾನುವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ದಿ: 21.08.2024 ಬುಧವಾರ ಬೆಳಗ್ಗೆ 10.30ಕ್ಕೆ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ನಮ್ಮ ಮರಟಿಕ್ಯಾತನಹಳ್ಳಿ ತೋಟದ ಮನೆಯಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.
ದುಃಖತಪ್ತರು: ಶ್ರೀ ಗಿರಿಗೌಡ, ಸಹೋದರರು, ಸಹೋದರಿಯರು, ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ಕುಟುಂಬವರ್ಗದವರು ಮತ್ತು ಬಂಧುಮಿತ್ರರು ಹಾಗೂ ಮರಟಿಕ್ಯಾತನಹಳ್ಳಿ ಗ್ರಾಮಸ್ಥರು

1ನೇ ವರ್ಷದ ಸವಿನೆನಪು



ಶ್ರೀಮತಿ ಬಟ್ಟಮ್ಮ
ನೀವು ನಮ್ಮನ್ನಗಲಿ ಇಂದಿಗೆ 1 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಮಕ್ಕಳು, ಸೊಸೆಂದಿರು, ಮೊಮ್ಮಕ್ಕಳು, ಕುಟುಂಬವರ್ಗದವರು, ಕೆ.ಜಿ.ಕೊಪ್ಪಲು, ಮೈಸೂರು

ನಗರಸಭಾ ಕಾರ್ಯಾಲಯ, ಮಡಿಕೇರಿ. ಕೊಡಗು ಜಿಲ್ಲೆ.
ದೂರವಾಣಿ: 08272-228323
ಫ್ಯಾಕ್ಸ್: 08272-223998
e-mail: itstaff ulb madikeri1@yahoo.com
ಕಾವೇರಿ ಕಲಾಕ್ಷೇತ್ರದ ಹತ್ತಿರ. – 571201

ಸಂ:ಮನಸ/ತಾಂತ್ರಿಕ/ಜೆ.ಇ.4/ಟೆಂಡರ್ 06/2024–25 ದಿನಾಂಕ: 20.08.2024

ಟೆಂಡರ್ ಪ್ರಕಟಣೆ

2024–25ನೇ ಸಾಲಿನ 15ನೇ ಹಣಕಾಸು ಆಯೋಗದ ನಿರ್ಬಂಧಿತ ಮತ್ತು ನಗರಸಭಾ ನಿಧಿಯಡಿ ಸಿವಿಲ್ ಕಾಮಗಾರಿಯನ್ನು ನಿರ್ವಹಿಸಲು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧ್ಯಾದೇಶ 1999 ಹಾಗೂ ನಿಯಮ 2000ಕ್ಕೆ ಒಳಪಟ್ಟು ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟಿರುವ ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರಿಂದ ಸ್ಟಾಂಡರ್ಡ್ ಟೆಂಡರ್ ಡಾಕ್ಯುಮೆಂಟ್ (ಕೆ.ಡಬ್ಲ್ಯು–1) ನಿಯಮಾವಳಿಯಂತೆ KPP ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರು ಟೆಂಡರ್ ವಿವರಗಳನ್ನು KPP ಪೋರ್ಟಲ್ ಮೂಲಕ ಪಡೆದುಕೊಂಡು ನಂತರ ಭರ್ತಿ ಮಾಡಿದ ಟೆಂಡರ್‌ಗಳನ್ನು KPP ಪೋರ್ಟಲ್ ಮುಖಾಂತರ ಸಲ್ಲಿಸಬಹುದು. ಹೆಚ್ಚಿನ ಮಾಹಿತಿ, ಕಾಮಗಾರಿ ವಿವರಣೆ, ನಿಬಂಧನೆ ಹಾಗೂ ಷರತ್ತುಗಳಿಗೆ ಕಛೇರಿ ವೇಳೆಯಲ್ಲಿ ಈ ಕಛೇರಿಯ ತಾಂತ್ರಿಕ ಶಾಖೆಯನ್ನು ಸಂಪರ್ಕಿಸುವುದು. ಟೆಂಡರ್ ಡೌನ್‌ಲೋಡ್, ಅಪ್ ಲೋಡ್, ಟೆಂಡರ್ ಪ್ರೋಸೆಸಿಂಗ್ ಮತ್ತು ಇ.ಎಂ.ಡಿ ಪಾವತಿ ಬಗ್ಗೆ ಸಂಬಂಧಪಟ್ಟಂತೆ ವಿವರಗಳನ್ನು ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಪಡೆಯಬಹುದು.

ಸಹಿ/– ಆಡಳಿತಾಧಿಕಾರಿಗಳು, ನಗರಸಭೆ, ಮಡಿಕೇರಿ ಹಾಗೂ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ.
ಸಹಿ/– ಪೌರಾಯುಕ್ತರು, ನಗರಸಭೆ.ಮಡಿಕೇರಿ.

ಪಿ.ಇ.ಎಸ್. ಕಾನೂನು ಕಾಲೇಜು
(ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಸಂಯೋಜನೆ, ಭಾರತೀಯ ವಕೀಲ ಪರಿಷತ್ತು ಮತ್ತು ನ್ಯಾಕ್ ಮಾನ್ಯತೆ ಪಡೆದಿದೆ)
ಪಿ.ಇ.ಟಿ. ಕ್ಯಾಂಪಸ್, ಮಂಡ್ಯ – 571401

2024–2025ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯದ ಕಾನೂನು ಪದವಿ ಪ್ರವೇಶ ಪ್ರಕಟಣೆ

ಮೂರು ವರ್ಷಗಳ ಕಾನೂನು ಪದವಿ (3 Years LL.B. Degree Course) ಯಾವುದಾದರೂ ಅಂಗೀಕೃತ ವಿಶ್ವವಿದ್ಯಾನಿಲಯ, ವಿದೇಶಿ ವಿಶ್ವವಿದ್ಯಾ ನಿಲಯ ಅಥವಾ ಮುಕ್ತ ವಿಶ್ವವಿದ್ಯಾನಿಲಯದಿಂದ (ದೂರ ಶಿಕ್ಷಣ ಪದವಿಯನ್ನು 10+2 ತರಗತಿಗಳ ಉತ್ತೀರ್ಣತೆ ನಂತರ ಪಡೆದಿರುವವರು ಮಾತ್ರ) ಯಾವುದಾದರು ಪದವಿಯಲ್ಲಿ ಶೇ.45 ಅಂಕಗಳಿಸಿ ಉತ್ತೀರ್ಣತೆ ಹೊಂದಿರಬೇಕು. (ಪರಿಶಿಷ್ಟ ಜಾತಿ/ವರ್ಗದವರಿಗೆ ಶೇ.40 ಅಂಕಗಳು, ಹಿಂದುಳಿದ ವರ್ಗಗಳಿಗೆ (OBC) ಶೇ.42 ಅಂಕಗಳು)
ವಿಶೇಷ ಸೂಚನೆ: ಭರ್ತಿ ಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ಅಂತಿಮ ದಿನಾಂಕ: 30–08–2024

ಹೆಚ್ಚಿನ ಮಾಹಿತಿಗಾಗಿ ಕಛೇರಿಯನ್ನು ಸಂಪರ್ಕಿಸುವುದು.
ದೂರವಾಣಿ: 08232-222294 / 9448282584 / 9916020259

ಸಹಿ/–	ಸಹಿ/–	ಸಹಿ/–
ಡಾ.ಜೆ. ಯೋಗೀಶ್	ಕೆ.ಆರ್.ದಯಾನಂದ	ಕೆ.ಎಸ್.ವಿಜಯ್ ಆನಂದ್
ಪ್ರಾಂಶುಪಾಲರು	ಕಾರ್ಯದರ್ಶಿ	ಅಧ್ಯಕ್ಷರು

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಮೈಸೂರು ತಾಲ್ಲೂಕು ಇಲವಾಲ ಹೋಬಳಿ, ಕೂರ್ಗಳ್ಳಿ ಗ್ರಾಮದಲ್ಲಿ ವಾಸವಾಗಿರುವ ಲೇ॥ ಕೆಂಗೇಗೌಡರ ಧರ್ಮಪತ್ನಿ
ಶ್ರೀಮತಿ ಪುಟ್ಟಮ್ಮ ಇವರು ಮಾಡಿವ ವಿಜ್ಞಾಪನೆಗಳು
ದಿನಾಂಕ 12-08-2024ನೇ ಭಾನುವಾರದಂದು ನನ್ನ ಮೊಮ್ಮಗ
ಶ್ರೀ ಹರ್ಷಿತ್ ಕೆ.
(ಶ್ರೀಮತಿ ಭಾರತಿ ಮತ್ತು ಶ್ರೀ ಕೃಷ್ಣಪ್ಪ (ಆಟೋಮೊಟಿವ್ ಆಕ್ಸಲ್ ನೌಕರರು) ಇವರ ಮಗ)
ದೈವಾದೀನರಾದರೆಂದು ತಿಳಿಸಲು ವಿಷಾಧಿಸುತ್ತೇನೆ, ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯಕ್ರಮವನ್ನು ತಾ॥ 22-08-2024ನೇ ಗುರುವಾರ ಬೆಳಗ್ಗೆ 11.30 ಗಂಟೆಗೆ ನಮ್ಮ ಸ್ವಗೃಹದಲ್ಲಿ ಏರ್ಪಡಿಸಲಾಗಿದೆ, ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ
ಹರಿಕಥೆ ರಾತ್ರಿ 7.30ಗಂಟೆಗೆ
ಇಂತಿ ದುಃಖತಪ್ತರು : ತಂದೆ ಕೃಷ್ಣಪ್ಪ ತಾಯಿ ಭಾರತಿ ಅಕ್ಕತಂಗಿಯರು ಭಾವಂದಿರು ಕುಟುಂಬ ವರ್ಗದವರು ಹಾಗೂ ಕೂರ್ಗಳ್ಳಿ ಗ್ರಾಮಸ್ಥರು